ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 8 ಶನಿವಾರ 2025

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 318 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*











ಮೈಸೂರು ಮಿತ್ರ

ಶನಿವಾರ 8 ಮಾರ್ಚ್ 2025

ಮುಖ್ಯಮಂತ್ರಿ ಸಿದ್ದರಾಮಯ್ಯರ ಬಜೆಟ್‌ಗೆ ಸ್ವಪಕ್ಷೀಯರ ಪ್ರಶಂಸೆ; ವಿಪಕ್ಷೀಯರ ಅಪಸ್ವರ

ಮೈಸೂರು, ಮಾ.7(ಎಸ್‌ಬಿಡಿ)– ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಾಖಲೆಯ 16ನೇ ಬಜೆಟ್ ಮಂಡಿಸಿದ್ದಾರೆ. ಬೃಹತ್ ಬಜೆಟ್‌ನಲ್ಲಿ ತವರು ಜಿಲ್ಲೆ ಮೈಸೂರಿಗೂ ಭರಪೂರ ಅನುದಾನ ಘೋಷಿಸಿದ್ದಾರೆ. ಗ್ಯಾರಂಟಿ ಯೋಜನೆಗಳಿಗೂ ಹಣ ಮೀಸಲಿಟ್ಟು, ಹಲವು ಅಭಿವೃದ್ಧಿ ಯೋಜನೆಗಳನ್ನೂ ಬಜೆಟ್‌ನಲ್ಲಿ ಅಡಕಗೊಳಿಸಿದ್ದಾರೆ. ಜೊತೆಗೆ ಒಂದು ವರ್ಗದ ಅಭಿವೃದ್ಧಿಗೆ ಹೆಚ್ಚು ಗಮನಹರಿಸಲಾಗಿದೆ ಎಂಬ ಆರೋಪವೂ ಕೇಳಿಬರುತ್ತಿದೆ. ಒಟ್ಟಾರೆ ಈ ಬಾರಿಯ ರಾಜ್ಯ ಬಜೆಟ್ ಬಗ್ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ವಿರೋಧವಿದ್ದರೂ ಬಸ್ ನಿಲ್ದಾಣ ಘೋಷಣೆ



ಮೈಸೂರು ನಗರದ ಸಮಗ್ರ ಅಭಿವೃದ್ಧಿಗೆ ಪೂರಕವಾಗುವ ಮತ್ತು ಆರೋಗ್ಯ, ಶಿಕ್ಷಣಕ್ಕೆ ಅನುಕೂಲವಾಗುವಂತಹ ಕೆಲವು ಯೋಜನೆಗಳನ್ನು ನೀಡಿದ್ದಾರೆ. ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಬೇಡಿಕೆ ಈಡೇರಿಸಿಲ್ಲ. ಕಳೆದ ಬಾರಿ ಪ್ರಸ್ತಾಪಿಸಿದ್ದ ಕಿದ್ವಾಯಿ, ಫಿಲ್ಮ್‌ಸಿಟಿಗೆ ಅನುದಾನ ಘೋಷಣೆ ಸ್ವಾಗತಾರ್ಹವಾದರೂ ನಗರದ ಅಭಿವೃದ್ಧಿಗೆ ಪೂರಕವಾದ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಿಲ್ಲ. ಸಾರ್ವಜನಿಕರ ವಿರೋಧವಿದ್ದರೂ ಕೇಂದ್ರೀಯ ಬಸ್ ನಿಲ್ದಾಣವನ್ನು ಬನ್ನಿಮಂಟಪದಲ್ಲಿ ನಿರ್ಮಿಸುವುದಾಗಿ ಘೋಷಿಸಿದ್ದಾರೆ. ಈ ಸಂಬಂಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳ ಮನವೊಲಿಸಿ, ಮುಂದುವರೆಯ ಬೇಕಿತ್ತು. ಮುಸ್ಲಿಮರ ಪರವಾಗಿ ಬಜೆಟ್ ಮಂಡಿಸಿ ಅಲ್ಪಸಂಖ್ಯಾತರನ್ನು ಓಲೈಸಲಾಗಿದೆ. ದಲಿತರು, ಹಿಂದುಳಿದ ವರ್ಗಗಳ ಅನುದಾನ ಕಡಿಮೆ ಮಾಡಲಾಗಿದೆ.

–ಟಿ.ಎಸ್.ಶ್ರೀವತ್ಸ, ಶಾಸಕ, ಕೃಷ್ಣರಾಜ ಕ್ಷೇತ್ರ

ಮೈಸೂರಿಗೆ ಭರಪೂರ ಕೊಡುಗೆ



ಮೈಸೂರಿಗೆ ನಿಮ್ಹಾನ್ಸ್ ಘಟಕ ಮಂಜೂರು, ಮತ್ತೊಂದು ಮೆಡಿಕಲ್ ಕಾಲೇಜು, ಆಸ್ಪತ್ರೆಗಳ ಅಭಿವೃದ್ಧಿ, ಕಾಲೇಜ್ ಆಫ್ ನರ್ಸಿಂಗ್, ಮಧುಮೇಹ ಆಸ್ಪತ್ರೆ, ಕುಕ್ಕರಹಳ್ಳಿ ಕೆರೆ ಅಭಿವೃದ್ಧಿಗೆ ಆಗ್ರಹಿಸಿ, ಬಜೆಟ್ ಪೂರ್ವದಲ್ಲಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದೆ. ಬಜೆಟ್‌ನಲ್ಲಿ ಅವರು ಹಲವು ಬೇಡಿಕೆಗಳನ್ನು ಈಡೇರಿಸಿದ್ದಾರೆ. 100 ಕೋಟಿ ರೂ. ವೆಚ್ಚದಲ್ಲಿ ನಿಮ್ಹಾನ್ಸ್ ಮಾದರಿ ಸಂಸ್ಥೆ ಹಾಗೂ 100 ಕೋಟಿ ರೂ. ವೆಚ್ಚದಲ್ಲಿ ಪ್ರಾದೇಶಿಕ ಎಂಡೋಕ್ರೈನಾಲಜಿ ಕೇಂದ್ರ ಘೋಷಣೆ ಮಾಡಿದ್ದಾರೆ. ಮೈಸೂರು ವಿವಿಯಲ್ಲಿ ಪ್ರೊ.ನಂಜುಂಡಸ್ವಾಮಿ ಸಂಶೋಧನಾ ಪೀಠ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿರುವ 2,500 ಪ್ರಾಚೀನ ತಾಳೆಗರಿಯ ಹಸ್ತಪ್ರತಿಗಳ ಡಿಜಿಟಲೀಕರಣಕ್ಕೆ 1 ಕೋಟಿ, ಮೈಸೂರು ರಂಗಾಯಣಕ್ಕೆ 2 ಕೋಟಿ, ಹಳೇ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಾಜ್ಯ ಮಟ್ಟದ ವಸ್ತು ಸಂಗ್ರಹಾಲಯ, 7 ಕೋಟಿ ವೆಚ್ಚದಲ್ಲಿ ಕ್ರೀಡಾ ವಿಜ್ಞಾನ ಕೇಂದ್ರ, 2 ಕೋಟಿಯಲ್ಲಿ ಕುಸ್ತಿ, ವಾಲಿಬಾಲ್, ಖೋ ಖೋ ಅಕಾಡೆಮಿ ಸ್ಥಾಪನೆ, ಶುಚಿ–ರುಚಿಯಾದ ಪೌಷ್ಠಿಕ ಮೀನು ಖಾದ್ಯಗಳ ಒದಗಿಸಲು ಹೈ–ಟೆಕ್ ಮತ್ಸ್ಯದರ್ಶಿನಿ, ಮೈಸೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ ಭೂಸ್ವಾಧೀನಕ್ಕೆ 319 ಕೋಟಿ ಅನುದಾನ, ಬಾಂಬ್ ನಿಷ್ಕ್ರಿಯ ದಳ, ಹೊಸ ಅಗ್ನಿ ಶಾಮಕ ಠಾಣೆ ಕಟ್ಟಡ ನಿರ್ಮಾಣ, ಬನ್ನಿಮಂಟಪದಲ್ಲಿ ಅತ್ಯಾಧುನಿಕ ಬಸ್ ನಿಲ್ದಾಣ, ರೇಷ್ಮೆ ಮಾರುಕಟ್ಟೆ, ತಗಡೂರು ಸಮುದಾಯ ಆರೋಗ್ಯ ಕೇಂದ್ರವನ್ನು 100 ಹಾಸಿಗೆ ಆಸ್ಪತ್ರೆಯಾಗಿ ಮೇಲ್ದರ್ಜೆಗೆ, ವಿಶೇಷ ಮಕ್ಕಳ ಸರ್ಕಾರಿ ವಸತಿಯುತ ಶಾಲೆಗಳ ಉನ್ನತೀಕರಣ, ಬುಡಕಟ್ಟು ವಸತಿ ಶಾಲೆಗಳ ಉನ್ನತೀಕರಣ, ವರುಣಾದಲ್ಲಿ ಜಿಟಿಟಿಸಿ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ, ಕಿಯೋನಿಕ್ಸ್ ಮೂಲಕ ಗ್ಲೋಬಲ್ ಇನ್ನೋವೇಷನ್ ಡಿಸ್ಟ್ರಿಕ್ಟ್ ಅಭಿವೃದ್ಧಿ, ಪ್ರಿಂಟೆಡ್ ಸರ್ಕ್ಯೂಟ್ ಪಾರ್ಕ್ ಅಭಿವೃದ್ಧಿ, ಚಿತ್ರನಗರಿ ನಿರ್ಮಾಣ ಸೇರಿದಂತೆ ಮೈಸೂರಿಗೆ ಭರಪೂರ ಕೊಡುಗೆ ನೀಡಿದ್ದಾರೆ.

–ಕೆ.ಹರೀಶ್‌ಗೌಡ, ಶಾಸಕ, ಚಾಮರಾಜ ಕ್ಷೇತ್ರ

ಜನರ ನಿರೀಕ್ಷೆ ಹುಸಿಯಾಗಿದೆ



ಈ ಬಜೆಟ್‌ನಲ್ಲಿ ಮುಖ್ಯಮಂತ್ರಿಗಳು, ತಮ್ಮ ಜಿಲ್ಲೆಯ ಅಭಿವೃದ್ಧಿ ಪರ್ವಕ್ಕೆ ಕೆಲವಾದರೂ ಜನಪರ ಯೋಜನೆಗಳನ್ನು ಘೋಷಿಸುತ್ತಾರೆ ಎಂದು ಎದುರು ನೋಡುತ್ತಿದ್ದ ಮೈಸೂರು ಭಾಗದ ಜನ ಮತ್ತು ಜನಪ್ರತಿನಿಧಿಗಳಿಗೆ ಸಂಪೂರ್ಣ ನಿರಾಸೆಯಾಗಿದೆ. ಬೃಹತ್ ಪ್ರಮಾಣದ ಸಾಲ ಮಾಡುವ ಮೂಲಕ ಅದರ ಹೊರೆಯನ್ನು ರಾಜ್ಯದ ಜನರ ಮೇಲೆ ಹೊರಿಸಿದ್ದಾರೆ.

–ಜಿ.ಡಿ.ಹರೀಶ್ ಗೌಡ, ಶಾಸಕ ಹಾಗೂ ಜೆಡಿಎಸ್ ಮುಖ್ಯ ಸಚೇತಕರು

'ಗ್ಯಾರಂಟಿ' ಮೀರಿದ ಅಭಿವೃದ್ಧಿಯ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಬಾರಿ ಸಂಪೂರ್ಣ ಅಭಿವೃದ್ಧಿಯ ಬಜೆಟ್ ಮಂಡಿಸಿದ್ದು, ಎಲ್ಲಾ ವರ್ಗಗಳಿಗೂ ಸಮಾನ ನ್ಯಾಯಕಲ್ಪಿಸಿದ್ದಾರೆ. ಗ್ಯಾರಂಟಿ ಮೀರಿ ಅಭಿವೃದ್ಧಿಗೆ ಒತ್ತು ಕೊಟ್ಟಿದ್ದಾರೆ. ಅಹಿಂದ ವರ್ಗಕ್ಕೆ ಮಾತ್ರವಲ್ಲದೇ ಎಲ್ಲಾ ವರ್ಗಗಳಿಗೂ ಭರಪೂರ ಕೊಡುಗೆ ನೀಡಿದ್ದಾರೆ. ಈ ಮೂಲಕ ಸರ್ಕಾರ ದಿವಾಳಿಯಾಗಿದೆ ಎಂದು ಬೊಬ್ಬೆ ಹೊಡೆಯುವ ವಿಪಕ್ಷಗಳ ಬಾಯಿ ಮುಚ್ಚಿಸಿದ್ದಾರೆ. ಮೈಸೂರು ವಿಮಾನ ನಿಲ್ದಾಣ ರನ್ ವೇ ವಿಸ್ತರಣೆಗೆ ಭೂ ಸ್ವಾಧೀನಕ್ಕಾಗಿ 319 ಕೋಟಿ, ಹೊಸದಾಗಿ ಬಸ್ ನಿಲ್ದಾಣ, ಅಗ್ನಿಶಾಮಕ ಠಾಣೆಗೆ ನೆರವು ಸೇರಿದಂತೆ ಮೈಸೂರಿಗೂ ಅಪಾರ ಕೊಡುಗೆ ನೀಡಿದ್ದಾರೆ. ವಿಶೇಷವಾಗಿ ಬಹು ವರ್ಷಗಳ ಕನಸಿನ ಯೋಜನೆಯಾದ ವಿಶ್ವದರ್ಜೆಯ ಫಿಲ್ಮ್ ಸಿಟಿ ನಿರ್ಮಾಣಕ್ಕೆ 500 ಕೋಟಿ ಮೀಸಲಿಡುವುದಾಗಿ ಘೋಷಿಸಿದ್ದಾರೆ. ಒಟ್ಟಾರೆ ಇದು ಪರಿಪೂರ್ಣ ಅಭಿವೃದ್ಧಿಯ ಬಜೆಟ್ ಆಗಿದೆ.

–ಬಿ.ಸುಬ್ರಹ್ಮಣ್ಯ, ಮಾಜಿ ಅಧ್ಯಕ್ಷ, ಕರ್ನಾಟಕ ಪ್ರದೇಶ ಕುರುಬರ ಸಂಘ

ಮೈಸೂರಿಗೆ ಬಿಗ್ ಝೀರೋ



ನಮ್ಮ ಮೈಸೂರಿನ ಸಿದ್ದರಾಮಯ್ಯನವರು 16ನೇ ಬಾರಿ ಬಜೆಟ್ ಮಂಡಿಸಿದ್ದಾರೆ. 1.16 ಲಕ್ಷ ಕೋಟಿ ಸಾಲ ಮಾಡಿರುವುದೇ ಅವರ ಬಹುದೊಡ್ಡ ಸಾಧನೆ. ಮದ್ಯದ ದರ, ಸ್ಟಾಂಪ್ ಡ್ಯೂಟಿ ಶುಲ್ಕ, ಆಸ್ತಿ ನೋಂದಣಿ ಶುಲ್ಕ, ಬಾಂಡ್ ಬೆಲೆ ಸೇರಿದಂತೆ ಸರ್ಕಾರಿ ಸೇವೆಗಳ ಶುಲ್ಕ ಒಂದೂವರೆ ಪಟ್ಟು ಹೆಚ್ಚಾಗಿದೆ. ಪರಿಣಾಮ ಮಧ್ಯಮ ವರ್ಗದ ಜನರ ಬದುಕು ಕಷ್ಟಸಾಧ್ಯವಾಗಿದೆ. ಬೃಹತ್ ಮೈಸೂರು ನಗರ ಪಾಲಿಕೆ ರಚನೆ ಘೋಷಿಸುತ್ತಾರೆ ಎಂಬ ನಿರೀಕ್ಷೆ ಇತ್ತು. ಆದರೆ ಅದರ ಬಗ್ಗೆ ಪ್ರಸ್ತಾಪವೇ ಇಲ್ಲ. ಇಲ್ಲವೇ ವಿಶೇಷ ಪ್ಯಾಕೇಜ್ ರೂಪದಲ್ಲೂ ಅನುದಾನ ನೀಡಲಿಲ್ಲ. ಕೇಂದ್ರ ಸರ್ಕಾರದಿಂದ ಹಣಕಾಸು ಆಯೋಗದಡಿ ವಾರ್ಷಿಕ 60–70 ಕೋಟಿ ರೂ. ಅನುದಾನ ನಗರ ಪಾಲಿಕೆಗೆ ಬರುತ್ತಿತ್ತು. ಆದರೆ ಚುನಾಯಿತ ಕೌನ್ಸಿಲ್ ಅಸ್ತಿತ್ವದಲ್ಲಿ ಇಲ್ಲದ ಕಾರಣ ಆ ಅನುದಾನವೂ ಬರುತ್ತಿಲ್ಲ. ಮೈಸೂರಿಗೆ ಸಿದ್ದರಾಮಯ್ಯನವರು ನೀಡಿರುವ ಕೊಡುಗೆ ಬಿಗ್ ಝೀರೋ. ಸಮಾಜವಾದಿ ಹಿನ್ನೆಲೆಯಿಂದ ಬಂದಿರುವ ಅವರು ಮೈಸೂರು ಮಹಾನಗರ ಪಾಲಿಕೆಯ ಚುನಾವಣೆಯನ್ನಾದರೂ ನಡೆಸಬೇಕಿದೆ.

–ಸಾ.ರಾ.ಮಹೇಶ್, ಮಾಜಿ ಸಚಿವ

ಕರ್ನಾಟಕದಲ್ಲಿ ಸಾಮಾಜಿಕ ಕ್ರಾಂತಿಗೆ ಮುನ್ನುಡಿ



ಬುದ್ಧ, ಬಸವ, ಗಾಂಧಿ ಹಾಗೂ ಅಂಬೇಡ್ಕರ್ ಆಶಯಗಳಿಗೆ ಅನುಗುಣವಾಗಿ ಸಿದ್ದರಾಮಯ್ಯನವರು ಬಜೆಟ್ ಮಂಡಿಸಿದ್ದಾರೆ. ದೇಶದ ಇತಿಹಾಸದಲ್ಲಿ ಪ್ರಥಮವಾಗಿ ರಾಜ್ಯದ ದಲಿತ ಸಮಾಜ ಕಲ್ಯಾಣಕ್ಕಾಗಿ 42,000 ಕೋಟಿ, ಶಿಕ್ಷಣ ಕ್ಷೇತ್ರಕ್ಕೆ 45,286 ಕೋಟಿ, ಸಮಗ್ರ ಗ್ರಾಮೀಣ ಅಭಿವೃದ್ಧಿಗೆ 26,735 ಕೋಟಿ, ಕೃಷಿ ವಲಯದ ಮಹತ್ವದ ಉತ್ತೇಜನಕ್ಕೆ ರೂ.7,145 ಕೋಟಿ, ರಾಜ್ಯದ ನೀರಾವರಿ 22,181 ಕೋಟಿ, ರಾಜ್ಯದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಉನ್ನತೀಕರಣಕ್ಕೆ 34,955 ಕೋಟಿ, ರೈತರನ್ನು ವ್ಯಾಜ್ಯ ಮುಕ್ತಗೊಳಿಸಲು 17,201 ಕೋಟಿ ಮೀಸಲಿಟ್ಟಿರುವುದು ವಿಶೇಷವಾಗಿದೆ. ಗ್ಯಾರಂಟಿ ಯೋಜನೆಗಳ ಬಗ್ಗೆ ನಿರಂತರ ಟೀಕೆ ಮಾಡುತ್ತಿದ್ದವರಿಗೆ ಈ ಬಜೆಟ್ ಮೂಲಕ ಉತ್ತರ ನೀಡಿದ್ದಾರೆ. ಹಾಗೆಯೇ ತನ್ನ ತವರು ಜಿಲ್ಲೆ ಮೈಸೂರಿನ ಸಮಗ್ರ ಅಭಿವೃದ್ಧಿಗಾಗಿ ಹಲವು ನೂತನ ಯೋಜನೆ ನೀಡಿದ್ದಾರೆ.

–ಡಾ.ಬಿ.ಜೆ.ವಿಜಯ್ ಕುಮಾರ್, ಅಧ್ಯಕ್ಷ, ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ.

ಒಂದು ವರ್ಗಕ್ಕೆ ಸೀಮಿತ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಜೆಟ್, ಸಾಮಾನ್ಯ ಜನರಿಗೆ ಬರೆ ಎಳೆದಿದೆ. ಕೇವಲ ಒಂದು ವರ್ಗಕ್ಕೆ ಸೀಮಿತವಾದ ಬಜೆಟ್ ಮಂಡಿಸಿದ್ದಾರೆ. ಕರ್ನಾಟಕದ ಬಜೆಟ್ ಅನ್ನು ಒಂದು ಧರ್ಮಕ್ಕೆ ಸೀಮಿತಗೊಳಿಸುವ ಮೂಲಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳಿಗೆ ಕೇವಲ ಚಿಪ್ಪು ನೀಡಿದ್ದಾರೆ. ಮುಸ್ಲಿಮರಿಗೆ ಸರ್ಕಾರಿ ಗುತ್ತಿಗೆಯಲ್ಲಿ ಮೀಸಲಾತಿ, ಮುಸ್ಲಿಮರ ಸರಳ ಮದುವೆಗೆ 50 ಸಾವಿರ ಸಹಾಯ ಧನ, ವಕ್ಫ್, ಖಬರಸ್ಥಾನಗಳ ಮೂಲಸೌಕರ್ಯಕ್ಕೆ 150 ಕೋಟಿ, ಮುಸ್ಲಿಮರ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ 50 ಲಕ್ಷ, ಮುಸ್ಲಿಮರು ಅತೀಹೆಚ್ಚು ವಾಸವಿರುವ ಪ್ರದೇಶದಲ್ಲಿ ಐಟಿಐ, ಮುಸ್ಲಿಮ್ ವಿದ್ಯಾರ್ಥಿಗಳಿಗೆ ಕೆಇಎ ಅಡಿ ಶೇ.50 ರಷ್ಟು ಶುಲ್ಕ ಕಡಿತ, ಉಲ್ಲಾಳದಲ್ಲಿ ವಿದ್ಯಾರ್ಥಿನಿಯರಿಗೆ ವಸತಿ ಸಹಿತ ಪಿಯು ಕಾಲೇಜು, ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿ ವೇತನ ಹೆಚ್ಚಳ. ಹೀಗೆ ಒಂದೇ ವರ್ಗಕ್ಕೆ ಆದ್ಯತೆ ನೀಡಿದ್ದಾರೆ. ಜೊತೆಗೆ ಬಹುಸಂಖ್ಯಾತರ ಮೂಗಿಗೆ ತುಪ್ಪ ಸವರುವ ಪ್ರಯತ್ನ ಮಾಡಿದ್ದಾರೆ. ಒಟ್ಟಾರೆ ದೇಶದ ಯಾವುದೇ ರಾಜ್ಯದಲ್ಲೂ ಇಲ್ಲದ ಕಾಂಗ್ರೆಸ್‌ನ ದಿವಾಳಿ ಮಾಡೆಲ್ ಜಾರಿ ಮಾಡುತ್ತಿದ್ದಾರೆ.

–ಎಲ್.ಆರ್.ಮಹದೇವಸ್ವಾಮಿ, ಬಿಜೆಪಿ ಮೈಸೂರು ಜಿಲ್ಲಾಧ್ಯಕ್ಷ.

ಮುಡಾ ಹಗರಣ: ಸಿಎಂ ಪತ್ನಿ, ಸಚಿವ ಬೈರತಿ ಸುರೇಶ್‌ಗೆ ಬಿಗ್ ರಿಲೀಫ್

ಇಡಿ ಸಮನ್ಸ್ ರದ್ದುಗೊಳಿಸಿದ ಹೈಕೋರ್ಟ್



ಪಾರ್ವತಿ



ಬೈರತಿ ಸುರೇಶ್


ಬೆಂಗಳೂರು, ಮಾ.7– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಮತ್ತು ಸಚಿವ ಬೈರತಿ ಸುರೇಶ್ ಅವರಿಗೆ ಹೈಕೋರ್ಟ್ ಶುಕ್ರವಾರ ಬಿಗ್ ರಿಲೀಫ್ ನೀಡಿದೆ.

ಮುಡಾ ಪ್ರಕರಣ ಸಂಬಂಧ ಜಾರಿ ನಿರ್ದೇಶನಾಲಯ(ಇಡಿ) ನೀಡಿದ್ದ ಸಮನ್ಸ್ ರದ್ದು ಕೋರಿ ಸಿಎಂ ಪತ್ನಿ ಪಾರ್ವತಿ ಮತ್ತು ಸಚಿವ ಬೈರತಿ ಸುರೇಶ್ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಏಕ ಸದಸ್ಯ ಪೀಠ, ತೀರ್ಪು ಕಾಯ್ದಿರಿಸಿತ್ತು.

ಇಂದು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಇಡಿ ಸಮನ್ಸ್ ರದ್ದುಗೊಳಿಸಿ ಆದೇಶ ಹೊರಡಿಸಿದೆ. ಇದರಿಂದ ಸಿಎಂ ಸಿದ್ದರಾಮಯ್ಯ ಸಹಿತ ಪತ್ನಿ ಪಾರ್ವತಿ ಹಾಗೂ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ನಿರಾಳವಾಗಿದ್ದಾರೆ. ವಿಚಾರಣೆಯ ಸಮಯದಲ್ಲಿ, ಪಾರ್ವತಿ ಪರ ವಾದ ಮಂಡಿಸಿದ್ದ ಹಿರಿಯ ವಕೀಲ ಸಂದೇಶ್ ಜೆ.ಚೌಟ ಅವರು, ಈಗಾಗಲೇ ಪ್ರಶ್ನಾರ್ಹ ನಿವೇಶನಗಳನ್ನು ಮರಳಿಸಲಾಗಿದೆ. ಸೈಟ್‌ಗಳನ್ನು ಮರಳಿಸಿರುವುದರಿಂದ ಇಡಿಗೆ ತನಿಖೆ ನಡೆಸುವ ಅಧಿಕಾರ ಇಲ್ಲ. ಅಪರಾಧದಿಂದ ಗಳಿಸಿದ ಸಂಪತ್ತಿದ್ದರೆ ಮಾತ್ರ ಇಡಿ ತನಿಖೆ ನಡೆಸಬಹುದು. ಆದರೆ ಸೈಟ್‌ಗಳನ್ನು ಮರಳಿಸಿದ ನಂತರ ಇಡಿ ತನಿಖೆ ಆರಂಭಿಸಿದೆ. ಅಪರಾಧದಿಂದ ಗಳಿಸಿದ ಹಣ ಚಟುವಟಿಕೆಗೆ ಬಳಕೆಯಾಗಬೇಕು. ಇಲ್ಲವಾದರೆ ಪಿಎಂಎಲ್‌ಎ ಕಾಯ್ದೆಯ ಅಂಶಗಳು ಅನ್ವಯವಾಗುವುದಿಲ್ಲವೆಂದು ವಾದಿಸಿದ್ದರು.

ಪಾರ್ವತಿ ಅವರು ಅಕ್ಟೋಬರ್ 1, 2024 ರಂದು ವಿವಾದಿತ ಸೈಟ್‌ಗಳನ್ನು ಹಿಂದಿರುಗಿಸಿದ್ದಾರೆ. ಮುಡಾದ 14 ಸೈಟ್‌ಗಳಲ್ಲದೇ 1708 ಸೈಟ್‌ಗಳ ಬಗ್ಗೆಯೂ ಇಡಿ ತನಿಖೆ ನಡೆಸುತ್ತಿದೆ. ಈಗಾಗಲೇ 160 ಸೈಟ್‌ಗಳನ್ನು ಇಡಿ ತಾತ್ಕಾಲಿಕ ಜಪ್ತಿ ಮಾಡಿದೆ. ತನ್ನ ಕಾರ್ಯವ್ಯಾಪ್ತಿ ಮೀರಿ ಇಡಿ ಪರ್ಯಾಯ ತನಿಖೆ ನಡೆಸುತ್ತಿದೆ. ಇಡಿ ತಾತ್ಕಾಲಿಕ ಜಪ್ತಿ ಆದೇಶದಲ್ಲಿ ಹಲವು ಅಂಶಗಳನ್ನು ಪ್ರಸ್ತಾಪಿಸಿದೆ. ಭೂಸ್ವಾಧೀನ, ಭೂಪರಿವರ್ತನೆ ಇತ್ಯಾದಿಗಳ ಬಗ್ಗೆಯೂ ತನಿಖೆ ನಡೆಸಿದೆ. ಲೋಕಾಯುಕ್ತ ಪೊಲೀಸರ ತನಿಖಾ ವ್ಯಾಪ್ತಿಯಲ್ಲಿ ಇಡಿ ಪ್ರವೇಶಿಸಿದೆ. ಮುಡಾಗೆ ಹಿಂತಿರುಗಿಸಿರುವ 14 ಸೈಟ್‌ಗಳನ್ನು ಇಡಿ ಜಪ್ತಿ ಮಾಡಿಲ್ಲ. ಆದರೆ ಇತರೆ 160 ಸೈಟ್‌ಗಳನ್ನು ಜಪ್ತಿ ಮಾಡಿದೆ. ಈಗಾಗಲೇ ಲೋಕಾಯುಕ್ತ ಪೊಲೀಸರು ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ತನಿಖೆಯಲ್ಲಿ ಯಾವುದೇ ಅಕ್ರಮ ಕಂಡು ಬಂದಿಲ್ಲವೆಂದು ವರದಿ ಸಲ್ಲಿಸಿದ್ದಾರೆ ಎಂದು ಸಿಎಂ ಪತ್ನಿ ಪಾರ್ವತಿ ಪರ ವಕೀಲ ಸಂದೇಶ್ ಚೌಟ ವಾದ ಮಂಡಿಸಿದ್ದರು.

ಚಿನ್ನ ಕಳ್ಳಸಾಗಣೆ ಪ್ರಕರಣ: ನಟಿ ರನ್ಯಾ ರಾವ್ ಮೂರು ದಿನ ಡಿಆರ್‌ಐ ಕಸ್ಟಡಿಗೆ



ಬೆಂಗಳೂರು: 15 ಕೋಟಿ ರೂ. ಮೌಲ್ಯದ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧಿತರಾಗಿರುವ ಕನ್ನಡದ ನಟಿ ರನ್ಯಾರಾವ್ ಅವರನ್ನು ಹೆಚ್ಚಿನ ವಿಚಾರಣೆಗಾಗಿ ಮೂರು ದಿನಗಳ ಕಾಲ ಡಿಆರ್‌ಐ ಕಸ್ಟಡಿಗೆ ನೀಡಿ ಕೋರ್ಟ್ ಆದೇಶ ನೀಡಿದೆ.

ಡಿಆರ್‌ಐ ಅಧಿಕಾರಿಗಳು ಆರೋಪಿ ನಟಿಯನ್ನು, ಹೆಚ್ಚಿನ ವಿಚಾರಣೆಗಾಗಿ ತನ್ನ ವಶಕ್ಕೆ ನೀಡುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ಆರ್ಥಿಕ ಅಪರಾಧಗಳ ನ್ಯಾಯಾಲಯದ ನ್ಯಾಯಾಧೀಶ ವಿಶ್ವನಾಥ್ ಸಿ.ಗೌಡರ್ ತೀರ್ಪು ಕಾಯ್ದಿರಿಸಿದ್ದರು.

ಇಂದು ತೀರ್ಪು ಪ್ರಕಟಿಸಿದ ನ್ಯಾಯಮೂರ್ತಿ ವಿಶ್ವನಾಥ್ ಸಿ.ಗೌಡರ್ ಅವರು, ನಟಿಯನ್ನು ಮಾರ್ಚ್ 9ರಿಂದ ಮಾರ್ಚ್ 11ರವರೆಗೆ ಡಿಆರ್‌ಐ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದ್ದಾರೆ.

ಮಾರ್ಚ್ 3ರ ರಾತ್ರಿ ದುಬೈನಿಂದ ಎಮಿರೇಟ್ಸ್ ಏರ್‌ಲೈನ್ಸ್ ವಿಮಾನದಲ್ಲಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ನಟಿಯನ್ನು ಅಧಿಕಾರಿಗಳು ತಪಾಸಣೆಗೆ ಒಳಪಡಿಸಿದ್ದು, ಈ ವೇಳೆ ನಟಿ ಬಳಿ 14.80 ಕೆಜಿ ಚಿನ್ನ ಪತ್ತೆಯಾಗಿತ್ತು. ತಕ್ಷಣ ನಟಿಯನ್ನು ಬಂಧಿಸಲಾಗಿತ್ತು. ನಟಿ ರನ್ಯಾರಾವ್ 15 ದಿನಗಳಲ್ಲಿ ನಾಲ್ಕು ಬಾರಿ ದುಬೈಗೆ ಪ್ರಯಾಣ ಬೆಳೆಸಿದ್ದಾರೆ ಮತ್ತು ಕಳೆದ ಒಂದು ವರ್ಷದಲ್ಲಿ ಸೌದಿ ನಗರಕ್ಕೆ 30 ಬಾರಿ ಪ್ರಯಾಣಿಸಿದ್ದಾರೆ. ಪ್ರತಿ ಪ್ರವಾಸದಲ್ಲೂ ಅವರು ಚಿನ್ನವನ್ನು ಸಾಗಿಸುತ್ತಿದ್ದರು ಎಂದು ವರದಿಯಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

08.03.2025 ಶನಿವಾರ, ಮಳೆ ನಕ್ಷತ್ರ: ಪೂರ್ವಭಾದ್ರಾ 04.03.2025 ರಿಂದ 16.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಶುಕ್ಲ ಪಕ್ಷ,
ತಿಥಿ: ನವಮಿ, ನಕ್ಷತ್ರ: ಆರಿದ್ರಾ, ರಾಹುಕಾಲ: ಬೆಳಗ್ಗೆ 9 ರಿಂದ 10.30 ರವರೆಗೆ

■**ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಇಸುಬು ತಪಾಸಣಾ ಶಿಬಿರ, ಒಟೋಮೈಕೋಸಿಸ್–ಕಿವಿಯ ಫಂಗಲ್ ಸೋಂಕಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ :** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ಬೆಳಗ್ಗೆ 9ಕ್ಕೆ ಉದ್ಘಾಟನೆ : ಜಿಲ್ಲಾ ಮುಖ್ಯ ಆಯುಕ್ತ ಪಿ. ವಿಶ್ವನಾಥ್, ಮುಖ್ಯ ಅತಿಥಿಗಳು : ಮಂಗಳೂರು ಎನಪೋಯ ವಿವಿ ಉಪ ಕುಲಪತಿ ಡಾ. ವಿಜಯಕುಮಾರ್, ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ, ಜಿಲ್ಲಾ ಖಜಾಂಚಿ ಕೆ.ಬಿ. ಗುರುಮೂರ್ತಿ, ಉಪಾಧ್ಯಕ್ಷೆ ಶ್ರೀಮತಿ ಪುಷ್ಪವಲ್ಲಿ, ರಾಜ್ಯ ಆಯುಕ್ತರಾದ ಶ್ರೀಮತಿ ಬಿ.ವಿ. ರಾಮಲತಾ, ಬಿ.ಕೆ. ಬಸವರಾಜ, ಅಬ್ದುಲ್ ಜಮೀಲ್, ಅಧ್ಯಕ್ಷತೆ : ರಾಜ್ಯ ಆಯುಕ್ತರಾದ ಶ್ರೀಮತಿ ಗೀತಾ ನಟರಾಜ್; ಮಧ್ಯಾಹ್ನ 3ಕ್ಕೆ ಸಮಾರೋಪ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸನ್ಮಾನ : ಇಸ್ರೋ ನಿವೃತ್ತ ವಿಜ್ಞಾನಿ ಶ್ರೀಮತಿ ಟಿ.ಕೆ. ಅನುರಾಧ, ಮುಖ್ಯ ಅತಿಥಿಗಳು : ರಾಜ್ಯ ಆಯುಕ್ತ ಎಂ.ಎ. ಖಾಲಿದ್, ರಾಜ್ಯ ಕೋಶಾಧಿಕಾರಿ ಟಿ. ಪ್ರಭಾಕರ್, ರಾಜ್ಯ ಕಾರ್ಯದರ್ಶಿ ಕೆ. ಗಂಗಪ್ಪಗೌಡ, ಅಧ್ಯಕ್ಷತೆ : ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್, ಸ್ಥಳ: ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು, ಗೋಕುಲಂ.

■ **ಮೈಸೂರಿನ ಜೆಎಸ್‌ಎಸ್ ಕಾನೂನು ಕಾಲೇಜು, ಚೆನ್ನೈನ ಸುರಾನ ಮತ್ತು ಸುರಾನ ಅಂತರರಾಷ್ಟ್ರೀಯ ಕಾನೂನು ಸಂಸ್ಥೆ:** 22ನೇ ರಾಷ್ಟ್ರೀಯ ಅಣುಕು ನ್ಯಾಯಾಲಯ ಸ್ಪರ್ಧೆ, ಉದ್ಘಾಟನೆ : ಕೇರಳ ಉಚ್ಚ ನ್ಯಾಯಾಲಯದ ನ್ಯಾಯಾಧೀಶ ನ್ಯಾ. ಎಂ.ವಿ. ಸ್ವಾಮ್‌ಕುಮಾರ್, ಅಧ್ಯಕ್ಷತೆ : ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರ ಮಠ, ಮುಖ್ಯ ಅತಿಥಿಗಳು : ಪ್ರೀತಮ್ ಸುರಾನ, ಕಾಲೇಜಿನ ಕಾರ್ಯನಿರ್ವಾಹಕರಾದ ಪ್ರೊ. ಕೆ.ಎಸ್. ಸುರೇಶ್, ಜೆಎಸ್‌ಎಸ್ ಕಾನೂನು ಕಾಲೇಜು ಪ್ರಿನ್ಸಿಪಾಲ್ ಡಾ. ಎನ್. ವಾಣಿಶ್ರೀ, ಸ್ಥಳ: ಜೆಎಸ್‌ಎಸ್ ಕಾನೂನು ಕಾಲೇಜು, ಕುವೆಂಪುನಗರ, ಬೆಳಗ್ಗೆ 9.30ಕ್ಕೆ.

■**ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■**ಬಾಸುದೇವ ಸೋಮಾನಿ ಕಾಲೇಜು, ಸೋಷಿಯಲ್ ಜಸ್ಟೀಸ್ ಫೋರಂ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಉದ್ಘಾಟನೆ : ಕಾಲೇಜು ಅಧ್ಯಕ್ಷ ಡಾ.ಎಂ. ಪುಟ್ಟಸ್ವಾಮಿ, ಸಂಪನ್ಮೂಲ ವ್ಯಕ್ತಿ : ಡಾ. ಎಸ್. ರಮ್ಯಾ, ಮುಖ್ಯ ಅತಿಥಿಗಳು : ಎಂ.ಎಸ್. ಪರಮಾನಂದ, ಕುಬೇರ್ ಪಿ. ಗೌಡ, ಪಿ. ಗೀತಾಂಜಲಿ, ಅಧ್ಯಕ್ಷತೆ : ಕಾಲೇಜು ಟ್ರಸ್ಟಿ ಶ್ರೀಮತಿ ಎಸ್. ಪ್ರಭಾ, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಎಂ. ಮಹದೇವಸ್ವಾಮಿ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 10.30ಕ್ಕೆ.

■**ಜೆಎಸ್‌ಎಸ್ ಮಹಿಳಾ ಕಾಲೇಜು :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಕರ್ನಾಟಕ ಸಂಸ್ಕೃತ ವಿವಿ ವಿಶ್ರಾಂತ ಕುಲಪತಿ ಪ್ರೊ. ಪದ್ಮಾಶೇಖರ್, ಉದ್ಘಾಟನೆ : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಮುಖ್ಯ ಅತಿಥಿಗಳು : ಹಿರಿಯ ನಿರೂಪಕ ಸಿಂಧೂದರ ಗಂಗಾಧರ್, ಸ್ಥಳ: ನವಜ್ಯೋತಿ ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಉಚಿತ ರಂಗಭೂಮಿ ಮತ್ತು ಜಾನಪದ ಕಲಾಪ್ರಕಾರಗಳ ತರಬೇತಿ ಶಿಬಿರದ ಸಮಾರೋಪ ಸಮಾರಂಭ, ಜಾನಪದ ಸಂಭ್ರಮ ಮತ್ತು ನಾಟಕೋತ್ಸವ, ಬೆಳಗ್ಗೆ 10.30ಕ್ಕೆ ಮಾರಿ ಕುಣಿತ, ಕಂಸಾಳೆ ನೃತ್ಯ, ಡೊಳ್ಳು ಕುಣಿತ, ಪೂಜಾಕುಣಿತ, ಮುಖ್ಯ ಅತಿಥಿಗಳು : ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಹಿರಿಯ ರಂಗ ನಿರ್ದೇಶಕರಾದ ಶ್ರೀಮತಿ ಕೆ.ಆರ್. ಸುಮತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ.ಸುದರ್ಶನ್, ಉಪಸ್ಥಿತರು : ಗೌತಮ ಟ್ರಸ್ಟ್ ಅಧ್ಯಕ್ಷ ಕೃಷ್ಣಮೂರ್ತಿ ತಲಕಾಡು, ಸ್ಥಳ: ಕಿರು ರಂಗಮಂದಿರ, ಕಲಾಮಂದಿರ ಆವರಣ, ಬೆಳಗ್ಗೆ 11ಕ್ಕೆ.

■**ತಾಯಮ್ಮ ಪ್ರಕಾಶನ, ಸುಯೋಗ್ ಆಸ್ಪತ್ರೆ :** ವೈದ್ಯ ಸಾಹಿತಿ ಡಾ. ಎಸ್.ಪಿ. ಯೋಗಣ್ಣ ಅವರ ಕೃತಿಗಳ ಲೋಕಾರ್ಪಣೆ ಸಮಾರಂಭ, ಸಾನ್ನಿಧ್ಯ : ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಡಾ. ನಿಶ್ಚಲಾನಂದನಾಥ ಸ್ವಾಮೀಜಿ, ಅಧ್ಯಕ್ಷತೆ : ಶಾಸಕ ತನ್ವೀರ್ ಸೇಠ್, ಪ್ರಾಸ್ತಾವಿಕ ನುಡಿ : ಡಾ. ಎಸ್.ಪಿ. ಯೋಗಣ್ಣ, ಕೃತಿ ಬಿಡುಗಡೆ : ಹಿರಿಯ ಪತ್ರಕರ್ತ ವಿಶ್ವೇಶ್ವರ ಭಟ್, ಉಪಸ್ಥಿತರು : ಸಾಹಿತಿ ಪ್ರೊ. ಚಂದ್ರಶೇಖರ್, ವಿಜ್ಞಾನ ಸಾಹಿತಿ ಎಸ್. ರಾಮಪ್ರಸಾದ್, ಎಂ.ಎನ್. ಮೋಹನ್ ಕುಮಾರ್, ಶ್ರೀಮತಿ ಸುಧಾ ಯೋಗಣ್ಣ, ಸ್ಥಳ: ಸುಯೋಗ್ ಆಸ್ಪತ್ರೆ ಸಭಾಂಗಣ, ರಾಮಕೃಷ್ಣನಗರ, ಬೆಳಗ್ಗೆ 11ಕ್ಕೆ.

■**ಶ್ರೀ ಕ್ಷೇತ್ರ ದಂಡಿನಮಾರಮ್ಮ ದೇವಸ್ಥಾನ :** ಶ್ರೀ ಮನೆ ಮಂಚಮ್ಮ ದಂಡಿನಮಾರಮ್ಮ ಮತ್ತು ಬಿಸಿಲುಮಾರಮ್ಮ ಜಾತ್ರಾ ಮಹೋತ್ಸವ, ಸ್ಥಳ: ದೇವಸ್ಥಾನ, ಮೈಸೂರು–ಬೆಂಗಳೂರು ರಸ್ತೆ.

■**ಮಹಾಜನ ಪ್ರಥಮ ದರ್ಜೆ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಶ್ರೀಬಸವೇಶ್ವರ ಸಾಮಾಜಿಕ ಪರಿಷ್ಕರಣೆ ಸಂಶೋಧನೆ ಅಧ್ಯಯನ ಹಾಗೂ ವಿಸ್ತರಣಾ ಕೇಂದ್ರ, ಕನ್ನಡ ವಿಭಾಗ, ಐಕ್ಯೂಎಸಿ :** ಸರಣಿ ಉಪನ್ಯಾಸ ಮಾಲಿಕೆ, ಡಾ. ವಿನೋದಾ ಅವರಿಂದ ಆಯ್ದಕ್ಕಿ ಮಾರಯ್ಯ ಮತ್ತು ಲಕ್ಕಮ್ಮನ ವಚನಗಳಲ್ಲಿಯ ಚಿಂತನೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಪ್ರಿನ್ಸಿಪಾಲ್ ಡಾ. ಆರ್. ಮಾನಸ, ಉಪಸ್ಥಿತರು : ಪ್ರಾಧ್ಯಾಪಕ ಡಾ. ವೈ. ನಾಗರಾಜ, ಸ್ಥಳ: ವಿಶ್ವಕವಿ ಕುವೆಂಪು ಕಾಲೇಜು, ಬೆಳಗ್ಗೆ 10.30ಕ್ಕೆ.

■**ಲಯನ್ಸ್ ಕ್ಲಬ್ ಆಫ್ ಮೈಸೂರು, ಮೈಸೂರು ಸ್ತ್ರೀ ಶಕ್ತಿ ಮಹಿಳಾ ವೇದಿಕೆ :** ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಕೃತಕ ಕಾಲು ಜೋಡಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಅತಿಥಿಗಳು : ಶ್ರೀ ಚಿದಾನಂದ ಸ್ವಾಮೀಜಿ, ಡಾ. ಸಿ.ಪಿ. ಮಧು, ಲಯನ್ ಮಹಾವೀರ್ ಚಂದ್ ಬನ್ಸಾಲಿ, ಹಿರಿಯ ಪತ್ರಕರ್ತರಾದ ಕೆ. ದೀಪಕ್, ಅಂಶಿ ಪ್ರಸನ್ನಕುಮಾರ್, ಬಿ.ಜೆ. ವಿಜಯಕುಮಾರ್, ಎಂ. ಬಸವರಾಜು, ಪೂರ್ಣಚಂದ್ರ ತೇಜಸ್ವಿ, ಸಂತೋಷ್ ಎಸ್. ಗೌಡ, ಸ್ಥಳ: ಜೆಎಸ್‌ಎಸ್ ಆಸ್ಪತ್ರೆ, ಎಂ.ಜಿ. ರಸ್ತೆ, ಬೆಳಗ್ಗೆ 10.30ಕ್ಕೆ.

■**ಜನನಿ ಸೇವಾ ಟ್ರಸ್ಟ್ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ದಿಟ್ಟ ಮಹಿಳೆಯರಿಗೆ ಸನ್ಮಾನ ಸಮಾರಂಭ 'ಮಹಿಳೆ–ಕಹಳೆ', ಉಪಸ್ಥಿತರು : ಮಾಜಿ ಲೋಕಸಭಾ ಸದಸ್ಯ ತುಳಸಿದಾಸಪ್ಪನವರ ಧರ್ಮಪತ್ನಿ ಶ್ರೀಮತಿ ಸರೋಜ ತುಳಸಿದಾಸ್, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಸಾಹಿತಿ ಡಾ.ಎಸ್.ಪಿ. ಉಮಾದೇವಿ, ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ರಾಜ್ಯ ಉಪಾಧ್ಯಕ್ಷರಾದ ಡಾ. ಸುಜಾತ ಎಸ್.ರಾವ್, ಅಧ್ಯಕ್ಷತೆ : ಜನನಿ ಸೇವಾ ಟ್ರಸ್ಟ್ ಅಧ್ಯಕ್ಷ ಎಂ.ಕೆ. ಅಶೋಕ, ಸ್ಥಳ: ಜಿಲ್ಲಾ ಪತ್ರಕರ್ತರ ಸಂಘದ ಆವರಣ, ತ್ಯಾಗರಾಜ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಶ್ರೀ ಪ್ರಸನ್ನ ನಂಜುಂಡೇಶ್ವರಸ್ವಾಮಿ ದೇವಸ್ಥಾನ :** ಶ್ರೀ ಪ್ರಸನ್ನ ನಂಜುಂಡೇಶ್ವರ ಸ್ವಾಮಿಯವರ ಬ್ರಹ್ಮೋತ್ಸವ, ರಾತ್ರಿ ಚಂದ್ರ ಮಂಡಲಾರೋಹಣ, ಸ್ಥಳ: ದೇವಸ್ಥಾನ, ಹಳೇ ಸಂತೇಪೇಟೆ.

■**ಜನ ಶಿಕ್ಷಣ ಸಂಸ್ಥೆ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಉಪಸ್ಥಿತರು : ಜನ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎಸ್.ಪಿ. ಮಂಜುನಾಥ್, ಪರಿಸರ ಬಳಗ ಸಂಸ್ಥೆ ನಿರ್ದೇಶಕರಾದ ಶ್ರೀಮತಿ ಲೀಲಾ ಶಿವಕುಮಾರ್, ಜಿಪಂ ಮಾಜಿ ಸದಸ್ಯೆ ಶ್ರೀಮತಿ ಶಶಿಕಲಾ ನಾಗರಾಜು, ಜ್ಞಾನಜ್ಯೋತಿ ಸಂಸ್ಥೆ ಅಧ್ಯಕ್ಷೆ ಶ್ರೀಮತಿ ಹೇಮಾವತಿ, ಸ್ನೇಹ ಸ್ತ್ರೀ ಸಮಾಜ ಅಧ್ಯಕ್ಷೆ ಶ್ರೀಮತಿ ಸುಧಾ ಮೃತ್ಯುಂಜಯಪ್ಪ, ಶ್ರೀಮತಿ ಶಿಲ್ಪಾ ಅವರೆಬೀಳ್, ಮಲ್ಲೇಶಪ್ಪ, ಬಿ.ಎ. ರಾಜಶೇಖರ್, ಸ್ಥಳ: ಜೆಎಸ್‌ಎಸ್ ಪ್ರೌಢಶಾಲೆ ಆವರಣ, ನಾಚನಹಳ್ಳಿ ಪಾಳ್ಯ, ಬೆಳಗ್ಗೆ 11.30ಕ್ಕೆ.

■**ಮೈಸೂರು ವಿವಿ ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರ :** ಯುಜಿಸಿ ಪ್ರಾಯೋಜಿತ ಭಾರತೀಯ ಜ್ಞಾನ ಪರಂಪರೆ ಕುರಿತ ಸಾಮರ್ಥ್ಯ ನಿರ್ಮಾಣ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಧನ ಸಹಾಯ ಆಯೋಗ ಕಾರ್ಯದರ್ಶಿ ಪ್ರೊ. ಮನಿಶ್ ರತ್ನಾಕರ್ ಜೋಶಿ, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಉಪಸ್ಥಿತರು : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಕೇಂದ್ರದ ನಿರ್ದೇಶಕರಾದ ಪ್ರೊ. ಎಸ್.ಎಸ್. ಮಾಲಿನಿ, ಸ್ಥಳ: ಎಂಎಂಟಿಟಿಸಿ ಸಭಾಂಗಣ, ಮಾನಸಗಂಗೋತ್ರಿ, ಮಧ್ಯಾಹ್ನ 12ಕ್ಕೆ.

■**ಆರಾಧ್ಯ ಮಹಾಸಭಾ, ವಿಶ್ವ ಭಾರತಿ ಸಂಸ್ಕೃತ ಪಾಠಶಾಲೆ :** ಸುವರ್ಣ ಮಹೋತ್ಸವ, ಅಧ್ಯಕ್ಷತೆ : ಆರಾಧ್ಯ ಮಹಾಸಭಾ ಅಧ್ಯಕ್ಷ ಪಿ. ನಾಗಭೂಷಣಾರಾಧ್ಯ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಮುಖ್ಯ ಅತಿಥಿಗಳು : ಪಾಲಿಕೆ ಮಾಜಿ ಸದಸ್ಯ ಮಾ.ವಿ. ರಾಮಪ್ರಸಾದ್, ವಿದ್ವಾನ್ ಸುರೇಶ್, ಟಿ.ಎಸ್. ಮಹೇಶ್ವರಾರಾಧ್ಯ, ಸ್ಥಳ: ಮಹಾಸಭಾ ಆವರಣ, ಸಂಜೆ 3ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಮನೋವಿಜ್ಞಾನ ಅಧ್ಯಯನ ವಿಭಾಗ, ಮೈಸೂರು ವಿವಿ ಮನೋವಿಜ್ಞಾನ ಅಲ್ಯೂಮ್ನಿ ಅಸೋಸಿಯೇಷನ್ :** ವಿಚಾರ ಸಂಕಿರಣದ ಸಮಾರೋಪ ಸಮಾರಂಭ, ಸಮಾರೋಪ ಭಾಷಣ : ಮೈಸೂರು ವಿವಿ ಕುಲಸಚಿವರಾದ ಶ್ರೀಮತಿ ಎಂ.ಕೆ. ಸವಿತಾ, ಮುಖ್ಯ ಅತಿಥಿಗಳು : ಶಾಸಕ ಕೆ. ಹರೀಶ್‌ಗೌಡ, ಅಧ್ಯಕ್ಷತೆ : ಮನೋವಿಜ್ಞಾನ ವಿಭಾಗದ ಅಧ್ಯಕ್ಷ ಪ್ರೊ. ಸಂಪತ್‌ಕುಮಾರ್, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಮಾನಸಗಂಗೋತ್ರಿ, ಸಂಜೆ 4ಕ್ಕೆ.

■ **ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಯತೀಂದ್ರ ಸಿದ್ದರಾಮಯ್ಯನವರ ಅಭಿಮಾನಿಗಳ ಬಳಗ :** ಶ್ರೀ ವೀರ ಮಡಿವಾಳ ಮಾಚಿದೇವರ ಜಯಂತ್ಯುತ್ಸವ, ಸಾನ್ನಿಧ್ಯ : ಮಡಿವಾಳ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ, ಉದ್ಘಾಟನೆ : ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ, ಅಧ್ಯಕ್ಷತೆ : ಎ.ಎಸ್. ರವಿಕುಮಾರ್, ಮುಖ್ಯ ಅತಿಥಿಗಳು : ಆಧ್ಯಾತ್ಮಿಕ ಚಿಂತಕ ಶಂಕರ್ ದೇವನೂರು, ಪ್ರೊ. ಎಸ್. ಶಿವರಾಜಪ್ಪ, ಶ್ರೀಮತಿ ರೇಣು ಶಿಕಾರಿ (ಕಲಾವಿದೆ), ಸ್ಥಳ: ಶ್ರೀರಾಂಪುರ 2ನೇ ಹಂತ, ಅಶೋಕಪುರಂ ರೈಲ್ವೆ ನಿಲ್ದಾಣದ ಎದುರು, ಶ್ರೀರಾಂಪುರ, ಸಂಜೆ 4ಕ್ಕೆ.

■ **ನಾಟ್ಯ ಸ್ವರಾಂಜಲಿ ಸಂಗೀತ ಶಾಲೆ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ವಾರ್ಷಿಕೋತ್ಸವ ಸಮಾರಂಭ, ಉದ್ಘಾಟನೆ : ಕಲ್ಯಾ ಶ್ರೀಕಾಂತಚಾರ್, ಶ್ರೀಮತಿ ಪುಷ್ಪಲತಾ ಶಿವಕುಮಾರ್ ಅವರಿಂದ ಸಾಹಿತ್ಯ–ಸಂಗೀತ–ಉತ್ಸವ ಕಾರ್ಯಕ್ರಮ, ಅಧ್ಯಕ್ಷತೆ : ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ನಾಗರಾಜು ಬೈರಿ, ಮುಖ್ಯ ಅತಿಥಿಗಳು : ಪ್ರಸನ್ನಕುಮಾರ್, ವಕೀಲರಾದ ಎಲ್. ಚಂದ್ರಶೇಖರ್ (ಶೇಖಿ), ಆರ್. ಲಕ್ಷ್ಮಣ್, ವಿದ್ವಾನ್ ಬಾಲಸುಬ್ರಮಣ್ಯ ಅವರಿಂದ ಕೊಳಲು ವಾದನ, ವಿದ್ವಾನ್ ಪರಮೇಶ್ವರ ಹೆಗಡೆ –ತಬಲ, ಪ್ರದೀಪ್–ರಿದಂ, ಸ್ಥಳ: ಕಿರು ರಂಗಮಂದಿರ, ರಂಗಾಯಣ ಆವರಣ, ಸಂಜೆ 4ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಸಸ್ಯಶಾಸ್ತ್ರ ಅಧ್ಯಯನ ವಿಭಾಗ :** ವಿಚಾರ ಸಂಕಿರಣದ ಸಮಾರೋಪ ಸಮಾರಂಭ, ಸಮಾರೋಪ ಭಾಷಣ : ಪ್ರೊ. ವಿಷ್ಣುವರ್ಧನ, ಮುಖ್ಯ ಅತಿಥಿಗಳು : ಡಾ. ಪಿ.ಕೆ. ಚಕ್ರವರ್ತಿ, ಪ್ರೊ. ಭೂಷಣ್ ಎಲ್. ಜಲಲಿ, ಪ್ರೊ. ಎಸ್. ಶಂಕರ ಭಟ್, ಪ್ರೊ. ರಾಜ್‌ಕುಮಾರ್ ಹೆಚ್. ಗರಂಪಲ್ಲಿ, ಅಧ್ಯಕ್ಷತೆ : ಮೈಸೂರು ವಿವಿ ಕುಲಸಚಿವರಾದ ಶ್ರೀಮತಿ ಎಂ.ಕೆ. ಸವಿತಾ, ಸ್ಥಳ: ವಿಜ್ಞಾನ ಭವನದ ಸಭಾಂಗಣ, ಮಾನಸಗಂಗೋತ್ರಿ, ಸಂಜೆ 4.30ಕ್ಕೆ.

■**ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಕದಳಿ ಮಹಿಳಾ ವೇದಿಕೆ :** ವಿಶ್ವ ಮಹಿಳಾ ದಿನಾಚರಣೆ, ವಿಶ್ರಾಂತ ಪ್ರಾಂಶುಪಾಲರಾದ ಡಾ. ಶಶಿಕಲಾ ವಸ್ತ್ರದ ಅವರಿಂದ ಹೆಣ್ಣು ಮಕ್ಕಳು ಮತ್ತು ಆತ್ಮವಿಕಾಸ ಕುರಿತು ಉಪನ್ಯಾಸ, ಉಪಸ್ಥಿತರು : ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಅಧ್ಯಕ್ಷತೆ : ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶಾರದಾ ಶಿವಲಿಂಗಸ್ವಾಮಿ, ಸ್ಥಳ: ಜೆಎಸ್‌ಎಸ್ ಪ್ರಶಿಕ್ಷಣ ಪ್ರಾಥಮಿಕ ಶಾಲಾ ಸಭಾಂಗಣ, ಸರಸ್ವತಿಪುರಂ, ಸಂಜೆ 4.30ಕ್ಕೆ.

■ **ಭಾರತೀ ಪ್ರಕಾಶನ, ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘ :** ರವೀಂದ್ರ ಭಟ್ ದೊಡ್ನಳ್ಳಿ ಅವರ ಮಂದಮತಿಯ ಸಾಮತಿ ಹಾಗೂ ಸೀತಾಳೆ ಹೂದಂಡೆ ಕೃತಿಗಳ ಲೋಕಾರ್ಪಣೆ ಸಮಾರಂಭ, ಅಧ್ಯಕ್ಷತೆ: ಸಾಹಿತಿ ಪ್ರೊ. ಎಂ. ಕೃಷ್ಣೇಗೌಡ, ಕೃತಿ ಕುರಿತು : ವಿದ್ವಾನ್ ಜಿ.ಎಸ್. ನಟೇಶ್, ಉಪಸ್ಥಿತರು: ಲೇಖಕ ರವೀಂದ್ರ ಭಟ್ ದೊಡ್ನಳ್ಳಿ, ಸ್ಥಳ: ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘ, ಕುವೆಂಪುನಗರ, ಸಂಜೆ 5.30ಕ್ಕೆ

■ **ನೃತ್ಯಾಲಯ ಟ್ರಸ್ಟ್ :** ನಲಿವಿನ ಪಯಣ–46 'ಸರ್ವಂ ಶ್ರೀಕೃಷ್ಣಮಯಂ ಜಗತ್' ಭಕ್ತಿಯ ಹೊನಲ ಪ್ರದರ್ಶನ, ಸಂಜೆ 5 ರಿಂದ ನೃತ್ಯಾಲಯ ತಂಡದವರಿಂದ ಶ್ರೀ ಹರಿ ಭಜನೆ, ಸಂಜೆ 5.30 ರಿಂದ ಸಭಾ ಕಾರ್ಯಕ್ರಮ, ಸಂಜೆ 6.30ಕ್ಕೆ ಸರ್ವಂ ಶ್ರೀ ಕೃಷ್ಣಮಯಂ ಜಗತ್ ಕಾರ್ಯಕ್ರಮ, ನಿರ್ದೇಶನ: ಡಾ. ತುಳಸೀ ರಾಮಚಂದ್ರ, ಮುಖ್ಯ ಅತಿಥಿಗಳು : ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್‌ನ ನಾಟ್ಯಾಚಾರ್ಯ ಪ್ರೊ. ಕೆ. ರಾಮಮೂರ್ತಿರಾವ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷೆ ವಿದುಷಿ ಶ್ರೀಮತಿ ಶುಭಾ ಧನಂಜಯ, ಸನ್ಮಾನಿತರು : ವೈಣಿಕ ವಿದ್ವಾನ್ ಡಾ. ಆರ್. ವಿಶ್ವೇಶ್ವರನ್, ಕರ್ನಾಟಕ ಕಲಾಶ್ರೀ ಡಾ. ಮಾಲಾ ಶಶಿಕಾಂತ, ಅಧ್ಯಕ್ಷತೆ : ನೃತ್ಯಾಲಯ ಟ್ರಸ್ಟ್ ನಿರ್ದೇಶಕರಾದ ಡಾ. ತುಳಸೀ ರಾಮಚಂದ್ರ, ಸ್ಥಳ: ರಮಾಬಾಯಿ ಗೋವಿಂದರಾವ್ ಕಲಾ ವೇದಿಕೆ, ಗಾನಭಾರತಿ, ಕುವೆಂಪುನಗರ.

■ **ಕಲಾಧಾರೆ ಕಲ್ಚರಲ್ ಟ್ರಸ್ಟ್ :** ಕಲಾಧಾರೆ ಸಂಗೀತ ಮತ್ತು ನೃತ್ಯೋತ್ಸವ, ಉದ್ಘಾಟನೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು : ಪತ್ರಕರ್ತೆ ಶ್ರೀಮತಿ ರಶ್ಮಿ ಕೋಟಿ, ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯುಕ್ತೆ ಶ್ರೀಮತಿ ಎಸ್. ತೇಜಸ್ವಿನಿ, ಹಸೀಬುಲ್ಲಾ ಬೇಗ್, ಶ್ರೀಮತಿ ಕಮಲಾಕ್ಷಿ, ಸವಿತಾ ಪ. ಮಲ್ಲೇಶ್, ಡಾ. ಎಂ.ಡಿ.ಸುದರ್ಶನ್, ಡಾ.ನಾಗರಾಜ್ ವಿ. ಭೈರಿ, ಕಲಾಧಾರೆ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಚಾಮರಾಜ್, ಸ್ಥಳ: ರಮಾಗೋವಿಂದ ರಂಗಮಂದಿರ, ರಾಮಕೃಷ್ಣನಗರ, ಸಂಜೆ 5.30ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ನಖ ಶಿಖಾಂತ–ಅಂದ ಆರೋಗ್ಯಗಳ ಆಪ್ತ ಮಾಹಿತಿ, ಪ್ರಸ್ತುತಿ: ಡಾ. ಕೇಶವ ಕೊರಸೆ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಸ್. ಸಂಗೀತಾ, ಎಂ. ರಾಘವೇಂದ್ರ, ವ್ಯಾಖ್ಯಾನ –ಡಾ. ಹೆಚ್. ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಹಾದಿಯಲ್ಲಿ ಕಂಡ ಮುಖ–ಬಾನುಲಿ ಸರಣಿ, ಪ್ರಸ್ತುತಿ : ಅಬ್ದುಲ್ ರಶೀದ್, 9.00 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ನಮ್ಮೂರ್ ಹೆಸರು, ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ–ಟಿ. ನರಸೀಪುರ ತಾಲೂಕು ಬನ್ನೂರು ಹೋಬಳಿ ಮಾದಗಳ್ಳಿ ಗ್ರಾಮದ ಚಿಕ್ಕತಾಯಮ್ಮ ಮತ್ತು ಸಂಗಡಿಗರಿಂದ ಶನಿದೇವರ ಹಾಡು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಹಿಂದಿ ಚಿತ್ರಗೀತೆಗಳು, 3.00 ಹಳ್ಳಿ ಹಾಡು, 3.30 ಮಕ್ಕಳ ಮಂಟಪ–ಮೈಸೂರಿನ ನಾರಾಯಣ ಶಾಸ್ತ್ರಿ ರಸ್ತೆ, ಸದ್ವಿದ್ಯಾ ಪ್ರೌಢಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ–ಅಪರಾಧಿ ನಾನು, ರಚನೆ–ಡಿ.ಎ. ಶಂಕರ್, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ) ಬಹುಮುಖ ಪ್ರತಿಭೆಯ ಹಿರಿಯ ವಿದ್ವಾಂಸರು ಹಾಗೂ ಕವಿಗಳು ಆದ ಡಾ. ಸಿ.ಪಿ.ಕೃಷ್ಣಕುಮಾರ್ ಅವರೊಂದಿಗೆ ಜಿ.ಕೆ. ರವೀಂದ್ರ ಕುಮಾರ್ ಅವರು ನಡೆಸಿದ್ದ ಸಂವಾದದ ಎರಡನೇ ಭಾಗ, 6.50 ಕೃಷಿರಂಗ : ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ ರೈತರ ತಾಂತ್ರಿಕ ಜ್ಞಾನದ ಮೇಲೆ ಕೃಷಿ ತರಬೇತಿಯ ಪ್ರಭಾವ ಕುರಿತು ಸಂವಾದ. ಭಾಗವಹಿಸುತ್ತಾರೆ –ನಂಜನಗೂಡು ತಾಲೂಕು ಸುತ್ತೂರಿನ ಜೆ.ಎಸ್.ಎಸ್ ಕೃಷಿ ವಿಜ್ಞಾನ ಕೇಂದ್ರದ ಪ್ರಧಾನ ವಿಜ್ಞಾನಿ ಡಾ. ಬಿ.ಎನ್. ಜ್ಞಾನೇಶ್ ಹಾಗೂ ಟಿ. ನರಸೀಪುರ ತಾಲೂಕು ರಾಯರಹುಂಡಿ ಗ್ರಾಮದ ಸಿ. ಎಸ್. ಅನುರಾಧಾ, ಪ್ರಸ್ತುತಿ:ಎನ್. ಕೇಶವಮೂರ್ತಿ, 8.00 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು, 9.30 ಯುವವಾಣಿ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಶುಭಂಕರ್ ದೇ – ಹಾಡುಗಾರಿಕೆ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಮಾರ್ಚ್ 8 ಶನಿವಾರ 2025
ಸಂಪುಟ: 45 | ಸಂಚಿಕೆ: 318 | ಪುಟಗಳು: 12
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4



ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ 4,09,549 ಕೋಟಿ ದಾಖಲೆಯ ಬಜೆಟ್

ಗ್ಯಾರಂಟಿ ಜೊತೆಗೆ ಅಭಿವೃದ್ಧಿಗೂ ಆದ್ಯತೆ

19 ಸಾವಿರ ಕೋಟಿ ಆದಾಯ ಕೊರತೆ; 1,16,000 ಕೋಟಿ ಸಾಲದ ಹೊರೆ

ಬೆಂಗಳೂರು, ಮಾ.7– ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ 2025–26ನೇ ಸಾಲಿನ ಬಜೆಟ್ ಮಂಡಿಸಿದ್ದು, ಗ್ಯಾರಂಟಿ ಯೋಜನೆಗಳಿಗೆ ಬರೋಬ್ಬರಿ 51 ಸಾವಿರ ಕೋಟಿ ರೂ. ನೀಡುವುದರ ಜೊತೆಗೆ ಹತ್ತು ಹಲವು ಹೊಸ ಘೋಷಣೆಗಳನ್ನೂ ಮಾಡಿದ್ದಾರೆ.

ಇಂದು ವಿಧಾನಸಭೆಯಲ್ಲಿ 4,09,549 ಕೋಟಿ ರೂ. ಬೃಹತ್ ಗಾತ್ರದ ಬಜೆಟ್ ಮಂಡಿಸಿದ ಅವರು ಇದರಲ್ಲಿ 19,262 ಕೋಟಿ ರೂ. ರಾಜಸ್ವ ಕೊರತೆಯನ್ನು ಉಲ್ಲೇಖಿಸಿದ್ದಾರೆ. 1994 ರಲ್ಲಿ ಜನತಾ ದಳದ ಆಡಳಿತದಲ್ಲಿ ಹಣಕಾಸು ಸಚಿವರಾಗಿ ಮೊದಲ ಬಾರಿ ಬಜೆಟ್ ಮಂಡಿಸಿದ್ದ ಸಿದ್ದರಾಮಯ್ಯ ಅವರು, ಇಂದು ತಮ್ಮ 16ನೇ ಬಜೆಟ್ ಅನ್ನು ಮಂಡಿಸುವ ಮೂಲಕ ಇತಿಹಾಸವನ್ನು ಸೃಷ್ಟಿಸಿದರು. ಎರಡನೇ ಅವಧಿಗೆ ರಾಜ್ಯದ ಮುಖ್ಯಮಂತ್ರಿಯಾಗಿ ಇದು ಅವರ ಮೂರನೇ ಬಜೆಟ್ ಮತ್ತು ಸತತ ಎರಡನೇ ಆದಾಯ ಕೊರತೆ ಬಜೆಟ್ ಆಗಿದೆ. ಈ ಬಾರಿಯೂ ಪಂಚ ಗ್ಯಾರಂಟಿಗೆ 51,034 ಕೋಟಿ ರೂ. ಅನುದಾನ

■ 6ನೇ ಪುಟಕ್ಕೆ

ತವರು ಜಿಲ್ಲೆ ಮೈಸೂರಿಗೆ ಮುಖ್ಯಮಂತ್ರಿ ಭರ್ಜರಿ ಕೊಡುಗೆ






■ ಅಂತಾರಾಷ್ಟ್ರೀಯ ಮಾದರಿ ಚಿತ್ರನಗರಿ ಸ್ಥಾಪನೆಗೆ 500 ಕೋಟಿ ರೂ. ಮೀಸಲು ■ ಅಗ್ನಿಶಾಮಕ ಠಾಣಾ ಕಟ್ಟಡ ನಿರ್ಮಾಣಕ್ಕೆ ಮೂರು ಕೋಟಿ ರೂ. ■ ಪ್ರೊ. ನಂಜುಂಡಸ್ವಾಮಿ ಸಂಶೋಧನ ಪೀಠ ಸ್ಥಾಪನೆ. ■ ರೇಷ್ಮೆಗೂಡು ಮಾರುಕಟ್ಟೆ ಸ್ಥಾಪನೆ ■ 100 ಕೋಟಿ ರೂ. ವೆಚ್ಚದಲ್ಲಿ ನಿಮ್ಹಾನ್ಸ್ ಮಾದರಿ ಆಸ್ಪತ್ರೆ ನಿರ್ಮಾಣ ■ ಕ್ರೀಡಾ ವಿಜ್ಞಾನ ಕೇಂದ್ರ ಸ್ಥಾಪನೆ ■ ಬನ್ನಿಮಂಟಪದಲ್ಲಿ 120 ಕೋಟಿ ರೂ. ವೆಚ್ಚದಲ್ಲಿ ಹೈಟೆಕ್ ಬಸ್ ನಿಲ್ದಾಣ ಸ್ಥಾಪನೆ ■ ರಾಜ್ಯ ಮಟ್ಟದ ವಸ್ತುಸಂಗ್ರಹಾಲಯ ■ ಮೈಸೂರು ವಿಮಾನ ನಿಲ್ದಾಣ ರನ್ ವೇ ವಿಸ್ತರಣೆ ಭೂ ಸ್ವಾಧೀನಕ್ಕಾಗಿ 319 ಕೋಟಿ ರೂ ■ ಕ್ರೀಡಾ, ವಿಜ್ಞಾನ ಕೇಂದ್ರ ಸ್ಥಾಪನೆಗೆ 7 ಕೋಟಿ ರೂ. ■ ಕುಸ್ತಿ, ವಾಲಿಬಾಲ್, ಖೋ–ಖೋ ಅಕಾಡೆಮಿ ಸ್ಥಾಪನೆಗೆ 2 ಕೋಟಿ ರೂ. ಮೀಸಲು ■ ಪ್ರವಾಸಿಗರಿಗೆ ಪೌಷ್ಟಿಕ ಮೀನು ಖಾದ್ಯ ಒದಗಿಸಲು ಹೈಟೆಕ್ ಮತ್ಸ್ಯದರ್ಶಿನಿ ಆರಂಭ ■ ಮೈಸೂರು ಜಿಲ್ಲೆಯ ತಗಡೂರು ಸಮುದಾಯ ಆರೋಗ್ಯ ಕೇಂದ್ರ 100 ಹಾಸಿಗೆ ಆಸ್ಪತ್ರೆಯಾಗಿ ಮೇಲ್ದರ್ಜೆಗೆ ■ ಎಂಡೋಕ್ರೈನಾಲಜಿ ಕೇಂದ್ರ ಸ್ಥಾಪನೆ. ■ ವಿಶೇಷ ಮಕ್ಕಳ ಸರ್ಕಾರಿ ವಸತಿಯುತ ಶಾಲೆಗಳ ಉನ್ನತೀಕರಣಕ್ಕೆ 5 ಕೋಟಿ ರೂ. ■ ಬುಡಕಟ್ಟು ಜನಾಂಗದ ವಿದ್ಯಾರ್ಥಿಗಳ ಐದು ವಸತಿ ಶಾಲೆ ಮೇಲ್ದರ್ಜೆಗೆ ■ ವರುಣದಲ್ಲಿ ಬಹು ಕೌಶಲ ಅಭಿವೃದ್ಧಿ ಕೇಂದ್ರ ಸ್ಥಾಪನೆಗೆ 60 ಕೋಟಿ ರೂ. ಮೀಸಲು ■ ಮೈಸೂರು ವಿವಿಯಲ್ಲಿ ತಾಳೆಗರಿ ಹಸ್ತಪ್ರತಿ ಡಿಜಿಟಲೀಕರಣಕ್ಕೆ 1 ಕೋಟಿ ರೂ. ■ ಮೈಸೂರಿನ ರಂಗಾಯಣಕ್ಕೆ 2 ಕೋಟಿ ರೂ. ಅನುದಾನ ■ ಟಿ. ನರಸೀಪುರ ತಾಲೂಕು ಕ್ರೀಡಾಂಗಣಕ್ಕೆ ಆರು ಕೋಟಿ ರೂ. ■ ಮೈಸೂರಿನಲ್ಲಿ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳ ಸ್ಥಾಪನೆ ■ ಕಬಿನಿ ನದಿಗೆ ಅಡ್ಡಲಾಗಿ ಹಾಗೂ ಕಪ್ಪಡಿ ಗ್ರಾಮದ ಬಳಿ ಕಾವೇರಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಮಾಡುವುದಾಗಿ ಘೋಷಿಸಿದರು.



ಕೆಲ ದಿನಗಳಿಂದ ಮಂಡಿ ನೋವಿನಿಂದ ಬಳಲುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಭಾಧ್ಯಕ್ಷರ ಅನುಮತಿ ಪಡೆದು, ಕುಳಿತುಕೊಂಡೇ ಸುಮಾರು ಮೂರೂವರೆ ಗಂಟೆಗಳ ಕಾಲ, 16ನೇ ಬಾರಿಗೆ ಬಜೆಟ್ ಮಂಡನೆ ಮಾಡಿದರು.

ಅವಶ್ಯಕತೆಗೆ ಅನುಗುಣವಾಗಿ ನ್ಯಾಯಬೆಲೆ ಅಂಗಡಿ ಆರಂಭ

ಬೆಂಗಳೂರು, ಮಾ. 7(ಕೆಎಂಶಿ)–ಅವಶ್ಯಕತೆಗೆ ಅನುಗುಣವಾಗಿ ನ್ಯಾಯಬೆಲೆ ಅಂಗಡಿಗಳನ್ನು ಹೊಸದಾಗಿ ಪ್ರಾರಂಭಿಸುವ ಪ್ರಸ್ತಾವವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂಗಡಪತ್ರದಲ್ಲಿ ತಿಳಿಸಿದ್ದಾರೆ.



ಸಹಕಾರಿ ಸಂಘಗಳು ಮುಂದೆ ಬಂದರೆ, ಅವರು ನ್ಯಾಯಬೆಲೆ ಅಂಗಡಿ ತೆರೆಯಲು ಆದ್ಯತೆ ಮೇರೆಗೆ ಪರವಾನಗಿ ನೀಡಲಾಗುವುದು. ಪರಿಶಿಷ್ಟ ಜಾತಿ, ವರ್ಗದ ಸಮುದಾಯದವರಿಗೆ ನ್ಯಾಯಬೆಲೆ ಅಂಗಡಿ ತೆರೆಯಲು ಮೊದಲ ಅವಕಾಶ ಕಲ್ಪಿಸುವುದಾಗಿ ಹೇಳಿರುವ ಮುಖ್ಯಮಂತ್ರಿ ಅವರು, ಅನ್ನಭಾಗ್ಯ ಯೋಜನೆಯ ಸಗಟು ಲಾಭಾಂಶ ಪ್ರತಿ ಕ್ವಿಂಟಾಲ್‌ಗೆ 35 ರೂ.ನಿಂದ 40 ರೂ.ಗೆ ಹೆಚ್ಚಳ ಮಾಡಲಾಗುವುದು. ಸಾರ್ವಜನಿಕ ವಿತರಣಾ ವ್ಯವಸ್ಥೆ ಮೇಲೆ ಸಮರ್ಪಕ ನಿಗಾ ವಹಿಸಲು ಸಾಧ್ಯವಾಗುವಂತೆ ನ್ಯಾಯಬೆಲೆ ಅಂಗಡಿಗಳಲ್ಲಿ ಸ್ಥಾಪಿಸಿರುವ ತೂಕ ಮತ್ತು ಅಳತೆ ಯಂತ್ರಗಳನ್ನು ಐಟಿ ವ್ಯವಸ್ಥೆಯೊಂದಿಗೆ ಸಂಯೋಜಿಸಲಾಗುವುದು.

ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸಲು ತಂತ್ರಜ್ಞಾನ ಗರಿಷ್ಠ ಬಳಕೆ ಮಾಡಲಾಗುವುದು, ಇದಕ್ಕಾಗಿ 5 ಕೋಟಿ ರೂ. ವೆಚ್ಚದಲ್ಲಿ ಸಿಸಿಟಿವಿ ಮತ್ತು ಜಿಪಿಎಸ್ ಅಳವಡಿಸಲಾಗುವುದು ಎಂದಿದ್ದಾರೆ.

ಅಬಕಾರಿ ಇಲಾಖೆಗೆ 40 ಸಾವಿರ ಕೋಟಿ ತೆರಿಗೆ ಸಂಗ್ರಹ ಟಾರ್ಗೆಟ್

ಬೆಂಗಳೂರು: 2025–26ನೇ ಸಾಲಿನಲ್ಲಿ 40,000 ಕೋಟಿ ರೂ.ಗಳ ರಾಜಸ್ವ ಸಂಗ್ರಹಣಾ ಗುರಿಯನ್ನು ಅಬಕಾರಿ ಇಲಾಖೆಗೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಬಜೆಟ್ ಭಾಷಣದಲ್ಲಿ ತಿಳಿಸಿದರು.

2024–25ರ ಪರಿಷ್ಕೃತ ಅಂದಾಜಿನಲ್ಲಿ ಅಬಕಾರಿ ತೆರಿಗೆಯಿಂದ ಒಟ್ಟು 36,500 ಕೋಟಿ ರೂ.ಗಳ ರಾಜಸ್ವ ನಿರೀಕ್ಷಿಸಲಾಗಿತ್ತು. ಅದರಂತೆ 2025–26ನೇ ಸಾಲಿಗೆ 40,000 ಕೋಟಿ ರೂ.ಗಳ ಸಂಗ್ರಹಣಾ ಗುರಿಯನ್ನು ಅಬಕಾರಿ ಇಲಾಖೆಗೆ ನೀಡಲಾಗಿದೆ ಎಂದು ಹೇಳಿದರು. ಪ್ರೀಮಿಯಂ ಮದ್ಯದ ಬೆಲೆಗಳನ್ನು ನೆರೆಯ ರಾಜ್ಯಗಳಲ್ಲಿ ವಿಧಿಸುತ್ತಿರುವ ಬೆಲೆಗಳಿಗೆ ಅನುಸಾರವಾಗಿ ಪರಿಷ್ಕರಿಸುವುದರೊಂದಿಗೆ ಸರ್ಕಾರವು ಅಬಕಾರಿ ಸ್ಲ್ಯಾಬ್‌ಗಳನ್ನು ತರ್ಕಬದ್ಧಗೊಳಿಸಿದೆ. 2025–26ರಲ್ಲಿಯೂ ಅಬಕಾರಿ ಸ್ಲ್ಯಾಬ್‌ಗಳನ್ನು ತರ್ಕಬದ್ಧಗೊಳಿಸುವ ಪ್ರಕ್ರಿಯೆಯನ್ನು ಮುಂದುವರಿಸಲಾಗುವುದು ಎಂದು ವಿವರಿಸಿದರು.

ಜೊತೆಗೆ ಖಾಲಿ ಅಥವಾ ಲಭ್ಯವಿರುವ ಮದ್ಯದ ಪರವಾನಗಿಗಳನ್ನು ಪಾರದರ್ಶಕ ಇ–ಹರಾಜಿನ (ಆನ್‌ಲೈನ್) ಮೂಲಕ ಹಂಚಿಕೆ ಮಾಡಲು ಪ್ರಸ್ತಾಪಿಸಲಾಗಿದೆ. ಇದರಿಂದ ಹೆಚ್ಚುವರಿ ರಾಜಸ್ವ ಸಂಗ್ರಹಣೆಯಾಗುವ ನಿರೀಕ್ಷೆಯಿದೆ. ಇಲಾಖೆಯ ಎಲ್ಲಾ ಸೇವೆಗಳಿಗೆ ಸರ್ಕಾರವು ತಂತ್ರಾಂಶ ಸಿದ್ಧಪಡಿಸಿ ಆನ್‌ಲೈನ್ ಪ್ರಕ್ರಿಯೆಯನ್ನು ಅಭಿವೃದ್ಧಿಪಡಿಸಿದೆ. ಇದು ಆಡಳಿತದಲ್ಲಿ ದಕ್ಷತೆಯನ್ನು ಹೆಚ್ಚಿಸುತ್ತದೆ ಮತ್ತು ಸಾರ್ವಜನಿಕ ಸೇವೆಯನ್ನು ಮತ್ತಷ್ಟು ಸುಧಾರಿಸಲು ಸಹಕಾರಿಯಾಗಲಿದೆ ಎಂದು ಸಿಎಂ ತಿಳಿಸಿದರು.

ಕೋರಿದ್ದವರಿಗೆ ಇತಿಮಿತಿಯಲ್ಲೇ ಕೊಡುಗೆ ಕೊಟ್ಟ ಸಿದ್ದರಾಮಯ್ಯ

ಬೆಂಗಳೂರು, ಮಾ. 7(ಕೆಎಂಶಿ)– ರಾಜ್ಯದ ಜನತೆಯ ಮೇಲೆ ಹೊರೆ ಹೇರದೆ ಅಭಿವೃದ್ಧಿಗೆ ಪೂರಕವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ 2025–26ನೇ ಸಾಲಿನ ಮುಂಗಡಪತ್ರ ಮಂಡಿಸಿದ್ದಾರೆ. ತೆರಿಗೆ ಹೊರೆ ಹೆಚ್ಚಳ ಮಾಡದಿದ್ದರೂ ಪ್ರಸಕ್ತ ಸಾಲಿನ ಮುಂಗಡಪತ್ರದ ಗಾತ್ರವನ್ನು 4.08 ಕೋಟಿ ರೂ.ಗೆ ಹೆಚ್ಚಿಸುವ ಮೂಲಕ 1.16 ಲಕ್ಷ ಕೋಟಿ ರೂ. ಸಾಲ ಪಡೆಯಲು ಮುಂದಾಗಿದ್ದಾರೆ.

ಗ್ಯಾರಂಟಿ ಯೋಜನೆಗಳಿಗೆ ಅನುದಾನ ಮುಂದುವರಿಸಿರುವುದರ ಜೊತೆಗೆ ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಮುಜರಾಯಿ ದೇವಾಲಯ ಅರ್ಚಕರು, ಕ್ರೀಡಾಪಟುಗಳು ಹಾಗೂ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲವಾಗುವಂತೆ ಮಾಸಾಶನ ಹೆಚ್ಚಳ ಮಾಡಿದ್ದಾರೆ. ರಾಜ್ಯದ ಇತಿಮಿತಿಯಲ್ಲೇ ಸಂಪನ್ಮೂಲ ಕ್ರೋಡೀಕರಣಕ್ಕೆ ಹೊರೆ ಹೇರದೆ ವಿವಿಧ ಮಾರ್ಗಗಳಿಂದ ಆದಾಯ ಸಂಗ್ರಹಕ್ಕೆ ಮೊರೆ ಹೋಗಿದ್ದು, 31ನೇ ಮಾರ್ಚ್, 2026 ರವರೆಗಿನ ವೆಚ್ಚ ನಿರ್ವಹಿಸಲು ಪೂರ್ಣ ಮುಂಗಡ ಪತ್ರ ಅಂಗೀಕಾರಕ್ಕೆ ಕೋರಿದ್ದಾರೆ.

ಮದ್ಯಪ್ರಿಯರಿಗೆ ಶುಭ ಸಂಗತಿ?: ಮದ್ಯಗಳ ದರವನ್ನು ಕಡಿಮೆ ಮಾಡುವ ಪ್ರಸ್ತಾಪ ಮಾಡಿರುವ ಮುಖ್ಯಮಂತ್ರಿ, ನೆರೆ ರಾಜ್ಯಗಳಲ್ಲಿನ ಮದ್ಯದ ದರಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಸ್ಲ್ಯಾಬ್‌ಗಳ ಮೂಲಕ ಜಾರಿಗೆ ತರಲು ಆಸಕ್ತಿ ತೋರಿದ್ದು, ಇದರಿಂದ ವಾರ್ಷಿಕ 40,000 ಕೋಟಿ ರೂ ಸಂಗ್ರಹ ಗುರಿ ಹೊಂದಿದ್ದಾರೆ. ಬಾರ್ ಮತ್ತು ವೈನ್‌ಶಾಪ್‌ಗಳಿಗೆ ಹೊಸದಾಗಿ ಪರವಾನಗಿ ನೀಡುವ ಪ್ರಸ್ತಾಪವನ್ನು ಮುಂಗಡಪತ್ರದಲ್ಲಿ ಇಟ್ಟಿದ್ದಾರೆ. ಖಾಲಿ ಅಥವಾ ಲಭ್ಯವಿರುವ ಮದ್ಯದ ಪರವಾನಗಿಗಳನ್ನು ಪಾರದರ್ಶಕ ಎಲೆಕ್ಟ್ರಾನಿಕ್ ಹರಾಜಿನ ಮೂಲಕ ಹಂಚಿಕೆ ಮಾಡಿ ರಾಜಸ್ವ ಸಂಗ್ರಹಿಸಲಾಗುವುದು. ಪ್ರೀಮಿಯಂ ಮದ್ಯದ ಬೆಲೆಗಳನ್ನು ನೆರೆಯ ರಾಜ್ಯ ಗಳಲ್ಲಿ ವಿಧಿಸುತ್ತಿರುವ ಬೆಲೆಗಳಿಗೆ ಅನುಸಾರವಾಗಿ ಪರಿಷ್ಕರಿಸುವುದಾಗಿ ತಿಳಿಸಿದ್ದಾರೆ.





ಸಿನಿಪ್ರಿಯರಿಗೆ ಕೊಡುಗೆ: ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಲ್ಲಿನ ಪ್ರವೇಶ ದರವನ್ನು 200 ರೂ.ಗಳಿಗೆ ಸೀಮಿತಗೊಳಿಸಿ ಸಿನೆಮಾ ಪ್ರಿಯರಿಗೆ ಬಂಪರ್ ಕೊಡುಗೆ ನೀಡಿದ್ದಾರೆ.

ಅರ್ಚಕರಿಗೆ ಗೌರವಧನ ಹೆಚ್ಚಳ: ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಾಲಯಗಳ ಅರ್ಚಕರಿಗೆ ನೀಡುತ್ತಿರುವ ಗೌರವಧನವನ್ನು ವಾರ್ಷಿಕ 60,000 ದಿಂದ 70,000 ರೂ.ಗೆ ಏರಿಸಿದ್ದಾರೆ.





ಕುಸ್ತಿಪಟುಗಳಿಗೆ ಮಾಸಾಶನ ಹೆಚ್ಚಳ: ನಿವೃತ್ತಿ ಹೊಂದಿದ ಅಂತಾರಾಷ್ಟ್ರೀಯ ಕುಸ್ತಿ ಪಟುಗಳ ಮಾಸಾಶನವನ್ನು 6,000 ರೂ.ಗೆ, ರಾಷ್ಟ್ರ ಮಟ್ಟದ ಕುಸ್ತಿಪಟುಗಳಿಗೆ 5,000 ಹಾಗೂ ರಾಜ್ಯಮಟ್ಟದ ಕುಸ್ತಿಪಟುಗಳಿಗೆ 4,500 ರೂ.ಗೆ ಹೆಚ್ಚಳ ಮಾಡಿದ್ದಾರೆ.

ಹೆಚ್‌ಐವಿ ಸೋಂಕಿತ ಮಕ್ಕಳ ಸಹಾಯಧನ ಹೆಚ್ಚಳ: ಎಚ್‌ಐವಿ ಸೋಂಕಿತ ಮತ್ತು ಬಾಧಿತ ಮಕ್ಕಳ ಪೌಷ್ಟಿಕ ಆಹಾರ ಮತ್ತು ಶಿಕ್ಷಣ ಪ್ರೋತ್ಸಾಹಿಸಲು ಪ್ರಸ್ತುತ ನೀಡುತ್ತಿರುವ

■ 6ನೇ ಪುಟಕ್ಕೆ

ಮೀನುಗಾರರ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ



ಬೆಂಗಳೂರು, ಮಾ.7– ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ರಾಜ್ಯ ಬಜೆಟ್‌ನಲ್ಲಿ ರಾಜ್ಯದ ಮತ್ಸ್ಯ ಸಂಪತ್ತಿನ ರಕ್ಷಣೆಯೊಂದಿಗೆ ಸುಸ್ಥಿರ ಮೀನುಗಾರಿಕೆ ಹಾಗೂ ಮೀನುಗಾರರ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡಲು ಮೀನುಗಾರಿಕಾ ನೀತಿಯನ್ನು ರೂಪಿಸಲಾಗುವುದು ಎಂದು ತಿಳಿಸಿದ್ದಾರೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಆಯ್ದ ಮೀನು ಮಾರಾಟಗಾರರಿಗೆ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.50ರಷ್ಟು ಅಥವಾ ಗರಿಷ್ಠ 3 ಲಕ್ಷದವರೆಗೆ ಆರ್ಥಿಕ ನೆರವು ನೀಡಲಾಗುವುದು. ಮಂಗಳೂರಿನಲ್ಲಿರುವ ಮೀನುಗಾರಿಕೆ ಕಾಲೇಜಿಗೆ ಪ್ರಸ್ತುತ ನಿಗದಿಪಡಿಸಿರುವ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ದ್ವಿಗುಣಗೊಳಿಸಲಾಗುವುದು ಎಂದು ಸಿದ್ದರಾಮಯ್ಯ ಮಾಹಿತಿ ನೀಡಿದ್ದಾರೆ. ಪ್ರವಾಸಿಗರಿಗೆ ಶುಚಿ–ರುಚಿಯಾದ ಪೌಷ್ಟಿಕ ಮೀನು ಖಾದ್ಯಗಳನ್ನು ಒದಗಿಸಲು ಮೈಸೂರಿನಲ್ಲಿ ಹೈ–ಟೆಕ್ ಮತ್ಸ್ಯದರ್ಶಿನಿಯನ್ನು ಪ್ರಾರಂಭಿಸಲಾಗುವುದು. ಕರಾವಳಿ ಜಿಲ್ಲೆಗಳಲ್ಲಿನ ಮೀನುಗಾರಿಕೆ ಕೊಂಡಿ ರಸ್ತೆಗಳನ್ನು ನಬಾರ್ಡ್ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲು ರೂ.30 ಕೋಟಿ ಒದಗಿಸಲಾಗುವುದು. ರಾಜ್ಯದಲ್ಲಿ ನೋಂದಣಿಯಾಗಿರುವ ಮೋಟರೀಕೃತ ದೋಣಿಗಳಲ್ಲಿ 15 ವರ್ಷ ಕಾಲಾವಧಿ ಮೀರಿರುವ ಹಳೆಯ ಇಂಜಿನ್‌ಗಳನ್ನು ಬದಲಾಯಿಸಿ, ಹೊಸ ಇಂಜಿನ್ ಖರೀದಿಸಲು ಶೇ.50 ರಷ್ಟು ರೂ.1 ಲಕ್ಷ ಮಿತಿಗೊಳಪಟ್ಟು ಸಹಾಯಧನ ನೀಡಲಾಗುವುದು.

ಅಂಗನವಾಡಿ ಕಾರ್ಯಕರ್ತರ ಗೌರವಧನ ಸಾವಿರ; ಸಹಾಯಕಿಯರಿಗೆ 750 ಹೆಚ್ಚಳ



ಬೆಂಗಳೂರು, ಮಾ. 7(ಕೆಎಂಶಿ)– ಅಂಗನವಾಡಿ ಕಾರ್ಯಕರ್ತೆಯರ ಗೌರವಧನವನ್ನು 1,000 ರೂ. ಹಾಗೂ ಸಹಾಯಕಿಯರ ಗೌರವಧನವನ್ನು 750 ರೂ. ಹೆಚ್ಚಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಮುಂಗಡಪತ್ರದಲ್ಲಿ ಈ ಪ್ರಸ್ತಾಪ ಮಾಡಿರುವ ಮುಖ್ಯಮಂತ್ರಿ ಅವರು, ರಾಜ್ಯದ 17,454 ಅಂಗನವಾಡಿ ಕೇಂದ್ರಗಳಿಗೆ ಹೆಚ್ಚುವರಿ ಸೌಲಭ್ಯ ಕಲ್ಪಿಸಲು ತಲಾ ಒಂದು ಲಕ್ಷ ರೂ.ನಂತೆ ಒಟ್ಟು 175 ಕೋಟಿ ರೂ. ಒದಗಿಸಲಾಗುವುದು.

ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ನಗರಸಭೆ ಹಾಗೂ ಪುರಸಭೆಗಳಲ್ಲಿ ಲಭ್ಯವಿರುವ 173 ಸಿ.ಎ. ನಿವೇಶನಗಳನ್ನು ನಗರಾಭಿವೃದ್ಧಿ ಇಲಾಖೆಯಿಂದ ಶೇ. 50ರಷ್ಟು ರಿಯಾಯಿತಿ ದರದಲ್ಲಿ ಖರೀದಿಸಲು 10 ಕೋಟಿ ರೂ. ಮೀಸಲಿರಿಸಲಾಗಿದೆ. ವಿಕಲಚೇತನರ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತು ನಿಖರ ಮಾಹಿತಿ ಸಂಗ್ರಹಿಸಲು ಹಾಗೂ ಅವರಿಗೆ ಸೂಕ್ತ ಸೌಲಭ್ಯ ಒದಗಿಸುವ

■ 6ನೇ ಪುಟಕ್ಕೆ

ಮೇಕೆದಾಟು ಜಲಾಶಯ ನಿರ್ಮಾಣ ಯೋಜನೆಯ ಪೂರ್ವಸಿದ್ಧತಾ ಕಾರ್ಯ ಅಂತಿಮ: ಸಿಎಂ

ಬೆಂಗಳೂರು, ಮಾ. 7(ಕೆಎಂಶಿ)– ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಸಮಾನಾಂತರವಾಗಿ ಮೇಕೆದಾಟು ಬಳಿ ಜಲಾಶಯ ನಿರ್ಮಾಣ ಯೋಜನೆಯ ಪೂರ್ವ ಸಿದ್ಧತಾ ಕಾರ್ಯ ಅಂತಿಮಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ಇಂದು ಪ್ರಕಟಿಸಿದ್ದಾರೆ.



2025–26ನೇ ಸಾಲಿನ ಮುಂಗಡಪತ್ರ ಮಂಡನೆ ಮಾಡಿ ಮಾತನಾಡಿದ ಮುಖ್ಯಮಂತ್ರಿ ಅವರು, ಯೋಜನೆಗೆ ಕೇಂದ್ರ ಸರ್ಕಾರದ ಸಕ್ಷಮ ಪ್ರಾಧಿಕಾರಗಳ ತೀರುವಳಿ ದೊರೆತ ಕೂಡಲೇ ಯೋಜನೆ ಅನುಷ್ಠಾನಗೊಳಿಸಲಾಗುವುದು. ಕಾವೇರಿ, ಕೃಷ್ಣ ಹಾಗೂ ಇತರ ನದಿ ಕಣಿವೆಯ ವಿವಿಧ ಯೋಜನೆಯಡಿ ಬಾಕಿ ಇರುವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸುವುದಾಗಿ ತಿಳಿಸಿದ್ದಾರೆ.

ನೀರಾವರಿ ಯೋಜನೆಗಳಡಿ ನೀರಿನ ಬಳಕೆಯಲ್ಲಿ ದಕ್ಷತೆ ಹೆಚ್ಚಿಸಲು ಹಾಗೂ ನೀರು ನಿರ್ವಹಣೆಯಲ್ಲಿ ಸುಧಾರಣೆ ತರುವಲ್ಲಿ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ 2024ಅನ್ನು

■ 6ನೇ ಪುಟಕ್ಕೆ

22 ಮೆಡಿಕಲ್ ಕಾಲೇಜುಗಳಲ್ಲಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್ ಆರಂಭ

● ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ● ತಾಯಿ ಮರಣ ತಡೆಗೆ ಅಗತ್ಯ ಎಲ್ಲಾ ಕ್ರಮಕ್ಕೆ 320 ಕೋಟಿ ಮೀಸಲು

● ಗರ್ಭಿಣಿಯರಲ್ಲಿ ರಕ್ತಹೀನತೆ ತಡೆಗೆ ಹಿಂದುಳಿದ ಜಿಲ್ಲೆಗಳಲ್ಲಿ ಪೌಷ್ಟಿಕಾಂಶ ಕಿಟ್, ಪ್ರೋತ್ಸಾಹಧನ, ವಾತ್ಸಲ್ಯ ಕಿಟ್‌ಗಳ ವಿತರಣೆ

ಬೆಂಗಳೂರು, ಮಾ. 7(ಕೆಎಂಶಿ)– ರಾಜ್ಯದ 22 ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಿರುವ ಮೂಲಸೌಕರ್ಯ ಮತ್ತು ಮಾನವ ಸಂಪನ್ಮೂಲ ಬಳಕೆ ಮಾಡಿಕೊಂಡು ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್‌ಗಳನ್ನು ಆರಂಭಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ರಾಜ್ಯದಲ್ಲಿ ತಡೆಗಟ್ಟಬಹುದಾದ ತಾಯಿ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಲು ಅಭಿಯಾನ ರೂಪದಲ್ಲಿ ಕ್ರಮ ಕೈಗೊಳ್ಳಲು 320 ಕೋಟಿ ರೂ. ಒದಗಿಸಲಾಗಿದೆ ಎಂದರು. ಗರ್ಭಿಣಿಯರಲ್ಲಿ ಮತ್ತು ಪ್ರಸೂತಿ ವೇಳೆಯಲ್ಲಿನ ತೀವ್ರತರಹದ ರಕ್ತಸ್ರಾವ ತಡೆಗಟ್ಟಲು ಮತ್ತು ಚಿಕಿತ್ಸೆ ನೀಡಲು ಅವಶ್ಯವಿರುವ ಉಪಕರಣಗಳನ್ನು ನೀಡಲಾಗುವುದು. ನವೀನ ಡಿಜಿಟಲ್ ತಂತ್ರಜ್ಞಾನದ ಮೂಲಕ ಹೆರಿಗೆ ಸೇವೆಗಳನ್ನು ಬಲಪಡಿಸಲಾಗುವುದು. ಗರ್ಭಿಣಿಯರಲ್ಲಿ ರಕ್ತಹೀನತೆ ತಡೆಗಟ್ಟಲು ಹಿಂದುಳಿದ ಜಿಲ್ಲೆಗಳಲ್ಲಿ ಪೌಷ್ಟಿಕಾಂಶ ಕಿಟ್‌ಗಳು, ಪ್ರೋತ್ಸಾಹ ಧನ ಹಾಗೂ ತಾಯಂದಿರಿಗೆ ವಾತ್ಸಲ್ಯ ಕಿಟ್‌ಗಳನ್ನು ವಿತರಣೆ ಮಾಡಲಾಗುವುದು.

ಹುದ್ದೆಗಳನ್ನು ಪುನರ್ ಹಂಚಿಕೆ ಮಾಡುವ ಮೂಲಕ ಪ್ರತಿ ತಾಲೂಕು ಆಸ್ಪತ್ರೆಯಲ್ಲಿ ಎಂಸಿಎಚ್ ತಜ್ಞರನ್ನು ನಿಯೋಜಿಸಲಾಗುವುದು.



ರಾಜ್ಯದಲ್ಲಿ ಸಂಭವಿಸುವ ತಾಯಿ ಮರಣವನ್ನು ರಾಜ್ಯ ತಾಂತ್ರಿಕ ತಜ್ಞರ ಸಮಿತಿಯಿಂದ ಆಡಿಟ್ ಮಾಡಿಸಿ ಶಿಫಾರಸ್ಸುಗಳನ್ನು ರಾಜ್ಯ ಅಧಿಕಾರಯುಕ್ತ ಸಮಿತಿ ಮುಂದೆ ಮಂಡಿಸಲಾಗುವುದು. ಸಮಿತಿಯ ನಿರ್ದೇಶನದಂತೆ ತಾಯಿ ಮರಣ ತಡೆಗಟ್ಟುವಲ್ಲಿ ಯೋಜನೆಗಳನ್ನು ರೂಪಿಸಲಾಗುವುದು. ಮಾನಸಿಕ ಅಸ್ವಸ್ಥರ ಆರೈಕೆಗೆ ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಆರೋಗ್ಯ ಮೂಲಸೌಕರ್ಯ ಅಭಿವೃದ್ಧಿ ಕಾರ್ಯ ಯೋಜನೆಗಳಡಿ, ಬೆಂಗಳೂರು ಉತ್ತರ ತಾಲೂಕಿನ ವ್ಯಾಪ್ತಿಯಲ್ಲಿ 200 ಹಾಸಿಗೆಯ ಅತ್ಯಾಧುನಿಕ ಮತ್ತು ಸುಸಜ್ಜಿತ ಆಸ್ಪತ್ರೆಯನ್ನು 150 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು. ಹೊಸದಾಗಿ ಘೋಷಣೆಯಾಗಿರುವ ತಾಲೂಕುಗಳಾದ ಹನೂರು, ಅಳ್ನಾವರ, ಅಣ್ಣಿಗೇರಿ, ಮಸ್ಕಿ, ಸಿರಿವಾರ, ಕಾಪು, ಬಬಲೇಶ್ವರ, ಕೊಲ್ಹಾರ, ಚೇಳೂರು, ತೇರದಾಳದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳಾಗಿ ಉನ್ನತೀಕರಿಸಲಾಗುವುದು.

ಮಾಲೂರು, ಮಾಗಡಿ, ಕುಶಾಲನಗರ, ಕೊರಟಗೆರೆ,

■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗೆಳೆಯ : ಇವತ್ತು ಒಂದು ಹುಡುಗಿ 'ನನ್ಗೆ ನಿಮ್ಮ ಹೃದಯ ಕೊಡ್ತೀರಾ' ಅಂತ ಕೇಳಿದ್ಲು.

ಇನ್ನೊಬ್ಬ ಗೆಳೆಯ : ಅದಕ್ಕೆ ನೀನೇನು ಹೇಳಿದೆ. ಹೃದಯ ಕೊಟ್ಯಾ

ಗೆಳೆಯ : ಆದ್ರೆ ನಾನು ಆಗಲ್ಲ ಅಂದೆ. ಯಾಕಂದ್ರೆ ಇವತ್ತು ಹೃದಯ ಕೇಳಿದೋಳು ನಾಳೆ ಕಿಡ್ನಿ ಕೇಳಲ್ಲ ಅಂತ ಏನ್ ಗ್ಯಾರಂಟಿ ಅದಕ್ಕೆ.

ಮೈಸೂರು ಮಿತ್ರ

ಶನಿವಾರ, 8 ಮಾರ್ಚ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ನೂರು ಮನಸ್ಸುಗಳ ನೋಯಿಸಿ, ಹಚ್ಚಿದರೇನು ದೇವರ ಮುಂದೆ ದೀಪ, ತಡೆಯುವುದೇನು ಅದು ನೊಂದ, ಮನಸ್ಸುಗಳು ನೀಡುವ ಶಾಪ...!!

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಾಯಿ ಬೊಗಳಿದರೆ ಭೂಲೋಕ ಹಾಳಾಗುತ್ತಾ

ನಿಮ್ಮ ಪತ್ರಗಳು

ಚಿತ್ರಮಂದಿರಗಳು ನೆನಪು ಮಾತ್ರ



ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನ ಏಕಪರದೆಯ ಮತ್ತೊಂದು ಚಿತ್ರಮಂದಿರ (ಅವಳಿ ದ್ವಿಪರದೆಯ ಏಕಮಾತ್ರ ಚಿತ್ರಮಂದಿರವಾಗಿದ್ದ) ಸ್ಟರ್ಲಿಂಗ್–ಸ್ಕೈಲೈನ್ ಕೂಡ ಈಗ ಧರೆಗುರುಳಿ ಇತಿಹಾಸದ ಪುಟ ಸೇರಿದೆ. ಇದೇನು ಅನಿರೀಕ್ಷಿತವೇನಲ್ಲ. ನಗರದ ಚಿತ್ರಮಂದಿರಗಳು ಒಂದೊಂದಾಗಿ ಕಣ್ಮರೆಯಾಗುತ್ತಿವೆ. 1980ರ ದಶಕದಲ್ಲಿ ಪ್ರಖ್ಯಾತ ಹಾಲಿವುಡ್ ಇಂಗ್ಲೀಷ್ ಚಿತ್ರಗಳ ಪ್ರದರ್ಶನದಿಂದ ತನ್ನದೇ ಛಾಪು ಮೂಡಿಸಿದ್ದ ಸ್ಟರ್ಲಿಂಗ್, ಬಹಳ ಹಿಂದೆಯೇ ಕಣ್ಮರೆಯಾದ ಗಣೇಶ ಚಿತ್ರ ಮಂದಿರದ ಸಾಲು ಸೇರಿದೆ. ಮಲ್ಟಿ ಪ್ಲೆಕ್ಸ್‌ಗಳ ಹಾವಳಿ, ಭಾರಿ ತೆರಿಗೆಯ ಭಾರ, ಬಾಡಿಗೆ, ಪ್ರೇಕ್ಷಕರ, ಉತ್ತಮ ಚಿತ್ರಗಳ ಕೊರತೆ, ದುಬಾರಿ ಶುಲ್ಕಗಳ ಭಾರಕ್ಕೆ ನಲುಗಿ ಚಿತ್ರ ಮಂದಿರಗಳು ನಶಿಸುತ್ತಿವೆ. ಇದೇ ಕಾರಣಕ್ಕೆ ಅವು ಮಾಲ್‌ಗಳು ವಾಣಿಜ್ಯ ಕಾಂಪ್ಲೆಕ್ಸ್‌ಗಳಾಗಿ ಮಾರ್ಪಾಡಾಗುತ್ತಿವೆ. ಜೊತೆಗೆ ಟಿವಿ, ಮೊಬೈಲ್, ಒಟಿಟಿಗಳು ಕೂಡ ಇದಕ್ಕೆ ಕಾಣಿಕೆ ನೀಡಿವೆ. ಕೆಲಸದ ನಿಮಿತ್ತ ಸಕಲೇಶಪುರದಲ್ಲಿರುವ ನನ್ನ ಮಿತ್ರರೊಬ್ಬರು ಕನ್ನಡ ಸಿನಿಮಾ ಪ್ರಿಯರೂ ಆದ ಅವರು, ಹೊಸ ಉತ್ತಮ ಚಲನಚಿತ್ರಗಳು ಬಿಡುಗಡೆಯಾದರೆ ನೋಡುವ ಅಭ್ಯಾಸವಿಟ್ಟುಕೊಂಡಿದ್ದಾರೆ. ಅವರು ಚಿತ್ರ ನೋಡಲು ಅಲ್ಲಿನ ಚಿತ್ರಮಂದಿರಕ್ಕೆ ಹೋದಾಗ ಅಲ್ಲಿ ಕೇವಲ ಹತ್ತು ಹದಿನೈದು ಪ್ರೇಕ್ಷಕರು ಮಾತ್ರ ಇರುತ್ತಾರೆ. ಒಮ್ಮೊಮ್ಮೆ ಇಷ್ಟೇ ಜನಕ್ಕೆ ಸಿನಿಮಾ ಆರಂಭವಾದರೆ, ಒಮ್ಮೊಮ್ಮೆ ಟಿಕೆಟ್ ದುಡ್ಡು ವಾಪಸ್ ನೀಡಿ ಪ್ರದರ್ಶನ ರದ್ದು ಮಾಡುತ್ತಾರೆ ಎಂದು ತಿಳಿಸಿದರು. 60–80ರ ದಶಕದಲ್ಲಿ ಭಾರತ ಸೇರಿದಂತೆ ವಿಶ್ವದ ಚಿತ್ರರಂಗ ತನ್ನ ಖ್ಯಾತಿಯ ಉತ್ತುಂಗದಲ್ಲಿತ್ತು. ಅಂತೆಯೇ ಕನ್ನಡ ಚಿತ್ರರಂಗದಲ್ಲಿ ಕೂಡ ಡಾ. ರಾಜಕುಮಾರ್ ಸೇರಿದಂತೆ ಅನೇಕ ಮೇರುನಟ, ನಟಿಯರಿಂದ ಕಂಗೊಳಿಸುತ್ತಿತ್ತು. ಇದು ಚಿತ್ರರಂಗಕ್ಕೆ ವರದಾನವಾಗಿತ್ತು. ಹಾಗಾಗಿಯೇ ಹೊಸ ಹೊಸ ಚಿತ್ರಮಂದಿರಗಳು ಕೂಡ ನಿರ್ಮಾಣವಾಗುತ್ತಿದ್ದವು. 80ರ ದಶಕದಲ್ಲಿ ನಾವು ಮೈಸೂರಿನಲ್ಲಿ ಫಾರ್ಮಸಿ ಓದುತ್ತಿದ್ದಾಗ ಥಿಯರಿ, ಪ್ರಾಕ್ಟಿಕಲ್ ಎಂದು ಬಿಡುವಿಲ್ಲದೆ ಬೆಳಿಗ್ಗೆ 8 ರಿಂದ ಸಂಜೆ 5 ರ ವರೆಗೂ ಕಾಲೇಜಿಗೆ ಹಾಜರಾಗಬೇಕಿತ್ತು.

ಆದರೆ ಒಮ್ಮೊಮ್ಮೆ ಉಪನ್ಯಾಸಕರು ಇಲ್ಲಾ ಎಂದು ಕ್ಲಾಸ್ ಅಥವಾ ಪ್ರಾಕ್ಟಿಕಲ್ ರದ್ದಾದರೆ ಆಗ ಸೈಕಲ್‌ನಲ್ಲಿ ನಾವು ಸ್ಟರ್ಲಿಂಗ್ ಚಿತ್ರಮಂದಿರದ ಹಾದಿ ಹಿಡಿಯುತ್ತಿದ್ದೆವು!!

ಚಿತ್ರ ಮಂದಿರಗಳು ಇನ್ನು ನೆನಪು ಮಾತ್ರ, ('ಮೈಸೂರು ಮಿತ್ರ' 5.3.25) ಸ್ಟರ್ಲಿಂಗ್ ಚಿತ್ರಮಂದಿರ ಕೆಡವುತ್ತಿರುವ ವರದಿ ನೋಡಿ ನೆನಪು ಹಿಂದೆ ಓಡಿತು, ವ್ಯಥೆಯೂ ಆಯಿತು. ಕಾಲಾಯ ತಸ್ಮೈ ನಮಃ ಎನ್ನುವುದು ಇಲ್ಲಿ ಕೂಡ ಪ್ರಸ್ತುತ. ಚಿತ್ರರಂಗದ ಈಗಿನ ಪರಿಸ್ಥಿತಿಯನ್ನು ನೋಡಿದರೆ ಮಲ್ಟಿ ಪ್ಲೆಕ್ಸ್‌ಗಳು ಕೂಡ ಇಂತಹ ಸ್ಥಿತಿಯನ್ನು ಎದುರಿಸುವ ಸವಾಲು ಎದುರಾಗಬಹುದು.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಪ್ರೀಪೇಯ್ಡ್ ಆಟೋ ನಿಲ್ದಾಣ ಸರಿಯಾಗಿ ಕಾರ್ಯನಿರ್ವಹಿಸಲಿ

ಮಾನ್ಯರೆ,

ಪ್ರೀಪೇಯ್ಡ್ ಆಟೋ ನಿಲ್ದಾಣ ಬೆಳಗ್ಗೆ 7 ರಿಂದ ರಾತ್ರಿ 7 ರವರೆಗೆ ಕಾರ್ಯ ನಿರ್ವಹಿಸಬೇಕಾಗಿತ್ತು. ಆದರೆ ಇದನ್ನು ಬೆಳಗ್ಗೆ 10 ಗಂಟೆಗೆ ತೆಗೆದು ಸಂಜೆ 5 ಗಂಟೆಯವರೆಗೆ ಮಾತ್ರ ಕಾರ್ಯನಿರ್ವಹಿಸುತ್ತಿದೆ. ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿದ್ದು, ಆಟೋ ಚಾಲಕರಿಗೂ ತುಂಬಾ ನಷ್ಟ ಉಂಟಾಗಿದೆ. ಆದ್ದರಿಂದ ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ತುರ್ತು ಕ್ರಮ ಕೈಗೊಂಡು ಸಾರ್ವಜನಿಕರು ಮತ್ತು ಆಟೋ ಚಾಲಕರಿಗೆ ತೊಂದರೆಯಾಗದ ರೀತಿ ಗಮನಹರಿಸಬೇಕಾಗಿ ಈ ಮೂಲಕ ಮನವಿ.

–ಆಟೋ ಚಾಲಕರು, ಹಾರ್ಡಿಂಜ್ ಸರ್ಕಲ್, ಮೈಸೂರು.

ತಂಗುದಾಣಕ್ಕೆ ಕಾಯಕಲ್ಪ ಕಲ್ಪಿಸಿ



ಮಾನ್ಯರೇ,

ಮೈಸೂರಿನ ಮಾನಸಗಂಗೋತ್ರಿಯಲ್ಲಿರುವ ಮೌಲ್ಯಮಾಪನ ಭವನದ ಬಳಿಯಲ್ಲಿ ವರ್ಷಗಳ ಹಿಂದೆಯೇ ಬಸ್ ತಂಗುದಾಣ ನಿರ್ಮಿಸಲಾಗಿದೆ. ವಿಪರ್ಯಾಸವೆಂದರೆ, ಈ ತಂಗುದಾಣದಲ್ಲಿ ಕುಳಿತುಕೊಳ್ಳಲು ಆಸನದ ವ್ಯವಸ್ಥೆಯೇ ಇಲ್ಲ! ಜೊತೆಗೆ, ಇಲ್ಲಿ ದೀಪದ ವ್ಯವಸ್ಥೆಯೂ ಇಲ್ಲದೆ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿದೆ. ಹೀಗಾಗಿ, ಸಂಬಂಧಪಟ್ಟವರು ಇನ್ನಾದರು ಎಚ್ಚೆತ್ತು ತುರ್ತಾಗಿ ಈ ತಂಗುದಾಣಕ್ಕೆ ಕಾಯಕಲ್ಪ ನೀಡಿ, ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕಿದೆ.

–ಬಿ.ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.

ಬದುಕಿನ ಬಂಡಿ ಸಾಗಿಸಲು

ನಟ್ಟು–ಬೋಲ್ಟು, ಸ್ಪ್ಯಾನರ್‌ಗಳೇ ನಮ್ಮ ಸಂಗಾತಿ; ಸುಮಿತ್ರಾ ರಾಜು!

ನಮ್ಮ ತಂದೆ ರೈತರು. ನಾನು ಚಿಕ್ಕವಳಿದ್ದಾಗ ಮನೆಯಲ್ಲಿ ತೀರ ಬಡತನ. ಮನೆಯ ಹಿರಿಯ ಮಗಳಾದ ನಾನು ಸೇರಿದಂತೆ ತಂಗಿ, ತಮ್ಮ ಸಹ ಚಿಕ್ಕ ವಯಸ್ಸಿನಲ್ಲೇ ದುಡಿಯುವ ಅನಿವಾರ್ಯತೆ ಇತ್ತು. ಹಾಗಾಗಿ ನಾವ್ಯಾರೂ ಒಳ್ಳೆಯ ಶಿಕ್ಷಣ ಪಡೆಯಲು ಸಾಧ್ಯವಾಗಲಿಲ್ಲ. ನಾನು ಐದನೇ ತರಗತಿವರೆಗೆ ಓದಿದ್ದೇನೆ. ಎಷ್ಟೇ ಕಷ್ಟಗಳಿದ್ದರೂ ದುಡಿದು ತಿನ್ನುವ ಸ್ವಾಭಿಮಾನ ಇರಬೇಕು. ನಾನು ಬಾಲ್ಯದಲ್ಲಿ ಕೃಷಿ ಕೆಲಸ ಮಾಡುತ್ತಿದ್ದೆ. ಆಗ ಊಟಕ್ಕೂ ಕಷ್ಟ ಇದ್ದ ಕುಟುಂಬ ನಮ್ಮದು. ಹತ್ತಿ ಬಿಡಿಸಲು, ಕಡಲೇಕಾಯಿ ಬಿಡಿಸಲು ಹೋಗುತ್ತಿದ್ದೆ. ನಮ್ಮ ಕುಟುಂಬದಲ್ಲಿ ಅಂದು ತಾಯಿ ಹೊರತಾಗಿ ಉಳಿದೆಲ್ಲರೂ ಕೂಲಿ ಕೆಲಸ ಮಾಡಿದ್ದೇವೆ. ನಾನು ದುಡಿಯುತ್ತಿರುವ ಹಿನ್ನೆಲೆಯಲ್ಲಿ ಕುಟುಂಬ ನಿರ್ವಹಣೆಯಲ್ಲಿ ಆರ್ಥಿಕ ಪಾಲು ನನ್ನದೂ ಪ್ರಮುಖವಾಗಿದೆ ಎಂಬ ಹೆಮ್ಮೆ ಇದೆ. ಮನೆಯಿಂದ ಹೊರಬಂದು ನಾನು ಸಹ ಕೆಲಸ ಮಾಡಲು ನನ್ನ ಪತಿ ರಾಜು ಅವರ ಸಹಕಾರ ಇದೆ. ಅವರು ಮತ್ತು ನಾನು ಇಬ್ಬರು ದುಡಿಯುತ್ತಿರುವ ಹಿನ್ನೆಲೆಯಲ್ಲಿ ಕುಟುಂಬದ ಆರ್ಥಿಕ ಸ್ಥಿತಿ ಉತ್ತಮವಾಗಿದೆ. ಇಬ್ಬರು ಹೆಣ್ಣು ಮಕ್ಕಳನ್ನು ಮದುವೆ ಮಾಡಿದ್ದೇವೆ. ಯಾವುದೇ ಮಹಿಳೆಯರು ಈ ಕೆಲಸ ಕಲಿಯಬೇಕೆಂದರೆ ನಮ್ಮ ಮಾಲೀಕರ ಮಾರ್ಗದರ್ಶನದಲ್ಲಿ ಕಲಿಸಲು ಸಿದ್ಧವಿದ್ದೇನೆ. -ಸುಮಿತ್ರಾ ರಾಜು.



📷... ಎಂ.ಬಿ. ಪವನಮೂರ್ತಿ

ಅದೊಂದು ಸ್ಕೂಟರ್ ಗ್ಯಾರೇಜ್. ಅಲ್ಲಿ ಸ್ಪ್ಯಾನರ್ ಹಿಡಿದು ನಿಂತ ಮಹಿಳೆಯು ನಟ್ಟು, ಬೋಲ್ಟುಗಳನ್ನು ತಿರುಗಿಸುತ್ತಾ ಕಾಯಕದಲ್ಲಿ ನಿರತವಾಗಿರುವುದು ಕಂಡರೆ ಅಚ್ಚರಿಯಾಗದೇ ಇರದು. ಏಕೆಂದರೆ ಗ್ಯಾರೇಜ್ ಎಂದಾಕ್ಷಣ ಅದು ಪುರುಷರ ಸರ್ವೇ ಸಾಮಾನ್ಯ. ಹಾಗಾಗಿ ಇಂತಹ ಅಪರೂಪದ ದೃಶ್ಯ ನೋಡಿದರೆ ಯಾರಿಗಾದರೂ ಅಚ್ಚರಿ ಮೂಡದಿರದು.

ಹೌದು, ಒಮ್ಮೆ ಲೇಡಿ ಮೆಕ್ಯಾನಿಕ್ ಸುಮಿತ್ರಾ ರಾಜು ಅವರಿಗೆ ಶಹಬಾಷ್ ಹೇಳಿ!. ಇವರು ತಮ್ಮ ಪರಿಶ್ರಮ–ಶ್ರದ್ಧೆಯ ಮೂಲಕ ಸ್ಕೂಟರ್ ದುರಸ್ತಿ ಕಲೆ ಕರಗತ ಮಾಡಿಕೊಂಡಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯು ಪುರುಷರನ್ನು ಮೀರಿಸಿ ತನ್ನ ಛಾಪು ಮೂಡಿಸುತ್ತಿದ್ದಾರೆ. ಅಂತಹ ಸಾಧಕ ಮಹಿಳೆಯರ ಸಾಲಿನಲ್ಲಿ ಮೈಸೂರು ತಾಲೂಕಿನ ಬ್ಯಾತಹಳ್ಳಿ ಗ್ರಾಮದ ಸುಮಿತ್ರಾ ರಾಜು ಒಬ್ಬರು. ಅವರೀಗ ಮಹಿಳಾ ಮೆಕ್ಯಾನಿಕ್ ಆಗಿ ಮೈಸೂರಿನ ಕೆಆರ್ ಮೊಹಲ್ಲಾದ ಬಸವೇಶ್ವರ ರಸ್ತೆಯಲ್ಲಿರುವ ಸುಚಿತ್ರ ಆಟೋ ಸರ್ವೀಸ್ ಸೆಂಟರ್ (ಆಕ್ಟಿವಾ ಪಾಯಿಂಟ್)ನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ತಮ್ಮ ಕುಟುಂಬ ನಿರ್ವಹಣೆಗಾಗಿ ಸುಮಿತ್ರಾ ರಾಜು ಸ್ಕೂಟರ್ ಮೆಕ್ಯಾನಿಕ್ ವೃತ್ತಿ ಆಯ್ಕೆ ಮಾಡಿಕೊಂಡಿದ್ದಾರೆ. ಬಾಲ್ಯದಲ್ಲೇ ಸುಮಿತ್ರಾ, ದುಡಿಮೆಯ ದಾರಿಯತ್ತ ಸಾಗುವಂತಾಯಿತು. ಕಾರಣ ಅವರ ಕುಟುಂಬದ ಬಡತನ. ಚಿಕ್ಕ ವಯಸ್ಸಿನಲ್ಲೇ ಕೃಷಿ ಕೂಲಿಕಾರ್ಮಿಕರಾಗಿ ದುಡಿಮೆ ಮಾಡಿದ ಶ್ರಮಜೀವಿ. ಕುಟುಂಬ ನಿರ್ವಹಣೆಗಾಗಿ ಬಾಲ್ಯದಲ್ಲೇ ಸುಮಿತ್ರಾ ದುಡಿಯುವ ಪ್ರವೃತ್ತಿ ಬೆಳೆಸಿಕೊಂಡರು. ಇಂದು ಸಹ ಮಹಿಳಾ ಮೆಕ್ಯಾನಿಕ್ ಆಗಿ ಹೆಚ್ಚು ಶ್ರಮ ಅಪೇಕ್ಷಿಸುವ ಕಾಯಕವನ್ನೇ ಆರಿಸಿಕೊಂಡು ಕೆಲಸ ಮಾಡುತ್ತಿದ್ದಾರೆ.

ಬಾಲ್ಯದಲ್ಲಿ ದುಡಿಮೆ ಮೂಲಕ ಕುಟುಂಬ ನಿರ್ವಹಣೆಗಾಗಿ ತಂದೆಯೊಂದಿಗೆ ಕೈಜೋಡಿಸಿದ್ದ ಸುಮಿತ್ರಾ, ಇಂದು ಪತಿ ರಾಜು ಅವರ ಹೆಗಲಿಗೆ ಹೆಗಲು ಕೊಟ್ಟು ಬದುಕಿನ ಬಂಡಿ ಸಾಗಿಸಲು ದುಡಿಯುತ್ತಿದ್ದಾರೆ. ಸುಮಿತ್ರಾರ ಪತಿ ರಾಜು ಕಟ್ಟಡ ನಿರ್ಮಾಣ ಕ್ಷೇತ್ರದಲ್ಲಿ ಗಾರೆ ಕೆಲಸ ಕಾರ್ಮಿಕರಾಗಿ ದುಡಿಯುತ್ತಿದ್ದು, ಸುಮಿತ್ರರ ಆಸಕ್ತಿಯಂತೆ ಮೆಕ್ಯಾನಿಕ್ ಆಗಲು ಇವರ ಪ್ರೇರಣೆಯೂ ಇದೆ. ದುಡಿಮೆ ಮತ್ತು ಸ್ವಾಭಿಮಾನ ಎಂಬ ತತ್ವದಲ್ಲಿ ನಂಬಿಕೆ ಹೊಂದಿರುವ ಸುಮಿತ್ರಾ, ದುಡಿದು ಬದುಕುವ ಛಲ ಹೊಂದಿದ್ದಾರೆ.

ಮೈಸೂರು ತಾಲೂಕಿನ ಬ್ಯಾತಹಳ್ಳಿ ಇವರ ಸ್ವಂತ ಊರು. ಶಿವಣ್ಣ ಮತ್ತು ನಾಗಮ್ಮ ದಂಪತಿಯ ಹಿರಿಯ ಮಗಳಾಗಿ ಜನಿಸಿದ ಸುಮಿತ್ರಾಗೆ ಈಗ 49 ವರ್ಷ ವಯಸ್ಸು ಸುಚಿತ್ರ ಆಟೋ ಸರ್ವೀಸ್ ಸೆಂಟರ್ ಮಾಲೀಕ ಸುರೇಂದ್ರನ್ ಮಾರ್ಗದರ್ಶನದಲ್ಲಿ ಸುಮಿತ್ರಾ ಸ್ಕೂಟರ್ ಮೆಕ್ಯಾನಿಕ್ ಆಗಿ ಎಲ್ಲಾ ರೀತಿ ಕೆಲಸಗಳ ಕಲೆಯನ್ನು ಕರಗತ ಮಾಡಿಕೊಂಡಿದ್ದಾರೆ. ಸ್ಕೂಟರ್ ಸರ್ವೀಸ್‌ನ ಎಲ್ಲಾ ಕೆಲಸಗಳನ್ನೂ ಮಾಡಬಲ್ಲ ಸುಮಿತ್ರಾ, ಬೋರ್‌ಗೆ ಬಂದ ಎಂಜಿನ್ ರಿಪೇರಿ ಕೆಲಸವನ್ನೂ ಕಲಿತಿದ್ದಾರೆ.

ಮಹಿಳಾ ದಿನಾಚರಣೆ ವಿಶೇಷ...

ಅಂದು ಕುಟುಂಬದಲ್ಲಿದ್ದ ಬಡತನದ ಕಾರಣಕ್ಕೆ ಕೇವಲ 5ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿರುವ ಸುಮಿತ್ರಾ, ಮೆಕ್ಯಾನಿಕ್ ವೃತ್ತಿಯಲ್ಲಿ ಅತ್ಯಂತ ಜಾಣ್ಮೆಯಿಂದ ಕೆಲಸ ಮಾಡುತ್ತಿದ್ದಾರೆ. ಈ ವೃತ್ತಿಗೆ ಬರುವ ಮೊದಲು ಕಾರ್ಖಾನೆಯಲ್ಲಿ ಮಹಿಳಾ ಕಾರ್ಮಿಕಳಾಗಿ ಕಾಯಕ ಮಾಡುತ್ತಿದ್ದ ಇವರು, ತಮ್ಮ ದ್ವಿಚಕ್ರ ವಾಹನ ಸರ್ವೀಸ್ ಮಾಡಿಸಲು ಸುಚಿತ್ರ ಆಟೋ ಸರ್ವೀಸ್ ಸೆಂಟರ್‌ಗೆ ಬರುತ್ತಿದ್ದಾಗ, ಮೆಕ್ಯಾನಿಕ್ ವೃತ್ತಿಯ ಬಗ್ಗೆ ಆಸಕ್ತಿ ಬೆಳೆಸಿಕೊಂಡರು. ಇವರ ಈ ಆಸಕ್ತಿ– ಕುತೂಹಲ ಇಂದು ಲೇಡಿ ಮೆಕ್ಯಾನಿಕ್ ಉದ್ಯೋಗ ಅಲಂಕರಿಸುವಂತೆ ಮಾಡಿದೆ.

ಛಲವಿದ್ದರೆ ಸಾಧಿಸಬಹುದು: 'ಛಲವಿದ್ದರೆ ಸವಾಲು ಮೆಟ್ಟಿ ನಿಂತು ಸಾಧಿಸಬಹುದು' ಇದು ಸುಮಿತ್ರಾ ಅವರ ಅತ್ಯಂತ ಆತ್ಮ ವಿಶ್ವಾಸದ ನುಡಿ. ಮೆಕ್ಯಾನಿಕ್ ವೃತ್ತಿ ಕಠಿಣ ಕೆಲಸ. ಹೆಚ್ಚಾಗಿ ಪುರುಷರೇ ಈ ಕಾಯಕ ಮಾಡುವುದನ್ನು ಕಂಡಿದ್ದೇವೆ. ಹೀಗಿರುವಾಗ ಈ ವೃತ್ತಿಯಲ್ಲಿ ನಿಮಗೆ ಸವಾಲುಗಳು ಎದುರಾದವೇ? ಎನ್ನುವ ಪ್ರಶ್ನೆಗೆ ಸುಮಿತ್ರಾ ಹೀಗೆ ಉತ್ತರಿಸಿದರು.

ಸ್ಕೂಟರ್ ಮೆಕ್ಯಾನಿಕ್ ಆಗಿ ಕಳೆದ 4 ವರ್ಷಗಳಿಂದ ಕೆಲಸ ಮಾಡುತ್ತಿದ್ದೇನೆ. ಸರ್ವೀಸ್, ಇಂಜಿನ್ ರಿಪೇರಿ ಸೇರಿದಂತೆ ಬಹುತೇಕ ಎಲ್ಲಾ ಕೆಲಸ ಮಾಡಬಲ್ಲೆ. ಒಬ್ಬ ಪುರುಷ ಪ್ರಧಾನವಾದ ಕೆಲಸವನ್ನು ಮಾಡುತ್ತಿರುವ ಬಗ್ಗೆ ನನಗೆ ಹೆಮ್ಮೆ ಇದೆ ಎನ್ನುತ್ತಾರೆ ಸುಮಿತ್ರಾ, ಹುಟ್ಟಿ ಬೆಳೆದ ಊರು ಬ್ಯಾತಹಳ್ಳಿ. ಮೆಕ್ಯಾನಿಕ್ ಆಗುವ ಮುನ್ನ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದೆ. ದ್ವಿಚಕ್ರ ವಾಹನ ಚಾಲನೆ ಮಾಡುತ್ತೇನೆ. ನಮ್ಮ ಈ ಗ್ಯಾರೇಜ್‌ನಲ್ಲಿ ಬೈಕ್‌ಗಳನ್ನು ಸರ್ವೀಸ್‌ಗೆ ತೆಗೆದುಕೊಳ್ಳುವುದಿಲ್ಲ. ನಮ್ಮಲ್ಲಿ ಮಹಿಳೆಯರು ಚಾಲನೆ ಮಾಡುವ ಸ್ಕೂಟರ್‌ಗಳ ಸರ್ವೀಸ್ ಹಾಗೂ ಅವುಗಳ ಎಲ್ಲಾ ರೀತಿಯ ದುರಸ್ತಿ ಮಾಡಲಾಗುತ್ತದೆ. ಮಾಲೀಕರಿಗೆ ಸಹಾಯಕಳಾಗಿ ಕೆಲಸ ಮಾಡುತ್ತಿದ್ದೇನೆ. ಇಂಜಿನ್ ಬೋರ್ ಮಾಡುವ ಕೆಲಸವೂ ಕರಗತ ಆಗಿದೆ. ಅವಿರತ ದುಡಿಮೆಯ ಮೂಲಕ ಕುಟುಂಬದ ನಿರ್ವಹಣೆಯಲ್ಲಿ ನನ್ನ ಪತಿಯೊಂದಿಗೆ ಕೈಜೋಡಿಸಿದ್ದೇನೆ ಎನ್ನುತ್ತಾರೆ ಅವರು.

> ಮಹಿಳೆಯರು ಗ್ಯಾರೇಜ್‌ಗಳಲ್ಲಿ ದುಡಿಯುವುದು ತೀರಾ ಅಪರೂಪ. ನಮ್ಮಲ್ಲಿ ಮೆಕ್ಯಾನಿಕ್ ಆಗಿರುವ ಸುಮಿತ್ರಾ, ಸ್ಕೂಟರ್‌ಗಳ ದುರಸ್ತಿ ಕೆಲಸಗಳನ್ನು ಸಮರ್ಥವಾಗಿ ಮಾಡಬಲ್ಲರು. ಅವರಿಗೆ ಕೆಲಸ ಕಲಿಸಿದ್ದು ನಾನೇ. ನಮ್ಮ ಮಳಿಗೆ ಆರಂಭಿಸಿ 28 ವರ್ಷಗಳಲ್ಲಿ ತರಬೇತಿ ಪಡೆದಿರುವ ಮೊಟ್ಟ ಮೊದಲ ಮಹಿಳೆ ಇವರೇ. ಮನಸ್ಸಿದರೆ ಮಹಿಳೆಯರು ಈ ರೀತಿಯ ಕೆಲಸ ಮಾಡಬಹುದು.
> - ಸುರೇಂದ್ರನ್, ಗ್ಯಾರೇಜ್ ಮಾಲೀಕರು

ಮೆಕ್ಯಾನಿಕ್ ಕೆಲಸದ ಬಗ್ಗೆ ಆಸಕ್ತಿ ಇತ್ತು. ಹಾಗಾಗಿ ಇದನ್ನು ಆಯ್ಕೆ ಮಾಡಿಕೊಂಡೆ. ನಮ್ಮ ಮನೆಯಲ್ಲಿರುವ ದ್ವಿಚಕ್ರ ವಾಹನಗಳನ್ನು ಇದೇ ಮಳಿಗೆಯಲ್ಲಿ ನಾನೇ ಸರ್ವೀಸ್ ಮಾಡುತ್ತೇನೆ. ಒಬ್ಬ ಪುರುಷ ಮಾಡುವಂತಹ ಕೆಲಸವನ್ನು ಮಾಡುವಾಗ ಸವಾಲು ಎದುರಾಗುವುದು ಸಹಜವೇ. ಆದರೆ, ಛಲವಿರಬೇಕಷ್ಟೇ. ಮನಸ್ಸಿದ್ದರೆ ಮೆಕ್ಯಾನಿಕ್ ಸೇರಿದಂತೆ ಯಾವುದೇ ಕೆಲಸವಾದರೂ ಮಹಿಳೆಯೂ ಮಾಡಬಲ್ಲಳು. ನಾನು ಈ ವೃತ್ತಿಯನ್ನು ಇಷ್ಟಪಟ್ಟು ಮಾಡುತ್ತಿದ್ದೇನೆ. ಈ ವೃತ್ತಿಯಲ್ಲಿ ತೊಡಗಿಸಿಕೊಳ್ಳಲು ನನಗೆ ಖುಷಿ ಇದೆ. ನಮ್ಮ ಮನೆಯಲ್ಲಿ ಐದು ದ್ವಿಚಕ್ರ ವಾಹನಗಳಿದ್ದು, ಅವುಗಳೆಲ್ಲದರ ಸರ್ವೀಸ್ ನಾನೇ ಮಾಡುತ್ತೇನೆ ಎನ್ನುತ್ತಾರೆ ಸುಮಿತ್ರಾ.

ನಿತ್ಯ ನಿರಂತರ ದುಡಿಮೆಯಿಂದಲೇ ನಮಗೆ ದಿನದ ಕೂಳು–ಬಾಳು!

– ಮೋಹನ್ ಕಾಯಕ



ದೇವಮ್ಮ

ಗೇದರೆ ಉಂಟು... ಇಲ್ಲದಿದ್ದರೆ ಬೇರೆ ಗತಿಯಿಲ್ಲ... ಒಟ್ನಲ್ಲಿ ಗೆಯ್ತನೇ ಇರಬೇಕು.. ಕೂತ್ ಕೊಂಡ್ರೆ ಯಾರಾದ್ರೂ ಹತ್ತು ರೂಪಾಯ್ ಕೊಟ್ಟಾರಾ...!

ಸುಡೋ ಬಿಸಿಲು, ಗಾಳಿ, ಮಳೆ ಎನ್ನದೆ ಕಿತ್ತು ಹೋಗಿರೋ ಚಪ್ಪಲಿ ಹಾಕೊಂಡು ಕಳೆದ ಸುಮಾರು 30 ವರ್ಷಗಳಿಂದ ದೇವರಾಜ ಮಾರುಕಟ್ಟೆಯ ಚಿಕ್ಕಗಡಿಯಾರದ ಬಳಿ ತಲೆ ಮೇಲೆ ಕಿತ್ತಳೆ, ಮೊಸಂಬಿ ಹಣ್ಣಿನ ಕುಕ್ಕೆ(ಬುಟ್ಟಿ) ಹೊತ್ಕೊಂಡು ಮಾರಾಟ ಮಾಡುತ್ತಿರುವ ರಮ್ಮನಹಳ್ಳಿಯ ದೇವಮ್ಮ ಹಾಗೂ ಜಯಮ್ಮರ ಶ್ರಮದ ನುಡಿಗಳಿವು...

ಗಂಡಿನ ಆಸರೆ ಇಲ್ಲದೆಯೂ ಸಂಸಾರದ ಜವಾಬ್ದಾರಿ ಹೊರುವ ಎಲ್ಲಾ ಸಾಮರ್ಥ್ಯ ಹೊಂದಿರುವ ಹೆಣ್ಣು ಎಷ್ಟೊಂದು ಗಟ್ಟಿಗಿತ್ತಿ ಆಗಿರುತ್ತಾಳೆ ಎಂಬುದನ್ನು ರಮ್ಮನಹಳ್ಳಿ ದೇವಮ್ಮ ಮತ್ತು ಜಯಮ್ಮರನ್ನು ನೋಡಿಯೇ ಅರಿತುಕೊಳ್ಳಬಹುದಾಗಿದೆ.

ಬೆಳಗ್ಗೆ 6.30ಕ್ಕೆ ಗೂಡ್ಸ್ ಆಟೋಗಳಲ್ಲಿ ಆರ್‌ಎಂಸಿ ಮಾರುಕಟ್ಟೆಗೆ ಬಂದು, ಹೋಲ್‌ಸೇಲ್‌ನಲ್ಲಿ ಹಣ್ಣುಗಳನ್ನು ಖರೀದಿಸಿ, ಅಲ್ಲಿಂದ ದೇವರಾಜ ಮಾರುಕಟ್ಟೆ ಎದುರಿನ ಚಿಕ್ಕಗಡಿಯಾರ ಸುತ್ತಮುತ್ತ ತಲೆ ಮೇಲೆ ಬುಟ್ಟಿ ಹೊತ್ತುಕೊಂಡು ಸಂಜೆ 6 ಗಂಟೆಯವರೆಗೆ ಮಾರಾಟ ಮಾಡುವ ಈ ಇಬ್ಬರು ವೃದ್ಧ ಮಹಿಳೆಯರು, ಸ್ತ್ರೀ ಸಮಾಜಕ್ಕೆ ಮಾದರಿಯಾಗಿದ್ದಾರೆ.

ಸುಮಾರು 70 ವರ್ಷದ ದೇವಮ್ಮನದು ಒಂದು ಕಥೆಯಾದರೆ, 55 ವರ್ಷದ ಜಯಮ್ಮ ಅವರದು ಮತ್ತೊಂದು ನೋವಿನ ಸಂಗತಿಯಾಗಿದೆ. ಇಬ್ಬರ ಪತಿಯರು ಸ್ವರ್ಗಸ್ಥರಾಗಿ ವರ್ಷಗಳೇ ಕಳೆದಿವೆ. ಇಬ್ಬರಿಗೂ ಒಬ್ಬೊಬ್ಬ ಗಂಡು ಮಕ್ಕಳಿದ್ದರೂ ಯಾವುದೇ ಪ್ರಯೋಜನವಿಲ್ಲ. ಕುಡಿತಕ್ಕೆ ದಾಸರಾಗಿರುವ ಮಕ್ಕಳನ್ನು ಸಾಕುತ್ತಾ, ಸೊಸೆ, ಮೊಮ್ಮಕ್ಕಳ ಜೊತೆಗೆ ತಮ್ಮ ಸಂಸಾರ ನೌಕೆಯನ್ನು ಮುನ್ನಡೆಸುತ್ತಿರುವ ದೇವಮ್ಮ ಮತ್ತು ಜಯಮ್ಮ ಅವರ ಬದುಕು ಕೂಡ ಸುಡುವ ಬಿಸಿಲಿನಲ್ಲಿ ಕಾದು ಕೆಂಡದಂತಾಗಿದೆ. ಐಷಾರಾಮಿ ಜೀವನ, ರೀಲ್ಸ್, ಮೋಜು–ಮಸ್ತಿಗೆ ಮಾರುಹೋಗುತ್ತಿರುವ ಯುವ ಪೀಳಿಗೆಗೆ ಇಬ್ಬರು ವೃದ್ಧ ಮಹಿಳೆಯರು ಮಾದರಿಯಾಗಿದ್ದಾರೆ.

ಗೇದರೆ ಉಂಟು... ಗೆಯದಿದ್ದರೆ ಗತಿಯಿಲ್ಲ... ಎನ್ನುತ್ತಲೇ 'ಮೈಸೂರು ಮಿತ್ರ'ನೊಂದಿಗೆ ತಮ್ಮ ಶ್ರಮದ ಬದುಕು ತೆರೆದಿಟ್ಟ ರಮ್ಮನಹಳ್ಳಿಯ ದೇವಮ್ಮ, ಸುಮಾರು 30 ವರ್ಷದಿಂದ ತಲೆ ಮೇಲೆ ಹಣ್ಣಿನ ಬುಟ್ಟಿ ಹೊತ್ತುಕೊಂಡು ಅದು–ಇದು ಹಣ್ಣು ಮಾರಾಟ ಮಾಡುತ್ತಾ ಜೀವನ ಮಾಡ್ತಾ ಇದ್ದೀನಿ. ಗಂಡ ಇಲ್ಲ. ಇರೋನೊಬ್ಬ ಮಗ. ಆತನಿಗೂ ಸದ್ಯಕ್ಕೆ ಕೆಲ್ಸ ಇಲ್ಲ. ಏನ್ಮಾಡೋದು! ಕೂತ್ ಕೊಂಡ್ರೆ ಯಾರಾದ್ರೂ ಹತ್ತು ರೂಪಾಯಿ ಕೊಡ್ತಾರೆನಪ್ಪಾ... ಎನ್ನುತ್ತಲೇ ಕೈಯ್ಯಲ್ಲಿ ಹಿಡಿದಿದ್ದ ಮೊಸಂಬಿ ಹಣ್ಣುಗಳನ್ನು ಸ್ವಾಮಿ... ಅಪ್ಪೋ... ಯವ್ವಾ... ಎಂದು ಗೋಗರೆದು ಮಾರಾಟ ಮಾಡಿದರು. ಲಾಭ ಎಷ್ಟು ಬರುತ್ತೇ... ಎಂದಿದ್ದಕ್ಕೆ.. ಇರಪ್ಪ, ನೂರು ಇನ್ನೂರು ಆದ್ರೆ ಹೆಚ್ಚು. ಬೆಳಗ್ಗೆ 6.30ಕ್ಕೆ ಬರ್ತಿನಿ, ಸಂಜೆವರೆಗೂ ಮಾರಾಟ ಮಾಡ್ತಿನಿ. ಯಾರಾದ್ರೂ ತಕೋತಾರೆ. ಫುಟ್‌ಪಾತ್‌ನಲ್ಲಿ ತಿರುಗ್ತಾ ಇದ್ದಿವಿ ಬಿಡಪ್ಪ. ಗೆಯ್ಯಬೇಕು.. ತಿನ್ನಬೇಕು... ಬದುಕಬೇಕು ಎಂದು ತಮ್ಮ ಕಾಯಕ ಮುಂದುವರೆಸಿದರು.

ಆದ್ರೆ ಆಯಿತು... ಇಲ್ಲಾಂದ್ರೆ ಇಲ್ಲ...: ಹಣ್ಣಿನ ವ್ಯಾಪಾರದಲ್ಲಿ ಆದಾಯ ಆಗುತ್ತೇನಮ್ಮಾ... ಅಂದ್ರೆ, ಆದ್ರೆ ಆಯಿತು... ಇಲ್ಲಾಂದ್ರೆ ಇಲ್ಲ... 30 ವರ್ಷದಿಂದ ಇದೇ ವ್ಯಾಪಾರ ಮಾಡ್ತಾ ಇದ್ದಿವಿ. ಕಳೆದ ಐದು ವರ್ಷದಿಂದ ಒಂದು ಕಡೆ ಕುಳಿತುಕೊಂಡು ವ್ಯಾಪಾರ ಮಾಡ್ತಾ ಇದ್ದಿನಿ ಅಂದ್ರು ರಮ್ಮನಹಳ್ಳಿ ಜಯಮ್ಮ. ಮೊದಲೆಲ್ಲಾ ನಾನು ಕೂಡ ತಲೆ ಮೇಲೆ ಹೊತ್ಕೊಂಡು ವ್ಯಾಪಾರ ಮಾಡ್ತಾ ಇದ್ದೆ. 10 ಸಾವಿರ ಬಂಡವಾಳ ಹಾಕಿದ್ದೀನಿ. ಒಂದೊಂದು ದಿನ ವ್ಯಾಪಾರ ಆಗುತ್ತೆ.. ಒಂದೊಂದು ದಿನ ಇಲ್ಲ. ಒಟ್ನಲ್ಲಿ ಬದುಕು ನಡೀಬೇಕಲ್ವಾಪ್ಪ ಎನ್ನುತ್ತಾ ತಮ್ಮ ಶ್ರಮದ ಬದುಕಿನ ಚಿತ್ರಣ ತೆರೆದಿಟ್ಟರು.

ಇವಾಗಿನ ಮಕ್ಳು ಮಾತ್ ಕೇಳ್ತಾವಾ...!

> ನಮ್ ಕಾಲದಂತೆ ಇವಾಗ ಇಲ್ಲ. ಇವಾಗಿನ ಮಕ್ಳು ಬುದ್ಧಿ ಮಾತ್ ಹೇಳಿದ್ರೆ ಕೇಳ್ತಾವಾ... ನಾವಾದ್ರೆ ನಮ್ಮಪ್ಪ, ನಮ್ಮವ್ವನ ಮಾತ್ ಮೀರ್ತಾ ಇರಲಿಲ್ಲ. ಕಾಲ ಬದಲಾಗಿದೆ ಬಿಡಪ್ಪ. ಹೊಟ್ಟೆ ಪಾಡು, ಜೀವನ ಮಾಡಬೇಕು. ದುಡಿಮೆಗಿಂತ ದೊಡ್ಡದು ಏನೂ ಇಲ್ಲ.
> - ಜಯಮ್ಮ, ಹಣ್ಣಿನ ವ್ಯಾಪಾರಿ, ರಮ್ಮನಹಳ್ಳಿ



ದೃಢಮನಸ್ಸಿಂದ ಅಡಿಯಿಟ್ಟರೆ ಬಯಸಿದಂತೆ ಬದುಕುಂಟು!

– ಎಸ್.ಬಿ.ದೇವರಾಜ

ಹೆಣ್ಣು ಮಕ್ಕಳ ಸಾಧನೆಗೆ ವಿವಾಹ ಬಂಧನ ಅಡ್ಡಿಯಾಗುತ್ತದೆ. ಸಂಸಾರ ಜಂಜಾಟದಲ್ಲಿ ಅವರ ಆಸೆ–ಕನಸುಗಳು ಮೂಲೆ ಸೇರುತ್ತವೆ. ಇಂತಹ ಸಾಕಷ್ಟು ಅಭಿಪ್ರಾಯಗಳು ಇಂದಿಗೂ ಪ್ರತಿಧ್ವನಿಸುತ್ತವೆ. ಆದರೆ ಮೈಸೂರಿನ ಖುಷಿ ವಿನು, ಗೃಹಿಣಿ ಆದ ನಂತರವೇ ಸಾಧನೆ ಹಾದಿಯಲ್ಲಿ ಒಂದೊಂದೇ ಹೆಜ್ಜೆ ಸಾಗುತ್ತಿದ್ದಾರೆ. ಸಂಸಾರವನ್ನು ಸಂಕೋಲೆ ಎಂದು ಭಾವಿಸಿ, ಕೈಕಟ್ಟಿ ಕುಳಿತವರ ನಡುವೆ ಕುಟುಂಬದ ಪ್ರೋತ್ಸಾಹದಿಂದಲೇ ತಮ್ಮಿಷ್ಟದ ಸುಂದರ ಬದುಕು ಕಟ್ಟಿಕೊಂಡಿದ್ದಾರೆ.

ಆಸಕ್ತಿ ಹೊಂದಿದ್ದ ಕೌಶಲವನ್ನೇ ಕರಗತ ಮಾಡಿಕೊಂಡು ಯಶಸ್ವಿ ಉದ್ಯಮಿಯಾಗುವುದರ ಜೊತೆಗೆ ವಿವಿಧ ಚಟುವಟಿಕೆಗಳಲ್ಲಿ ತೊಡಗಿದ್ದಾರೆ. ವೃತ್ತಿಯ ಜೊತೆಗೆ ಸಾಮಾಜಿಕ ಸೇವೆಯನ್ನೂ ರೂಢಿಸಿಕೊಂಡಿದ್ದಾರೆ. ಅಲ್ಲದೆ ಹೆಣ್ಣು ಮಕ್ಕಳ ಸ್ವಾವಲಂಬಿ ಬದುಕಿನ ಶುಭಾರಂಭಕ್ಕೆ ನೆರವಾಗಿದ್ದಾರೆ.

ಪಥ ಬದಲಿಸಿತು ಸ್ಪರ್ಧೆ: 2017ರ ಎಲೈಟ್ ಮಿಸೆಸ್ ಇಂಡಿಯಾ ಸ್ಪರ್ಧೆ ಖುಷಿ ವಿನು ಅವರ ಜೀವನದ ದಿಕ್ಕನ್ನೇ ಬದಲಿಸಿತು. ಗೃಹಿಣಿಯಾಗಿದ್ದ ಖುಷಿಗೆ, ಫೇಸ್ ಬುಕ್ ಫಾಲೋವರ್ ಒಬ್ಬರು ನೀಡಿದ ಮಾಹಿತಿ ಉತ್ಸಾಹ ತುಂಬಿತು. ಮೌನವಾಗಿದ್ದ ಆಸೆ–ಕನಸುಗಳಿಗೆ ರೆಕ್ಕೆ ಬಂದವು. ಪತಿ ಸೇರಿದಂತೆ ಕುಟುಂಬದ ಪ್ರೋತ್ಸಾಹ ಸಿಕ್ಕಿತು. ಸೌಂದರ್ಯ ಕ್ಷೇತ್ರದ ಬಗ್ಗೆ ಆಸಕ್ತಿಯಿದ್ದ ಅವರು ಮಿಸೆಸ್ ಇಂಡಿಯಾ ಸ್ಪರ್ಧೆಯ ರನ್ನರ್ ಅಪ್ ಆಗಿ ಹೊರಹೊಮ್ಮಿದರು. ಸಾಮಾನ್ಯ ಗೃಹಿಣಿಯಾಗಿದ್ದ ಖುಷಿ, ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಧೈರ್ಯವಾಗಿ ಭಾಗವಹಿಸುವ ಮೂಲಕ ರೂಪದರ್ಶಿಯಾಗುವುದರ ಜೊತೆಗೆ ಹೊಸ ಬದುಕಿನೆಡೆಗೆ ಹೆಜ್ಜೆ ಹಾಕಿದರು.

ಎಲೈಟ್ ಮಿಸೆಸ್ ಇಂಡಿಯಾ ರನ್ನರ್ ಅಪ್ ಸಾಧನೆ ಬಳಿಕ ನೂರಕ್ಕೂ ಹೆಚ್ಚು ಫ್ಯಾಷನ್ ಶೋಗಳಲ್ಲಿ, ಅಂತರ ಕಾಲೇಜು ಸ್ಪರ್ಧೆಗಳ ತೀರ್ಪುಗಾರರಾಗಿ ಜವಾಬ್ದಾರಿ ನಿರ್ವಹಿಸುವ ಅವಕಾಶ ಸಿಕ್ಕಿದೆ. ವಿವಿಧ ಕಾರ್ಯಕ್ರಮಗಳಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಅಭಿನಂದನೆ ಸ್ವೀಕರಿಸಿದ್ದಾರೆ.

ಬಹುಮುಖ ಪ್ರತಿಭೆ: ಖುಷಿ ವಿನು, ಪ್ರಸಾಧನ ಉದ್ಯಮದ ಜೊತೆಗೆ ಹಲವು ಕ್ಷೇತ್ರಗಳಲ್ಲಿ ಸಕ್ರಿಯವಾಗಿರುವ ಬಹುಮುಖ ಪ್ರತಿಭೆ. ಖುಷಿ ಎಂಟರ್‌ಪ್ರೈಸಸ್ ಮೂಲಕ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಡೈರೆಕ್ಟ್ ಸೆಲ್ಲಿಂಗ್ ಏಜೆಂಟ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಖುಷಿ ವಿನು ಮೇಕಪ್ ಅಕಾಡೆಮಿ ಮೂಲಕ ಪ್ರಸಾಧನ ಕ್ಷೇತ್ರದಲ್ಲಿ ಪ್ರಸಿದ್ಧಿ ಪಡೆದಿದ್ದಾರೆ. ಏಳೆಂಟು ವರ್ಷಗಳಿಂದ ಉದ್ಯಮದ ಜೊತೆಗೆ ಆಸಕ್ತ ಹೆಣ್ಣು ಮಕ್ಕಳಿಗೆ ಪ್ರತಿ ತಿಂಗಳು ಮೇಕಪ್ ತರಬೇತಿ ನೀಡುತ್ತಿದ್ದಾರೆ. ಶುಲ್ಕ ಪಾವತಿಸಲಾಗದ ಹಲವರಿಗೆ ಉಚಿತವಾಗಿ ತರಬೇತಿಯೊಂದಿಗೆ ಉದ್ಯೋಗವನ್ನೂ ನೀಡಿ, ಅವರ ಜೀವನಕ್ಕೆ ನೆರವಾಗಿದ್ದಾರೆ. ವಿದ್ಯಾಭ್ಯಾಸ ಮಾಡುವವರಿಗೆ ಇತರೆ ಸಂಘ ಸಂಸ್ಥೆಗಳ ಮೂಲಕ ನೆರವು ಕೊಡಿಸುತ್ತಿದ್ದಾರೆ. ಸದ್ಯ ಮೈಸೂರಿನ ವಿಜಯನಗರ ಎರಡನೇ ಹಂತ ಹಾಗೂ ಬೆಂಗಳೂರಿನ ಜಯನಗರದಲ್ಲಿ ಮೇಕಪ್ ಅಕಾಡೆಮಿ ಕಾರ್ಯನಿರ್ವಹಿಸುತ್ತಿದೆ.

ಮೊಬೈಲ್, ಕಂಪ್ಯೂಟರ್, ಟಿವಿ ನೋಡುವುದರಲ್ಲಿ ಮುಳುಗಿ ಹೊರಗಿನ ವಾತಾವರಣವೇ ಒಗ್ಗದ ಮಕ್ಕಳಿಗೆ ಟ್ರೆಕ್ಕಿಂಗ್ ಸೇರಿದಂತೆ ಹೊರಾಂಗಣ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸುವ ಉದ್ದೇಶದಿಂದ ಕ್ವಾಡ್ ಕ್ಲಬ್(ಅಡ್ವೆಂಚರ್ ಕ್ಲಬ್) ನಡೆಸುತ್ತಿದ್ದಾರೆ. ಮಂಡ್ಯದ ಎಲೆಯೂರು ವೃತ್ತದಲ್ಲಿ ವೃದ್ಧಾಶ್ರಮ ನಿರ್ವಹಣೆ ಮಾಡುತ್ತಿರುವ ಸಾಯಿಧಾಮ ಚಾರಿಟೆಬಲ್ ಟ್ರಸ್ಟ್‌ನಲ್ಲಿ ಖುಷಿ ಅವರೂ ಟ್ರಸ್ಟಿಯಾಗಿದ್ದಾರೆ.



ಖುಷಿ

ಬಿಬಿಎಂ ಪದವೀಧರೆಯಾಗಿರುವ ಖುಷಿ ವಿನು, ಕೃಷ್ಣ ವಾಸುದೇವಾಯ ಖುಷಿ(ಕೆವಿಕೆ) ಫೌಂಡೇಷನ್ ಆರಂಭಿಸಲು ಸಿದ್ಧತೆ ನಡೆಸಿದ್ದಾರೆ. ಅದರ ಮೂಲಕ ಗೋಶಾಲೆ, ವೃದ್ಧಾಶ್ರಮ ಸೇರಿದಂತೆ ಹಲವು ಸಾಮಾಜಿಕ ಕಾರ್ಯಗಳನ್ನು ನಡೆಸಲು ಯೋಜನೆ ರೂಪಿಸಿಕೊಂಡಿದ್ದಾರೆ. ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸ್ವಯಂ ಸೇವಕರ ಸಹಕಾರದೊಂದಿಗೆ ಸ್ವಚ್ಛತಾ ಅಭಿಯಾನ ನಡೆಸುವುದು, ಬೇಸಿಗೆ ಹಿನ್ನೆಲೆಯಲ್ಲಿ ಶನಿವಾರ ಮತ್ತು ಭಾನುವಾರ ಗಿಡಗಳಿಗೆ ನೀರೆರೆಯುವುದು ಸೇರಿದಂತೆ ಪರಿಸರ ಸಂರಕ್ಷಣೆ ಕಾರ್ಯದಲ್ಲೂ ಸಕ್ರಿಯವಾಗುವ ಯೋಚನೆ ಹೊಂದಿದ್ದಾರೆ.

ಸೌಂದರ್ಯ ಕಾಳಜಿ ಪ್ರತಿಯೊಬ್ಬರಿಗೂ ಇರುತ್ತದೆ. ಅದರಲ್ಲೂ ವಿವಾಹ ಇನ್ನಿತರ ಶುಭ ಸಮಾರಂಭಗಳಲ್ಲಿ ಚೆನ್ನಾಗಿ ಕಾಣಿಸಿಕೊಳ್ಳಬೇಕೆಂಬ ಆಸೆ ಇರುತ್ತದೆ. ಆ ವೇಳೆ ಸ್ವತಃ ಅಥವಾ ಅನಾನುಭವಿಗಳಿಂದ ಮೇಕಪ್ ಮಾಡಿಸಿಕೊಂಡು ತೊಂದರೆ ಅನುಭವಿಸುತ್ತಾರೆ. ಪ್ರಸಾಧನ ಒಂದು ಸುಂದರ ಕಲೆ. ಸೂಕ್ತ ತರಬೇತಿ ಪಡೆದು ವೃತ್ತಿಪರವಾಗಿ ಮುಂದುವರೆಯುವುದು ಅತ್ಯಗತ್ಯ. ಆದ್ದರಿಂದಲೇ ಅಕಾಡೆಮಿಯಿಂದ ತರಬೇತಿ ನೀಡುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಕಾರ್ಯಾಗಾರದ ಮೂಲಕ ಹೆಚ್ಚು ಜನರಿಗೆ ಅನುಕೂಲ ಮಾಡಿಕೊಡುವುದಾಗಿ ಖುಷಿ ವಿನು ತಿಳಿಸಿದ್ದಾರೆ.

ಕ್ಯಾನ್ಸರ್ ರೋಗಿಗಳಿಗೆ ಕೇಶ ನೆರವು

ವೃತ್ತಿ ಜೊತೆಯಲ್ಲೇ ಸಾಮಾಜಿಕ ಸೇವೆಗೂ ಅವಕಾಶವಿದೆ ಎನ್ನುವುದಕ್ಕೆ ಖುಷಿ ವಿನು ಉದಾಹರಣೆ. ಐದು ವರ್ಷಗಳಿಂದ ಮೇಕಪ್ ಅಕಾಡೆಮಿಗೆ ಬರುವ ಗ್ರಾಹಕರೊಂದಿಗೆ ಸಮಾಲೋಚಿಸಿ, ಅವರ ಅನುಮತಿ ಪಡೆದು ಕನಿಷ್ಠ 11 ಇಂಚು ಕೇಶವನ್ನು ಪಡೆದು, ಅದನ್ನು ಸಂಸ್ಥೆಯೊಂದರ ಮೂಲಕ ಕ್ಯಾನ್ಸರ್ ರೋಗಿಗಳಿಗೆ ತಲುಪಿಸಲಾಗುತ್ತದೆ. ಕೇಶದಾನ ಮಾಡುವ ಗ್ರಾಹಕರಿಗೆ ಉಚಿತ ಸೇವೆ ನೀಡಲಾಗುತ್ತದೆ. ಅವರಿಗೆ ಸಂಸ್ಥೆಯಿಂದ ನೀಡುವ ಪ್ರಮಾಣ ಪತ್ರವನ್ನೂ ತಲುಪಿಸುತ್ತೇವೆ ಎಂದು ಖುಷಿ ವಿನು ಹೇಳಿದ್ದಾರೆ.

ಒಟ್ಟಾರೆ ವಿವಾಹವಾದ ಮೇಲೆ ಏನೂ ಸಾಧನೆ ಮಾಡಲು ಸಾಧ್ಯವಾಗುವುದಿಲ್ಲ ಎಂಬ ಭಾವನೆ ಹೊಂದಿರುವ ಹೆಣ್ಣು ಮಕ್ಕಳಿಗೆ ಖುಷಿ ವಿನು ಪ್ರೇರಣೆಯಾಗಿದ್ದಾರೆ. ಇವರು ಬೆಂಗಳೂರಿನ ಅಕ್ಷಯ ಫೌಂಡೇಷನ್ ವತಿಯಿಂದ ಮಹಿಳಾ ದಿನಾಚರಣೆ ಹಿನ್ನೆಲೆಯಲ್ಲಿ ಕೊಡಮಾಡುವ 'ಕರುನಾಡ ಆದರ್ಶ ವನಿತೆ' ಪ್ರಶಸ್ತಿಗೆ ಭಾಜನರಾಗಿದ್ದು, ಮಾ.9ರಂದು ಪ್ರಶಸ್ತಿ ಸ್ವೀಕರಿಸಲಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಬಜೆಟ್‌ನಲ್ಲಿ ಕ್ಷೇತ್ರವಾರು ಘೋಷಿತ ಹೊಸ ಯೋಜನೆಗಳು



■ ರೈತ ಸಮೃದ್ಧಿ ಯೋಜನೆಯಡಿ 10 ಕೃಷಿ ಹವಾಮಾನ ವಲಯಗಳಲ್ಲಿ ಸಮಗ್ರ ಕೃಷಿ ಪದ್ಧತಿಯ ಮಾದರಿ ಪ್ರಾತ್ಯಕ್ಷಿಕೆ ತಾಕುಗಳ ಅಭಿವೃದ್ಧಿ ■ ಕೃಷಿ ಯಾಂತ್ರೀಕರಣ ಕಾರ್ಯಕ್ರಮದಡಿ 428 ಕೋಟಿ ರೂ. ವೆಚ್ಚದಲ್ಲಿ 50 ಸಾವಿರ ರೈತರಿಗೆ ಸಹಾಯಧನ ಸೌಲಭ್ಯ ■ ಹನಿ ಮತ್ತು ತುಂತುರು ನೀರಾವರಿ ಘಟಕ ಅಳವಡಿಕೆಗೆ ಕೃಷಿ ಇಲಾಖೆಯಡಿ ಒಟ್ಟು 1.81 ಲಕ್ಷ ರೈತರಿಗೆ 440 ಕೋಟಿ ರೂ. ಸಹಾಯಧನ ■ ತೊಗರಿ ಉತ್ಪಾದನೆ ಉತ್ತೇಜನಕ್ಕೆ 88 ಕೋಟಿ ರೂ. ■ ರಾಜ್ಯದಲ್ಲಿ 6000 ಕಿರು ಆಹಾರ ಸಂಸ್ಕರಣಾ ಘಟಕಗಳ ಸ್ಥಾಪನೆ ■ ಕೃಷಿ ಭಾಗ್ಯ ಯೋಜನೆಯಡಿ 12 ಸಾವಿರ ಕೃಷಿ ಹೊಂಡ ನಿರ್ಮಾಣ ■ ಬೆಳೆಗಳ ಕುರಿತು ನಿಖರ ತೀರ್ಮಾನ ಕೈಗೊಳ್ಳಲು ನೆರವು ನೀಡುವ ಡಿಜಿಟಲ್ ಕೃಷಿ ಸೇವೆಗಳ ಕೇಂದ್ರ ಸ್ಥಾಪನೆ. ■ ಕೃಷಿ ಹವಾಮಾನ ವಲಯಗಳ ವರ್ಗೀಕರಣವನ್ನು ಮರುವ್ಯಾಖ್ಯಾನಗೊಳಿಸಲು ತಜ್ಞರ ಸಮಿತಿ ರಚನೆ ■ ರೈತರ ಜೀವನೋಪಾಯ ಸುಧಾರಣೆಗೆ ಸಮಗ್ರ ಮಳೆಯಾಶ್ರಿತ ಕೃಷಿ ನೀತಿ ಜಾರಿ ■ ಕೃಷಿ ಇಲಾಖೆಯ 58 ಪ್ರಯೋಗಾಲಯಗಳ ಬಲವರ್ಧನೆ. ■ 20 ಕೋಟಿ ರೂ. ವೆಚ್ಚದಲ್ಲಿ ಸಾವಯವ ಮತ್ತು ಸಿರಿಧಾನ್ಯ ಹಬ್‌ಗಳ ಸ್ಥಾಪನೆ; ಉತ್ತರ ಕನ್ನಡ ಜಿಲ್ಲೆ, ಜೋಯಿಡಾ ತಾಲ್ಲೂಕನ್ನು ಸಾವಯವ ತಾಲೂಕಾಗಿ ಪರಿವರ್ತಿಸಲು ಕ್ರಮ ■ ಮಂಡ್ಯ ಕೃಷಿ ವಿಶ್ವವಿದ್ಯಾಲಯ ಮೂಲಸೌಕರ್ಯ ಅಭಿವೃದ್ಧಿಗೆ 25 ಕೋಟಿ ರೂ. ಅನುದಾನ ■ ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸಸ್ಯ ಫೀನೋಟೈಪಿಂಗ್‌ಸಲಭ್ಯ ■ ವಿಜಯಪುರದ ಮುದ್ದೇಬಿಹಾಳ ತಾಲೂಕಿನಲ್ಲಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪನೆ ■ ಅಥಣಿಯಲ್ಲಿ ಕೃಷಿ ಕಾಲೇಜು ಸ್ಥಾಪಿಸುವ ಕುರಿತು ಕಾರ್ಯಸಾಧ್ಯತೆ ವರದಿ ಪಡೆಯಲು ಕ್ರಮ











ತೋಟಗಾರಿಕೆ

- ■ 95 ಕೋಟಿ ರೂ. ವೆಚ್ಚದಲ್ಲಿ ಸಮಗ್ರ ತೋಟಗಾರಿಕಾ ಅಭಿವೃದ್ಧಿ ಯೋಜನೆ–2 ಜಾರಿ.
- ■ ತೋಟಗಾರಿಕಾ ಬೆಳೆಗಳ ಕುರಿತು ರೈತರಿಗೆ ನೈಜ ಸಮಯದ ಮಾಹಿತಿ ನೀಡುವ ಜ್ಞಾನಕೋಶ ಸ್ಥಾಪನೆ.
- ■ ರಾಜ್ಯದ GI ಟ್ಯಾಗ್ ಹೊಂದಿದ ಹಾಗೂ ದೇಸಿ ತೋಟಗಾರಿಕಾ ಬೆಳೆಗಳನ್ನು ಸಂರಕ್ಷಿಸಲು ಬೀಜ ಬ್ಯಾಂಕ್ ಸ್ಥಾಪನೆ.
- ■ ಬ್ಯಾಡಗಿ ಮೆಣಸಿನಕಾಯಿಯನ್ನು ರೋಗಗಳಿಂದ ಸಂರಕ್ಷಿಸಲು ಸಂಶೋಧನೆಗೆ ಉತ್ತೇಜನ.
- ■ ತೋಟಗಾರಿಕಾ ಬೆಳೆಗಳಿಗೆ ಹನಿ ನೀರಾವರಿಯಡಿ 52,000 ಬೆಳೆಗಾರರಿಗೆ 426 ಕೋಟಿ ಸಹಾಯಧನ ಒದಗಿಸಲು ಕ್ರಮ
- ■ ಇಲಾಖೆಯ ಕ್ಷೇತ್ರಗಳಡಿ ತೋಟಗಾರಿಕಾ ಪ್ರವಾಸೋದ್ಯಮಕ್ಕೆ ಉತ್ತೇಜನ
- ■ ಗದಗ ಜಿಲ್ಲೆಯ ಡಂಬಳದಲ್ಲಿ ಸಂಶೋಧನಾ ಕೇಂದ್ರ ಸ್ಥಾಪನೆ.

ರೇಷ್ಮೆ

- ■ ಮಧ್ಯಮ ವರ್ಗದ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ 120 ಕೊನೆಗಳ ಸ್ವಯಂಚಾಲಿತ ರೀಲಿಂಗ್ ಘಟಕಗಳ ಸ್ಥಾಪನೆಗೆ ಪ್ರೋತ್ಸಾಹ
- ■ ರಾಮನಗರ ಮತ್ತು ಶಿಡ್ಲಘಟ್ಟ ಹೈ–ಟೆಕ್ ರೇಷ್ಮೆಗೂಡಿನ ಮಾರುಕಟ್ಟೆಯ ಎರಡನೇ ಹಂತದ ಕಾಮಗಾರಿ ಅನುಷ್ಠಾನಕ್ಕೆ 250 ಕೋಟಿ ರೂ.
- ■ ಮೈಸೂರಿನಲ್ಲಿ ರೇಷ್ಮೆಗೂಡಿನ ಮಾರುಕಟ್ಟೆ ಸ್ಥಾಪನೆಗೆ ಕ್ರಮ.
- ■ ಸರ್ಕಾರಿ ರೇಷ್ಮೆಗೂಡಿನ ಮಾರುಕಟ್ಟೆಗಳಲ್ಲಿ ಗುಣಮಟ್ಟ ಪರೀಕ್ಷೆ ಮತ್ತು ಶ್ರೇಣೀಕರಣಕ್ಕಾಗಿ Assayer ಗಳ ನಿಯೋಜನೆ
- ■ ರೇಷ್ಮೆ ಅಭಿವೃದ್ಧಿ ಯೋಜನೆಗೆ 55 ಕೋಟಿ ರೂ. ಅನುದಾನ

ಪಶುಸಂಗೋಪನೆ

- ■ "ಅನುಗ್ರಹ" ಯೋಜನೆಯಡಿ ಪರಿಹಾರ ಮೊತ್ತ ಹೆಚ್ಚಳ; ಹಸು, ಎಮ್ಮೆ ಮತ್ತು ಎತ್ತುಗಳಿಗೆ 15 ಸಾವಿರ ರೂ., ಕುರಿ/ ಮೇಕೆಗಳಿಗೆ 7500 ರೂ., ಕುರಿ/ ಮೇಕೆ ಮರಿಗಳಿಗೆ 5 ಸಾವಿರ ರೂ. ಗಳಿಗೆ ಹೆಚ್ಚಳ.
- ■ 50 ನೂತನ ಪಶು ಚಿಕಿತ್ಸಾಲಯಗಳ ಪ್ರಾರಂಭಕ್ಕೆ ಕ್ರಮ.
- ■ 2025–26ನೇ ಸಾಲಿನಲ್ಲಿ 100 ಪಶು ವೈದ್ಯಕೀಯ ಸಂಸ್ಥೆಗಳ ನೂತನ ಕಟ್ಟಡಗಳ ನಿರ್ಮಾಣ
- ■ ರಾಜ್ಯದ ದೇಶಿ ದನ ಹಾಗೂ ಕುರಿ ತಳಿಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಎರಡು ಕೋಟಿ ರೂ.

ಮೀನುಗಾರಿಕೆ

- ■ ಮಂಗಳೂರಿನಲ್ಲಿರುವ ಮೀನುಗಾರಿಕೆ ಕಾಲೇಜು ವಿದ್ಯಾರ್ಥಿಗಳ ಸಂಖ್ಯಾಬಲ ದ್ವಿಗುಣ
- ■ ಕರಾವಳಿ ಜಿಲ್ಲೆಗಳಲ್ಲಿನ ಮೀನುಗಾರಿಕೆ ಕೊಂಡಿ ರಸ್ತೆಗಳ ಅಭಿವೃದ್ಧಿಗೆ 30 ಕೋಟಿ ರೂ.
- ■ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಮೀನು ಮಾರಾಟಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಗೆ ಗರಿಷ್ಠ 3 ಲಕ್ಷ ರೂ. ಆರ್ಥಿಕ ನೆರವು.
- ■ ಮೋಟರೀಕೃತ ದೋಣಿಗಳಲ್ಲಿ 15 ವರ್ಷ ಮೀರಿದ ಇಂಜಿನ್ ಬದಲಾವಣೆಗೆ ಗರಿಷ್ಠ ಒಂದು ಲಕ್ಷ ರೂ. ಸಹಾಯಧನ.
- ■ ಮಲ್ಪೆ ಮೀನುಗಾರಿಕಾ ಬಂದರಿನಲ್ಲಿ "ಮಲ್ಟಿ ಲೆವಲ್ ಪಾರ್ಕಿಂಗ್" ವ್ಯವಸ್ಥೆ ನಿರ್ಮಾಣ
- ■ ಆಳ ಸಮುದ್ರ ಮೀನುಗಾರಿಕೆ ಪ್ರೋತ್ಸಾಹಿಸಲು ಮೀನುಗಾರಿಕೆ ದೋಣಿಗಳ ಉದ್ದದ ಮಿತಿ ಸಡಿಲಿಸಲು ಕ್ರಮ
- ■ ರಾಜ್ಯದಲ್ಲಿ ಹೊಸ ಮೀನುಗಾರಿಕಾ ನೀತಿ ಜಾರಿ

ಸಹಕಾರ

- ■ 37 ಲಕ್ಷ ರೈತರಿಗೆ 28,000 ಕೋಟಿ ರೂ. ಸಾಲ ವಿತರಣೆ ಗುರಿ.
- ■ 3 ಸಾವಿರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ (PACS) ಸಂಪೂರ್ಣ ಗಣಕೀಕರಣಕ್ಕೆ ಕ್ರಮ.
- ■ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ರಾಜ್ಯ ಸರ್ಕಾರದ ವತಿಯಿಂದ ಕ್ವಿಂಟಾಲ್‌ಗೆ 450 ರೂ. ಗಳಂತೆ ಒಟ್ಟು 138 ಕೋಟಿ ರೂ. ಹೆಚ್ಚುವರಿ ಪ್ರೋತ್ಸಾಹಧನ
- ■ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಬಾಕಿ ಉಳಿದಿರುವ ಕಾಮಗಾರಿ ಪೂರ್ಣಗೊಳಿಸಲು 47 ಕೋಟಿ ರೂ. ಅನುದಾನ.
- ■ ಎಪಿಎಂಸಿಗಳಲ್ಲಿನ ಪರವಾನಗಿ ಹೊಂದಿದ ಶ್ರಮಿಕರ ಮರಣಾನಂತರದ ವಿಮಾ ಪರಿಹಾರ ಮೊತ್ತ ಐದು ಲಕ್ಷ ರೂ.ಗಳಿಗೆ ಹೆಚ್ಚಳ.
- ■ ಬೆಂಗಳೂರಿನ ಹೊರವಲಯದಲ್ಲಿ ಹೊಸ Satellite Market ಸ್ಥಾಪನೆ.
- ■ ಬೆಂಗಳೂರು, ಕೊಪ್ಪಳ ಜಿಲ್ಲೆಯ ಬೂದುಗುಂಪ ಗ್ರಾಮದಲ್ಲಿ ಕುರಿ ಮತ್ತು ಮೇಕೆ ಮಾರುಕಟ್ಟೆ ಸ್ಥಾಪನೆ.

- ■ ಕಲಬುರಗಿಯಲ್ಲಿ ನೂತನ ಮೆಗಾ ಡೈರಿ ಪ್ರಾರಂಭಿಸಲು 50 ಕೋಟಿ ರೂ. ಅನುದಾನ ಹಾಗೂ 10 ಕೋಟಿ ರೂ. ವೆಚ್ಚದಲ್ಲಿ ಸಹಕಾರ ಭವನ ನಿರ್ಮಾಣ.
- ■ ಕಲ್ಯಾಣ ಕರ್ನಾಟಕದಲ್ಲಿ 60 ಕೋಟಿ ರೂ. ವೆಚ್ಚದಲ್ಲಿ ಗ್ರಾಮೀಣ ಉಗ್ರಾಣಗಳ ನಿರ್ಮಾಣ.

ಜಲಸಂಪನ್ಮೂಲ

- ■ ಎತ್ತಿನಹೊಳೆ ಯೋಜನೆ ಅಡಿ ಎಲ್ಲಾ ಎಂಟು ವಿಮಾ ಮಾರ್ಗಗಳಲ್ಲಿ ಲಭ್ಯವಾಗುವ ನೀರನ್ನು ಕಾಲುವೆಯ ಸರಪಳಿ:241 ಕಿ.ಮೀ ವರೆಗೆ ಹರಿಸಲು ಕ್ರಮ.
- ■ ಭದ್ರಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಲು ರಾಜ್ಯ ಸರ್ಕಾರದಿಂದಲೇ ಅಗತ್ಯ ಅನುದಾನ; 2,611 ಕೋಟಿ ರೂ. ಮೊತ್ತದ ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿಯಡಿ 30 ಕೆರೆ ತುಂಬಿಸಿ 1.77 ಲಕ್ಷ ಎಕರೆ ಪ್ರದೇಶಕ್ಕೆ ನೀರಾವರಿ ಸಾಮರ್ಥ್ಯ ಸೃಜನೆ.
- ■ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ 3ರಡಿ ಮುಳುಗಡೆಯಾಗುವ ಜಮೀನುಗಳನ್ನು ಒಪ್ಪಂದ ಐತೀರ್ಪಿನ ಮುಖಾಂತರ ಒಂದೇ ಹಂತದಲ್ಲಿ ಭೂಸ್ವಾಧೀನಪಡಿಸಿ ಪರಿಹಾರ ವಿತರಣೆಗೆ ಕ್ರಮ.
- ■ ಮೇಕೆದಾಟು ಸಮತೋಲನ ಜಲಾಶಯ ಯೋಜನೆಯಡಿ ಮುಳುಗಡೆ ಜಮೀನುಗಳ ಸರ್ವೆ ಕಾರ್ಯ ಪೂರ್ಣ.
- ■ ಕಳಸಾ–ಬಂಡೂರಾ ನಾಲಾ ತಿರುವು ಯೋಜನೆಯಡಿ ಕೇಂದ್ರದ ಅನುಮೋದನೆ ದೊರೆತ ಕೂಡಲೇ ಕಾಮಗಾರಿ ಪ್ರಾರಂಭ.
- ■ ಕೃಷ್ಣಾ, ಕಾವೇರಿ ಮತ್ತು ಇತರ ನದಿಗಳ ಕಣಿವೆಯಡಿ ವಿವಿಧ ಯೋಜನೆಗಳಡಿ ಬಾಕಿ ಇರುವ ಕಾಮಗಾರಿ ಪೂರ್ಣಗೊಳಿಸಲು ಕ್ರಮ.
- ■ ಕಾಮಗಾರಿಗಳ ಅಂದಾಜು ತಯಾರಿಕೆಯಲ್ಲಿ ಏಕರೂಪದ ತಾಂತ್ರಿಕ ಮಾನದಂಡ ಅನುಷ್ಠಾನ.
- ■ ತುಂಗಭದ್ರಾ ಜಲಾಶಯದಲ್ಲಿ ಹೂಳಿನಿಂದಾಗಿ ನೀರು ಸಂಗ್ರಹದಲ್ಲಿ ಆಗಿರುವ ಕೊರತೆ ಸರಿದೂಗಿಸಲು ಪರ್ಯಾಯ ಕ್ರಮಗಳ ಪರಿಶೀಲನೆ.

ಸಣ್ಣ ನೀರಾವರಿ

- ■ ಎತ್ತಿನಹೊಳೆ ಯೋಜನೆಯಡಿ ಮಧುಗಿರಿ ತಾಲೂಕಿನ 45 ಹಾಗೂ ಕೊರಟಗೆರೆ ತಾಲೂಕಿನ 62 ಕೆರೆ ತುಂಬಿಸುವ ಯೋಜನೆ 553 ಕೋಟಿ ರೂ. ಮೊತ್ತದಲ್ಲಿ ಅನುಷ್ಠಾನ
- ■ ವೃಷಭಾವತಿ ವ್ಯಾಲಿ ಮೊದಲನೇ ಹಂತದಲ್ಲಿ 70 ಕೆರೆ ತುಂಬಿಸುವ 1080 ಕೋಟಿ ಯೋಜನೆ, ಹೆಚ್.ಎನ್ ವ್ಯಾಲಿ 2ನೇ ಹಂತದ ಯೋಜನೆಯಡಿ 70 ಕೋಟಿ ರೂ. ಮೊತ್ತದಲ್ಲಿ 24 ಕೆರೆ ಹಾಗೂ 93.50 ಕೋಟಿ ರೂ. ಮೊತ್ತದಲ್ಲಿ ಬೆಂಗಳೂರು ಪೂರ್ವ ತಾಲೂಕಿನ 18 ಕೆರೆ ತುಂಬಿಸುವ ಯೋಜನೆ ಹಾಗೂ ಇತರೆ ಮುಂದುವರೆದ ಯೋಜನೆಗಳ ಪೂರ್ಣಗೊಳಿಸಲು ಕ್ರಮ.
- ■ 2025–26 ರಲ್ಲಿ 2 ಸಾವಿರ ಕೋಟಿ ರೂ. ಮೊತ್ತದ ಹೊಸ ಕಾಮಗಾರಿಗಳ ಪ್ರಾರಂಭ.

ಶಾಲಾ ಶಿಕ್ಷಣ

- ■ ಎಡಿಬಿ ನೆರವಿನಲ್ಲಿ 2,500 ಕೋಟಿ ರೂ. ವೆಚ್ಚದಲ್ಲಿ 500 ಹೊಸ ಕರ್ನಾಟಕ ಪಬ್ಲಿಕ್ ಶಾಲೆ ಪ್ರಾರಂಭಿಸಲು ಕ್ರಮ.
- ■ ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿ ಯೋಜನೆ 5 ಸಾವಿರ ಶಾಲೆಗಳಿಗೆ ವಿಸ್ತರಣೆ.
- ■ ಪ್ರಾಥಮಿಕ ಹಂತದಿಂದ ಪಿಯು ಹಂತದವರೆಗಿನ ಅತಿಥಿ ಶಿಕ್ಷಕರು, ಉಪನ್ಯಾಸಕರಿಗೆ ನೀಡುತ್ತಿರುವ ಮಾಸಿಕ ಗೌರವಧನ ತಲಾ 2 ಸಾವಿರ ರೂ. ಹೆಚ್ಚಳ.
- ■ ಬಿಸಿಯೂಟ ತಯಾರಿಕೆ ಸಿಬ್ಬಂದಿ ಗೌರವಧನ 1ಸಾವಿರ ರೂ. ಹೆಚ್ಚಳ.
- ■ ರಾಜ್ಯದ 100 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ 50 ಪ್ರೌಢಶಾಲೆಗಳ ಉನ್ನತೀಕರಣಕ್ಕೆ ಕ್ರಮ.
- ■ ನಿರಂತರ ಕಾರ್ಯಕ್ರಮದಡಿ ಮಕ್ಕಳ ಹಾಜರಾತಿಯನ್ನು ಖಚಿತಪಡಿಸಲು Face Recognition ತಂತ್ರಜ್ಞಾನದ ಅಳವಡಿಕೆ.
- ■ ಮಾತೃಭಾಷೆಯ ಜೊತೆಗೆ ಆಂಗ್ಲಭಾಷೆಯ ಕೌಶಲ ಬೆಳೆಸಲು 4 ಸಾವಿರ ಶಾಲೆಗಳಲ್ಲಿ ದ್ವಿಭಾಷಾ ವಿಭಾಗ ಪ್ರಾರಂಭ.
- ■ ರಾಜ್ಯದ 500 ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯ ಸೌಲಭ್ಯ ವಿಸ್ತರಣೆ.
- ■ 7,500 ಶಾಲಾ–ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಐಟಿಐಗಳಲ್ಲಿ ತರಬೇತಿ.
- ■ ಶಾಲೆ–ಕಾಲೇಜುಗಳಲ್ಲಿ ಹೆಚ್ಚುವರಿ ಕೊಠಡಿ, ಶೌಚಾಲಯ ನಿರ್ಮಾಣ ಮತ್ತು ದುರಸ್ತಿ ಕಾರ್ಯಗಳಿಗೆ 725 ಕೋಟಿ ರೂ. ಹಾಗೂ ಪೀಠೋಪಕರಣ ಒದಗಿಸಲು 50 ಕೋಟಿ ರೂ. ಬಿಡುಗಡೆ.
- ■ ಮಧ್ಯಾಹ್ನ ಉಪಾಹಾರ ಯೋಜನೆಯಡಿ 16,347 ಶಾಲೆಗಳ ಅಡುಗೆಮನೆ ನವೀಕರಣ ಹಾಗೂ ಪಾತ್ರೆ ಪರಿಕರ ಪೂರೈಕೆಗೆ 46 ಕೋಟಿ ರೂ.
- ■ ಅಕ್ಷರ ಆವಿಷ್ಕಾರ ಯೋಜನೆ ಅಡಿ 200 ಕೋಟಿ ರೂ. ವೆಚ್ಚದಲ್ಲಿ ಕೆ.ಪಿ.ಎಸ್. ಶಾಲೆಗಳನ್ನಾಗಿ ಕಲ್ಯಾಣ ಕರ್ನಾಟಕ ಭಾಗದ 50 ಶಾಲೆಗಳ ಉನ್ನತೀಕರಣ.
- ■ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 5,267 ಶಿಕ್ಷಕರ ಹುದ್ದೆ ಭರ್ತಿಗೆ ಕ್ರಮ. ಇಲಾಖೆಯಲ್ಲಿರುವ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ಇನ್ನೂ ಸಾವಿರ ಹುದ್ದೆ ಭರ್ತಿಗೆ ಕ್ರಮ.

ಉನ್ನತ ಶಿಕ್ಷಣ

- ■ ಪ್ರಥಮ ದರ್ಜೆ ಕಾಲೇಜುಗಳ ಬಲವರ್ಧನೆ, ಶಿಕ್ಷಣ ಸಂಸ್ಥೆಗಳಲ್ಲಿ ಉತ್ಕೃಷ್ಟತಾ ಕೇಂದ್ರಗಳ ಸ್ಥಾಪನೆಗೆ ವಿಶ್ವಬ್ಯಾಂಕ್ ನೆರವಿನ 2500 ಕೋಟಿ ರೂ. ವೆಚ್ಚದ ಯೋಜನೆ ಜಾರಿ.
- ■ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಡಾ॥ ಮನಮೋಹನ್ ಸಿಂಗ್ ಬೆಂಗಳೂರು ನಗರ ಕೇಂದ್ರ ವಿಶ್ವವಿದ್ಯಾಲಯ ಎಂದು ಮರುನಾಮಕರಣ.
- ■ 26 ಸರ್ಕಾರಿ ಮಹಿಳಾ ಕಾಲೇಜುಗಳು ಸೇರಿದಂತೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಹಾಗೂ ಪದವಿ ಕಾಲೇಜುಗಳ ಮೂಲಸೌಕರ್ಯ ಅಭಿವೃದ್ಧಿಗೆ 301 ಕೋಟಿ ರೂ. ಅನುದಾನ. ಹೊಸದಾಗಿ ಪ್ರಾರಂಭಿಸಿದ ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜುಗಳಿಗೆ 10 ಕೋಟಿ ರೂ. ನೆರವು.
- ■ ರಾಜ್ಯದ 16 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವೃತ್ತಿಪರ ವಿಷಯ ತಜ್ಞರನ್ನು Professor of Practice ರನ್ನಾಗಿ ನೇಮಕ
- ■ 30 ಕೋಟಿ ರೂ. ವೆಚ್ಚದಲ್ಲಿ UUCMS ತಂತ್ರಾಂಶ ಉನ್ನತೀಕರಣ
- ■ ಚಿಂತಾಮಣಿ ತಾಲೂಕಿನಲ್ಲಿ 150 ಕೋಟಿ ರೂ. ವೆಚ್ಚದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಘಟಕ ಕಾಲೇಜು ಸ್ಥಾಪನೆ.
- ■ 10 ಕೋಟಿ ರೂ. ವೆಚ್ಚದಲ್ಲಿ ಕಲ್ಯಾಣ ಕರ್ನಾಟಕ ಭಾಗದ 23 ಸಾವಿರ ವಿದ್ಯಾರ್ಥಿಗಳಿಗೆ ವಿಶೇಷ ಕೌಶಲ ಅಭಿವೃದ್ಧಿ ಕಾರ್ಯಕ್ರಮ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ

- ■ ನರ ವೈಜ್ಞಾನಿಕ ಖಾಯಿಲೆಗಳಿಗೆ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (KABHI) ಯೋಜನೆ ಈ ವರ್ಷ ಎಲ್ಲಾ ಹಂತದ ಆರೋಗ್ಯ ಕೇಂದ್ರಗಳಿಗೆ ವಿಸ್ತರಣೆ; 20 ಕೋಟಿ ರೂ. ಅನುದಾನ.
- ■ ಮಾನಸಿಕ ಅಸ್ವಸ್ಥರ ಆರೈಕೆ ಕೇಂದ್ರ ಸ್ಥಾಪನೆ.

ಸಿದ್ದರಾಮಯ್ಯರ ಬಜೆಟ್ ಪಕ್ಷಿನೋಟ

ಬೆಂಗಳೂರು, ಮಾ. 7(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಮಂಡಿಸಿದ 2025–26ನೇ ಸಾಲಿನ ಆಯವ್ಯಯದ ಮುಖ್ಯಾಂಶಗಳ ಪಕ್ಷಿನೋಟ:

- ■ ಆಯವ್ಯಯ ಗಾತ್ರ (ಸಂಚಿತ ನಿಧಿ) 4,09,549 ಕೋಟಿ ರೂ.ಗಳು
- ■ ಒಟ್ಟು ಸ್ವೀಕೃತಿ–4,08,647 ಕೋಟಿ ರೂ.; ರಾಜಸ್ವ ಸ್ವೀಕೃತಿ 2,92,477 ಕೋಟಿ ರೂ.; ಸಾರ್ವಜನಿಕ ಋಣ–1,16,000 ಕೋಟಿ ರೂ. ಸೇರಿದಂತೆ ಬಂಡವಾಳ ಸ್ವೀಕೃತಿ 1,16,170 ಕೋಟಿ ರೂ.
- ■ ಒಟ್ಟು ವೆಚ್ಚ–4,09,549 ಕೋಟಿ ರೂ. ರಾಜಸ್ವ ವೆಚ್ಚ–3,11,739 ಕೋಟಿ ರೂ., ಬಂಡವಾಳ ವೆಚ್ಚ–71,336 ಕೋಟಿ ರೂ. ಹಾಗೂ ಸಾಲ ಮರುಪಾವತಿ–26,474 ಕೋಟಿ ರೂ.
- ■ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಅಡಿಯಲ್ಲಿ ಆಯವ್ಯಯದಲ್ಲಿ ಒದಗಿಸಿದ ಅನುದಾನ 42,018 ಕೋಟಿ ರೂ. ಎಸ್.ಸಿ.ಎಸ್.ಪಿ. ಅಡಿ 29,992 ಕೋಟಿ ರೂ. ಹಾಗೂ ಟಿ.ಎಸ್.ಪಿ. ಅಡಿ 12,026 ಕೋಟಿ ರೂ.
- ■ ಮಹಿಳಾ ಆಯವ್ಯಯದಲ್ಲಿ ಒದಗಿಸಿದ ಅನುದಾನ 94,084 ಕೋಟಿ ರೂ.
- ■ ಮಕ್ಕಳ ಆಯವ್ಯಯದಲ್ಲಿ ಒದಗಿಸಿದ ಅನುದಾನ– 62,033 ಕೋಟಿ ರೂ.
- ■ ರಾಜ್ಯದ ರಸ್ತೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗಾಗಿ 8000 ಕೋಟಿ ರೂ. ವೆಚ್ಚದಲ್ಲಿ ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಕ್ರಮ.

ಕಾಲೇಜುಗಳ ಬಲವರ್ಧನೆ; ಉತ್ಕೃಷ್ಟತಾ ಕೇಂದ್ರ ಸ್ಥಾಪನೆಗೆ 2500 ಕೋಟಿ ವಿಶ್ವಬ್ಯಾಂಕ್ ನೆರವಿನ ಯೋಜನೆ

● ಬೆಂಗಳೂರು ನಗರ ವಿವಿ ಡಾ.ಮನಮೋಹನ್ ಸಿಂಗ್ ವಿಶ್ವವಿದ್ಯಾಲಯ ● 2000 ಬೋಧಕ ಹುದ್ದೆಗಳ ಭರ್ತಿಗೆ ಕ್ರಮ ● ವಿದ್ಯಾರ್ಥಿನಿಯರಿಗೆ ಇಂಗ್ಲೆಂಡ್ ವಿವಿಯಲ್ಲಿ ಕಲಿಯುವ ಯೋಗ

ಬೆಂಗಳೂರು, ಮಾ. 7(ಕೆಎಂಶಿ)–ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳ ಬಲವರ್ಧನೆ, ಶಿಕ್ಷಣ ಸಂಸ್ಥೆಗಳಲ್ಲಿ ಉತ್ಕೃಷ್ಟತಾ ಕೇಂದ್ರಗಳ ಸ್ಥಾಪನೆ ಹಾಗೂ ಸಂಶೋಧನಾ ಸಾಮರ್ಥ್ಯ ಹೆಚ್ಚಿಸುವ ಉದ್ದೇಶಕ್ಕಾಗಿ ಮುಂದಿನ ನಾಲ್ಕು ವರ್ಷಗಳಲ್ಲಿ ವಿಶ್ವ ಬ್ಯಾಂಕ್ ನೆರವಿನೊಂದಿಗೆ 2,500 ಕೋಟಿ ರೂ. ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.

ಮುಂಗಡಪತ್ರದಲ್ಲಿ ಈ ವಿಷಯ ಪ್ರಸ್ತಾಪಿಸಿರುವ ಮುಖ್ಯಮಂತ್ರಿ ಅವರು, ಬೆಂಗಳೂರು ನಗರ ವಿಶ್ವವಿದ್ಯಾಲಯವನ್ನು ಡಾ॥ಮನಮೋಹನ್ ಸಿಂಗ್ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡಲಾಗುವುದು. ಈ ವಿಶ್ವವಿದ್ಯಾಲಯವನ್ನು ರಾಷ್ಟ್ರದ ಮಾದರಿ ವಿಶ್ವವಿದ್ಯಾಲಯವಾಗಿ ಪರಿವರ್ತಿಸುವ ಉದ್ದೇಶದಿಂದ, ಸರ್ಕಾರಿ ಕಲಾ ಕಾಲೇಜು ಹಾಗೂ ಆರ್.ಸಿ.ಕಾಲೇಜುಗಳನ್ನು ವಿಶ್ವವಿದ್ಯಾಲಯದ ಘಟಕ ಕಾಲೇಜುಗಳನ್ನಾಗಿ ಅಭಿವೃದ್ಧಿಪಡಿಸಲಾಗುವುದು. ಮಹಿಳಾ ಉನ್ನತ ಶಿಕ್ಷಣ ಬಲವರ್ಧನೆಗೆ 26 ಕಾಲೇಜುಗಳ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು 26 ಕೋಟಿ ರೂ. ಒದಗಿಸಲಾಗುವುದು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಖಾಲಿಯಿರುವ 2,000



ಬೋಧಕ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುವುದು. ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಸಂಸ್ಥೆಗಳು ಹಾಗೂ ಪದವಿ ಕಾಲೇಜುಗಳಿಗೆ ಒಟ್ಟಾರೆ 275 ಕೋಟಿ ರೂ. ವೆಚ್ಚದಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಲಾಗುವುದು. ಹೊಸದಾಗಿ ಪ್ರಾರಂಭಿಸಲಾದ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಗೆ 10 ಕೋಟಿ ರೂ. ವೆಚ್ಚದಲ್ಲಿ ಪೀಠೋಪಕರಣಗಳು, ಉಪಕರಣಗಳು, ಕಂಪ್ಯೂಟರ್‌ಗಳು ಹಾಗೂ ಪುಸ್ತಕಗಳನ್ನು ಒದಗಿಸಲಾಗುವುದು.

ವಿದೇಶ ವಿವಿ ಯೋಗ: ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿನಿಯರಿಗೆ ಇಂಗ್ಲೆಂಡ್‌ನ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಲ್ಲಿ ಒಂದು ವರ್ಷದ ಸ್ನಾತಕೋತ್ತರ ಪದವಿ ಪಡೆಯುವ ಯೋಜನೆ ರೂಪಿಸಲಾಗಿದೆ. ರಾಜ್ಯದ 16 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನದಿಂದ ಉದ್ಯೋಗಾರ್ಹತೆ ಹೆಚ್ಚಿಸಲು ವೃತ್ತಿಪರ ವಿಷಯ ತಜ್ಞರನ್ನು ನೇಮಿಸಲು ಉದ್ದೇಶಿಸಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲೂಕಿನಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಘಟಕ ಕಾಲೇಜನ್ನು 150 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಮಾರುಕಟ್ಟೆ ಆಧಾರಿತ ಕೌಶಲ ತರಬೇತಿ ಒದಗಿಸಿ ಉದ್ಯೋಗಕ್ಕೆ ಸಜ್ಜುಗೊಳಿಸಲು ಕೈಗಾರಿಕೆಗಳ ಸಹಭಾಗಿತ್ವದಲ್ಲಿ ತರಬೇತಿ ಯೋಜನೆಗಳನ್ನು ರೂಪಿಸಲಾಗುವುದು ಎಂದರು.

ಯಾವ ಇಲಾಖೆಗೆ ಎಷ್ಟು ಹಣ ಮೀಸಲು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಂಡಿಸಿದ 4,09,549 ಕೋಟಿ ರೂ. ದಾಖಲೆ ಗಾತ್ರದ ಬಜೆಟ್‌ನಲ್ಲಿ ಶಿಕ್ಷಣ ಇಲಾಖೆಗೆ ಅತೀ ಹೆಚ್ಚು ಅನುದಾನ ನೀಡಿದ್ದಾರೆ. ಈ ಇಲಾಖೆಗೆ ಅವರು ಬಜೆಟ್‌ನ ಶೇ.10ರಷ್ಟು ಹಣ ಅಂದರೆ ರೂ.34,286 ಕೋಟಿ ನೀಡಿದರೆ, ಪಶುಸಂಗೋಪನೆ ಮತ್ತು ಮೀನುಗಾರಿಕೆಗೆ ಅತೀ ಕಡಿಮೆ ಶೇ.1ರಷ್ಟು ಅಂದರೆ 3,977 ಕೋಟಿ ಮೀಸಲಿಟ್ಟಿದ್ದಾರೆ. ಬಜೆಟ್‌ನಲ್ಲಿ ವಿವಿಧ ಇಲಾಖೆಗಳಿಗೆ ಒದಗಿಸಿರುವ ಅನುದಾನದ ವಿವರ;

■ ಶಿಕ್ಷಣ ಇಲಾಖೆ	– 45,286 ಕೋಟಿ	(10%)
■ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ	– 34,955 ಕೋಟಿ	(8%)
■ ಇಂಧನ	– 26,896 ಕೋಟಿ	(6%)
■ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್	– 26,735 ಕೋಟಿ	(6%)
■ ನೀರಾವರಿ	– 22,181 ಕೋಟಿ	(5%)
■ ನಗರಾಭಿವೃದ್ಧಿ ಮತ್ತು ವಸತಿ	– 21,405 ಕೋಟಿ	(5%)
■ ಒಳಾಡಳಿತ ಮತ್ತು ಸಾರಿಗೆ	– 20,625 ಕೋಟಿ	(5%)
■ ಆರೋಗ್ಯ ಮತ್ತು ಕುಟುಂಬ	– 17,473 ಕೋಟಿ	(4%)
■ ಕಂದಾಯ	– 17,201 ಕೋಟಿ	(4%)
■ ಸಮಾಜ ಕಲ್ಯಾಣ	– 16,955 ಕೋಟಿ	(4%)
■ ಲೋಕೋಪಯೋಗಿ	– 11,841 ಕೋಟಿ	(3%)
■ ಆಹಾರ– ನಾಗರಿಕ ಸರಬರಾಜು	– 8,275 ಕೋಟಿ	(2%)
■ ಕೃಷಿ–ತೋಟಗಾರಿಕೆ	– 7,145 ಕೋಟಿ	(2%)
■ ಪಶುಸಂಗೋಪನೆ–ಮೀನುಗಾರಿಕೆ	– 3,977 ಕೋಟಿ	(1%)
■ ಇತರೆ	– 1,49,857 ಕೋಟಿ	(35%)

ಶಕ್ತಿ ಯೋಜನೆಗೆ 5,300 ಕೋಟಿ ಅನುದಾನ



ಬೆಂಗಳೂರು, ಮಾ.7– ಶಕ್ತಿ ಯೋಜನೆಗೆ ಬಜೆಟ್‌ನಲ್ಲಿ 5,300 ಕೋಟಿ ರೂ. ಅನುದಾನನ್ನು ಮೀಸಲಿಡಲಾಗಿದೆ. ತಮ್ಮ ಬಜೆಟ್ ಭಾಷಣದಲ್ಲಿ ಸಿದ್ದರಾಮಯ್ಯ ಮಹಿಳೆಯರ ಸಬಲೀಕರಣಕ್ಕಾಗಿ ಮತ್ತು ಸಾಮರ್ಥ್ಯ ವೃದ್ಧಿಗಾಗಿ ಪ್ರಪ್ರಥಮವಾಗಿ ಜಾರಿಗೆ ತರಲಾಗಿರುವ 'ಶಕ್ತಿ' ಯೋಜನೆಯಡಿ ಪ್ರಸಕ್ತ ವರ್ಷ ಇದುವರೆಗೆ ಒಟ್ಟು 226.53 ಕೋಟಿ ಮಹಿಳಾ ಪ್ರಯಾಣಿಕರು ಸೌಲಭ್ಯ ಪಡೆದಿರುತ್ತಾರೆ. ಮಹಿಳೆಯರ ಸ್ವಾವಲಂಬನೆ ಮತ್ತು ಆರ್ಥಿಕ ಅಭಿವೃದ್ಧಿಗೆ ಶಕ್ತಿ ತುಂಬಿದ ಈ ಯೋಜನೆಗಾಗಿ 2024–25ನೇ ಸಾಲಿನಲ್ಲಿ 5,015 ಕೋಟಿ ರೂ. ವೆಚ್ಚ ಭರಿಸಲಾಗಿದ್ದು, 2025–26ನೇ ಸಾಲಿಗೆ 5,300 ಕೋಟಿ ರೂ. ಒದಗಿಸಲಾಗಿರುತ್ತದೆ ಎಂದು ತಿಳಿಸಿದರು.

ಮೈಸೂರು ಮಿತ್ರ

ಶನಿವಾರ 8 ಮಾರ್ಚ್ 2025

ಬಜೆಟ್ ಬಗ್ಗೆ ಗಣ್ಯರ ಅಭಿಪ್ರಾಯಗಳು....

ಬಹುತೇಕರ ತುಚ್ಛೀಕರಣ

ಕೆಲವರ ತುಷ್ಟೀಕರಣ!.. ಬಹುತೇಕರ ತುಚ್ಛೀಕರಣ!!.. ಇದು ರಾಜ್ಯ ಕಾಂಗ್ರೆಸ್ ಸರಕಾರದ 2025–26ನೇ ಸಾಲಿನ ಆಯವ್ಯಯದ ಹೂರಣ.

- **ಹೆಚ್.ಡಿ.ಕುಮಾರಸ್ವಾಮಿ,** *ಕೇಂದ್ರ ಸಚಿವ ಹಾಗೂ ಮಂಡ್ಯ ಸಂಸದ*

ಕೊಟ್ಟ ಮಾತಿನಂತೆ ನಡೆದಿದ್ದಾರೆ

ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾನಿಲಯಕ್ಕೆ 25 ಕೋಟಿ ರೂ ಅನುದಾನ ನೀಡುವುದರ ಜತೆಗೆ ಪ್ರಸಕ್ತ ಸಾಲಿನಲ್ಲಿಯೇ ತರಗತಿ ಪ್ರಾರಂಭಕ್ಕೆ ಅನುಮತಿ ನೀಡಿರುವುದು ಜಿಲ್ಲೆಗೆ ಸಿಕ್ಕಂತಹ ದೊಡ್ಡ ಕೊಡುಗೆ. ಈ ನಿಟ್ಟಿನಲ್ಲಿ ಉಸ್ತುವಾರಿ ಸಚಿವ ಎನ್.ಚಲುವ ರಾಯಸ್ವಾಮಿ ಅವರು ಕೊಟ್ಟ ಮಾತಿನಂತೆ ನಡೆದುಕೊಂಡಿದ್ದಾರೆ. ಇದಕ್ಕಾಗಿ ವಿಶೇಷ ಅಭಿನಂದನೆ ಸಲ್ಲಿಸುತ್ತೇವೆ. ಒಟ್ಟಾರೆ ಬಜೆಟ್‌ನಲ್ಲಿ ಕೃಷಿ, ಶಿಕ್ಷಣ, ಮಹಿಳಾ ಸಬಲೀಕರಣ, ಗ್ರಾಮೀಣಾಭಿವೃದ್ಧಿ, ನೀರಾವರಿ, ವಸತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕ್ಷೇತ್ರಕ್ಕೆ ಆದ್ಯತೆ ನೀಡಿ ಅನುದಾನ ಮೀಸಲಿರಿಸಿರುವುದು ಸ್ವಾಗತಾರ್ಹ.

- **ಸಿ.ತ್ಯಾಗರಾಜು,** ತಾ.ಪಂ. ಮಾಜಿ ಅಧ್ಯಕ್ಷ

ಅಧಿಕ ಸಾಲದ ಹೊರೆ

ಅಭಿನಂದನೆಗಳು ಕರ್ನಾಟಕ. ನಿಮ್ಮ ತಲೆಗೆ ಹಣದಿಂದ ತುಷ್ಟೀಕರಣ ರಾಜಕಾರಣಕ್ಕೆ ಫಂಡ್ ನೀಡಿದ್ದೀರಿ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಜೆಟ್ ರಾಜ್ಯಕ್ಕೆ ಒಂದು ಲಕ್ಷ ಕೋಟಿ ಸಾಲದ ಉಡುಗೊರೆ ನೀಡಿದೆ. ಇದು ಪ್ರತಿಯೊಬ್ಬ ಕನ್ನಡಿಗನ ಮೇಲೆ 14, 700ಕ್ಕೂ ಅಧಿಕ ಸಾಲ ಹೊರಿಸಿದೆ. ಆದರೆ ಪ್ಯಾಕೇಜ್‌ಗಳೆಲ್ಲ ಕೇವಲ 'ಬದರ್ಸ್' ಪಾಲಾಗಿದೆ. ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ಅನುದಾನ ನೀಡದಿದ್ದರೂ ತುಷ್ಟೀಕರಣ ರಾಜಕಾರಣಕ್ಕೆ ಅಪಾರ ಅನುದಾನ ಸಿಕ್ಕಿದೆ.

- **ನಿಖಿಲ್ ಕುಮಾರಸ್ವಾಮಿ,** *ರಾಜ್ಯಾಧ್ಯಕ್ಷ, ಜೆಡಿಎಸ್ ಯುವಘಟಕ.*

ಶಿಕ್ಷಣ, ನೀರಿಗೆ ಪೂರಕ ಬಜೆಟ್

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮಂಡಿಸಿದ ಬಜೆಟ್ ಶಿಕ್ಷಣ ಹಾಗೂ ಕಾವೇರಿ ನದಿ ನೀರು ವಿಚಾರದಲ್ಲಿ ಪೂರಕವಾಗಿದೆ. 150 ಸರ್ಕಾರಿ ಶಾಲೆ ಉಳಿಸಲು ಬಜೆಟ್ ನಲ್ಲಿ ಹಣ ಮೀಸಲಿಡಲಾಗಿದೆ. ಇದು ಸ್ವಾಗತದ ವಿಚಾರ. ಬೆಂಗಳೂರಿಗೆ ಕಾವೇರಿ ನೀರು ಕೊಡುವ ಆರನೇ ಹಂತದ ಯೋಜನೆಗೆ ಅನುಮತಿ ನೀಡಿರುವುದು ಸಹ ಒಳ್ಳೆಯ ಸಂಗತಿಯಾಗಿದ್ದು, ಬೆಂಗಳೂರು ನಗರಾಭಿವೃದ್ಧಿ ಜೊತೆಗೆ ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ವಿಶೇಷ ಪ್ಯಾಕೇಜ್ ಕೊಡುವಂತೆ ಮನವಿ ಮಾಡಿದ್ದಾರೆ.

– ಮಂಜುನಾಥ್, ಕನ್ನಡಪರ ಹೋರಾಟಗಾರ

ನಿರುದ್ಯೋಗ, ಸಾಲಬಾಧೆಗೆ ಪರಿಹಾರ ಒದಗಿಸುವಲ್ಲಿ ವಿಫಲ

ರೈತ–ಕೃಷಿ ಕೂಲಿಕಾರರ ಆತ್ಮಹತ್ಯೆಗಳು, ವಲಸೆ–ಮರುವಲಸೆ ಸಂಕಟಗಳು, ತೀವ್ರ ಗತಿಯಲ್ಲಿ ಹೆಚ್ಚುತ್ತಿರುವ ಗ್ರಾಮೀಣ ನಿರುದ್ಯೋಗ ಮತ್ತು ಸಾಲಭಾಧೆಗೆ ಪರಿಹಾರ ಒದಗಿಸುವಲ್ಲಿ 2025–26 ರ ಈ ಬಜೆಟ್ ವಿಫಲವಾಗಿದೆ. ನವ ಉದಾರೀಕರಣ ನೀತಿಗಳಿಗೆ ಮಣೆ ಹಾಕಿರುವ ಈ ಬಜೆಟ್ ಕೂಡ ಕೃಷಿ ಉತ್ಪಾದನೆ ಹಾಗೂ ಕೃಷಿ ಭೂಮಿ ರಕ್ಷಣೆಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ.

ಸಾಲಭಾಧೆಗೆ ತುತ್ತಾಗಿರುವ ಹಾಗೂ ಕೃಷಿ ಉತ್ಪನ್ನಗಳ ಬೆಲೆ ಕುಸಿತದಿಂದ ಕಂಗೆಟ್ಟಿರುವ ರೈತ ಸಮುದಾಯಗಳಿಗೆ ಯಾವುದೇ ಪರಿಣಾಮಕಾರಿ ಪರಿಹಾರ ಒದಗಿಸಿಲ್ಲ. ಕೃಷಿಕರ ಆದಾಯ ಮತ್ತು ಜೀವನ ಭದ್ರತೆ ಹಾಗೂ ಕೃಷಿ ಉತ್ಪಾದನೆಯುಲ್ಲಿ ಗಣನೀಯ ಕೊಡುಗೆ ನೀಡುತ್ತಿರುವ ಬಗರ್ ಹುಕುಂ, ಅರಣ್ಯ ಸಾಗುವಳಿ, ಗೇಣಿ ರೈತರ ಕಲ್ಯಾಣವನ್ನು ಮತ್ತು ಅವರ ಹಕ್ಕು ಪತ್ರದ ಹಕ್ಕು ಅನ್ನು ನಿರ್ಲಕ್ಷಿಸಲಾಗಿದೆ. ಬಲವಂತದ ಭೂ ಸ್ವಾಧೀನದ ವಿರುದ್ಧ ರಕ್ಷಣೆ ನೀಡುವಂತೆ, ಕೃಷಿ ಪಂಪ್ ಸೆಟ್ ಗಳಿಗೆ ಸ್ಮಾರ್ಟ್ ಮೀಟರ್, ಪ್ರೀಪೇಡ್ ಮೀಟರ್ ಅಳವಡಿಸುವ ಕೇಂದ್ರದ ವಿದ್ಯುತ್ ಖಾಸಗೀಕರಣ ನೀತಿಗೆ ನಿರಾಕರಣೆ,ಕೃಷಿ ಉತ್ಪನ್ನಗಳನ್ನು ಕನಿಷ್ಠ ಬೆಂಬಲ ಬೆಲೆಯಲ್ಲಿ ಖಾತರಿ ಖರೀದಿಗೆ ವ್ಯವಸ್ಥೆ, ಸಾಲಭಾಧೆಯಿಂದ ಆತ್ಮಹತ್ಯೆಗೆ ತುತ್ತಾಗದಂತೆ ಕೇರಳ ಮಾದರಿಯಲ್ಲಿ ಋಣಮುಕ್ತ ಕಾಯ್ದೆ ಜಾರಿ ಮಾಡುವಂತೆ, ಕೈಗಾರಿಕಾ ಪ್ರದೇಶಾಭಿವೃದ್ಧಿ ಹೆಸರಿನಲ್ಲಿ ಭೂ ಮಾಫಿಯಾದ ಚಟುವಟಿಕೆಗಳನ್ನು ನಿಯಂತ್ರಿಸಿ ಕೃಷಿ ಭೂಮಿಯ ಕಾರ್ಪೊರೇಟ್ ಲೂಟಿ ತಡೆಯುವಂತೆ, ಗ್ರಾಮೀಣ ಜನತೆ ಭೂ ಹೀನತೆ ಹಾಗೂ ವಸತಿ ಹೀನತೆಗೆ ನಿವಾರಿಸುವಂತೆ ಬಜೆಟ್ ಪೂರ್ವದಲ್ಲಿ ತೀವ್ರ ಪ್ರತಿಭಟನೆ ಮೂಲಕ ಒತ್ತಾಯಿಸಿದ್ದರೂ ಈ ಬಜೆಟ್ ತೀವ್ರವಾಗಿ ಕಡೆಗಣಿಸಿದೆ.

- **ಎನ್.ಎಲ್.ಭರತ್‌ರಾಜ್,** *ಜಿಲ್ಲಾ ಸಂಚಾಲಕರು, ಕರ್ನಾಟಕ ಪ್ರಾಂತ ರೈತ ಸಂಘ. ಮಂಡ್ಯ ಜಿಲ್ಲೆ.*


ಸಿದ್ದು ಬಜೆಟ್‌ನಲ್ಲಿ ಮಂಡ್ಯಗೆ ಸಿಕ್ಕಿದ್ದಿಷ್ಟು; ರಸ್ತೆಗಳ ಅಭಿವೃದ್ಧಿ, ಕುಡಿಯುವ ನೀರಿಗೆ ಆದ್ಯತೆ

ವಿ.ಸಿ.ಫಾರಂ ಕೃಷಿ ವಿವಿಗೆ ಮೂಲ ಸೌಕರ್ಯ ಕಲ್ಪಿಸಲು 25 ಕೋಟಿ ಮೀಸಲು



ಮಂಡ್ಯ, ಮಾ.7– ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ರಾಜ್ಯ ಬಜೆಟ್ ನಲ್ಲಿ ಮಂಡ್ಯ ಜಿಲ್ಲೆಯ ಅಭಿವೃದ್ಧಿ ಹಿತದೃಷ್ಟಿಯಿಂದ ಸಾಕಷ್ಟು ನಿರೀಕ್ಷೆಯನ್ನು ಇಟ್ಟುಕೊಳ್ಳಲಾಗಿತ್ತು. ಆದರೆ ಬಜೆಟ್‌ನಲ್ಲಿ ಕೆಲ ನಿರೀಕ್ಷೆಗಳು ಹುಸಿಯಾದರೆ, ಕೆಲವು ಕಾರ್ಯಗತವಾಗಿವೆ.

ವಿವಿ ಅಭಿವೃದ್ಧಿಗೆ 25 ಕೋಟಿ: ಮಂಡ್ಯ ತಾಲ್ಲೂಕಿನ ವಿ.ಸಿ.ಫಾರಂನಲ್ಲಿರುವ ಕೃಷಿ ಕಾಲೇಜು ಬೆಂಗಳೂರಿನ ಜಿಕೆವಿಕೆ ಸುಪರ್ದಿಯಲ್ಲಿತ್ತು. ಇತ್ತೀಚೆಗೆ ಅದನ್ನು ಬೇರ್ಪಡಿಸಿ, ನೂತನ ಕೃಷಿ ವಿಶ್ವ ವಿದ್ಯಾನಿಲಯವನ್ನಾಗಿ ರಾಜ್ಯ ಸರ್ಕಾರ ಘೋಷಿಸಿ ಅನುಮೋದನೆ ಸಹ ನೀಡಿತ್ತು. ಇದೀಗ ನೂತನ ವಿಶ್ವ ವಿದ್ಯಾನಿಲಯಕ್ಕೆ ಮೂಲಸೌಕರ್ಯ ಕಲ್ಪಿಸಲು 25 ಕೋಟಿ ರೂ. ಒದಗಿಸಿ, ಪ್ರಸಕ್ತ ಸಾಲಿನಲ್ಲಿ ತರಗತಿಗಳನ್ನು ಆರಂಭಿಸಲಾಗುವುದೆಂದು ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಿಸಿದ್ದಾರೆ.



ಜಿಲ್ಲೆಯಲ್ಲಿ ಮೂಲ ಸೌಕರ್ಯಕ್ಕೆ ಒತ್ತು: ಮಂಡ್ಯ ಜಿಲ್ಲೆಯಲ್ಲಿ ಒಟ್ಟಾರೆ ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಸಮಗ್ರ ಮಣ್ಣು ಮತ್ತು ನೀರಿನ ನಿರ್ವಹಣೆ, ಸಮರ್ಪಕ ತ್ಯಾಜ್ಯ ನಿರ್ವಹಣೆ, ನೀರಿನ ಬಳಕೆ ಮತ್ತು ಸಮತೋಲನ ಪೋಷಕಾಂಶ ನಿರ್ವಹಣೆಯನ್ನು, ಸಕ್ಕರೆ ಕಾರ್ಖಾನೆಗಳ ಸಹಯೋಗದೊಂದಿಗೆ ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿಗಳು ಘೋಷಿಸಿದ್ದಾರೆ.

ರಸ್ತೆಗಳ ಅಭಿವೃದ್ಧಿ: K-SHIP-4 ಯೋಜನೆಯಡಿ ಜಿಲ್ಲೆಯ ಹಲವು ಭಾಗಗಳ ರಸ್ತೆ ಅಭಿವೃದ್ಧಿಗೆ ಅನುಮೋದನೆ ನೀಡಿದ್ದು, ಮಳವಳ್ಳಿ–ಬವಲಿ (ಕೇರಳ ಗಡಿ) (ಬನ್ನೂರು, ಹೆಚ್.ಡಿ.ಕೋಟೆ ಮಾರ್ಗ)–141 ಕಿ.ಮೀ, ಶ್ರೀರಂಗಪಟ್ಟಣ (ಪಾಂಡವಪುರ ರೈಲ್ವೆ ನಿಲ್ದಾಣ)– ಬಿಎಮ್. ರೋಡ್ ಜಂಕ್ಷನ್ ಚನ್ನರಾಯಪಟ್ಟಣ (ಕೆ.ಆರ್.ಪೇಟೆ ಮಾರ್ಗ)–63 ಕಿ.ಮೀ ರಸ್ತೆಯ ಅಭಿವೃದ್ಧಿ ಪಡಿಸಲಾಗುವುದೆಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ಕುಡಿಯುವ ನೀರಿನ ಯೋಜನೆ: ಅಮೃತ್–2.0 ಯೋಜನೆಯಡಿಯಲ್ಲಿ 233 ಕುಡಿಯುವ ನೀರು ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿದ್ದು, ಇದರೊಂದಿಗೆ, 142 ಕೋಟಿ ರೂ. ವೆಚ್ಚದಲ್ಲಿ ಶ್ರೀರಂಗಪಟ್ಟಣ ಸೇರಿದಂತೆ ರಾಜ್ಯದ ಎಂಟು ಪಟ್ಟಣಗಳಿಗೆ ಒಳಚರಂಡಿ ಯೋಜನೆಯನ್ನು ಕಲ್ಪಿಸುವ ಗುರಿಯನ್ನು ಹೊಂದಲಾಗಿದೆ.

ಅನ್ಯ ಧರ್ಮಕ್ಕೆ ಮಗನ ಮತಾಂತರಕ್ಕೆ ಪತ್ನಿ ಕುಟುಂಬಸ್ಥರಿಂದ ಯತ್ನ ಆರೋಪ

ದೂರು ತೆಗೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿ ಠಾಣೆ ಮುಂದೆ ಪ್ರತಿಭಟನೆ



ಠಾಣೆ ಮುಂದೆ ಪ್ರತಿಭಟನೆ ನಡೆಸುತ್ತಿರುವುದು.

ಮದ್ದೂರು, ಮಾ.7– ಅನ್ಯ ಧರ್ಮಕ್ಕೆ ತನ್ನ ಮಗನನ್ನು ಮತಾಂತರ ಮಾಡಲು ಪತ್ನಿ ಕುಟುಂಬಸ್ಥರು ಯತ್ನಿಸುತ್ತಿದ್ದಾರೆಂದು ಆರೋಪಿಸಿ, ಈ ಬಗ್ಗೆ ಪೊಲೀಸರು ಸಹ ದೂರು ತೆಗೆದುಕೊಳ್ಳದೇ ಮೀನಾಮೇಷ ಎಣಿಸುತ್ತಿದ್ದಾರೆಂದು ಮದ್ದೂರು ಪಟ್ಟಣದ ನಿವಾಸಿ ವೆಂಕಟೇಶ್ ಎಂಬಾತ ಹಿಂದೂ ಪರ ಕಾರ್ಯಕರ್ತರೊಂದಿಗೆ ಮದ್ದೂರು ಟೌನ್ ಠಾಣೆ ಮುಂದೆ ಪ್ರತಿಭಟನೆ ನಡೆಸಿದ ಘಟನೆ ಶುಕ್ರವಾರ ರಾತ್ರಿ ನಡೆದಿದೆ.

ಮದ್ದೂರು ಟೌನ್ ನಿವಾಸಿ ವೆಂಕಟೇಶ್ ಎಂಬಾತ 2018ರಲ್ಲಿ ಕೊಡಗು ಜಿಲ್ಲೆಯ ಸೋಮವಾರಪೇಟೆ ನಿವಾಸಿ ಆರೀಫಾ ಎಂಬಾಕೆಯನ್ನು ಪ್ರೀತಿಸಿ ವಿವಾಹವಾಗಿದ್ದರು. ದಂಪತಿಗೆ ಒಂದು ಗಂಡು ಮಗು ಸಹ ಇತ್ತು. ಮದುವೆಯಾದ ಬಳಿಕ ವೆಂಕಟೇಶ್ ಪತ್ನಿ ಆರೀಫಾ ಹಿಂದೂ ಧರ್ಮಕ್ಕೆ ಮತಾಂತರವಾಗಿ ಹೆಸರನ್ನು ಖುಷಿ ಎಂದು ಬದಲಿಸಿಕೊಂಡಿದ್ದರಂತೆ. ವೆಂಕಟೇಶ್ ಜೊತೆಗೆ ಅನ್ಯೋನ್ಯವಾಗಿದ್ದ ಖುಷಿ ಕಳೆದ ಒಂದೂವರೆ ತಿಂಗಳಿನ ಹಿಂದೆ ಖುಷಿ ಆರೋಗ್ಯ ಸರಿ ಇಲ್ಲವೆಂದು ಸೋಮವಾರಪೇಟೆಯ ತನ್ನ ತಾಯಿ ಮನೆಗೆ ಹೋಗಿದ್ದಳು. ಈ ಸಂದರ್ಭದಲ್ಲಿ ಫೋನ್ ಸ್ವಿಚ್ ಆಫ್ ಮಾಡಿಕೊಂಡಿದ್ದರಿಂದ ವೆಂಕಟೇಶ್ ಖುಷಿಯನ್ನು ಸಂಪರ್ಕ ಮಾಡಲು ಅಗುತ್ತಿರಲಿಲ್ಲ. ಜೊತೆಗೆ ತಮ್ಮ ಪುತ್ರನನ್ನು ಖುಷಿ ಮನೆಯವರು ಅನ್ಯ ಧರ್ಮಕ್ಕೆ ಮತಾಂತರ ಮಾಡುತ್ತಿದ್ದಾರೆಂಬ ಮಾಹಿತಿ ಬಂದಿದ್ದರಿಂದ ಜೊತೆಗೆ ಅವರ ಕುಟುಂಬಸ್ಥರು ತಮ್ಮ ಪುತ್ರನ ಮೇಲೆ ಹಲ್ಲೆಗೆ ಮುಂದಾಗಿದ್ದಾರೆಂದು ಆರೋಪಿಸಿ ವೆಂಕಟೇಶ್ ಇಂದು ದೂರು ಕೊಡಲು ಮದ್ದೂರು ಟೌನ್ ಠಾಣೆಗೆ ಅಗಮಿಸಿದ್ದರು.

ಆದರೆ ಪೊಲೀಸರು ದೂರನ್ನು ತೆಗೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿ, ವೆಂಕಟೇಶ್ ಮದ್ದೂರಿನ ಹಿಂದೂಪರ ಕಾರ್ಯಕರ್ತ ರೊಡನೆ ಠಾಣೆ ಮುಂದೆ ಧರಣಿಗೆ ಕುಳಿತ ತರುವಾಯ ಮದ್ದೂರು ಟೌನ್ ಪೊಲೀಸರು ದೂರು ದಾಖಲಿಸಿಕೊಂಡು ಖುಷಿ@ಆರೀಫಾ ಕುಟುಂಬಸ್ಥರ ವಿರುದ್ದ ಎಫ್‌ಐಆರ್ ದಾಖಲಿಸಿಕೊಂಡ ಹಿನ್ನಲೆಯಲ್ಲಿ ಪ್ರತಿಭಟನೆಯನ್ನು ಹಿಂಪಡೆಯಲಾಗಿದೆ.

ಜಿಲ್ಲೆಯಲ್ಲಿ ಕೋಳಿ ಜ್ವರದ ಬಗ್ಗೆ ಆತಂಕ ಬೇಡ

ಮಂಡ್ಯ, ಮಾ.7– ರಾಜ್ಯದ ಕೆಲವು ಭಾಗಗಳಲ್ಲಿ ಹಕ್ಕಿಜ್ವರ ವರದಿಯಾಗಿದ್ದು, ಮಂಡ್ಯ ಜಿಲ್ಲೆಯಲ್ಲಿ ಯಾವುದೇ ಪ್ರಕರಣ ವರದಿಯಾಗಿರುವುದಿಲ್ಲ. ಕೋಳಿ ಸಾಕಾಣಿಕೆದಾರರು ಹಕ್ಕಿ ಜ್ವರ ಹರಡದಂತೆ ಪಶುಸಂಗೋಪನಾ ಇಲಾಖೆ ಅವರು ಹೊರಡಿಸಿರುವ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದರು.



ಕೋಳಿ ಜ್ವರ ನಿಯಂತ್ರಣ ಸಂಬಂಧ ಸಮನ್ವಯ ಸಮಿತಿ ಸಭೆ ನಡೆಯಿತು.

ತಮ್ಮ ಕಚೇರಿಯಲ್ಲಿ ನಡೆದ ಕೋಳಿ ಜ್ವರ ನಿಯಂತ್ರಣ ಸಂಬಂಧ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೋಳಿ ಶೀತ ಜ್ವರ ತಗುಲಿದ ಪಕ್ಷಿಯು ಶ್ವಾಸೇಂದ್ರಿಯ, ಕಣ್ಣಿನ ಕೊಡ್ಪರೆ ಮತ್ತು ಹಿಕ್ಕೆಗಳಿಂದ ವೈರಸ್ ನ್ನು ಹೊರ ಹಾಕುತ್ತದೆ. ಇದರಿಂದ ಒಂದು ಪಕ್ಷಿಯಿಂದ ಇನ್ನೊಂದು ಪಕ್ಷಿಗೆ ರೋಗ ಹರಡುತ್ತದೆ ಎಂದರು.

ಮಂಡ್ಯ ಜಿಲ್ಲೆಯಲ್ಲಿ ಹಾಲಿ ಕಾರ್ಯ ನಿರ್ವಹಣೆಯಲ್ಲಿರುವ 420 (ಮಾಂಸದ) ಬ್ರಯ್ಲರ್ ಕೋಳಿ ಫಾರಂಗಳಲ್ಲಿ– 2519050 ಕೋಳಿಗಳು ಹಾಗೂ 23 ಮೊಟ್ಟೆ ಕೋಳಿ ಫಾರಂಗಳಲ್ಲಿ– 526500, ಮನೆಯಲ್ಲಿ ಸಾಕುವ ಕೋಳಿಗಳು–599333 ಕೋಳಿಗಳು ಇರುತ್ತದೆ. ಇವುಗಳ ಬಗ್ಗೆ ಆಯಾ ತಾಲೂಕಿನಲ್ಲಿ ನಿಗಾ ವಹಿಸಲು ತಂಡ ರಚಿಸಿ ಎಂದರು. ಇದಲ್ಲದೇ ಸಾಕಾಣಿಕೆಯ ವಿಭಾಗಕ್ಕೆ ಬಾರದೆ ಇರುವ ಕಾಡು ಪಕ್ಷಿಗಳು, ಕೆರೆ ಕಟ್ಟೆ ಪಕ್ಷಿಧಾಮದ ಬಳಿ ವಾಸಿಸುವ ಪಕ್ಷಿಗಳಲ್ಲಿ ರೋಗದ ಲಕ್ಷಣ ಅಥವಾ ಕೋಳಿ ಜ್ವರ ಕಂಡು ಬಂದಲ್ಲಿ ತಕ್ಷಣ ಕ್ರಮವಹಿಸಲು ತಂಡಗಳನ್ನು ರಚಿಸಿ ಎಂದರು.

ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿ ಕೊಡಬೇಡಿ, ಕೋಳಿ ಮಾಂಸವನ್ನು ಚೆನ್ನಾಗಿ ಬೇಯಿಸಿ ತಿನ್ನಬಹುದು ಎಂದು ತಿಳಿಸಿದರು. ಕೋಳಿ ಫಾರಂನಲ್ಲಿ ಕೆಲಸ ನಿರ್ವಹಿಸುವ ಕೆಲಸಗಾರರು ಕೋಳಿಗಳ ಜೊತೆ ನಿಕಟ ಸಂಪರ್ಕದಲ್ಲಿರುತ್ತಾರೆ ಅವರಿಗೆ ಕೋಳಿ ಜ್ವರದ ಬಗ್ಗೆ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿ ಎಂದರು.

ಜಿಲ್ಲೆಯಲ್ಲಿ ಯಾವುದೇ ಕೋಳಿ ಜ್ವರ ಪ್ರಕರಣಗಳು ದಾಖಲಾದರೆ ಅವುಗಳನ್ನು ವೈಜ್ಞಾನಿಕ ವಿಧಾನದಿಂದ ಮಣ್ಣು ಮಾಡುವುದಕ್ಕೆ ಜಿಲ್ಲಾಡಳಿತ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಂಡಿದೆ, ಕೋಳಿಜ್ವರ ಪತ್ತೆಯಾದ ಜಾಗದಿಂದ 1 ಕಿ.ಮೀ ವ್ಯಾಪ್ತಿಯನ್ನು ಇನ್ಫೆಕ್ಟೆಡ್ ಜೋನ್ ಎಂದು ಪರಿಗಣಿಸಲಾಗುವುದು ಎಂದು ಹೇಳಿದರು.

ಇನ್ಫೆಕ್ಟೆಡ್ ಜೋನ್‌ನಲ್ಲಿ ಯಾವುದೇ ಪಕ್ಷಿಗಳು ಇರದಂತೆ ಹಾಗೂ ಬಾರದಂತೆ ಕ್ರಮ ವಹಿಸಲಾಗುವುದು, ಜಿಲ್ಲೆಯಲ್ಲಿ ಈಗಾಗಲೇ ವಿಶೇಷ ತಂಡಗಳನ್ನು ರಚಿಸಿ, ಜಿಲ್ಲೆಯ ಎಲ್ಲಾ ಕೋಳಿ ಫಾರಂ ವಿವರಗಳನ್ನು ತೆಗೆದುಕೊಳ್ಳಲಾಗಿದೆ, ಫಾರಂ ಮಾಲೀಕರು ಕೋಳಿಗಳು ಅನುಮಾನಾಸ್ಪದವಾಗಿ ಸತ್ತು ಹೋದರೆ ಕೂಡಲೇ ಅಧಿಕಾರಿಗಳ ಗಮನಕ್ಕೆ ತರುವಂತೆ ಸೂಚಿಸಲಾಗಿದೆ ಎಂದರು.

ಸಭೆಯಲ್ಲಿ ಅಪರ ಪೋಲಿಸ್ ವರಿಷ್ಠಾಧಿಕಾರಿ ಗಂಗಾಧರಸ್ವಾಮಿ, ಜಿಲ್ಲಾ ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಕೆ. ಮೋಹನ್, ಪಶು ವೈದ್ಯಾಧಿಕಾರಿ ಡಾ ಸುರೇಶ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಅಣ್ಣೂರು ಗ್ರಾಪಂನಲ್ಲಿ ಇಂದು ಮಹಿಳಾ ಸ್ನೇಹಿ ಗ್ರಾಪಂ ಅಭಿಯಾನ

ಭಾರತೀನಗರ, ಮಾ.7– ಮಹಿಳಾ ದಿನಾಚರಣೆಯ ಅಂಗವಾಗಿ ಮಾ.8 ರಂದು ಅಣ್ಣೂರು ಗ್ರಾಪಂನಲ್ಲಿ ಮಹಿಳಾ ಸ್ನೇಹಿ ಗ್ರಾಮಪಂಚಾಯಿತಿ ಅಭಿಯಾನ ಕಾರ್ಯಕ್ರಮವನ್ನು ಹದಿನಾರು ವಾರಗಳ ಕಾಲ ಹಮ್ಮಿಕೊಳ್ಳಲಾಗಿದೆ ಎಂದು ಅಣ್ಣೂರು ಗ್ರಾ ಪಂ ಅಭಿವೃದ್ಧಿ ಅಧಿಕಾರಿ ಅಶ್ವಿನಿ ತಿಳಿಸಿದ್ದಾರೆ.



ಅಧಿಕಾರ ವಿಕೇಂದ್ರೀಕರಣ ಹಾಗೂ ಆಡಳಿತದಲ್ಲಿ ಜನಸಹಭಾಗಿತ್ವಕ್ಕೆ ಒತ್ತು ನೀಡಲು ರೂಪುಗೊಂಡಿರುವ ಪಂಚಾಯತ್ ರಾಜ್ ಸಂಸ್ಥೆಗಳ ಆಡಳಿತದಲ್ಲಿ ಮಹಿಳೆಯರ ಸಹಭಾಗಿತ್ವಕ್ಕೆ ಪ್ರೇರಣೆ ಹಾಗೂ ಖಾತರಿ ಪಡಿಸಲು ಮಹಿಳಾ ಸ್ನೇಹಿ ಗ್ರಾಪಂ ಅಭಿಯಾನವನ್ನು ಹಮ್ಮಿಕೊಂಡಿರುವುದಾಗಿ ತಿಳಿಸಿದ್ದಾರೆ.

ಮೂರನೇ ಪುಟದಿಂದ

ಸಿದ್ಧತಾ ಕಾರ್ಯ ಅಂತಿಮ: ಸಿಎಂ

ತಿದ್ದುಪಡಿ ಮಾಡಿ ಜಾರಿಗೊಳಿಸಲಾಗಿದೆ. ಎತ್ತಿನ ಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ನೀರನ್ನು ಮೇಲೆತ್ತಿ ಗುರುತ್ವಾ ಕಾಲುವೆಯ ಸರಪಳಿ 32.5 ಕಿ.ಮೀ.ವರೆಗೆ ಹರಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಎಂಟು ವಿಯರ್‌ಗಳಲ್ಲಿ ಲಭ್ಯವಾಗುವ ನೀರನ್ನು ಗುರುತ್ವಾ ಕಾಲುವೆಯ ಸರಪಳಿ 241 ಕಿ.ಮೀ.ವರೆಗೆ ಹರಿಸಲಾಗುವುದು. ಈ ಯೋಜನೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುವುದು.

ಪ್ರಸಕ್ತ ಸಾಲಿನಲ್ಲಿ 2,611 ಕೋಟಿ ರೂ. ಅಂದಾಜು ಮೊತ್ತದ ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿಗಳನ್ನು ಪೂರ್ಣಗೊಳಿಸುವ ಮೂಲಕ ಹೊಸದುರ್ಗ, ಹೊಳಲ್ಕೆರೆ, ಜಗಳೂರು, ಮೊಳಕಾಲ್ಮೂರು, ಚಳ್ಳಕೆರೆ ಮತ್ತು ಪಾವಗಡ ತಾಲೂಕುಗಳಲ್ಲಿನ 30 ಕೆರೆಗಳನ್ನು ತುಂಬಿಸಿ ಒಂದು ಲಕ್ಷದ ಎಪ್ಪತ್ತೇಳು ಸಾವಿರ ಎಕರೆ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗುವುದು.

ಕೃಷ್ಣ ಮೇಲ್ದಂಡೆ ಯೋಜನೆ ಹಂತ–3ರ ವ್ಯಾಪ್ತಿಯ ಆಲಮಟ್ಟಿ ಅಣೆಕಟ್ಟೆಯ ಗೇಟನ್ನು 524.256 ಮೀಟರ್‌ವರೆಗೆ ಎತ್ತರಿಸುವುದರಿಂದ ಮುಳುಗಡೆಯಾಗುವ ಜಮೀನುಗಳನ್ನು ಒಪ್ಪಂದ ಐತೀರ್ಪಿನ ಮುಖಾಂತರ ಒಂದೇ ಹಂತದಲ್ಲಿ ಭೂಸ್ವಾಧೀನ ಪಡಿಸಿಕೊಂಡು ರೈತರಿಗೆ ಪರಿಹಾರ ವಿತರಣೆಗೆ ಕ್ರಮ ವಹಿಸಲಾಗುವುದು, ಅಲ್ಲದೇ, 2.01 ಲಕ್ಷ ಎಕರೆ ನೀರಾವರಿ ಸಾಮರ್ಥ್ಯ ಕಲ್ಪಿಸುವ ಬಾಕಿ ಕಾಮಗಾರಿಗಳ ಅನುಷ್ಠಾನಕ್ಕೆ ಕ್ರಮವಹಿಸಲಾಗುವುದು.

ಜಲಸಂಪನ್ಮೂಲ ಇಲಾಖೆಯಲ್ಲಿ ಕಾಮಗಾರಿಗಳ ಅಂದಾಜು ತಯಾರಿಕೆಯಲ್ಲಿ ಏಕರೂಪ ತಾಂತ್ರಿಕ ಮಾನದಂಡಗಳನ್ನು ಜಾರಿಗೊಳಿಸಲಾಗುವುದು. ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನಿಂದಾಗಿ ನೀರಿನ ಸಂಗ್ರಹಣೆಯಲ್ಲಿ ಆಗಿರುವ ಕೊರತೆ ಸರಿದೂಗಿಸಲು ಕೊಪ್ಪಳ ಜಿಲ್ಲೆಯಲ್ಲಿ ನವಲಿ ಸಮತೋಲನಾ ಜಲಾಶಯ ನಿರ್ಮಾಣ ಸೇರಿದಂತೆ ಪರ್ಯಾಯ ಮಾರ್ಗೋಪಾಯಗಳ ಬಗ್ಗೆ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಚರ್ಚಿಸಿ ಅಂತಿಮಗೊಳಿಸಲಾಗುವುದು. ರಾಜ್ಯದ ಪ್ರಮುಖ ಅಣೆಕಟ್ಟೆ ಗೇಟುಗಳ ಸದೃಢತೆಯನ್ನು ತಾಂತ್ರಿಕ ಪರಿಶೀಲನೆಗೊಳಪಡಿಸಿ ಅಗತ್ಯ ಕಂಡುಬಂದಲ್ಲಿ ಗೇಟುಗಳ ದುರಸ್ತಿ ಮತ್ತು ಬದಲಾಯಿಸಲು ಆದ್ಯತೆ ಮೇಲೆ ಕ್ರಮವಹಿಸಲಾಗುವುದು. ಎತ್ತಿನಹೊಳೆ ಯೋಜನೆಯಿಂದ ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ 45 ಕೆರೆಗಳನ್ನು ಹಾಗೂ ಕೊರಟಗೆರೆ ತಾಲ್ಲೂಕಿನ 62 ಕೆರೆಗಳನ್ನು ತುಂಬಿಸಿ ಅಂತರ್ಜಲ ಹೆಚ್ಚಿಸುವ ಯೋಜನೆಯನ್ನು 553 ಕೋಟಿ ರೂ. ಮೊತ್ತದಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು, ಅಲ್ಲದೆ, ಪ್ರಗತಿಯಲ್ಲಿರುವ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ ಸಣ್ಣ ನೀರಾವರಿ ಯೋಜನೆಗಳಾದ ಕೆರೆಗಳ ಆಧುನೀಕರಣ, ಅಣೆಕಟ್ಟು ಮತ್ತು ಪಿಕಪ್, ಕಿಂಡಿ ಅಣೆಕಟ್ಟು, ಏತ ನೀರಾವರಿ, ನಿಷ್ಕ್ರಿಯ ಯೋಜನೆಗಳ ಪುನರುಜ್ಜೀವನ ಇತ್ಯಾದಿ ಯೋಜನೆಗಳಡಿ ಒಟ್ಟಾರೆ 2,000 ಕೋಟಿ ರೂ. ಮೊತ್ತದ ಹೊಸ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಅಭಿವೃದ್ಧಿಗೂ ಆದ್ಯತೆ

ನೀಡಲಾಗಿದೆ. ಹೀಗಾಗಿ ಇನ್ನೂ ಹೆಚ್ಚಿನ ಸಾಲದೊಂದಿಗೆ 4,09,549 ಕೋಟಿ ರೂ. ಮೊತ್ತದ ಆಯವ್ಯಯ ಮಂಡಿಸಿದ್ದಾರೆ. ಕರ್ನಾಟಕವು ಭಾರತದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರಾಜ್ಯಗಳಲ್ಲಿ ಒಂದಾಗಿದೆ, ಇದು ರಾಷ್ಟ್ರೀಯ ಒಟ್ಟು ದೇಶೀಯ ಉತ್ಪನ್ನಕ್ಕೆ (ಜಿಡಿಪಿ) ಶೇ. 8.4ರಷ್ಟು ಕೊಡುಗೆ ನೀಡುತ್ತದೆ. ಇದು 2024–25ನೇ ಸಾಲಿನಲ್ಲಿ ತನ್ನ ಪ್ರಭಾವಶಾಲಿ ಬೆಳವಣಿಗೆಯ ಪಥವನ್ನು ಮುಂದುವರೆಸಿದೆ ಮತ್ತು ಶೇ. 7.4 ರಷ್ಟು ಜಿಎಸ್‌ಡಿಪಿ ಬೆಳವಣಿಗೆಯ ದರವನ್ನು ಸಾಧಿಸಲು ಸಜ್ಜಾಗಿದೆ. ಇದು ರಾಷ್ಟ್ರೀಯ ಬೆಳವಣಿಗೆಯ ದರ ಶೇ. 6.4 ಕ್ಕಿಂತ ಹೆಚ್ಚಾಗಿದೆ ಎಂದು ಸಿಎಂ ಒತ್ತಿ ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿಗಳು ಅಭಿವೃದ್ಧಿಯನ್ನು ತಿಂದು ಹಾಕುತ್ತಿವೆ ಎಂದು ದೂರುತ್ತಿದ್ದ ಆಡಳಿತಾರೂಢ ಕಾಂಗ್ರೆಸ್ ಮತ್ತು ವಿರೋಧ ಪಕ್ಷಗಳ ಶಾಸಕರನ್ನು ಸಮಾಧಾನಪಡಿಸುವ ಯತ್ನದಲ್ಲಿ ಸಿಎಂ ಸಿದ್ದರಾಮಯ್ಯ ಅವರು 8,000 ಕೋಟಿ ರೂ.ಗಳ ಸಿಎಂ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮ ಎಂಬ ಹೊಸ ಯೋಜನೆಯನ್ನು ಘೋಷಿಸಿದ್ದಾರೆ.

ಈ ಯೋಜನೆಯು ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಸಣ್ಣ ನೀರಾವರಿ, ರಸ್ತೆಗಳು ಮತ್ತು ನಗರ ಮೂಲಸೌಕರ್ಯಗಳ ಮೇಲೆ ಕೇಂದ್ರೀಕರಿಸುವ ಮೂಲಕ ರಾಜ್ಯಾದ್ಯಂತ ಸಮತೋಲಿತ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ. ಇನ್ನು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಘೋಷಿಸಿದ ಸಿಎಂ, ರಾಜಧಾನಿ ಬೆಂಗಳೂರಿನ ಅಭಿವೃದ್ಧಿಗಾಗಿ ದೇವನಹಳ್ಳಿಯವರೆಗೆ ಮೆಟ್ರೋ ರೈಲು ಯೋಜನೆಯ ವಿಸ್ತರಣೆ ಸೇರಿದಂತೆ ಬಂಪರ್ ಕೊಡುಗೆ ನೀಡಿದ್ದಾರೆ.

ಈ ಬಜೆಟ್‌ನಲ್ಲಿ ಶಿಕ್ಷಣ ಇಲಾಖೆಗೆ 45,286 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಹಾಗೆಯೇ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 34,955 ಕೋಟಿ, ಇಂಧನ ಇಲಾಖೆಗೆ 26,896 ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್‌ಗೆ 26,735 ಕೋಟಿ, ನೀರಾವರಿ ಇಲಾಖೆಗೆ 22,181 ಕೋಟಿ, ನಗರಾಭಿವೃದ್ಧಿ ಮತ್ತು ವಸತಿ ಇಲಾಖೆಗೆ 21,405 ಕೋಟಿ ಹಾಗೂ ಒಳಾಡಳಿತ ಮತ್ತು ಸಾರಿಗೆ ಇಲಾಖೆಗೆ 20,625 ಕೋಟಿ ಹಣ ಮೀಸಲಿಡಲಾಗಿದೆ.

ಹೀಗೆ ಎಲ್ಲ ಇಲಾಖೆಗಳಿಗೂ ಅನುಕೂಲಕ್ಕೆ ಅನುಗುಣವಾಗಿ ಬಜೆಟ್ ಹಂಚಿಕೆ ಮಾಡಲಾಗಿದೆ. ಹೊಸ ಯೋಜನೆ, ನೂತನ ಘೋಷಣೆಗಳೊಂದಿಗೆ ಸರ್ಕಾರ ಸಮಗ್ರ ರಾಜ್ಯದ ಅಭಿವೃದ್ಧಿಯ ಗುರಿ ಹೊಂದಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಹೆಚ್ಚಿದ ಸಾಲದ ಹೊರೆ: 2025–26ನೇ ಸಾಲಿನಲ್ಲಿ ಅಂದಾಜು 1,16,000 ಕೋಟಿ ರೂ. ಸಾಲದ ಮೊರೆ ಹೋಗಲು ಸಿಎಂ ಸಿದ್ದರಾಮಯ್ಯ ತೀರ್ಮಾನಿಸಿದ್ದಾರೆ. 2024–25 ಸಾಲಿನಲ್ಲಿ 1,05,246 ಕೋಟಿ ರೂ. ಸಾಲದ ಮೊರೆ ಹೋಗಲಾಗಿತ್ತು. ಆ ಮೂಲಕ ಈ ಬಾರಿ 10,754 ಕೋಟಿ ರೂ. ಹೆಚ್ಚುವರಿ ಸಾಲದ ಮೊರೆ ಹೋಗಲಾಗಿದೆ. ಈ 1,16,000 ಕೋಟಿ ರೂ. ಸಾಲದ ಪೈಕಿ ಕೇಂದ್ರ ಸರ್ಕಾರದಿಂದ 7,000 ಕೋಟಿ ರೂ., ಬಹಿರಂಗ ಮಾರುಕಟ್ಟೆಯಿಂದ 1,05,000 ಕೋಟಿ ಹಾಗೂ ಎಲ್‌ಐಸಿ, ಎನ್‌ಎಸ್‌ಎಸ್‌ಎಫ್, ಸಿಡಿಸಿ ಮತ್ತು ಆರ್‌ಐಡಿಎಫ್‌ಗಳಿಂದ 4,000 ಕೋಟಿ ರೂ.ಸಾಲ ಪಡೆಯಲು ಅಂದಾಜಿಸಲಾಗಿದೆ. ಆ ಮೂಲಕ 2025–26ರ ಅಂತ್ಯಕ್ಕೆ ರಾಜ್ಯದ ಒಟ್ಟು ಹೊಣೆಗಾರಿಕೆಗಳು 7,64,655 ಕೋಟಿ ರೂ.ಗಳು ಎಂದು ಅಂದಾಜಿಸಲಾಗಿದೆ.

ಕೊಡುಗೆ ಕೊಟ್ಟ ಸಿದ್ದರಾಮಯ್ಯ

ಮಾಸಿಕ ಸಹಾಯಧನವನ್ನು 1,000 ದಿಂದ 2,000 ರೂ.ಗೆ ಹೆಚ್ಚಳ ಮಾಡಿದ್ದಾರೆ. ಜಾನುವಾರುಗಳ ಆಕಸ್ಮಿಕ ಸಾವಿನ ಪರಿಹಾರ ವಾಗಿ ಹಸು–ಕರುಗಳ ಸಾವಿಗೆ ಪರಿಹಾರಧನವನ್ನು 15,000 ರೂ.ಗೆ, ಅದೇ ರೀತಿ ಕುರಿ ಮೇಕೆಗೆ 7,500 ರೂ.ಗೆ ಏರಿಕೆ ಮಾಡಲಾಗಿದೆ.

ಮಕ್ಕಳಿಗೆ ವಾರಕ್ಕೆ ಆರು ದಿನ ಬಾಳೆಹಣ್ಣು, ಮೊಟ್ಟೆ: ಶಾಲಾ ಮಕ್ಕಳ ಅಪೌಷ್ಠಿಕತೆ ನಿವಾರಿಸುವಲ್ಲಿ ವಾರದಲ್ಲಿ ಎರಡು ದಿನ ವಿತರಿಸಲಾಗುವ ಮೊಟ್ಟೆ ಮತ್ತು ಬಾಳೆ ಹಣ್ಣನ್ನು ವಾರದ ಆರು ದಿನಗಳೂ ನೀಡುವುದಾಗಿ ಘೋಷಿಸಿದ್ದಾರೆ.

ಅತಿಥಿ ಶಿಕ್ಷಕರ ಮಾಸಿಕ ಗೌರಧನ ಹೆಚ್ಚಳ: ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರ ಮಾಸಿಕ ಗೌರವಧನವನ್ನು 2,000 ರೂ. ಹೆಚ್ಚಿಸಲಾಗಿದೆ. ಅದೇ ರೀತಿ ಬಿಸಿಯೂಟ ತಯಾರಿಸುವ ಸಿಬ್ಬಂದಿಗೂ 1,000 ರೂ.ಗಳ ಹೆಚ್ಚಳ ಮಾಡಲಾಗಿದೆ.

ಅಭಿವೃದ್ಧಿಗೆ 8000 ಕೋಟಿ: ಜನಪ್ರತಿನಿಧಿಗಳ ಕೂಗಿಗೂ ತಮ್ಮ ಮುಂಗಡಪತ್ರದಲ್ಲಿ ಮನ್ನಣೆ ನೀಡಿರುವ ಮುಖ್ಯಮಂತ್ರಿ ಅವರು, ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ರಸ್ತೆ, ಸಣ್ಣ ನೀರಾವರಿ ಹಾಗೂ ಮೂಲ ಸೌಕರ್ಯ ಒದಗಿಸಲು 8,000 ಕೋಟಿ ರೂ. ತೆಗೆದಿರಿಸಿದ್ದಾರೆ. ರೈತರ ಜೀವನೋಪಾಯ ಸುಧಾರಣೆಗೆ ಸಮಗ್ರ ಮಳೆಯಾಶ್ರಿತ ಕೃಷಿ ನೀತಿ ಜಾರಿಗೆ ತರುವುದಾಗಿ ಹೇಳಿದ್ದಾರೆ.

4000 ಶಾಲೆಗಳಲ್ಲಿ ದ್ವಿಭಾಷಾ ವಿಭಾಗ: ವಿದ್ಯಾರ್ಥಿಗಳಲ್ಲಿ ಮಾತೃ ಭಾಷೆ ಜೊತೆಗೆ ಆಂಗ್ಲ ಭಾಷೆ ಕೌಶಲ್ಯ ಬೆಳೆಸಲು ರಾಜ್ಯದ 4,000 ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ವಿಭಾಗ ಆರಂಭಿಸುವುದಾಗಿ ಹೇಳಿದ್ದಾರೆ.

ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ನಿರ್ವಹಿಸುವ ಜೊತೆಗೆ ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಪೂರಕವಾಗುವ ಮುಂಗಡಪತ್ರ ಇದಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಸಾಮಾಜಿಕ ಕಲ್ಯಾಣಕ್ಕೆ ಆದ್ಯತೆ: ಮೂಲಸೌಕರ್ಯ, ನೀರಾವರಿಯಂತಹ ಪ್ರಮುಖ ಕ್ಷೇತ್ರಗಳು ಒಳಗೊಂಡು, ಸಮಾಜ ಕಲ್ಯಾಣಕ್ಕೆ ಆಯವ್ಯಯದಲ್ಲಿ ಆದ್ಯತೆ ನೀಡುವ ಮೂಲಕ ದೀರ್ಘಕಾಲೀನ ಬೆಳವಣಿಗೆಗೆ ಯೋಜನೆ ರೂಪಿಸಲಾಗಿದೆ. ಅಲ್ಲದೆ, ಮುಂಗಡಪತ್ರದಲ್ಲಿ ಅಂದಾಜಿಸಿರುವಂತೆ ವಿತ್ತೀಯ ಶಿಸ್ತು ಪಾಲಿಸುವ ಮೂಲಕ ನಮ್ಮ ಸರ್ಕಾರ ರಾಜ್ಯದ ಹಣಕಾಸು ಪರಿಸ್ಥಿತಿಯನ್ನು ಸುಸ್ಥಿರ ಮತ್ತು ಸದೃಢಪಡಿಸುವುದನ್ನು ಖಚಿತಪಡಿಸುವುದಾಗಿ ಅವರು ಹೇಳಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಮುಂದುವರೆಸುವ ಜೊತೆಗೆ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಅರೆಕಾಲಿಕ ಶ್ರಮಿಕರ ಮಾಸಿಕ ಗೌರವಧನ ಹೆಚ್ಚಳ ಮಾಡಲಾಗಿದೆ, ಅಲ್ಲದೆ, ಮಾಸಾಶನವನ್ನು ಏರಿಸಲಾಗಿದೆ ಎಂದಿದ್ದಾರೆ.

750 ಹೆಚ್ಚಳ

ಹಿತದೃಷ್ಟಿಯಿಂದ ವಿಕಲಚೇತನರ ಸಮೀಕ್ಷೆ ನಡೆಸಲಾಗುವುದು. ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಗಳಿಂದ ಬಳಲುತ್ತಿರುವ ಆರೈಕೆದಾರರಿಗೂ ಮಾಸಿಕ ಒಂದು ಸಾವಿರ ರೂ. ನೀಡುವ ಘೋಷಣೆ ಮಾಡಿದ್ದಾರೆ. ವಿಶೇಷ ಪಾಲನಾ ಯೋಜನೆಯಡಿ ಹೆಚ್‌ಐವಿ ಸೋಂಕಿತ ಮತ್ತು ಬಾಧಿತ ಮಕ್ಕಳ ಪೌಷ್ಟಿಕ ಆಹಾರ ಮತ್ತು ಶಿಕ್ಷಣ ಪ್ರೋತ್ಸಾಹಿಸಲು ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಧನಸಹಾಯವನ್ನು 1,000 ರೂ.ನಿಂದ 2,000 ರೂ.ಗೆ ಹೆಚ್ಚಿಸಲಾಗುವುದು ಎಂದರು.

ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್ ಆರಂಭ

ಜಗಳೂರು, ಸವಣೂರು, ರಾಮದುರ್ಗ ಮತ್ತು ಸವದತ್ತಿ ತಾಲೂಕು ಮಟ್ಟದ ಆಸ್ಪತ್ರೆಗಳನ್ನು ಹಾಗೂ ದಾವಣಗೆರೆ ಜಿಲ್ಲಾ ಆಸ್ಪತ್ರೆ ಮತ್ತು ಮಂಗಳೂರಿನ ವೆನ್ಲಾಕ್ ಆಸ್ಪತ್ರೆಯನ್ನು ಒಟ್ಟು 650 ಕೋಟಿ ರೂ. ವೆಚ್ಚದಲ್ಲಿ ನವೀಕರಣ ಮಾಡಲಾಗುವುದು. ಪುತ್ತೂರಿನಲ್ಲಿ ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲು ಉದ್ದೇಶಿಸಲಾಗಿದೆ, ಇದಕ್ಕಾಗಿ ಈಗಿರುವ 100 ಹಾಸಿಗೆ ಸಾಮರ್ಥ್ಯದ ತಾಲೂಕು ಆಸ್ಪತ್ರೆಯನ್ನು ಉನ್ನತೀಕರಿಸಲು ಪ್ರಸಕ್ತ ವರ್ಷದಲ್ಲಿ ಕ್ರಮವಹಿಸಲಾಗುವುದು.

ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರಿನಲ್ಲಿ 200 ಹಾಸಿಗೆ ಹಾಗೂ ಕೊಡಗು ಜಿಲ್ಲೆ ವಿರಾಜಪೇಟೆಯಲ್ಲಿ 400 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು. ಹೆಚ್ಚಿನ ದುರಸ್ತಿ ಅಗತ್ಯವಿರುವ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳನ್ನು 183 ಕೋಟಿ ರೂ. ವೆಚ್ಚದಲ್ಲಿ ಹಂತ ಹಂತವಾಗಿ ದುರಸ್ತಿಗೊಳಿಸಲಾಗುವುದು.

ಕಲ್ಯಾಣ ಕರ್ನಾಟಕ ಭಾಗದ ಆರೋಗ್ಯ ಸೂಚ್ಯಂಕ ವೃದ್ಧಿಸಲು ಒಟ್ಟು 873 ಕೋಟಿ ರೂ. ವೆಚ್ಚದಲ್ಲಿ ಆರೋಗ್ಯ ವ್ಯವಸ್ಥೆ ಬಲಪಡಿಸಲು ವಿವಿಧ ಕಾರ್ಯಯೋಜನೆ ಕೈಗೆತ್ತಿಕೊಳ್ಳಲಾಗುವುದು.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಮೂರು ಲಕ್ಷಕ್ಕೂ ಅಧಿಕ ಸಿಬ್ಬಂದಿ ವರ್ಗ ಹಾಗೂ ಅವಲಂಭಿತರಿಗೆ 5 ಲಕ್ಷ ರೂ.ವರೆಗೆ ನಗದು ರಹಿತ ಚಿಕಿತ್ಸೆ ನೀಡಲು ಯೋಜನೆ ರೂಪಿಸಲಾಗಿದೆ. ಸಿಬ್ಬಂದಿಯ ವೈಯಕ್ತಿಕ ಮಾಸಿಕ ವಂತಿಕೆ 100 ರೂ. ಮತ್ತು ಸರ್ಕಾರದ ಮಾಸಿಕ ವಂತಿಕೆ 200 ರೂ.ಗಳೊಂದಿಗೆ ಸುವರ್ಣ ಆರೋಗ್ಯ ಟ್ರಸ್ಟ್ ಮೂಲಕ ಅನುಷ್ಠಾನಗೊಳಿಸಲಾಗುವುದು.

ಪ್ರಸವ ಪೂರ್ವ ಮತ್ತು ನವಜಾತ ಶಿಶುಗಳಲ್ಲಿ ಅಪರೂಪದ ಚಯಾಪಚಯ ಖಾಯಿಲೆಗಳನ್ನು ಪತ್ತೆ ಹಚ್ಚಲು ಕಾರ್ಯಕ್ರಮ ರೂಪಿಸಲಾಗುವುದು.

20 ತಾಲೂಕುಗಳಲ್ಲಿ 9 ಕೋಟಿ ರೂ. ವೆಚ್ಚದಲ್ಲಿ 14 ವರ್ಷದ ಹೆಣ್ಣುಮಕ್ಕಳಿಗೆ ಎಚ್‌ಪಿವ್ಹಿ ಲಸಿಕೆ ನೀಡಲಾಗುವುದು.

ಆರು ಅಸಾಂಕ್ರಾಮಿಕ ರೋಗಗಳ ತಪಾಸಣೆ ಮತ್ತು ಚಿಕಿತ್ಸಾ ಕಾರ್ಯಕ್ರಮ ಯೋಜನೆಯನ್ನು 100 ಕೋಟಿ ರೂ. ವೆಚ್ಚದಲ್ಲಿ ರಾಜ್ಯಾದ್ಯಂತ ವಿಸ್ತರಿಸಲಾಗುವುದು. ಸಾಂಕ್ರಾಮಿಕ ರೋಗಗಳಾದ ಚಿಕೂನ್‌ಗುನ್ಯ, ಡೆಂಗ್ಯೂ ಹಾಗೂ ಮಲೆನಾಡು ಭಾಗದಲ್ಲಿ ಕಾಣಿಸಿಕೊಳ್ಳುವ ಕ್ಯಾಸನೂರು ಕಾಡಿನ ಖಾಯಿಲೆಗಳ ಪರಿಣಾಮಕಾರಿ ನಿಯಂತ್ರಣಕ್ಕಾಗಿ 50 ಕೋಟಿ ರೂ. ವೆಚ್ಚದಲ್ಲಿ ವಿಶೇಷ ಅಭಿಯಾನ ರೂಪದಲ್ಲಿ ಮುಂಜಾಗ್ರತಾ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುವುದು.

ಶ್ರವಣ ಸಂಜೀವಿನಿ ಯೋಜನೆಯಡಿ ಮಕ್ಕಳಲ್ಲಿ ಕಂಡುಬರುವ ಶ್ರವಣದೋಷವನ್ನು ಆರಂಭದಲ್ಲಿಯೇ ಗುರುತಿಸಿ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರ ಚಿಕಿತ್ಸೆ ಹಾಗೂ ಇಂಪ್ಲಾಂಟ್‌ಗಳ ಬಿಡಿ ಭಾಗಗಳ ನಿರ್ವಹಣೆ, ದುರಸ್ತಿ ಮತ್ತು ಬದಲಾವಣೆಗೆ 12 ಕೋಟಿ ರೂ. ಒದಗಿಸಲಾಗುವುದು.

ಹೆಚ್ಚಿನ ಟಿ.ಬಿ. ಪ್ರಕರಣಗಳಿರುವ ಆರೋಗ್ಯ ಕೇಂದ್ರಗಳಿಗೆ 2025–26ನೇ ಸಾಲಿನಲ್ಲಿ 100 ಟ್ರುನ್ಯಾಟ್ ಯಂತ್ರ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.

ಆಶಾ ಕಾರ್ಯಕರ್ತೆಯರಿಗೆ ತಂಡ ಆಧಾರಿತ ಪ್ರೋತ್ಸಾಹಧನ ನೀಡುವುದರ ಮೂಲಕ ಗೌರವಧನವನ್ನು 1,000 ರೂ. ಹೆಚ್ಚಿಸಲಾಗುವುದು. ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ಗುಣಮಟ್ಟದ ಔಷಧಗಳ ವಿತರಣೆಗೆ ಕೆಎಸ್‌ಎಂಎಸ್‌ಸಿಎಲ್ ಸಂಸ್ಥೆ ಬಲಪಡಿಸಲಾಗುವುದು, ವೈದ್ಯಕೀಯ ಉಪಕರಣಗಳ ಮೇಲ್ವಿಚಾರಣೆ ಮತ್ತು ನಿರ್ವಹಣೆಗೆ ತಂತ್ರಾಂಶ ಪರಿಚಯಿಸಲಾಗುವುದು. ಸುಟ್ಟ ಗಾಯಗಳ ಹಾಗೂ ಸಂತ್ರಸ್ತರ ಚಿಕಿತ್ಸೆಗೆ ಸಂಬಂಧಿಸಿದಂತೆ, ಸುಟ್ಟ ಗಾಯಗಳ ಚಿಕಿತ್ಸಾ ನೀತಿಯನ್ನು ರಾಷ್ಟ್ರದಲ್ಲಿಯೇ ಪ್ರಪ್ರಥಮವಾಗಿ ರಾಜ್ಯದಲ್ಲಿ ಜಾರಿಗೆ ತರಲಾಗುವುದು.

ಕೆಪಿಎಂಇ ಕಾಯ್ದೆಯಡಿ ನೀಡಲಾಗುವ ಮಾನ್ಯತೆ ಪ್ರಮಾಣಪತ್ರವನ್ನು 30 ದಿನಗಳ ಕಾಲಮಿತಿಯೊಳಗೆ ಒದಗಿಸಲಾಗುವುದು. ತಾಲೂಕು ಆಸ್ಪತ್ರೆಗಳ ಆಡಳಿತವನ್ನು ಜಿಲ್ಲಾ ಶಸ್ತ್ರಚಿಕಿತ್ಸಕರ ವ್ಯಾಪ್ತಿಗೆ ಒಳಪಡಿಸಲಾಗುವುದು, ಇಲಾಖೆಯಲ್ಲಿ ಖಾಲಿಯಿರುವ ತುರ್ತು ಸಿಬ್ಬಂದಿ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ಆದ್ಯತೆ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಬಾಗಲಕೋಟೆಯಲ್ಲಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ವೈದ್ಯಕೀಯ ಕಾಲೇಜು ಹಾಗೂ ಕೋಲಾರದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವ ಆಧಾರದ ಮೇಲೆ ವೈದ್ಯಕೀಯ ಕಾಲೇಜು ಆರಂಭಿಸಲು ಉದ್ದೇಶಿಸಲಾಗಿದೆ. ಬೀದರ್ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಕ್ಯಾನ್ಸರ್ ಪತ್ತೆ ವಿಭಾಗ ಆರಂಭಿಸಲಾಗುವುದು.

ಬಾದಾಮಿ ತಾಲೂಕಿನ ಕುಳಗೇರಿ ಕ್ರಾಸ್ ಹಾಗೂ ಚಿತ್ರದುರ್ಗದಲ್ಲಿ ಸುಸಜ್ಜಿತ ಟ್ರಾಮಾ ಕೇರ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಅಧೀನದಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಲಾಗುವುದು.

ರಾಯಚೂರಿನ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಕಿದ್ವಾಯಿ ಪೆರಿಫರೆಲ್ ಕ್ಯಾನ್ಸರ್ ಚಿಕಿತ್ಸಾ ಘಟಕ ಸ್ಥಾಪಿಸಲಾಗುವುದು.

ಹಲಾಲ್ ಬಜೆಟ್, ಇಸ್ಲಾಮೀಕರಣ, ಅಂಬೇಡ್ಕರ್ ಆಶಯಗಳಿಗೆ ವಿರುದ್ಧ: ಬಿಜೆಪಿ ಟೀಕೆ

ಬೆಂಗಳೂರು, ಮಾ.7– ಕರ್ನಾಟಕ ಬಜೆಟ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಸ್ಲಾಮೀಕರಣಗೊಳಿಸಿದ್ದಾರೆ ಎಂದು ರಾಜ್ಯ ಬಿಜೆಪಿ ಆರೋಪಿಸಿದೆ.

ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ರಾಜ್ಯ ಬಜೆಟ್‌ನಲ್ಲಿ ಮುಸ್ಲಿಮರಿಗೆ ಹೆಚ್ಚಿನ ಅನುದಾನ ನೀಡಲಾಗಿದ್ದು, ಇದೊಂದು 'ಹಲಾಲ್ ಬಜೆಟ್', ಅಂಬೇಡ್ಕರ್ ಆಶಯಗಳಿಗೆ ವಿರುದ್ಧವಾಗಿದೆ ಎಂದು ಟೀಕಿಸಿದೆ.

ಬಜೆಟ್‌ನಲ್ಲಿ ಮುಸ್ಲಿಂಮರಿಗೆ ಹೆಚ್ಚಿನ ಘೋಷಣೆ ಮಾಡಲಾಗಿದ್ದು, ಈ ಕುರಿತು ಬಿಜೆಪಿ ಪಟ್ಟಿ ಮಾಡಿದೆ. ಮುಸ್ಲಿಮರಿಗೆ ಸರ್ಕಾರಿ ಗುತ್ತಿಗೆಯಲ್ಲಿ ಮೀಸಲಾತಿ, ಮುಸ್ಲಿಮರ ಸರಳ ಮದುವೆಗೆ 50 ಸಾವಿರ, ವಕ್ಫ್, ಖಬರಸ್ಥಾನಗಳ ಮೂಲಸೌಕರ್ಯಕ್ಕೆ 150 ಕೋಟಿ, ಮುಸ್ಲಿಮರ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ 50 ಲಕ್ಷ, ಮುಸ್ಲಿಮರು ಅತೀ ಹೆಚ್ಚು ವಾಸವಿರುವ ಪ್ರದೇಶದಲ್ಲಿ ITI ಸ್ಥಾಪನೆ, KEA ಅಡಿ ಮುಸ್ಲಿಂ ವಿದ್ಯಾರ್ಥಿಗಳಿಗೆ ಶೇ.50 ರಷ್ಟು ಶುಲ್ಕ ಕಡಿತ, ಉಲ್ಲಾಳದಲ್ಲಿ ಮುಸ್ಲಿಂ ವಿದ್ಯಾರ್ಥಿನಿಯರಿಗೆ ವಸತಿ ಸಹಿತ ಪಿ.ಯು ಕಾಲೇಜು, ಮುಸ್ಲಿಂ ವಿದ್ಯಾರ್ಥಿಗಳ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿ ವೇತನ ಏರಿಕೆ, ಬೆಂಗಳೂರಿನ ಹಜ್ ಭವನದಲ್ಲಿ ಹೆಚ್ಚುವರಿ ಕಟ್ಟಡ ನಿರ್ಮಾಣ, ಮುಸ್ಲಿಂ ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ. ದೇಶದ ಯಾವುದೇ ರಾಜ್ಯದಲ್ಲೂ ಇಲ್ಲದ ಕಾಂಗ್ರೆಸ್‌ನ ದಿವಾಳಿ ಮಾಡೆಲ್ ಜಾರಿ ಆಗುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

ಅಂಬೇಡ್ಕರ್ ಆಶಯಗಳಿಗೆ ವಿರುದ್ಧ: ಸಿಎಂ ಸಿದ್ದರಾಮಯ್ಯ ಅವರು ತಮ್ಮ ಬೋಗಸ್ ಬಜೆಟ್‌ನಲ್ಲಿ ಮುಸ್ಲಿಮರಿಗೆ ಧರ್ಮಾಧಾರಿತ ಮೀಸಲಾತಿಯನ್ನು ನೀಡಿರುವುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯಗಳಿಗೆ ಸಂಪೂರ್ಣ ವಿರುದ್ಧವಾದಂತ ಹದ್ದು!! ಕಾಂಗ್ರೆಸ್ ಪಕ್ಷಕ್ಕೆ ಬಾಬಾ ಸಾಹೇಬರ ಮೇಲೆ ಎಷ್ಟು ದ್ವೇಷವಿದೆ ಎಂಬುದು ಸಿದ್ದರಾಮಯ್ಯ ಅವರ ಸಂವಿಧಾನ ವಿರೋಧಿ ಬಜೆಟ್‌ನಿಂದ ಮತ್ತೊಮ್ಮೆ ಜಗಜ್ಜಾಹೀರಾಗಿದೆ ಎಂದು ಮಗದೊಂದು ಪೋಸ್ಟ್‌ನಲ್ಲಿ ಬಿಜೆಪಿ ಆರೋಪಿಸಿದೆ.


ರಾಜ್ಯದಲ್ಲಿ ನಕ್ಸಲ್ ನಿಗ್ರಹ ಪಡೆ ವಿಸರ್ಜನೆ

ಸೈಬರ್ ಅಪರಾಧ ವಿಭಾಗಕ್ಕೆ 5 ಕೋಟಿ ರೂ.

ಬೆಂಗಳೂರು, ಮಾ.7– ರಾಜ್ಯವು ನಕ್ಸಲ್ ಮುಕ್ತವಾಗಿರುವುದರಿಂದ ನಕ್ಸಲ್ ನಿಗ್ರಹ ಪಡೆಯನ್ನು ವಿಸರ್ಜನೆ ಮಾಡುವುದಾಗಿ ಸಿಎಂ ಸಿದ್ದರಾಮಯ್ಯ ಘೋಷಿಸಿದ್ದಾರೆ.

ದಾಖಲೆಯ 16ನೇ ಬಜೆಟ್ ಮಂಡಿಸಿದ ಸಿಎಂ, ನಮ್ಮ ಸರ್ಕಾರದ ಅವಧಿಯಲ್ಲಿ 6 ಜನ ಭೂಗತ ನಕ್ಸಲರು ನಕ್ಸಲ್ ಶರಣಾಗತಿ ಮತ್ತು ಪುನರ್ವಸತಿ ಯೋಜನೆ ಸಮಿತಿಯ ಮುಂದೆ ಶರಣಾಗಿದ್ದಾರೆ. ಈ ಹಿನ್ನೆಲೆಯಲ್ಲಿ ನಕ್ಸಲ್ ನಿಗ್ರಹ ದಳ ವಿಸರ್ಜನೆ ಮಾಡುವುದಾಗಿ ಹೇಳಿದ್ದಾರೆ.

ಸೈಬರ್ ಅಪರಾಧ ವಿಭಾಗಕ್ಕೆ 5 ಕೋಟಿ ರೂ.: ರಾಜ್ಯದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧ ಮತ್ತು ಮಾದಕದ್ರವ್ಯ ಬಳಕೆ ಮತ್ತು ವ್ಯಾಪಾರದ ವಿರುದ್ಧ ಕಠಿಣಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ಬದ್ಧವಾಗಿದೆ. ಈ ನಿಟ್ಟಿನಲ್ಲಿ ಮಾದಕ ದ್ರವ್ಯ ಮತ್ತು ಸೈಬರ್ ಅಪರಾಧ ವಿಭಾಗವನ್ನು ಬಲಗೊಳಿಸಲು 5 ಕೋಟಿ ರೂ. ಅನುದಾನ ನೀಡುವುದಾಗಿ ಸಿಎಂ ಘೋಷಿಸಿದ್ದಾರೆ.



ರೈತರು, ಮಹಿಳೆಯರು, ಅಲ್ಪಸಂಖ್ಯಾತರಿಗೆ ಬಂಪರ್ ಕೊಡುಗೆ

ಒಲಿಂಪಿಕ್ ತರಬೇತಿಗಾಗಿ 60 ಕ್ರೀಡಾಪಟುಗಳಿಗೆ ವಾರ್ಷಿಕ ತಲಾ 10 ಲಕ್ಷ ಪ್ರೋತ್ಸಾಹಧನ

ಕಂಬಳ, ಎತ್ತಿನಬಂಡಿ, ಮಲ್ಲಕಂಬ ಕ್ರೀಡೆಗಳಿಗೆ ಉತ್ತೇಜನ

ಬೆಂಗಳೂರು, ಮಾ.7– ಟಾರ್ಗೆಟ್ ಒಲಿಂಪಿಕ್ ಮೆಡಲ್ ಯೋಜನೆ ಅಡಿಯಲ್ಲಿ ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ, 2028ರ ಒಲಿಂಪಿಕ್ಸ್ ಕ್ರೀಡಾಕೂಟಕ್ಕೆ ತಯಾರಿ ಕೈಗೊಳ್ಳಲು ವಾರ್ಷಿಕ ತಲಾ 10 ಲಕ್ಷ ರೂ.ನಂತೆ ಪ್ರೋತ್ಸಾಹಧನವನ್ನು 3 ವರ್ಷಗಳವರೆಗೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಲಾಸ್ ಏಂಜಲೀಸ್‌ನಲ್ಲಿ ನಡೆಯಲಿರುವ 2028ರ ಒಲಿಂಪಿಕ್ಸ್ ಕ್ರೀಡಾಕೂಟಕ್ಕೆ ತಯಾರಿ ಕೈಗೊಳ್ಳಲು ವಾರ್ಷಿಕ ತಲಾ 10 ಲಕ್ಷ ರೂ.ನಂತೆ ಪ್ರೋತ್ಸಾಹಧನವನ್ನು ಮೂರು ವರ್ಷ ನೀಡಲಾಗುವುದು. ಅದಕ್ಕಾಗಿ ಪ್ರಸಕ್ತ ವರ್ಷಕ್ಕೆ 6 ಕೋಟಿ ರೂ. ಒದಗಿಸಲಾಗುವುದು ಎಂದು ತಿಳಿಸಿದರು. ಒಲಿಂಪಿಕ್ಸ್, ಕಾಮನ್‌ವೆಲ್ತ್ ಹಾಗೂ ಏಷಿಯನ್ ಗೇಮ್ಸ್‌ಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳ ಸೇವೆಯನ್ನು ವಿವಿಧ ಕ್ರೀಡಾ ಸಂಸ್ಥೆಗಳಲ್ಲಿ



ಮಾರ್ಗದರ್ಶಕರಾಗಿ ಪಡೆಯಲಾಗುವುದು.

ಅಲ್ಲದೇ ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನಬಂಡಿ ಓಟ ಮತ್ತು ಮಲ್ಲಕಂಬ ಕ್ರೀಡೆಗಳಿಗೆ ಉತ್ತೇಜನ ನೀಡಲಾಗುವುದು. ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಪ್ರತಿ ವರ್ಷ ಕ್ರೀಡಾಕೂಟ ಆಯೋಜಿಸಲಾಗುವುದು. 2025–26ನೇ ಸಾಲಿನಲ್ಲಿ ಈ ಉದ್ದೇಶಕ್ಕೆ 2 ಕೋಟಿ ರೂ. ಒದಗಿಸಲಾಗುವುದು.

ಕ್ರೀಡಾಪಟುಗಳು ತರಬೇತಿ ಪಡೆಯಲು ಹಾಗೂ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಸಹಕಾರಿಯಾಗುವಂತೆ ಶಾಲಾ–ಕಾಲೇಜುಗಳ (ವೃತ್ತಿಪರ ಕಾಲೇಜುಗಳು ಸೇರಿದಂತೆ) ವಾರ್ಷಿಕ ಹಾಜರಾತಿಯಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟದವರೆಗಿನ ಕ್ರೀಡಾಪಟುಗಳಿಗೆ ಶೇ.15ರಷ್ಟು ಹಾಗೂ ಅಂತಾರಾಷ್ಟ್ರೀಯ ಕ್ರೀಡಾಪಟುಗಳಿಗೆ ಶೇ.25ರಷ್ಟು ಹಾಜರಾತಿ ವಿನಾಯಿತಿ ನೀಡಲಾಗುವುದು. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಶೇ.5ರಷ್ಟು ಕೃಪಾಂಕವನ್ನು ವೃತ್ತಿಪರ, ಪದವಿ ಮತ್ತು ಉನ್ನತ ಶಿಕ್ಷಣದ ಪ್ರವೇಶದಲ್ಲಿ ನೀಡಲಾಗುವುದು. ನಿವೃತ್ತಿ ಹೊಂದಿದ ಕುಸ್ತಿಪಟುಗಳಿಗೆ ನೀಡಲಾಗುತ್ತಿರುವ ಮಾಸಾಶನವನ್ನು, ಅಂತಾರಾಷ್ಟ್ರೀಯ ಮಟ್ಟದ ಕುಸ್ತಿಪಟುಗಳಿಗೆ 6,000 ರೂ.ಗಳಿಗೆ, ರಾಷ್ಟ್ರ ಮಟ್ಟದ ಕುಸ್ತಿಪಟುಗಳಿಗೆ 5,000 ರೂ.ಗಳಿಗೆ ಹಾಗೂ ರಾಜ್ಯ ಮಟ್ಟದ ಕುಸ್ತಿಪಟುಗಳಿಗೆ 4,500 ರೂ. ಗಳಿಗೆ ಹೆಚ್ಚಿಸಲಾಗುವುದು ಎಂದು ಸಿಎಂ ತಮ್ಮ ಬಜೆಟ್ ಭಾಷಣದಲ್ಲಿ ತಿಳಿಸಿದ್ದಾರೆ.

ಹಿಂದುಳಿದ ವರ್ಗಗಳ ನಿರುದ್ಯೋಗಿಗಳಿಗೆ 3 ಲಕ್ಷದವರೆಗೆ ಸಹಾಯಧನ

ಬೆಂಗಳೂರು, ಮಾ.7– ದಾಖಲೆಯ 16ನೇ ಬಜೆಟ್‌ನಲ್ಲಿ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಒತ್ತುಕೊಟ್ಟಿರುವ ಸಿಎಂ ಸಿದ್ದರಾಮಯ್ಯ ಅವರು, ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡಿದ್ದಾರೆ. ಹಿಂದುಳಿದ ವರ್ಗಗಳ ನಿರುದ್ಯೋಗಿಗಳಿಗೆ ವಿದ್ಯುತ್‌ಚಾಲಿತ ನಾಲ್ಕು ಚಕ್ರದ ವಾಹನ ಖರೀದಿಸಿ, ಆಹಾರ ಕಿಯೋಸ್ಕ್ ಆರಂಭಿಸಲು ಗರಿಷ್ಠ 3 ಲಕ್ಷ ರೂ. ಸಹಾಯಧನವನ್ನು ನಿಗಮಗಳ ಮೂಲಕ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ.

ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಕಟ್ಟಡ ದುರಸ್ತಿ ಮಾಡಲು 25 ಕೋಟಿ ರೂ. ಒದಗಿಸಲಾಗುವುದು. ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಐಎಎಸ್, ಐಪಿಎಸ್, ಕೆಎಎಸ್, ಕೆಪಿಎಸ್‌ಪಿಎಸ್ ಮುಂತಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಸತಿ ಸಹಿತ ತರಬೇತಿ ನೀಡಲು ಬೆಂಗಳೂರು ನಗರದಲ್ಲಿ ಎರಡು ಸುಸಜ್ಜಿತ ವಸತಿ ನಿಲಯಗಳನ್ನು ಪ್ರಾರಂಭಿಸಲಾಗವುದು ಎಂದು ಘೋಷಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆಗೆ 28,608 ಕೋಟಿ ರೂ. ಅನುದಾನ

ಬೆಂಗಳೂರು, ಮಾ. 7– ಕಳೆದ ಮೂರು ತಿಂಗಳಿನಿಂದಲೂ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ನೀಡುತ್ತಿದ್ದ ಹಣ ಸ್ಥಗಿತಗೊಂಡಿದೆ. ಇದೇ ವಿಚಾರವಾಗಿ ಆಡಳಿತ–ವಿಪಕ್ಷಗಳ ನಡುವೆ ವಾಗ್ಯುದ್ಧ ನಡೆಯುತ್ತಲೇ ಇದೆ. ಈ ನಡುವೆ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಬಜೆಟ್‌ನಲ್ಲಿ ಪ್ರಸಕ್ತ ವರ್ಷ ಯೋಜನೆಗೆ 28,608 ಅನುದಾನ ಮೀಸಲಿಟ್ಟಿರುವುದಾಗಿ ಘೋಷಿಸಿದ್ದಾರೆ. ಗೃಹಲಕ್ಷ್ಮಿ ಯೋಜನೆಯನ್ನು 2023–24ನೇ ಸಾಲಿನಿಂದ ಜಾರಿಗೊಳಿಸಲಾಗಿದ್ದು, 2024–25ನೇ ಸಾಲಿನಲ್ಲಿ 1.22 ಕೋಟಿ ಕುಟುಂಬಗಳ ಯಜಮಾನಿಯರಿಗೆ ಧನಸಹಾಯ ಒದಗಿಸಲಾಗಿತ್ತು. ಪ್ರಸಕ್ತ ವರ್ಷದಲ್ಲಿ ಈ ಯೋಜನೆಗೆ 28,608 ಕೋಟಿ ರೂ. ಅನುದಾನ ಮೀಸಲಿಟ್ಟಿರುವುದಾಗಿ ತಿಳಿಸಿದ್ದಾರೆ. ಸಕ್ಷಮ ಅಂಗನವಾಡಿ ಯೋಜನೆಯಡಿ 17,454 ಅಂಗನವಾಡಿ ಕೇಂದ್ರಗಳಿಗೆ ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಲು 175 ಕೋಟಿ ರೂ. ನೆರವು ಒದಗಿಸಲಾಗುವುದು, ಅಂಗನವಾಡಿ ಕಟ್ಟಡಗಳಿಗೆ ಸಿ.ಎ. ನಿವೇಶನ ಖರೀದಿಗಾಗಿ 10 ಕೋಟಿ ರೂ. ಮೀಸಲಿಡಲಾಗಿದೆ ವಿಕಲಚೇತನರ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ಅವರ ಸಮೀಕ್ಷೆ ನಡೆಸಲು ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ.

ಪತ್ರಕರ್ತರಿಗೆ 'ಮಾಧ್ಯಮ ಸಂಜೀವಿನಿ' ಯೋಜನೆ: 5 ಲಕ್ಷ ರೂ. ನಗದುರಹಿತ ಚಿಕಿತ್ಸೆ

ಬೆಂಗಳೂರು, ಮಾ.7– ಮಾನ್ಯತೆ ಹೊಂದಿರುವ ಪತ್ರಕರ್ತರು ಹಾಗೂ ಅವಲಂಬಿತ ಕುಟುಂಬ ಸದಸ್ಯರಿಗೆ 5 ಲಕ್ಷ ರೂ.ವರೆಗೆ ನಗದುರಹಿತ ಚಿಕಿತ್ಸೆಗಾಗಿ 'ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ' ಯೋಜನೆ ಅನುಷ್ಠಾನ ಮಾಡುವುದಾಗಿ ಬಜೆಟ್‌ನಲ್ಲಿ ಘೋಷಿಸಲಾಗಿದೆ. ರಾಜ್ಯದ ಪತ್ರಕರ್ತರಿಗೆ ನೀಡಲಾಗುತ್ತಿದ್ದ ಮಾಸಾಶನವನ್ನು 12 ಸಾವಿರ ರೂ.ನಿಂದ 15ಸಾವಿರ ರೂ.ಗಳಿಗೆ ಹಾಗೂ ಕುಟುಂಬ ಮಾಸಾಶನ 7,500 ರೂ.ಗಳಿಗೆ ಹೆಚ್ಚಳ ಮಾಡಲಾಗಿದೆ.

ಯುವನಿಧಿ ಯೋಜನೆಯಡಿ 286 ಕೋಟಿ ರೂ. ನೇರ ನಗದು ವರ್ಗಾವಣೆ

ಬೆಂಗಳೂರು, ಮಾ.7– ನಿರುದ್ಯೋಗ ಭತ್ಯೆ ನೀಡುವುದರೊಂದಿಗೆ ಈ ಯುವಕರಿಗೆ ಇಂಡಸ್ಟ್ರಿ ಲಿಂಕೇಜ್ ಸೆಲ್ ಅಡಿ ಭವಿಷ್ಯ ಕೌಶಲ ತರಬೇತಿ ನೀಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಅವರು 2025–26ನೇ ಬಜೆಟ್‌ನಲ್ಲಿ ತಿಳಿಸಿದರು.

ನಿರುದ್ಯೋಗಿಗಳಾಗಿರುವ ಪದವೀಧರರಿಗೆ ಹಾಗೂ ಡಿಪ್ಲೊಮಾ ಪಡೆದವರಿಗೆ ನಿರುದ್ಯೋಗ ಭತ್ಯೆಯನ್ನು ನೀಡಲು ನಮ್ಮ ಸರ್ಕಾರವು 'ಯುವನಿಧಿ' ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಈಗಾಗಲೇ ಸುಮಾರು 2.58 ಲಕ್ಷ ಯುವಕರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದು, 286 ಕೋಟಿ ರೂ. ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದರು.

ನಮ್ಮ ಸರ್ಕಾರದ ಹಿಂದಿನ ಆಡಳಿತಾವಧಿಯಲ್ಲಿ, ಮುಖ್ಯಮಂತ್ರಿಗಳು ಕೌಶಲ ಕರ್ನಾಟಕ ಪ್ರಾರಂಭಿಸಲಾಗಿತ್ತು. ಯೋಜನೆಯನ್ನು (ಸಿಎಂಕೆಕೆವೈ) ಪ್ರಾರಂಭಿಸಲಾಗಿತ್ತು. ಪ್ರಸ್ತುತ, ರಾಜ್ಯದ ಯುವಕರಿಗೆ ಉದ್ಯೋಗಾರ್ಹತೆ ಮತ್ತು ಉದ್ಯಮಶೀಲತೆಯನ್ನು ಇನ್ನಷ್ಟು ಉತ್ತೇಜಿಸಲು ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಸಿಎಂಕೆಕೆವೈ 2.0 ಅನ್ನು ಜಾರಿಗೊಳಿಸಲಾಗುವುದು. ಈ ಯೋಜನೆಯಡಿ ಸಾಂಪ್ರದಾಯಿಕ ಕೌಶಲಾಭಿವೃದ್ಧಿ ಕಾರ್ಯಕ್ರಮಗಳೊಂದಿಗೆ ಈ ಕೆಳಗಿನ ಉಪಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ರಾಜ್ಯದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಜರ್ಮನ್, ಇಟಾಲಿಯನ್, ಸ್ಪ್ಯಾನಿಷ್ ಮತ್ತು ಇತರೆ ವಿದೇಶೀ ಭಾಷಾ ಕೌಶಲ ತರಬೇತಿ ನೀಡಲಾಗುವುದು. ವಿದೇಶದಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಅಂತಾರಾಷ್ಟ್ರೀಯ ವಲಸೆ ಕೇಂದ್ರದ ಮೂಲಕ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಉದ್ಯೋಗ ಮೇಳವನ್ನು ಆಯೋಜಿಸಲಾಗುವುದು. ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸೂಕ್ತ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಮಾರ್ಗದರ್ಶನವನ್ನು ಒದಗಿಸಲು 'ನನ್ನ ವೃತ್ತಿ ನನ್ನ ಆಯ್ಕೆ' ಕಾರ್ಯಕ್ರಮದಡಿ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿನ 2.30 ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಲಾಗುವುದು ಎಂದು ತಿಳಿಸಿದರು.

ಅಲ್ಪಸಂಖ್ಯಾತರಿಗೆ ಭರಪೂರ ಕೊಡುಗೆ

ಬೆಂಗಳೂರು, ಮಾ.7– ಯಾವುದೇ ರಾಜ್ಯದಲ್ಲಾಗಲೀ ಕಾಂಗ್ರೆಸ್ ಸರ್ಕಾರ ಬಜೆಟ್ ಮಂಡಿಸುತ್ತಿದೆ ಎಂದರೆ ಅದರಲ್ಲಿ ಅಲ್ಪ ಸಂಖ್ಯಾತರ ಕಲ್ಯಾಣಕ್ಕಾಗಿ ಏನಾದರೊಂದು ಯೋಜನೆಗಳು ಇದ್ದೇ ಇರುತ್ತವೆ. ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಕೂಡ ಈ ನಿರೀಕ್ಷೆಯನ್ನು ಹುಸಿಗೊಳಿಸಿಲ್ಲ.

ದಾಖಲೆಯ 16ನೇ ಬಜೆಟ್ ಮಂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಬಜೆಟ್‌ನಲ್ಲಿ ಮುಸ್ಲಿಮರಿಗೆ ಹಾಗೂ ರಾಜ್ಯದ ಇನ್ನುಳಿದ ಅಲ್ಪಸಂಖ್ಯಾತ ಸಮುದಾಯಗಳಿಗೆ ನಾನಾ ರೀತಿಯ ಯೋಜನೆಗಳನ್ನು ಘೋಷಿಸಿದ್ದಾರೆ. ಅವುಗಳಲ್ಲಿ; 1,500 ಕೋಟಿ ರೂ.ವರೆಗಿನ ಕಾಮಗಾರಿಗಳಲ್ಲಿ ಪ್ರವರ್ಗ 2, 2ಎ ವರ್ಗದವರಿಗೆ (ಅಲ್ಪಸಂಖ್ಯಾತರು) ಮೀಸಲಾತಿ ಕಲ್ಪಿಸಲು ನಿರ್ಧರಿಸಲಾಗಿದೆ.

ದೇಶಾದ್ಯಂತ ವಕ್ಫ್ ಆಸ್ತಿಗಳ ಗಲಾಟೆ ಶುರುವಾಗಿರುವ ಈ ಹೊತ್ತಿನಲ್ಲಿ ವಕ್ಫ್ ಆಸ್ತಿಗಳ ರಕ್ಷಣೆಗಾಗಿ 150 ಕೋಟಿ ರೂ.ಗಳನ್ನು ಮೀಸಲಿರಿಸುವುದಾಗಿ ಬಜೆಟ್‌ನಲ್ಲಿ ಘೋಷಿಸಲಾಗಿದೆ. ಅದಲ್ಲದೆ, ಹಜ್ ಭವನದಲ್ಲಿ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಕೇಂದ್ರ ಸ್ಥಾಪನೆ, ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತ ಯುವತಿಯರ ಮದುವೆಗೆ ತಲಾ 50,000 ಘೋಷಣೆ, ಅಲ್ಪಸಂಖ್ಯಾತ ಕಾಲೋನಿಗಳ ಅಭಿವೃದ್ಧಿಗೆ 1,000 ಕೋಟಿ ರೂ., ವಕ್ಫ್ ಮಾಲೀಕತ್ವದ ಖಾಲಿ ಸ್ಥಳಗಳಲ್ಲಿ ಒಟ್ಟು 16 ಮಹಿಳಾ ಕಾಲೇಜುಗಳ ನಿರ್ಮಾಣ, ಮದರಸಾಗಳಲ್ಲಿ ಕಂಪ್ಯೂಟರ್, ಸ್ಮಾರ್ಟ್ ಬೋರ್ಡ್ ಸೌಲಭ್ಯ ಸೇರಿದಂತೆ ಹಲವಾರು ಯೋಜನೆಗಳನ್ನು ನೀಡಲಾಗಿದೆ.

ಮುಸ್ಲಿಮರಿಗೆ ಸಿಕ್ಕಿದ್ದೇನು: ವಕ್ಫ್ ಆಸ್ತಿಗಳ ಸಂರಕ್ಷಣೆಗಾಗಿ 150 ಕೋಟಿ ರೂ. ಮೀಸಲು. ಹಜ್ ಭವನದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕೇಂದ್ರ ಸ್ಥಾಪನೆ. 2,500 ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ಆತ್ಮರಕ್ಷಣೆ ಕಲೆ ಕಲಿಯಲು ಸೌಲಭ್ಯ. ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ಸರಳ ವಿವಾಹಕ್ಕೆ ನಗದು ಪ್ರೋತ್ಸಾಹ ಪ್ರತಿ ಜೋಡಿಗೆ 50 ಸಾವಿರ ರೂ., ಬೆಂಗಳೂರು ಹಜ್ ಯಾತ್ರಿಕರಿಗೆ ಹೆಚ್ಚುವರಿ ಕಟ್ಟಡ. 100 ಉರ್ದು ಶಾಲೆಗಳ ಉನ್ನತೀಕರಣಕ್ಕೆ 100 ಕೋಟಿ ರೂ. ಅಲ್ಪಸಂಖ್ಯಾತ ಕಾಲೋನಿಗಳ ಅಭಿವೃದ್ಧಿಗೆ 1,000 ಕೋಟಿ ರೂ. ಮದರಸಾಗಳಲ್ಲಿ ಕಂಪ್ಯೂಟರ್, ಸ್ಮಾರ್ಟ್ ಬೋರ್ಡ್ ಸೌಲಭ್ಯ. ಅಲ್ಪಸಂಖ್ಯಾತ ಯುವಕ ಯುವತಿಯರ ನವೋದ್ಯಮಕ್ಕೆ ಉತ್ತೇಜನ. ವಕ್ಫ್ ಖಾಲಿ ನಿವೇಶನಗಳಲ್ಲಿ 16 ಮಹಿಳಾ ಕಾಲೇಜು ನಿರ್ಮಾಣ.

ಇತರೆ ಅಲ್ಪಸಂಖ್ಯಾತರಿಗೆ ಸಿಕ್ಕಿದ್ದೇನು: ಜೈನ, ಬುದ್ಧ, ಸಿಖ್ ಸಮಗ್ರ ಅಭಿವೃದ್ಧಿಗೆ 100 ಕೋಟಿ ರೂ. ಅನುದಾನ. ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗೆ 250 ಕೋಟಿ ರೂ., ವಕ್ಫ್ ಖಾಲಿ ನಿವೇಶನ ಗಳಲ್ಲಿ 16 ಮಹಿಳಾ ಕಾಲೇಜು ನಿರ್ಮಾಣ. ಗುರುದ್ವಾರಗಳಿಗೆ ಮೂಲಸೌಕರ್ಯಗಳಿಗೆ 2 ಕೋಟಿ ರೂ. ಅನುದಾನ. ಬೌದ್ಧ ಅಧ್ಯಯನ ಅಕಾಡೆಮಿ, ಮಹಾಬೋಧಿ ಅಧ್ಯಯನ ಕೇಂದ್ರ ಸ್ಥಾಪನೆಗೆ ನಿರ್ಧಾರ.

ರಾಜ್ಯದ ನಗರಪಾಲಿಕೆಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಬಜೆಟ್‌ನಲ್ಲಿ 600 ಕೋಟಿ ಮೀಸಲು

ಬೆಂಗಳೂರು, ಮಾ. 7(ಕೆಎಂಶಿ)–ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಮೂಲ ಸೌಕರ್ಯ ಕಲ್ಪಿಸಲು ಯುಐಡಿಎಫ್ ಅಡಿಯಲ್ಲಿ 600 ಕೋಟಿ ರೂ.ಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂಗಡಪತ್ರದಲ್ಲಿ ನಿಗದಿಪಡಿಸಿದ್ದಾರೆ.

ಹಾಸನ, ಬೀದರ್ ಹಾಗೂ ರಾಯಚೂರು ನಗರಸಭೆಗಳನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೆ ಏರಿಸಲಾಗುವುದು, ಧಾರವಾಡ ಮಹಾನಗರ ಪಾಲಿಕೆಯನ್ನು ಹೊಸದಾಗಿ ರಚಿಸಲಾಗುವುದು ಎಂದಿದ್ದಾರೆ.

ನಗರೋತ್ಥಾನ 4ನೇ ಹಂತದ ಯೋಜನೆಯ ಪೂರ್ಣಾವಧಿ ಅನುಷ್ಠಾನಕ್ಕೆ ಈ ಬಾರಿ 500 ಕೋಟಿ ರೂ. ನಿಗದಿಪಡಿಸಿದ್ದಾರೆ. ಎಲ್ಲಾ ಮಹಾನಗರ ಪಾಲಿಕೆ ಮತ್ತು ಜಿಲ್ಲಾ ನಗರಾಭಿವೃದ್ಧಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಚೇರಿಯ ಸುಗಮ ಆಡಳಿತಕ್ಕೆ ಇ–ಆಫೀಸ್ ವ್ಯವಸ್ಥೆ ಕಡ್ಡಾಯಗೊಳಿಸಲಾಗುವುದು ಎಂದಿದ್ದಾರೆ. ರಾಮನಗರ ಮತ್ತು ಉಲ್ಲಾಳಕ್ಕೆ 700 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರು ಯೋಜನೆ ಅನುಷ್ಠಾನ ಹಾಗೂ ಶ್ರೀರಂಗಪಟ್ಟಣ, ಶಿಕಾರಿಪುರ, ಸಾಗರ ಸೇರಿದಂತೆ ಕೆಲವು ನಗರಗಳಲ್ಲಿನ ಪುರಸಭೆಗಳಲ್ಲಿ ಒಳಚರಂಡಿ ಯೋಜನೆ ಕಲ್ಪಿಸಲು 142 ಕೋಟಿ ರೂ. ನೀಡಿದ್ದಾರೆ.

ಅನ್ನದಾತನ ಆಶ್ರಯದಾತನಾದ ಸಿದ್ದರಾಮಯ್ಯ

ಬೆಂಗಳೂರು, ಮಾ.7–ಸಿಎಂ ಸಿದ್ದರಾಮಯ್ಯ ದಾಖಲೆಯ 16ನೇ ಬಜೆಟ್ ಮಂಡನೆ ಮಾಡಿದ್ದಾರೆ. ನಾನು ಸದಾ ರೈತರ ಪರ ಇರುತ್ತೇನೆ ಎಂದು ಹೇಳುತ್ತಿದ್ದ ಸಿಎಂ ಸಿದ್ದರಾಮಯ್ಯ, ಈ ಬಾರಿ ಬಜೆಟ್‌ನಲ್ಲಿ ದೇಶದ ಬೆನ್ನೆಲುಬು ಅನ್ನದಾತರಿಗೆ ಭರಪೂರ ಕೊಡುಗೆ ನೀಡಿದ್ದಾರೆ. ಬೆಲೆ ಏರಿಕೆಗೆ ಕಂಗೆಟ್ಟಿದ್ದ ರಾಜ್ಯದ ರೈತರಿಗೆ ಸಿದ್ದರಾಮಯ್ಯ ಭರಪೂರ ಕೊಡುಗೆ ನೀಡಿದ್ದಾರೆ. ರೈತರ ಕೈಯನ್ನು ಬಲಪಡಿಸುವ ಪ್ರಯತ್ನ ಮಾಡಿದ್ದಾರೆ. ತಮ್ಮ ಬಜೆಟ್‌ನಲ್ಲಿ ರೈತರಿಗೆ ಸಹಾಯಧನ ಘೋಷಣೆ ಮಾಡಿದ್ದಾರೆ.

1.81 ಲಕ್ಷ ರೈತರಿಗೆ ಹನಿ ಹಾಗೂ ತುಂತುರು ನೀರಾವರಿ ಘಟಕ ಸ್ಥಾಪಿಸಿ, ನೀರಾವರಿ ಘಟಕಗಳ ಅಳವಡಿಕೆಗೆ 440 ಕೋಟಿ ಅನುದಾನ ಮೀಸಲು. 50 ಸಾವಿರ ರೈತರಿಗೆ ಸಹಾಯಧನ ನೀಡಲು 428 ಕೋಟಿ ಅನುದಾನ. 10 ತಾಲೂಕುಗಳಲ್ಲಿ ಸಮಗ್ರ ಕೃಷಿ ಪದ್ಧತಿ ಪ್ರಾತ್ಯಕ್ಷಿಕೆ, ತೊಗರಿ ಬೆಳೆಯಲ್ಲಿ ನೂತನ ತಾಂತ್ರಿಕತೆಗಳ ಅಳವಡಿಕೆ. ಕೃಷಿ ಭಾಗ್ಯ ಯೋಜನೆಯಡಿ 3 ಲಕ್ಷ ಕೃಷಿ ಹೊಂಡ




ನಿರ್ಮಾಣ. ಡಿಜಿಟಲ್ ಕೃಷಿ ಸೇವೆಗಳ ಕೇಂದ್ರ ಸ್ಥಾಪನೆ. ಸಮಗ್ರ ಮಳೆಯಾಶ್ರಿತ ಕೃಷಿ ನೀತಿ ಅನುಷ್ಠಾನ. ಮಂಡ್ಯ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆ ಮಾಡಿ ಈ ವರ್ಷದಿಂದ ತರಗತಿ ಆರಂಭ. ಸಾವಯವ ಮತ್ತು ಸಿರಿಧಾನ್ಯಗಳ ಹಬ್ ಸ್ಥಾಪನೆ, ವಿಜಯಪುರದಲ್ಲಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪನೆ. ಬೆಂಗಳೂರಲ್ಲಿ ಕುರಿ ಮತ್ತು ಮೇಕೆ ಮಾರುಕಟ್ಟೆ ಸ್ಥಾಪನೆ.


ಇಷ್ಟೆ ಅಲ್ಲದೇ ರಾಜ್ಯದಲ್ಲಿ 6,000 ಕಿರು ಆಹಾರ ಸಂಸ್ಕರಣಾ ಘಟಕಗಳು ಹಾಗೂ 14 ಸಾಮಾನ್ಯ ಇನ್‌ಕ್ಯುಬೇಷನ್ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ, ರೈತರಿಗೆ ಮಣ್ಣು ಪರೀಕ್ಷೆ ಹಾಗೂ ಅವರು ಬಳಸುವ ಪರಿಕರಗಳಾದ ರಸಗೊಬ್ಬರ, ಬಿತ್ತನೆ ಬೀಜ, ಸಸ್ಯ ಸಂರಕ್ಷಣಾ ಔಷಧಿ, ಜೈವಿಕ ಗೊಬ್ಬರ ಇತ್ಯಾದಿಗಳ ಗುಣಮಟ್ಟವನ್ನು ಪರೀಕ್ಷಿಸಲು ಇಲಾಖೆಯಡಿ ಇರುವ 58 ಪ್ರಯೋಗಾಲಯಗಳನ್ನು ಅತ್ಯಾಧುನಿಕ ತಂತ್ರಜ್ಞಾನಗಳೊಂದಿಗೆ ಬಲವರ್ಧನೆಗೊಳಿಸಲಾಗುವುದು. ಸುಸ್ಥಿರ ಸಾವಯವ ಕೃಷಿಯನ್ನು ಉತ್ತೇಜಿಸಲು ಉತ್ತರಕನ್ನಡ ಜಿಲ್ಲೆಯ ಜೋಯಿಡಾ ತಾಲೂಕನ್ನು ರಾಜ್ಯದ ಪ್ರಥಮ ಸಾವಯವ ತಾಲೂಕನ್ನಾಗಿ ಪರಿವರ್ತಿಸಲಾಗುವುದು, ತೋಟಗಾರಿಕಾ ಬೆಳೆಗಳ ಹನಿ ನೀರಾವರಿ ಕಾರ್ಯಕ್ರಮ ದಡಿ ಸುಮಾರು 52,000 ಫಲಾನುಭವಿಗಳಿಗೆ 426 ಕೋಟಿ ರೂ. ಸಹಾಯ ಧನವನ್ನು ಒದಗಿಸಲಾಗುತ್ತದೆ. 54 ಮಲೆ ನಾಡು ಜಿಲ್ಲೆಗಳಲ್ಲಿ ಎಲೆಚುಕ್ಕೆ ರೋಗದ ಬಾಧೆಗೆ ತುತ್ತಾಗಿ 2 ಲಕ್ಷಕ್ಕಿಂತ ಅಧಿಕ ಅಡಿಕೆ ಬೆಳೆಗಾರರು ಸಂಕಷ್ಟಕ್ಕೀಡಾ ಗಿದ್ದಾರೆ. ಈ ರೋಗ ನಿಯಂತ್ರಿಸಲು ಸಸ್ಯ ಸಂರಕ್ಷಣಾ ಕ್ರಮಗಳಿಗಾಗಿ 62 ಕೋಟಿ ರೂ. ಒದಗಿಸಲಾಗಿದೆ.

ಅಂತಾರಾಷ್ಟ್ರೀಯ ದರ್ಜೆಯ ದ್ವಿತಳಿ ಕಚ್ಚಾ ರೇಷ್ಮೆಯ ದೇಶೀಯ ಬೇಡಿಕೆಯನ್ನು ಪೂರೈಸಲು ಮಧ್ಯಮ ವರ್ಗದ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ 120 ಕೊನೆಗಳ ಸ್ವಯಂಚಾಲಿತ ರೀಲಿಂಗ್ ಘಟಕಗಳನ್ನು ಸ್ಥಾಪಿಸಲು ಪ್ರೋತ್ಸಾಹ. ರಾಮನಗರ ಮತ್ತು ಶಿಡ್ಲಘಟ್ಟ ಹೈ–ಟೆಕ್ ರೇಷ್ಮೆಗೂಡಿನ ಮಾರುಕಟ್ಟೆಯ ಮೊದಲನೇ ಹಂತದ ಕಾಮಗಾರಿಗಳು ಮುಕ್ತಾಯಗೊಳ್ಳಲಿದ್ದು, ಪ್ರಸಕ್ತ ಸಾಲಿನಲ್ಲಿ ಎರಡನೇ ಹಂತದ ಕಾಮಗಾರಿಗಳನ್ನು 250 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು. ಪಶುಸಂಗೋಪನೆಯಲ್ಲಿ ಜಾನುವಾರುಗಳು ಆಕಸ್ಮಿಕವಾಗಿ ಸತ್ತರೆ 'ಅನುಗ್ರಹ' ಯೋಜನೆಯಡಿ ಪರಿಹಾರ ಹೆಚ್ಚಿಸಲಾಗಿದೆ. ಪರಿಹಾರದ ಮೊತ್ತವನ್ನು 10,000 ರೂ. ಗಳಿಂದ 15,000 ರೂ. ಏರಿಕೆ; ಕುರಿ/ಮೇಕೆಗಳಿಗೆ ನೀಡಲಾಗುತ್ತಿರುವ ಮೊತ್ತವನ್ನು 5,000 ರೂ. ಗಳಿಂದ 7,500 ರೂ. ಗಳಿಗೆ ಏರಿಸಲಾಗಿದೆ.

ಒಟ್ಟಿನಲ್ಲಿ ಈ ಬಾರಿಯ ಬಜೆಟ್‌ನಲ್ಲಿ ಸಿದ್ದರಾಮಯ್ಯ ಸಮಗ್ರ ಕೃಷಿ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದಾರೆ. ಪಶು ಸಂಗೋಪನೆ, ಮೀನುಗಾರಿಕೆ, ನೀರಾವರಿ, ತೋಟಗಾರಿಕೆ ಸೇರಿದಂತೆ ಹಲವು ಇಲಾಖೆಗಳಿಗೆ ಹೆಚ್ಚಿನ ಅನುದಾನ ನೀಡಿದ್ದಾರೆ.







ಕೊಡಗು ಜಿಲ್ಲೆಗೆ ಸಿಎಂ ಸಿದ್ದು ಬಜೆಟ್‌ನಲ್ಲಿ ಭರಪೂರ ಕೊಡುಗೆಗಳು

ಪೊನ್ನಂಪೇಟೆಯಲ್ಲಿ ಆರೋಗ್ಯ ಕೇಂದ್ರ | **ಕುಶಾಲನಗರ ಆಸ್ಪತ್ರೆ ನವೀಕರಣ** | **ವಸತಿ ಶಾಲೆಗಳಲ್ಲಿ 7ನೇ ತರಗತಿ ಆರಂಭ** | **ರಸ್ತೆಗಳ ಅಭಿವೃದ್ಧಿಗೆ ಅನುದಾನ** | **ರೈಲ್ವೆ ಬ್ಯಾರಿಕೇಡ್‌ಗೆ ಅನುದಾನ**

ಮಡಿಕೇರಿ,ಮಾ.7– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ 16ನೇ ಬಜೆಟ್ ಮಂಡಿಸಿದ್ದು, ಕೊಡಗು ಜಿಲ್ಲೆಯ ಪಾಲಿಗೆ ಕೆಲವು ಯೋಜನೆಗಳು ಲಭ್ಯವಾಗಿವೆ ಬಜೆಟ್ ಘೋಷಣೆಯಂತೆ ಪೊನ್ನಂಪೇಟೆಯಲ್ಲಿ ಹೊಸದಾಗಿ ಸಮುದಾಯ ಆರೋಗ್ಯ ಕೇಂದ್ರವನ್ನು ಆರಂಭಿಸುವುದು ಮತ್ತು ಕುಶಾಲನಗರ ತಾಲೂಕು ಆಸ್ಪತ್ರೆ ನವೀಕರಣ ಮಾಡಲಾಗುವುದು ಎಂದು ಘೋಷಿಸಿದ್ದಾರೆ.

ಇನ್ನು ರಾಜ್ಯದ ಅರಣ್ಯ ಮತ್ತು ಅರಣ್ಯದ ಅಂಚಿನಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಪಂಗಡದ 12 ಬುಡಕಟ್ಟು ಸಮುದಾಯಗಳ 47,859 ಕುಟುಂಬಗಳಿಗೆ ಪೌಷ್ಟಿಕ ಆಹಾರ ಯೋಜನೆಯಡಿ 120 ಕೋಟಿ ರೂ. ವೆಚ್ಚದಲ್ಲಿ ಪೌಷ್ಟಿಕ ಆಹಾರ ಕಿಟ್‌ಗಳನ್ನು ನೀಡಲಾಗುತ್ತಿದ್ದು, ಜಿಲ್ಲೆಯ ಬುಡಕಟ್ಟು ಸಮುದಾಯಗಳಿಗೂ ಈ ಯೋಜನೆ ಲಾಭ ತರಲಿದೆ.ಬುಡಕಟ್ಟು ಜನಾಂಗದ ಶೈಕ್ಷಣಿಕ ಉದ್ದೇಶಕ್ಕಾಗಿ ಸ್ಥಾಪಿಸಲಾಗಿರುವ 78 ಬುಡಕಟ್ಟು ವಸತಿ ಶಾಲೆಗಳಲ್ಲಿ 2025–26ನೇ ಸಾಲಿನಿಂದ 7ನೇ ತರಗತಿಯನ್ನು ಪ್ರಾರಂಭಿಸಲಾಗುವುದು ಎಂದು ಘೋಷಣೆ ಮಾಡಲಾಗಿದ್ದು, ಅತೀ ಹಿಂದುಳಿದ ಸಮುದಾಯದ ಶೈಕ್ಷಣಿಕ ಪ್ರಗತಿ ಸಾಧ್ಯವಾಗಲಿದೆ. ಕೊಡಗು ಜಿಲ್ಲೆಯಲ್ಲಿರುವ ವಸತಿ ಶಾಲೆಗಳನ್ನು 12ನೇ ತರಗತಿಯವರೆಗೆ ಮೇಲ್ದರ್ಜೆಗೇರಿಸಲಾಗುವುದು ಎಂದು ಘೋಷಣೆ ಮಾಡಲಾಗಿದ್ದು, ಜಿಲ್ಲೆಯ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.

ಕೊಡಗಿನ ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ ಜೇನು ಕುರುಬ, ಕುಡಿಯ, ಮಲೆಕುಡಿಯ, ಕಾಡುಕುರುಬ, ಬೆಟ್ಟಕುರುಬ, ಯರವ, ಪಣಿಯ ಇತ್ಯಾದಿ ಪರಿಶಿಷ್ಟ ಪಂಗಡದ ಬುಡಕಟ್ಟುಗಳ ಜನಾಂಗದವರಿಗೆ ಮೂಲಸೌಕರ್ಯಗಳನ್ನು ಒದಗಿಸಲು 200 ಕೋಟಿ ರೂ. ಅನುದಾನ ನೀಡಲಾಗುವುದಾಗಿ ಘೋಷಿಸಲಾಗಿದೆ. ಇದರಿಂದಾಗಿ ಬುಡಕಟ್ಟು ಸಮುದಾಯಗಳ ಬದುಕಿನ ಬವಣೆಗಳಿಗೆ ಒಂದು ಹಂತದ ಸೌಕರ್ಯಗಳು ದೊರೆಯುವ ನಿರೀಕ್ಷೆ ಮೂಡಿದೆ.

ಹಾಡಿ ಜನಾಂಗಕ್ಕೆ ಪ್ರಾತಿನಿಧ್ಯ: ಹಾಡಿ



ಗಳಲ್ಲಿ ವಾಸ ಮಾಡುತ್ತಿರುವ 13 ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಇರುಳಿಗ, ಕೊರಗ, ಸೋಲಿಗ, ಯರವ, ಪಣಿಯನ್, ಹಲಸರು, ಗೌಡಲು, ಸಿದ್ಧಿ, ಬೆಟ್ಟಕುರುಬ, ಕಾಡುಕುರುಬ, ಕುಡಿಯ ಮತ್ತು ಮಲೆಕುಡಿಯ ಈ ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿಯನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಘೋಷಣೆ ಮಾಡಿದ್ದಾರೆ. ಈ ವರ್ಗಗಳ ಪ್ರತಿಭೆಗಳಿಗೂ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ದೊರೆಯಲಿದ್ದು ಕೊಡಗಿನಲ್ಲಿರುವ ಹಾಡಿ ನಿವಾಸಿಗಳಿಗೆ ಅನುಕೂಲ ಕಲ್ಪಿಸಿದಂತಾಗಿದೆ.

ರಸ್ತೆಗಳಿಗೆ ಅನುದಾನ: ಕೊಡಗು ಜಿಲ್ಲೆಯ ವಿರಾಜಪೇಟೆ, ಪೊನ್ನಂಪೇಟೆ ಮತ್ತು ಮಡಿಕೇರಿ ತಾಲೂಕಿನಲ್ಲಿ ಕಳೆದ ಸಾಲಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ರಸ್ತೆಗಳು, ಕಿರು ಸೇತುವೆ, ಮೋರಿಗಳು ಹಾನಿಗೆ ತುತ್ತಾಗಿವೆ. ರಸ್ತೆ ಸಹಿತ ಇವುಗಳ ದುರಸ್ಥಿ ಕಾರ್ಯಗಳ ಬಗ್ಗೆ ಜಿಲ್ಲೆಯ ಶಾಸಕರು ಮುಖ್ಯಮಂತ್ರಿಗಳ



ಗಮನ ಸೆಳೆದ ಪರಿಣಾಮ ಹಾನಿಗೆ ಒಳಗಾಗಿರುವ ರಸ್ತೆ ಮತ್ತು ಸೇತುವೆಗಳನ್ನು ಒಟ್ಟು 20 ಕೋಟಿ ರೂ. ವೆಚ್ಚದಲ್ಲಿ ಪುನರ್ ನಿರ್ಮಾಣ ಮಾಡುವ ಕುರಿತು ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿದೆ. ಕೂಡಿಗೆ ಕ್ರೀಡಾ ಶಾಲೆಯ ಸೌಲಭ್ಯಗಳ ಉನ್ನತೀಕರಣಕ್ಕಾಗಿ 3 ಕೋಟಿ ರೂ. ಒದಗಿಸಲಾಗುವುದು ಎಂದು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಾರೆ.

ರೈಲ್ವೇ ಬ್ಯಾರಿಕೇಡ್‌ಗೆ ಅನುದಾನ: ಕೊಡಗು ಜಿಲ್ಲೆಯಲ್ಲಿ ಕಾಡಾನೆ ಮಾನವ ಸಂಘರ್ಷ ಮುಂದುವರೆದಿದೆ. ಕಾಡಾನೆಗಳು ಕಾಡಿನಿಂದ ನಾಡಿಗೆ ಬಾರದಂತೆ ತಡೆಯಲು ಈಗಾಗಲೇ ಅರಣ್ಯದಂಚಿನ ಗ್ರಾಮಗಳ ಬಳಿ ರೈಲ್ವೇ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿದೆ. ಹೆಚ್ಚುವರಿಯಾಗಿ ಕೆಲವು ಗ್ರಾಮಗಳಲ್ಲಿ ರೈಲ್ವೇ ಬ್ಯಾರಿಕೇಡ್ ಅಳವಡಿಕೆ ಕಾರ್ಯ ನಡೆಯಬೇಕಿದೆ ಈ ಕಾರಣದಿಂದ ಕೊಡಗು ಜಿಲ್ಲೆಗೂ ಅನ್ವಯವಾಗುವಂತೆ ಮಾನವ–ಆನೆ ಸಂಘರ್ಷ ತಡೆಗಟ್ಟಲು 2015ರಿಂದ ಇಲ್ಲಿಯವರೆಗೆ 392 ಕಿ.ಮೀ. ರೈಲ್ವೆ ಬ್ಯಾರಿಕೇಡ್‌ಗಳನ್ನು ನಿರ್ಮಿಸಲಾಗಿದೆ.



ಇನ್ನೂ 150 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಕಾಮಗಾರಿಗಳಿಗಾಗಿ 2025–26ನೇ ಸಾಲಿನಲ್ಲಿ 60 ಕೋಟಿ ರೂ. ಮೀಸಲಿರಿಸಲಾಗಿದ್ದು ಜಿಲ್ಲೆಗೂ ಅನುಕೂಲವಾಗಲಿದೆ. ರಾಜ್ಯ ವಿಪತ್ತು ಉಪಶಮನ ನಿಧಿ ಹಾಗೂ ರಾಷ್ಟ್ರೀಯ ವಿಪತ್ತು ಉಪಶಮನ ನಿಧಿ ಅನುದಾನದಡಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ತಿಳಿಸಿದ್ದಾರೆ.

ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಹಾಸನ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ 200 ಕೋಟಿ ರೂ. ವೆಚ್ಚದಲ್ಲಿ ಭೂ ಕುಸಿತ ತಡೆಯುವ ಯೋಜನೆ ಘೋಷಣೆ ಮಾಡಲಾಗಿದೆ. ಇದರಿಂದಾಗಿ ಕೊಡಗು ಜಿಲ್ಲೆಗೂ ಅನುಕೂಲವಾಗಲಿದೆ.

ಸಾಮಾಜಿಕ ನ್ಯಾಯ, ರೈತ ಕೇಂದ್ರೀಕೃತ ಬಜೆಟ್

ಕೆಪಿಸಿಸಿ ವಕ್ತಾರ ಸಂಕೇತ್ ಪೂವಯ್ಯ ಬಣ್ಣನೆ

ಮಡಿಕೇರಿ, ಮಾ.7– ಮುಖ್ಯಮಂತ್ರಿ ಸಿದ್ದರಾಮಯ್ಯರವರು ಇಂದು ಮಂಡಿಸಿದ ದಾಖಲೆಯ 16ನೇ ಬಜೆಟ್, ರಾಜ್ಯದ ಎಲ್ಲಾ ಜನತೆಯ ನಿರೀಕ್ಷೆಯನ್ನು ಮತ್ತಷ್ಟು ಪುಷ್ಟಿಕರಿಸುವುದರೊಂದಿಗೆ ಆರೋಗ್ಯ, ಶಿಕ್ಷಣ, ಸಾಮಾಜಿಕ ನ್ಯಾಯ, ರೈತ ಕೇಂದ್ರೀಕೃತ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಹಾಗೂ ಮಾನವ–ಪ್ರಾಣಿ ಸಂಘರ್ಷ ನಿವಾರಣೆಗೆ ವಿಶೇಷ ಒತ್ತು ನೀಡಿರುವುದು ಅವರ ಸಾಮಾಜಿಕ ಬದ್ಧತೆ, ಆರ್ಥಿಕ ಕ್ಷೇತ್ರದಲ್ಲಿನ ವಿಶೇಷ ಅನುಭವ ಹಾಗೂ ಆಡಳಿತದಲ್ಲಿನ ಪ್ರಬುದ್ಧತೆಗೆ ಹಿಡಿದ ಕೈಗನ್ನಡಿ ಎಂದು ಕೆಪಿಸಿಸಿ ವಕ್ತಾರ ಸಂಕೇತ್ ಪೂವಯ್ಯ ಬಣ್ಣಿಸಿದ್ದಾರೆ.



ರಾಜ್ಯದ ಕಟ್ಟ ಕಡೆಯ ಅಶಕ್ತ ಹಾಗೂ ಶೋಷಿತ ವ್ಯಕ್ತಿಯನ್ನು ಸಶಕ್ತ ಗೊಳಿಸುವ ದೂರದೃಷ್ಟಿ ಹೊಂದಿರುವ ಈ ಬಜೆಟ್, ರಾಜ್ಯ ಸರಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರೆಂಟಿ ಯೋಜನೆಗಳ ಅಭೂತಪೂರ್ವ ಯಶಸ್ಸಿಗೆ ಸಾಕ್ಷಿಯಾಗಿದೆ ಎಂದು ಅವರು ತಮ್ಮ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕೊಡಗಿನ ಅಭಿವೃದ್ಧಿಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಗೆ ಅಧಿಕ ಅನುದಾನ ಒದಗಿಸುವುದರೊಂದಿಗೆ, ಕೊಡಗಿನ ಜಲ್ವಂತ ಸಮಸ್ಯೆಗಳಲ್ಲಿ ಒಂದಾಗಿರುವ ಮಾನವ–ಪ್ರಾಣಿ ಸಂಘರ್ಷದ ನಿವಾರಣೆಗೆ ಕೂಡ ವಿಶೇಷ ಗಮನಹರಿಸಲಾಗಿದೆ. ಕಾಡಾನೆಗಳ ಉಪಟಳದಿಂದ ಮುಕ್ತಿ ಹೊಂದಲು ರೈಲ್ವೆ ಬ್ಯಾರಿಕೆಡ್ ಅಳವಡಿಕೆ, ಆನೆ ಕಂದಕ ಅಥವಾ ಸೋಲಾರ್ ತಂತಿ ನಿರ್ಮಾಣಕ್ಕೆ ಬಜೆಟ್‌ನಲ್ಲಿ ವಿಶೇಷ ಅನುದಾನ ಒದಗಿಸಿರುವುದು ಮಾತ್ರವಲ್ಲದೆ, ಭದ್ರಾ ಅರಣ್ಯ ಭಾಗದಲ್ಲಿ ಆನೆಗಳ ಪುನರ್ವಸತಿ ಕೇಂದ್ರೀಕೃತ ಸಾಫ್ಟ್ ರಿಲೀಸ್ ಏರಿಯಾಗೆ ಹಣ ಮೀಸಲು ಇರಿಸಲಾಗಿದೆ ಎಂದಿದ್ದಾರೆ.

ಅಲ್ಲದೇ, ಆನೆ ತುಳಿತ ಅಥವಾ ಇತರ ಪ್ರಾಣಿಗಳ ದಾಳಿಗಳಿಂದ ಮೃತಪಟ್ಟವರಿಗೆ ನೀಡಲಾಗುತ್ತಿದ್ದ ಪರಿಹಾರ ಮೊತ್ತವನ್ನು 15 ಲಕ್ಷದಿಂದ 20 ಲಕ್ಷಕ್ಕೆ ಏರಿಕೆ ಮಾಡಲಾಗಿದೆ. ಕೊಡಗು ಜಿಲ್ಲೆಗೆ ಈ ವಿಶೇಷ ಪ್ರಾತಿನಿಧ್ಯ ಸಿಗಲು ಹಗಲಿರುಳು ಶ್ರಮಿಸಿ, ಸರಕಾರದ ಗಮನ ಸೆಳೆಯುವಲ್ಲಿ ಯಶಸ್ವಿಯಾದ ಶಾಸಕರು ಹಾಗೂ ಮುಖ್ಯಮಂತ್ರಿಗಳ ಕಾನೂನು ಸಲಹಾಗಾರರಾದ ಎ.ಎಸ್.ಪೊನ್ನಣ್ಣರವರಿಗೆ ಅಭಿನಂದನೆ ಸಲ್ಲಿಸಲೇಬೇಕು ಎಂದು ಅವರು ಹೇಳಿದ್ದಾರೆ.

ಸರ್ಕಾರದ ವಿರುದ್ಧದ ಬಿಜೆಪಿ ಅಹೋರಾತ್ರಿ ಧರಣಿ ಅಂತ್ಯ

ಕೊಡಗು ವಿವಿ ಮುಚ್ಚದಂತೆ, ಸಿ ಮತ್ತು ಡಿ ಭೂಮಿ ಅರಣ್ಯಕ್ಕೆ ಸೇರಿಸದಂತೆ, ಪರಿಶಿಷ್ಟರಿಗೆ ಮೀಸಲಿಟ್ಟ ಹಣ ಗ್ಯಾರಂಟಿಗೆ ಬಳಸದಂತೆ ಮನವಿ ಸಲ್ಲಿಕೆ

ಮಡಿಕೇರಿ,ಮಾ.7– ಜಿಲ್ಲೆಯ ಬಡ ಮಕ್ಕಳ ಶಿಕ್ಷಣದ ಕನಸಿನ ಸಾಕಾರಕ್ಕೆ ಪೂರಕವಾಗಿ ಆರಂಭವಾಗಿದ್ದ 'ಕೊಡಗು ವಿಶ್ವ ವಿದ್ಯಾನಿಲಯ'ವನ್ನು ಮುಚ್ಚುವುದಿಲ್ಲ, ವಿಲೀನ ಮಾಡುವುದಷ್ಟೆ ಎನ್ನುವ ಸರ್ಕಾರದ ಹೇಳಿಕೆ ಕೇವಲ ನಾಟಕ. ರಾಜ್ಯ ಸರ್ಕಾರ ಜಿಲ್ಲೆಯತ್ತ ಮಲತಾಯಿ ಧೋರಣೆಯನ್ನು ಅನುಸರಿಸುತ್ತಿದೆ ಎಂದು ಬಿಜೆಪಿ ಮುಖಂಡರು ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ಕೊಡಗು ಜಿಲ್ಲಾ ಬಿಜೆಪಿ ವತಿಯಿಂದ ಕೊಡಗು ವಿ.ವಿ ರದ್ದುಗೊಳಿಸುವುದು, ಸಿ ಮತ್ತು ಡಿ ಭೂಮಿಯನ್ನು ಅರಣ್ಯಕ್ಕೆ ಸೇರಿಸುವ ಸರ್ಕಾರದ ಚಿಂತನೆ, ಪರಿಶಿಷ್ಟರಿಗೆ ಮೀಸಲು ಅನುದಾನವನ್ನು ಉಚಿತ ಭಾಗ್ಯಗಳಿಗೆ ವಿನಿಯೋಗಿಸುವುತ್ತಿರುವುದನ್ನು ವಿರೋಧಿಸಿ, ಇಲ್ಲಿನ ಖಾಸಗಿ ಬಸ್ ನಿಲ್ದಾಣದಲ್ಲಿ ಗುರುವಾರದಿಂದ ಆರಂಭಗೊಂಡ ಅಹೋರಾತ್ರಿ ಧರಣಿಯ 2ನೇ ದಿನದಂದು ಪಕ್ಷದ ಪ್ರಮುಖರು ರಾಜ್ಯ ಸರ್ಕಾರದ ಕ್ರಮಗಳನ್ನು



ಪ್ರತಿಭಟನೆಯಲ್ಲಿ ಪಾಲ್ಗೊಂಡಿರುವ ಬಿಜೆಪಿ ಮುಖಂಡರು, ಕಾರ್ಯಕರ್ತರು.

ಟೀಕಿಸುವುದರೊಂದಿಗೆ ಸರ್ಕಾರಕ್ಕೆ ಮನವಿ ಸಲ್ಲಿಸುವ ಮೂಲಕ ತಮ್ಮ ಅಹೋ ರಾತ್ರಿ ಪ್ರತಿಭಟನೆಯನ್ನು ಅಂತ್ಯಗೊಳಿಸಿದರು.

ವಿ.ವಿ ಮುಚ್ಚುವ ಪ್ರಯತ್ನ: ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ರಾಜ್ಯ ಸರ್ಕಾರ ಹಣಕಾಸಿನ ವೈಫಲ್ಯಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಆರಂಭಗೊಂಡಿದ್ದ ಕೊಡಗು ವಿವಿಯನ್ನು ಒಳಗೊಂಡಂತೆ 9 ವಿವಿಗಳಿಗೆ ಅಗತ್ಯ ನೆರವನ್ನು ನೀಡಲಾಗುತ್ತಿಲ್ಲ. ಈ ಹಿನ್ನೆಲೆ ವಿಲೀನದ ಮಾತನಾಡುತ್ತಿದೆ. ಈ 'ವಿಲೀನ' ಎಂಬುದು ಅಂತಿಮವಾಗಿ ವಿವಿಗಳನ್ನು ಮುಚ್ಚುವುದೇ ಆಗಿದೆ ಎಂದು ತೀವ್ರ ಬೇಸರ ವ್ಯಕ್ತಪಡಿಸಿದರು.

ಯಾವ ಭೂಮಿ ನಿಮಗೆ ಆಶ್ರಯವನ್ನು ನೀಡಿದೆಯೋ ಅಂತಹ ನೆಲದ ರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯ ಈ ಹಿಂದೆ ಕೊಡಗಿನ ಜಮ್ಮಾ ಬಾಣೆ ಸಮಸ್ಯೆ ಸಂದರ್ಭ, ರಾಜ್ಯದಲ್ಲಿ ಬಿಜೆಪಿ ಸರ್ಕಾರವಿದ್ದಾಗಲು ಜಿಲ್ಲೆಯ ಶಾಸಕ ಅಪ್ಪಚ್ಚು ರಂಜನ್, ವಿಧಾನ ಸಭಾಧ್ಯಕ್ಷರಾಗಿದ್ದ ಕೆ.ಜಿ.ಬೋಪಯ್ಯ ಸದನದಲ್ಲೇ ಕೊಡಗಿನ ಅನ್ಯಾಯ ಸರಿಪಡಿಸುವಂತೆ ಆಗ್ರಹಿಸಿ ಪ್ರತಿಭಟಿಸಿದ್ದರು. ಇದೀಗ ಜಿಲ್ಲೆಯಲ್ಲಿ ಇಬ್ಬರು ಶಾಸಕರಿದ್ದಾರೆ. ಇವರು ಕೊಡಗಿನ ಪರವಾಗಿದ್ದಾರೆಯೋ ಅಥವಾ ಸರ್ಕಾರ ಯೋಜನೆಗಳ ಪರವಾಗಿದ್ದಾರೆಯೋ ಎನ್ನುವುದನ್ನು ಸ್ಪಷ್ಟಪಡಿಸುವಂತೆ ಒತ್ತಾಯಿಸಿದರು.

ಮಕ್ಕಳ ಭವಿಷ್ಯಕೆ ಕಲ್ಲು: ವಿಧಾನ ಸಭೆಯ ಮಾಜಿ ಸಭಾಧ್ಯಕ್ಷರಾದ ಕೆ.ಜಿ. ಬೋಪಯ್ಯ ಮಾತನಾಡಿ, ಹಿಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಹಲವು ಜನಪರ ಕಾರ್ಯಕ್ರಮಗಳನ್ನು, ಈಗಿನ ಸರ್ಕಾರ ರದ್ದುಗೊಳಿಸುತ್ತಾ ಬರುತ್ತಿದೆ ಇದೀಗ ಕೊಡಗು ವಿವಿಯನ್ನು ವಿಲೀನದ ಹೆಸರಿನಲ್ಲಿ ರದ್ದು ಗೊಳಿಸುವ ಮೂಲಕ ಜಿಲ್ಲೆಯ ಮಕ್ಕಳ ಭವಿಷ್ಯಕ್ಕೆ ಕಲ್ಲು ಹಾಕುವ ಕೆಲಸ ಮಾಡುತ್ತಿರುವುದಾಗಿ ಆರೋಪಿಸಿದರು.

ಕೊಡಗಿನತ್ತ ಮಲತಾಯಿ ಧೋರಣೆ: ಜಿಲ್ಲಾ ಬಿಜೆಪಿ ಪ್ರಮುಖರಾದ ಅಪ್ಪಚೆಟ್ಟೋಳಂಡ ಮನು ಮುತ್ತಪ್ಪ ಮಾತನಾಡಿ, ಕೊಡಗು ಕರ್ನಾಟಕದೊಂದಿಗೆ ವಿಲೀನವಾದ ಬಳಿಕದ ಅವಧಿಯಿಂದ ಸುದೀರ್ಘ ಕಾಲ ಅಧಿಕಾರದಲ್ಲಿದ್ದ ಕಾಂಗ್ರೆಸ್ ಸರ್ಕಾರ, ಕೊಡಗಿನತ್ತ ಮಲತಾಯಿ ಧೋರಣೆಯನ್ನೆ ಅನುಸರಿಸುತ್ತಾ ಬಂದಿದೆ ಎಂದು

ಮನವಿ ಸಲ್ಲಿಕೆ: ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಐಶ್ವರ್ಯ ಅವರಿಗೆ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ ಮನವಿ ಸಲ್ಲಿಸುವುದರೊಂದಿಗೆ ಅಹೋರಾತ್ರಿ ಪ್ರತಿಭಟನೆ ಮುಕ್ತಾಯವಾಯಿತು. ಪ್ರತಿಭಟನೆಯಲ್ಲಿ ಮಾಜಿ ಉಪ ಮುಖ್ಯಮಂತ್ರಿ ಅಶ್ವತ್ಥ್ ನಾರಾಯಣ, ಮಾಜಿ ಸಚಿವ ಎಂ.ಪಿ.ಅಪ್ಪಚ್ಚು ರಂಜನ್, ಮಾಜಿ ಎಂಎಲ್‌ಸಿ ಸುನಿಲ್ ಸುಬ್ರಮಣಿ, ಪಕ್ಷದ ಪ್ರಮುಖರಾದ ಮಹೇಶ್ ಜೈನಿ, ಬಿ.ಕೆ.ಅರುಣ್ ಕುಮಾರ್, ಬಿ.ಕೆ.ಜಗದೀಶ್, ಅನಿತಾ ಪೂವಯ್ಯ ಉಪಸ್ಥಿತರಿದ್ದರು.

ಸಂಚಾರ ನಿಯಮ ಉಲ್ಲಂಘನೆ ಪ್ರಕರಣ: ರೂ.1.07 ಲಕ್ಷ ದಂಡ

ಕುಶಾಲನಗರ : ಕುಶಾಲನಗರ ಸಂಚಾರ ಪೊಲೀಸ್ ಠಾಣೆ ವತಿಯಿಂದ ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಕಳೆದ ಕೆಲವು ದಿನಗಳಿಂದ ಕಾರ್ಯಾಚರಣೆ ತೀವ್ರಗೊಳಿಸಿದ್ದು, 1.7 ಲಕ್ಷ ರೂ ದಂಡ ವಸೂಲಿ ಮಾಡಿದ್ದಾರೆ.

ಶುಕ್ರವಾರ ಅಪ್ರಾಪ್ತರು ವಾಹನ ಚಾಲನೆ ಮಾಡಿದ ಪ್ರತ್ಯೇಕ ಮೂರು ಪ್ರಕರಣಗಳಿಗೆ ದಂಡ ಹಾಕಲಾಗಿದೆ. ಡಿ.ಎಂ. ವಿನೋದ್, ಪಿ.ಕೆ.ರಾಜೇಶ್ ಹಾಗೂ ಸುಭಾಷ್ ಚಂದ್ರ ಎಂಬ ಮೂವರಿಗೆ ದಂಡ ಹಾಕಲಾಗಿದೆ. ಜೊತೆಗೆ ಕಳೆದ ರಡು ದಿನಗಳಲ್ಲಿ ಠಾಣಾ ವ್ಯಾಪ್ತಿಯಲ್ಲಿ ಪಾನಮತ್ತ ಹಾಗೂ ಕಾರಿನ ಸೈಲೆನ್ಸರ್ ಆಲ್ಟರೇಷನ್ ಮಾಡಿದ ಮೂರು ಪ್ರಕರಣಗಳನ್ನು ಪತ್ತೆ ಹಚ್ಚಿ ಒಟ್ಟು 31 ಸಾವಿರ ರೂ. ದಂಡ ವಿಧಿಸಿದ್ದಾರೆ. ರಿಜ್ವಾನ್, ಅಜಿನಾಸ್, ಫಾಜಿಲ್ ಖಾನ್ ಎಂಬುವರ ವಿರುದ್ಧ ಪ್ರಕರಣ ದಾಖಲಿಸಿ ದಂಡ ಹಾಕಲಾಗಿದೆ. ಅಪ್ರಾಪ್ತರಿಗೆ ವಾಹನ ಚಾಲನೆಗೆ ಪೋಷಕರು ಅವಕಾಶ ನೀಡಬಾರದು ಹಾಗೂ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಂಚಾರ ಠಾಣಾಧಿಕಾರಿ ಗಣೇಶ್ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ

ಮರದಿಂದ ಬಿದ್ದು ಕಾರ್ಮಿಕ ಸಾವು



ಕುಶಾಲನಗರ : ತೋಟದಲ್ಲಿ ಕರಿಮೆಣಸು ಕುಯ್ಯುತ್ತಿದ್ದ ಸಂದರ್ಭ ಕಾರ್ಮಿಕನೊರ್ವ ಆಕಸ್ಮಿಕವಾಗಿ ಮರದಿಂದ ಕೆಳಗೆ ಬಿದ್ದು ಮೃತಪಟ್ಟ ಘಟನೆ ಶುಕ್ರವಾರ ಬೆಟ್ಟಗೇರಿ ಗ್ರಾಮದಲ್ಲಿ ನಡೆದಿದೆ.

ನಂಜರಾಯಪಟ್ಟಣ ಗ್ರಾಮ ಪಂಚಾಯತಿ ವ್ಯಾಪ್ತಿಯ ರಂಗ ಸಮುದ್ರದ ವಿರೂಪಾಕ್ಷಪುರ ನಿವಾಸಿ ಪ್ರೇಮ(42) ಮೃತ ದುರ್ದೈವಿಯಾಗಿದ್ದಾನೆ.

ಬೆಟ್ಟಗೇರಿ ಗ್ರಾಮದ ನಾಲೆ ಗಣೇಶ, ಧರ್ಮಜಯ ಎಂಬುವರ ತೋಟದಲ್ಲಿ ಕರಿಮೆಣಸು ಕುಯ್ಯುವ ಕೆಲಸಕ್ಕೆ ತೆರಳಿದ್ದ ಸಂದರ್ಭ ಈ ಘಟನೆ ನಡೆದಿದೆ ಎನ್ನಲಾಗಿದೆ.

ಮರದಿಂದ ಬಿದ್ದು ಎದೆ ಹಾಗೂ ಕಾಲಿಗೆ ತೀವ್ರತರದ ಗಾಯ ಉಂಟಾಗಿದೆ. ಮೃತನ ಕುಟುಂಬದವರು ರಸಲ್ ಪುರ ತೋಟದ ಮಾಲೀಕನ ವಿರುದ್ಧ ಕುಶಾಲನಗರ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಗಡಿ ಜಿಲ್ಲೆಗೆ ಈಜುಕೊಳ, ಪ್ರಜಾಸೌಧ, ವಸತಿ ಶಾಲೆಗಳು ಮೇಲ್ದರ್ಜೆಗೆ

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಜೆಟ್‌ನಲ್ಲಿ ಕೊಡುಗೆಗಳು



ಚಾಮರಾಜನಗರ, ಮಾ.7– ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮುಖ್ಯಮಂತ್ರಿಯಾದ ಬಳಿಕ ಮಂಡಿಸಿದ ಮೂರನೇ ಬಜೆಟ್‌ನಲ್ಲಿ ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಈಜುಕೊಳ, ಹನೂರಿನಲ್ಲಿ ಪ್ರಜಾಸೌಧ ನಿರ್ಮಾಣ, ಐದು ವಸತಿ ಶಾಲೆಗಳ ಮೇಲ್ದಾರ್ಜೆಗೇರಿಸುವುದು ಹಾಗೂ ಕೆಶಿಪ್–4 ಯೋಜನೆಯಡಿ ರಸ್ತೆ ಅಭಿವೃದ್ಧಿಗೊಳಿಸುವ ಘೋಷಣೆ ಮಾಡಲಾಗಿದೆ.

ರಾಜ್ಯ ಬಜೆಟ್‌ನಲ್ಲಿ ಈ ಬಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಲವಾರು ಯೋಜನೆಗಳನ್ನು ನೀಡಿದ್ದಾರೆ.

ರಾಜ್ಯ ಬಜೆಟ್‌ನಲ್ಲಿ ಸಿಕ್ಕಿದ್ದೇನು: 2 ಕೋಟಿ ವೆಚ್ಚದಡಿ ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಒಲಂಪಿಕ್ಸ್ ಮಾದರಿಯ (50 ಮೀಟರ್) ಈಜುಕೊಳ ನಿರ್ಮಿಸುವುದು ಹಾಗೂ ಹೊಸ ತಾಲೂಕು ಕೇಂದ್ರವಾಗಿ ಘೋಷಣೆಯಾಗಿರುವ ಹನೂರು ಪಟ್ಟಣದಲ್ಲಿ ತಾಲೂಕು ಪ್ರಜಾಸೌಧ ನಿರ್ಮಾಣ ಮಾಡಲಾಗುವುದು ಎಂದು ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಣೆ ಮಾಡಿದ್ದಾರೆ.

ಹನೂರಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಉನ್ನತೀಕರಿಸುವುದು, ಜಿಲ್ಲೆಯಲ್ಲಿರುವ ಐದು ವಸತಿ ಶಾಲೆಗಳನ್ನು 12ನೇ ತರಗತಿವರೆಗೆ ಮೇಲ್ದರ್ಜೆಗೇರಿಸಲು ಬಜೆಟ್‌ನಲ್ಲಿ ಅವಕಾಶ ಕಲ್ಪಿಸಲಾಗಿದೆ. ಅಲ್ಲದೇ ಸಾರಿಗೆ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಚಾಮರಾಜನಗರ ಸೇರಿ ಮೂರು ಜಿಲ್ಲೆಗಳಿಗೆ ಒಟ್ಟು 20 ಕೋಟಿ ರೂ. ವೆಚ್ಚದಲ್ಲಿ ಸ್ವಯಂ ಚಾಲಿತ ಪರೀಕ್ಷಾ ಪಥ ನಿರ್ಮಾಣ, ಕೆಶಿಪ್–4 ಯೋಜನೆಯಡಿ ಹನೂರು, ರಾಮಾಪುರ, ಪಾಲಾರ್‌ಗೆ ಸಂಪರ್ಕ ಕಲ್ಪಿಸುವ 70ಕಿ.ಮೀ. ರಸ್ತೆ ಅಭಿವೃದ್ಧಿ, ಕೆಶಿಪ್–4 ಯೋಜನೆಯಡಿ ಹುಲ್ಲಹಳ್ಳಿ, ತೆಗಡೂರು, ಸಂತೇಮರಹಳ್ಳಿಗೆ ಸಂಪರ್ಕ ಕಲ್ಪಿಸುವ 55 ಕಿ.ಮೀ ರಸ್ತೆ ಅಭಿವೃದ್ಧಿ ಮಾಡುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದೆ.

ಸಮತೋಲನದ ಬಜೆಟ್

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ ಬಜೆಟ್ ಸಮತೋಲನದಿಂದ ಕೂಡಿದ್ದು, ಎಲ್ಲಾ ವರ್ಗಗಳಿಗೆ ಆದ್ಯತೆ ನೀಡಲಾಗಿದೆ. ಕೇಂದ್ರ ಸರ್ಕಾರದ ಅಸಹಕಾರದ ನಡುವೆಯೂ ಅಭಿವೃದ್ಧಿ ಪರ ಬಜೆಟ್ ಮಂಡಿಸಲಾಗಿದೆ. ಕೃಷಿ, ಶಿಕ್ಷಣ, ನೀರಾವರಿ, ಸಮಾಜ ಕಲ್ಯಾಣ ಸೇರಿದಂತೆ ಎಲ್ಲಾ ಇಲಾಖೆಗಳಿಗೂ ಅನುದಾನ ನೀಡಿರುವುದು ಗಮನಾರ್ಹವಾಗಿದೆ.

–ಬಿ.ಕೆ. ರವಿಕುಮಾರ್, ಎಪಿಎಂಸಿ ಮಾಜಿ ಅಧ್ಯಕ್ಷರು.

ಸರ್ಕಾರದ ವಿರುದ್ಧ ಜನಾಂದೋಲನ

ಬಜೆಟ್‌ನಲ್ಲಿ ಜಿಲ್ಲೆಯನ್ನು ಕಡೆಗಣಿಸಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಕೇವಲ ಮತ ಗಳಿಸುವಾಗ ಮಾತ್ರ ಜಿಲ್ಲೆಯನ್ನು ನೆನಪಿಸಿಕೊಳ್ಳುತ್ತದೆ. ಜಿಲ್ಲೆಯ ಅಭಿವೃದ್ಧಿಗೆ ಅನುದಾನ ನೀಡುವಾಗ ಇಲ್ಲಿಯ ಜನರ ಸಂಕಷ್ಟಗಳು ನೆನಪಾಗುವುದಿಲ್ಲ. ಜಿಲ್ಲೆಯ ಅಭಿವೃದ್ಧಿಗೆ ಯಾವುದೇ ಅನುದಾನ ನೀಡದೆ ಕಡೆಗಣಿಸಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನಾಂದೋಲನ ರೂಪಿಸಲಾಗುವುದು.

–ಎನ್.ನಾಗಯ್ಯ, ರಾಜ್ಯ ಕಾರ್ಯದರ್ಶಿ, ಬಿಎಸ್‌ಪಿ.

ನಿರಾಶಾದಾಯಕ ಬಜೆಟ್

ರಾಜ್ಯ ಕಾಂಗ್ರೆಸ್ ಸರ್ಕಾರದ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ನಿರಾಶದಾಯಕವಾಗಿದೆ. ರಾಜ್ಯದ ಅಭಿವೃದ್ಧಿಗೆ ಪೂರಕವಾದ ಯೋಜನೆಗಳಿಲ್ಲ. ಜಿಲ್ಲೆಯನ್ನು ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಕಡೆಸಿರುವುದು ಬಜೆಟ್‌ನಿಂದ ಅರಿವಾಗುತ್ತದೆ. ಇನ್ನಾದರೂ ಜಿಲ್ಲೆಯ ಜನರು ಈ ಬಗ್ಗೆ ಚಿಂತಿಸಬೇಕಿದೆ.

–ಪಿ. ವೃಷಬೇಂದ್ರಪ್ಪ, ಉಪಾಧ್ಯಕ್ಷರು, ಜಿಲ್ಲಾ ಬಿಜೆಪಿ.

ರೈತರ ಅಭಿವೃದ್ಧಿಗೆ ಪೂರಕವಲ್ಲದ ಬಜೆಟ್

ಬಜೆಟ್‌ನಲ್ಲಿ ರೈತ ಅಭಿವೃದ್ಧಿಗೆ ಪೂರಕವಾದ ಯೋಜನೆಗಳು ಸ್ಪಷ್ಟವಾಗಿಲ್ಲ. ರೈತರ ಕೃಷಿ ಉತ್ಪನ್ನಗಳ ವೈಜ್ಞಾನಿಕ ಬೆಲೆ ನಿಗದಿಯ ಪ್ರತಿಪಾದನೆ ಇಲ್ಲ. ಹೂವು, ಹಣ್ಣು ತರಕಾರಿ ಇವುಗಳ ಶಿಥಲೀಕರಣ ಘಟಕಗಳ ಸ್ಥಾಪನೆಗೆ ಯಾವುದೇ ಪ್ರಸ್ತಾಪವಿಲ್ಲ. ರಾಜ್ಯದ ವ್ಯಾಪ್ತಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ರೈತರ ಬಲವರ್ಧನೆಗೆ ಸಾಲಮನ್ನದ ಪ್ರಸ್ತಾಪವಿಲ್ಲ.

–ಹಳ್ಳಿಕೆರೆಹುಂಡಿ ಭಾಗ್ಯರಾಜ್, ರಾಜ್ಯ ರೈತ ಸಂಘಟನೆಗಳ ಒಕ್ಕೂಟ.

ಚಾಮರಾಜನಗರದಲ್ಲಿ ಸುವರ್ಣ ಸಂಕಲ್ಪ ಜ್ಯೋತಿಷಿಗಳು



ಚಾಮರಾಜನಗರಕ್ಕೆ ಭೇಟಿ ನೀಡಿದ್ದ ಸುವರ್ಣ ಸಂಕಲ್ಪ ಕಾರ್ಯಕ್ರಮದ ಜ್ಯೋತಿಷಿಗಳಾದ ಶ್ರೀ ಗೋಪಾಲಕೃಷ್ಣ ಶರ್ಮ ಗುರೂಜಿಯವರನ್ನು ಜನಾರ್ಧನ ಪ್ರತಿಷ್ಠಾನದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಚಾಮರಾಜನಗರ, ಮಾ.7 – ಕನ್ನಡ ಸುವರ್ಣ ವಾಹಿನಿಯಲ್ಲಿ ಬರುವ ಸುವರ್ಣ ಸಂಕಲ್ಪ ಕಾರ್ಯಕ್ರಮದ ಜ್ಯೋತಿಷಿಗಳಾದ ಶ್ರೀ ಗೋಪಾಲಕೃಷ್ಣ ಶರ್ಮ ಗುರೂಜಿಯವರು ನಗರದ ವಿವಿಧ ದೇವಸ್ಥಾನಗಳು ಮತ್ತು ಮನೆಗಳಿಗೆ ಭೇಟಿ ಕೊಟ್ಟು ಜನರ ಜೊತೆ ಸಂವಾದ ನಡೆಸಿದರು.

ನಗರದ ಬಣ್ಣಾರಿ ಅಮ್ಮನ್ ದೇವಸ್ಥಾನ ಕೊಳದ ಗಣಪತಿ ದೇವಸ್ಥಾನಗಳಿಗೆ ಭೇಟಿ ಕೊಟ್ಟು ಜನರೊಂದಿಗೆ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಭಗವಂತ ಎಲ್ಲರಿಗೂ ಸುಖ ಶಾಂತಿ ನೆಮ್ಮದಿ ಕೊಟ್ಟು ಕಾಪಾಡಲಿ, ಒಳ್ಳೆಯ ಮಳೆ ಬೆಳೆ ಆಗಲಿ ಎಂದರು.

ಇದೇ ಸಂದರ್ಭದಲ್ಲಿ ಜನಾರ್ಧನ ಪ್ರತಿಷ್ಠಾನದ ವತಿಯಿಂದ ಶ್ರೀ ಗೋಪಾಲಕೃಷ್ಣ ಶರ್ಮ ಗುರೂಜಿ ದಂಪತಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಅನಂತ ಪ್ರಸಾದ್, ವಾಸುದೇವರಾವ್, ಎನ್.ರಾಮಚಂದ್ರ, ಸತೀಶ್ ಇತರರು ಇದ್ದರು.

ಹಸಿರು ನಮ್ಮ ಉಸಿರು

ನಿಧನ

ಎಸ್.ಅರುಳಪ್ಪ



ಚಾಮರಾಜನಗರ, ಮಾ.7–ನಿವೃತ್ತ ಶಿಕ್ಷಕ ಹಾಗೂ ಚಾಮರಾಜನಗರ ತಾಲೂಕಿನ ದೊಡ್ಡರಾಯಪೇಟೆ ಗ್ರಾಮದ ನಿವಾಸಿ ಎಸ್.ಅರುಳಪ್ಪ(85) ಶುಕ್ರವಾರ ರಾತ್ರಿ ನಿಧನರಾದರು.

ಮೃತರು ಚಾಮರಾಜನಗರದ ರಾಮಸಮುದ್ರ ಟೌನ್‌ನಲ್ಲಿರುವ ಕ್ರಿಸ್ತರಾಜ ಬಾಲರ ಪಟ್ಟಣ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 35 ವರ್ಷಗಳ ಕಾಲ ಗಣಿತ ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು. ಮೃತರು ಪತ್ನಿ ಹಾಗೂ ಆರು ಮಂದಿ ಪುತ್ರಿಯರು, ಅಳಿಯಂದಿರು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯನ್ನು ಶನಿವಾರ (ಮಾ.8) ಮಧ್ಯಾಹ್ನ 3 ಗಂಟೆಗೆ ಅವರ ಸ್ವಗ್ರಾಮ ದೊಡ್ಡರಾಯಪೇಟೆ ಗ್ರಾಮದಲ್ಲಿ ನಡೆಸಲಾಗುವುದು ಎಂದು ಕುಟುಂಬದವರು ತಿಳಿಸಿದ್ದಾರೆ.

ಇಂದು ಸಂತೇಮರಹಳ್ಳಿ, ಬೇಗೂರು, ನಾಳೆ ಬದನಗುಪ್ಪೆ ಭಾಗದಲ್ಲಿ ವಿದ್ಯುತ್ ವ್ಯತ್ಯಯ

ಚಾಮರಾಜನಗರ, ಮಾ.7– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಮಾ.8 ರಂದು ಸಂತೇಮರಹಳ್ಳಿ ಮತ್ತು ಬೇಗೂರು ಉಪ ವಿಭಾಗಗಳ ವ್ಯಾಪ್ತಿಯಲ್ಲಿ ಹಾಗೂ ಮಾ.9 ರುದು ಚಾಮರಾಜನಗರ ಉಪ ವಿಭಾಗದಲ್ಲಿ ನಾಲ್ಕನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಅಂದಾ ದಿನದಂದು ಬೆಳಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.



ಮಾ.8 ರಂದು ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯ ಹೊಂಗನೂರು, ಇರಸವಾಡಿ, ಮಸಣಾಪುರ, ಚಾಟಿಪುರ, ಗಂಗಾವಡಿ, ಬೂದಂಬಳ್ಳಿ ಮೋಳೆ, ಗೂಳಿಪುರ, ಹೊಮ್ಮ, ರೇಚಂಬಳ್ಳಿ, ಹೆಚ್. ಮೂಕಳ್ಳಿ, ಕುರುಬರಹುಂಡಿ, ನೀರಾವರಿ ಪಂಪ್‌ಸೆಟ್ ಸ್ಥಾವರಗಳು, ಉಮ್ಮತ್ತೂರು ಬಾಗಳಿ, ಲಿಂಗಣಾಪುರ, ಜನ್ನೂರು, ಜನ್ನೂರು ಹೊಸೂರು, ಹಳ್ಳಿಕೆರೆಹುಂಡಿ, ಗಣಗನೂರು, ಗಣಗನೂರುಪುರ, ನವಿಲೂರು, ಆಲ್ದೂರು, ಬಿ.ಎಂ.ಕೆ. ಹುಂಡಿ, ಗೊದ್ದಲಹುಂಡಿ, ನೀರಾವರಿ ಪಂಪ್ ಸೆಟ್ ಸ್ಥಾವರಗಳು ಹಾಗೂ ಬೇಗೂರು ಉಪವಿಭಾಗ ವ್ಯಾಪ್ತಿಯ ಹಾಲಳ್ಳಿ, ಕಮರಹಳ್ಳಿ, ಬೊಗ್ಗನಪುರ, ಮರಳಾಪುರ, ರಂಗನಾಥಪುರ, ತೊರವಳ್ಳಿ, ನಿಟ್ರೆ, ಹಿರಿಕಾಟಿ, ಚಿಕ್ಕಾಟಿ, ಅರೆಪುರ, ತೊಂಡವಾಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಮಾ.9 ರಂದು ಚಾಮರಾಜನಗರ ಉಪವಿಭಾಗ ವ್ಯಾಪ್ತಿಯ ಕೆಐಎಡಿಬಿ ಇಂಡಸ್ಟ್ರೀಯಲ್ ಏರಿಯಾ ಮರಿಯಾಲ, ಬೇಡರಪುರ, ಕೆಲ್ಲಂಬಳ್ಳಿ, ಬಸವನಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ 1912ಗೆ ಕರೆ ಮಾಡುವಂತೆ ನಿಗಮದ ಕಾರ್ಯ ನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಕುದೇರಿನಲ್ಲಿ ಕಾನೂನು ಅರಿವು ಕಾರ್ಯಕ್ರಮ

ಚಾಮರಾಜನಗರ, ಮಾ.7– ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಕುದೇರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳೆಯರಿಗೆ ಕಾನೂನು ಅರಿವು ಕಾರ್ಯಕ್ರಮವನ್ನು ಮಾರ್ಚ್ 8ರಂದು ಬೆಳಗ್ಗೆ 10.30 ಗಂಟೆಗೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ಉಮ್ಮತ್ತೂರು ಇಂದುಶೇಖರ್ ಕಾರ್ಯಕ್ರಮ ಉದ್ಘಾಟಿಸುವರು. ಯಳಂದೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕರಾದ ಎಂ. ಗಿರಿಜಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕುದೇರು ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ನಿರೀಕ್ಷಕರಾದ ಕುಮುದ, ಜಿಲ್ಲಾ ಪಂಚಾಯಿತಿಯ ಜಿಲ್ಲಾ ತರಬೇತಿ ಸಂಯೋಜಕರಾದ ಟಿ.ಜೆ. ಸುರೇಶ್ ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು.

ಕುದೇರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಥಿಯೋಡರ್ ಲೂಥರ್ ಅಧ್ಯಕ್ಷತೆ ವಹಿಸುವರು. ಅಧೀಕ್ಷಕರಾದ ಕೆಸಿ. ರವಿ, ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ.ಎನ್.ಜೆ. ಶಶಿಕಲಾ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

ಕನ್ನಡಿಗರ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ



ಎಂಇಎಸ್ ಪುಂಡರು ನಡೆಸುತ್ತಿರುವ ಹಲ್ಲೆಯನ್ನು ಖಂಡಿಸಿ ನಗರದಲ್ಲಿ ಕರ್ನಾಟಕ ಸೇನಾಪಡೆಯಿಂದ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರ, ಮಾ.7 – ಬೆಳಗಾವಿ ಗಡಿಯಲ್ಲಿ ಕನ್ನಡಿಗರ ಮೇಲೆ ಎಂಇಎಸ್ ಪುಂಡರು ನಡೆಸುತ್ತಿರುವ ಹಲ್ಲೆಯನ್ನು ಖಂಡಿಸಿ ನಗರದಲ್ಲಿ ಕರ್ನಾಟಕ ಸೇನಾ ಪಡೆಯಿಂದ ಪ್ರತಿಭಟನೆ ನಡೆಯಿತು.

ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಸಮಾವೇಶಗೊಂಡ ಪ್ರತಿಭಟನಾಕಾರರು ಅಲ್ಲಿಂದ ಭುವನೇಶ್ವರಿ ವೃತ್ತಕ್ಕೆ ಬಂದು ಕೆಲಕಾಲ ರಸ್ತೆ ತಡೆ ನಡೆಸಿ, ರಾಜ್ಯ ಸರ್ಕಾರ, ಎಂಇಎಸ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಕರ್ನಾಟಕ ಸೇನಾ ಪಡೆಯ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಬೆಳಗಾವಿ ಗಡಿಯಲ್ಲಿ ಎಂಇಎಸ್ ಪುಂಡರಿಂದ ಕನ್ನಡಿಗರ ಮೇಲೆ ನಿರಂತರವಾಗಿ ಹಲ್ಲೆಗಳು ನಡೆಯುತ್ತಿವೆ. ರಾಜ್ಯದ ಸಾರಿಗೆ ಬಸ್ ಚಾಲಕನ ಮುಖಕ್ಕೆ ಮಸಿ ಬಳಿದು ಹಲ್ಲೆ ನಡೆಸಿರುವುದು ಖಂಡನೀಯ. ಇಷ್ಟೆಲ್ಲ ಹಲ್ಲೆ ಪ್ರಕರಣಗಳು ನಡೆಯುತ್ತಿದ್ದರು ರಾಜ್ಯ ಸರ್ಕಾರ ಮಾತ್ರ ಹಲ್ಲೆ ನಡೆಸಿದವರ ವಿರುದ್ಧ ಕ್ರಮವಹಿಸದೇ ಸುಮ್ಮನಿರುವುದು ದುರಂತವಾಗಿದೆ ಎಂದರು.

ಗಡಿ ವಿವಾದ ಕಾಯ್ದುಕೊಳ್ಳಲು ಮಹಾರಾಷ್ಟ್ರ ಸರ್ಕಾರ ಇಬ್ಬರು ಸಚಿವರನ್ನು ನೇಮಕ ಮಾಡಿದೆ. ಆದರೆ, ರಾಜ್ಯ ಸರ್ಕಾರ ಗಡಿ ಭಾಗದಲ್ಲಿ ಕನ್ನಡಿಗರ ಮೇಲೆ ಆಗುತ್ತಿರುವ ಅನ್ಯಾಯವನ್ನು ನೋಡಿಕೊಳ್ಳಲು ಯಾವೊಬ್ಬ ಸಚಿವರನ್ನು ನೇಮಕ ಮಾಡಿಲ್ಲ ಎಂದರು.

ಕೂಡಲೇ ಸರ್ಕಾರ ಗಡಿಯಲ್ಲಿ ಕನ್ನಡಿಗರ ರಕ್ಷಣೆಗೆ ಸಚಿವರನ್ನು ನೇಮಕ ಮಾಡಬೇಕು. ರಾಜ್ಯದಲ್ಲಿ ಎಂಇಎಸ್ ನಿಷೇಧ ಮಾಡಬೇಕು. ಇದೇ ರೀತಿ ಕನ್ನಡಿಗರ ಮೇಲೆ ದಬ್ಬಾಳಿಕೆ, ದೌರ್ಜನ್ಯಗಳು ನಡೆಸಿದರೆ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದರು. ಪ್ರತಿಭಟನೆಯಲ್ಲಿ ನಿಜಧ್ವನಿ ಗೋವಿಂದರಾಜು, ತಾಂಡವಮೂರ್ತಿ, ರಾಚಪ್ಪ, ವೀರಭದ್ರ, ಮಲ್ಲಣ್ಣ, ಸಿದ್ದರಾಜು ಇತರರು ಇದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಮನೆ ಬಾಡಿಗೆಗೆ/ಭೋಗ್ಯಕ್ಕೆ ಇದೆ
ಶ್ರೀರಾಂಪುರ ಯುನಿವರ್ಸಿಟಿ ಲೇಔಟ್ ಎದುರು ಗಾಯತ್ರಿ ಬಡಾವಣೆಯಲ್ಲಿ 1BHK 2 ಮಹಡಿ 2BHK 1ನೇ ಮಹಡಿಯಲ್ಲಿ ಲಭ್ಯವಿರುತ್ತದೆ.
9481041871

MUDA SITE FOR SALE
ವಿಜಯನಗರ 4ನೇ ಹಂತ ಆದೀಶ್ವರ್ ಲೇಔಟ್ 40'×60' ಈಸ್ಟ್ ಫೇಸಿಂಗ್ ಸೈಟ್.
9886048471

SITE FOR SALE
Pragathi Dreams
30x50 N/F
BEHIND INFOSYS AND BEML
Mob: 9980716155

JANA JANANI TRUST
*Women's day *
"Offer"..FREE
Beautician (Basic to advanced) & Tailoring class
DD urs road Mysore
9380705968
30x15 hall rent for any classes n tutorial.

SITE FOR SALE
60x90
Next to Post Office, Somavarapete, Chamarajanagara
Mob: 9448187863

MUDA SITE FOR SALE
ಇನ್ಫೋಸಿಸ್ ಪಕ್ಕ "KBL ಸಿಲಿಕಾನ್ ಸಿಟಿ" 32'x60' ಸೌತ್ – ಈಸ್ಟ್ ಕಾರ್ನರ್ ಸೈಟ್
9886048471

ಮನೆ ಮಾರಾಟಕ್ಕಿದೆ
ಮೈಸೂರಿನ ಜೆಪಿ ನಗರದ 'ಡಿ' ಬ್ಲಾಕ್‌ನಲ್ಲಿ (Ground + Duplex + Room) 30x40 ವಿಸ್ತೀರ್ಣದ ಮನೆ ಕ್ರಯಕ್ಕೆ ಲಭ್ಯವಿದೆ.
9742663339

ಬೇಕಾಗಿದ್ದಾರೆ
ಆಶ್ರಮದಲ್ಲಿ ಉಳಿದುಕೊಂಡು ಕೆಲಸ ಮಾಡುವಂಥವರು , ಮಹಿಳೆಯರು ಬೇಕಾಗಿದ್ದಾರೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಫೇಲ್ /ಪಾಸ್ ಊಟ ವಸತಿ ದೊರೆಯುತ್ತದೆ
9110455297

ಸಂಪು ಮತ್ತು ಟ್ಯಾಂಕ್ ಸೋಲಾರ್ ಕ್ಲೀನಿಂಗ್
8197383645, 9008711654

INVESTOR ಬೇಕಾಗಿದ್ದಾರೆ
Leading Food Products Export Business ಅಭಿವೃದ್ಧಿ ಪಡಿಸಲು 50 ಲಕ್ಷಗಳವರೆಗೆ Funds ಬೇಕಾಗಿದೆ. 20% ಡಿವಿಡೆಂಡ್ & ಸೂಕ್ತ ಭದ್ರತೆಯೊಂದಿಗೆ ಕನಿಷ್ಠ 2 ಲಕ್ಷದಿಂದ 5 ಲಕ್ಷದವರೆಗೆ Invest ಮಾಡುವವರು
ಸಂಪರ್ಕಿಸಿರಿ
SRR SWADESHIMART.COM
7019012485

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ನಿವೇಶನ ಮಾರಾಟಕ್ಕಿದೆ
40x60
ಅಳತೆಯ ಪಶ್ಚಿಮಾಭಿಮುಖ ಇರುವ ನಿವೇಶನವು, ವಸಂತನಗರ ಮೈಸೂರು, ಇಲ್ಲಿ ಮಾರಾಟಕ್ಕಿರುತ್ತದೆ.
(ದಲ್ಲಾಳಿಗಳಿಗೆ ಅವಕಾಶವಿಲ್ಲ)
8792896705

FOR SALE
MUDA approved 40x65, North facing site, on 40 ft road Just 200 metres away from Srirampura Ring road junction
7795096976

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

SITE FOR SALE
30X40
East Face Maple Green Layout Near R T Nagar
9740069393

SITE FOR SALE
In Yadavagiri
43x63
North Facing
Very Good Location
Direct Buyers
9632196136

ಬೇಕಾಗಿದ್ದಾರೆ
ವೆಜ್ ಹೋಟೆಲ್‌ನಲ್ಲಿ ಕೆಲಸ ಮಾಡಲು ಹೆಲ್ಪರುಗಳು (2) ಸರ್ವರ್‌ಗಳು (3) (ಹುಡುಗಿಯರು) ಹಾಗೂ ಅಡುಗೆ ಭಟ್ಟರು ಬೇಕಾಗಿದ್ದಾರೆ
8892088999

SBIT TRAVELS
Group Tour
DUBAI 06 DAYS
10,20,22 Apr | 02,05,15 May
05,12,25 June
Air tickets | Entry tickets | Meals
Hotel | Visa | All tours and transfers
9343524127

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Aniketana Road, kuvempunagar, Mysuru
MYSURU 9611028523 MANGALORE 9343142258

FOR SALE
Fully Furnished Veg Hotel
ವೆಜ್ ಹೋಟೆಲ್ ಮಾರಾಟಕ್ಕಿದೆ
Agrahara near Mysore Palace
7204774774

ನಿರ್ಮಲ ಸರ್ವೀಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

SITE FOR SALE
52X60 SW CORNER SITE FOR SALE IN RMS LAYOUT NEAR DR RAJKUMAR ROAD 3 BHK APARTMENT FOR SALE IN TRENDS APARTMENT BOGADI ROAD
9880344263

ಸೈಟ್‌ಗಳು ಸೇಲ್
ಏರ್ ಪೋರ್ಟ್ ಬಳಿಯ ಹೈವೇ ನಲ್ಲಿರುವ ಲೇಔಟ್‌ನಲ್ಲಿ 30x40 ಅಳತೆಯ ಸೈಟ್‌ಗಳು ಮುಡಾ ಖಾತೆ ಮತ್ತು ಇ–ಖಾತೆ ಆಗಿದೆ.
9342123373

R S CONSTRUCTION
ENGINEERS & CONTRACTORS
ನಿಮ್ಮ ಕನಸಿನ ಮನೆಯನ್ನು ಉತ್ಕೃಷ್ಟ ಗುಣಮಟ್ಟದಲ್ಲಿ ಅತ್ಯಂತ ಕಡಿಮೆ ಬೆಲೆಯಲ್ಲಿ ನಾವು ನಿರ್ಮಿಸಿ ಕೊಡುತ್ತೇವೆ.
ದರ 1,80,000/– ಪ್ರತಿ ಚದರ
ಉಚಿತ ಪ್ಲಾನ್ ಕೂಡ ಮಾಡಿಕೊಡಲಾಗುತ್ತದೆ. ಇಂದೇ ಸಂಪರ್ಕಿಸಿ
9538575009
7019151884

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

SITES FOR SALES
"ನ್ಯಾಯಾಂಗ ಬಡಾವಣೆ" ಕೂರ್ಗಳ್ಳಿ North facing 30'x 40' 80 ಲಕ್ಷ
ವಾಜಮಂಗಳ "ಆದಾದ್ಯ ಗಾರ್ಡೆನಿಯಾ" West facing 40'x 60' 85 ಲಕ್ಷ
77950 55551
Direct Owner / Slightly Negotiable

SUN STAR
Solar Heatirgs & Solar Lightings
ISO 9001

SUNSTAR SOLAR SYSTEM
SALES & SERVICE
9900609977,9972036774,9916457118

WANTED
Require MSW / MBA candidates for 'HR Related Works' at office with computer skills. Interested candidates can contact:
9945537353, 8310990980
Or Mail your CV to:
lokeshms.ms70@gmail.com

30x40
North Face Site Gayathri Layout 1st Stage (Attach R T Nagar)
9880273834

SITE FOR SALE
40x60 North face Surya layout srirampura. Near Shiva temple. Clear document
9900119004

HOUSE FOR SALE
20/30, 2BHK MUDA Home For Sale Semi furnished 50lakhs Near Allanahalli Ring Road Mysore
SITE FOR SALE
MUDA 40/60 Site For Sale in Dattagalli Mysore
PH: 9900464111

VILLA PLOTS FOR SALE
MUDA APPROVED
30X40
Near Infosys & BEML
Free Site Visit Call Now
MCIL www.mcil.in
88614 40528
97314 00249

SITE FOR SALE
(30x40) @ Trimurthynagar (Near Central St. Joseph & Acharya Vidya Kula) Mysore-Hunsur Road. Fully developed.
21 Lakhs.
Mob: 95388-39926

JOBNET
ಮೊಬೈಲ್‌ನಲ್ಲಿ ಕೆಲಸ
ಮನೆಯಲ್ಲೇ ಕುಳಿತು ಮೊಬೈಲ್ ಮೂಲಕ ಫಾರಂ ಫಿಲ್ಲಿಂಗ್ ಮಾಡಿ ಪ್ರತಿ ತಿಂಗಳಿಗೆ 10,000 ದಿಂದ 20,000 ಸಂಪಾದಿಸಿ.
Mob: 9731891409

ಸೋಲಾರ್ ವಾಟರ್ ಹೀಟರ್
Solar Water Heater

ಸೇಲ್ಸ್, ಸರ್ವೀಸ್ ರಿಪೇರಿ, ಎಕ್ಸ್‌ಚೇಂಜ್ ಹಾಗೂ ಬಿಡಿ ಭಾಗಗಳಿಗಾಗಿ ಸಂಪರ್ಕಿಸಿ
Vinaykrishna
9611648636

ಸೈಟು ಬೇಕಾಗಿದೆ
ಚಿಕ್ಕಹಳ್ಳಿ/ವರುಣ/ವಾಜಮಂಗಲ/ ಜೆಎಸ್‌ಎಸ್/ಬಸವೇಶ್ವರ/ ನಿರ್ಮಾಣ್ ಹಾಗೂ ಇತರೆ ಅಕ್ಕಪಕ್ಕದ ಬಡಾವಣೆಗಳಲ್ಲಿ ಟಿ.ನರಸೀಪುರ ರಸ್ತೆ/ಬನ್ನೂರು ರಸ್ತೆ
9686071750

40x50
North West Corner Roopa Nagar
9880273834

ತಕ್ಷಣ ಬೇಕಾಗಿದ್ದಾರೆ
ಮೈಸೂರು ಮತ್ತು ಬೆಂಗಳೂರಿನಲ್ಲಿ ಕೆಲಸ ಮಾಡಲು ಕಂಟೈನರ್ ವಾಹನಗಳಿಗೆ ಟ್ರಕ್ ಡ್ರೈವರ್ಸ್ ಬೇಕಾಗಿದ್ದಾರೆ. ಪಿಎಫ್ ಮತ್ತು ಇಎಸ್‌ಐ ಸೌಲಭ್ಯವಿರುತ್ತದೆ. 50 ವರ್ಷ ಮೇಲ್ಪಟ್ಟವರು ಅರ್ಜಿ ಸಲ್ಲಿಸಬಹುದು. ಸಂಪರ್ಕಿಸಿ:
Mob: 9341623350

Change of Name
I, Srikantha Kattepura Krishnamurthy, S/o Krishnamurthy, residing at 622, 12th Main, 'B' Block, 3rd Stage, Vijayanagara, Mysuru-570 030, do hereby solemnly affirm and state an oath before Notary Sumithra. B, Mysore, dated 20-2-2025 that my correct name is Srikantha Kattepura Krishnamurthy as in all my documents. But in my odl passport (No. B1906677) my name wrongly mentioned as Srikantha Kanttepura instead of Srikantha Kattepura Krishnamurthy.
Sd/- Srikantha Kattepura Krishnamurthy

ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ ಮತ್ತು ಹೆಬ್ಬಾಳು ಕೈಗಾರಿಕ ಪ್ರದೇಶದಲ್ಲಿರುವ ಪ್ರತಿಷ್ಠಿತ ಕಾರ್ಖಾನೆಗಳಿಗೆ ಹುಡುಗರು ಬೇಕಾಗಿದ್ದಾರೆ. ವಯಸ್ಸು: 18 ರಿಂದ 40 ವರ್ಷ. ವಿದ್ಯಾರ್ಹತೆ: 7 ರಿಂದ ಪಿಯುಸಿ ಮತ್ತು ಐಟಿಐ. ರಿಯಾಯಿತಿ ದರದಲ್ಲಿ ಊಟ ಮತ್ತು ವಸತಿ ಸೌಲಭ್ಯ ವಿರುತ್ತದೆ. ಸಂಪರ್ಕಿಸಿ:
Mob: 9035381989

Document Lost
Umme Asma Banu, No. 21, 1st Floor, Syed Abdul Rahman Road, KEB Colony, Mysore, have lost allotment letter of Site No. 830. Finders please contact:
Mob: 9945899109

ನಮ್ಮಲ್ಲಿ ಬಾದಾಮಿ, ಗೋಡಂಬಿ, ಪಿಸ್ತಾ ಅಂಜೂರ, ಒಣದ್ರಾಕ್ಷಿ, ಖರ್ಜೂರ, ಮುಂತಾದ ಡ್ರೈಫ್ರೂಟ್ಸ್ ದೊರೆಯುತ್ತದೆ. (5 ಕಿ.ಮೀ ವರೆಗೂ ಉಚಿತ ಡೆಲಿವರಿ) ಸಂಪರ್ಕಿಸಿ:
ರಾಜ್ ಗುರು ಡ್ರೈಫ್ರೂಟ್, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು
7022293342
9845460211

ಸೈಟು ಮಾರಾಟಕ್ಕಿದೆ
30x50 N/F, 30x40 N/F KBL Silicon City 2nd Phase KRS Road, BEML ಹತ್ತಿರ ಬಸ್ತಿಪುರ
9686225522

ಬೇಕಾಗಿದ್ದಾರೆ
ಹೂಟಗಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಆಟೋಮಿಟಿಕ್ ಆಕ್ಸೆಲ್ ಕಂಪನಿ ಹತ್ತಿರ ವಿರುವ ಕಂಪನಿಗೆ 18 ರಿಂದ 45 ವರ್ಷದ ಒಳಗಿನ ಪುರುಷರು ಕೆಲಸಕ್ಕೆ ಬೇಕಾಗಿದ್ದಾರೆ. ಕೆಲಸದ ಸಮಯದಲ್ಲಿ ತಿಂಡಿ ಊಟದ ವ್ಯವಸ್ಥೆ ಇರುತ್ತದೆ. ಸಂಬಳ: 17000
ಸಂಪರ್ಕಿಸಿ: ಚಾಮುಂಡೇಶ್ವರಿ ಎಂಟರ್‌ಪ್ರೈಸಸ್
ಲೋಕೇಶ್ ಎಸ್.:
8722844236

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

Mahendra Developers
MUDA APPROVED
SITE/SITE WITH HOME
WE BUILD AS PER YOUR REQUIREMENT.
Close to St Joseph School, Mysore
20x40 30x50 40x60
7259348777
8123387555

ಬೇಕಾಗಿದ್ದಾರೆ
ಸೋಲಾರ್ ವಾಟರ್ ಹೀಟರ್, ಯುಪಿಎಸ್ ಬ್ಯಾಟರಿ ಸೇಲ್ಸ್ & ಸರ್ವಿಸ್ ಕಂಪನಿಗೆ ಹುಡುಗರು ಬೇಕಾಗಿದ್ದಾರೆ
ಸನ್‌ಜೋನ್ ಸೋಲಾರ್ ಸಿಸ್ಟಮ್ಸ್ ಕುವೆಂಪುನಗರ ಮೈಸೂರು
98451 75443

ಶ್ರೀ ಸಂಜೀವಿನಿ ಗೋಲ್ಡ್ ಕಂಪನಿ
ನೀವು ಗಿರವಿ ಇಟ್ಟ ಚಿನ್ನವನ್ನು ಬಿಡಿಸಿ ಉಳಿದ ಹಣವನ್ನು ತಕ್ಷಣ ನಿಮ್ಮ ಸ್ಥಳದಲ್ಲೇ ನೀಡುತ್ತೇವೆ. ಒಂದು ಗ್ರಾಂ ಚಿನ್ನಕ್ಕೆ Rs. 7,900 (24 CT)
Mob: 9108146123

ಮನೆ ಮಾರಾಟಕ್ಕಿದೆ
9, 20th Cross Arvind Nagar, Mysore
9742212128

FOR SALE
OLD TEAK WOOD ITEM'S
1) OLD BIGATABLE
2) SMALL TABLE
3) OLD CHAIR'S
OTHER ITEMS
9900945675

HOUSE FOR RENT
East face 2 Bedroom House, I Floor with Solar & Gyzer (ಗೀಜರ್) Krishnamurthylayout T K 4th Stage, Mysore (Only Vegetarian)
9741201142

ನಿವೇಶನ ಮಾರಾಟಕ್ಕಿದೆ
ಇವತ್ತೆ ಮನೆ ನಿರ್ಮಿಸಲು ಯೋಗ್ಯವಾದ Muda Approved Site, 30x40 South Face Opp.Park Near ಆಚಾರ್ಯ ವಿದ್ಯಾಕೂಲ ಸ್ಕೂಲ್ ರಸ್ತೆ ಮೈಸೂರು. ಆಸಕ್ತರು ಸಂಪರ್ಕಿಸಿ:
8277585900
7760637454

ಸೈಟುಗಳು ಮಾರಾಟಕ್ಕಿದೆ
ಬೋಗಾದಿ ರಿಂಗ್ ರೋಡ್‌ನಿಂದ ಕೇವಲ 5 ಕಿ.ಮೀ ಅಂತರ ಸೈಂಟ್ ಪ್ರಾನ್ಸ್ ಸ್ಕೂಲ್ ಹಿಂಭಾಗ ಸುವರ್ಣನಗರ ಬಡಾವಣೆಯ ಪಕ್ಕದಲ್ಲಿರುವಂತಹ ಸ್ವಾನಿ ಬಡಾವಣೆಯಲ್ಲಿ 30x40, 30x43 ಅಳತೆಯ ಸೈಟುಗಳು ಮಾರಾಟಕ್ಕಿವೆ. ಬೆಲೆ 1800 per sqft.
9483862050
7829779070

URGENT REQUIREMENT
Kuberamithra Nidhi Ltd
Relationship officer & Area Manager
Qualification: SSLC & PUC & any Degree, Salary: 18K to 25K included PF & ESI
9731756977
8296656589

REQUIRED
Travel Sales Executive -2nos
Travel Coordinator -2nos
Travel Tele caller – 2nos
Finance and admin -2nos
FOR EXPLORE EVERYWHERE (Travel Company)
9686277217
Email Us your resume:
Ecploreeverywhere24@gmail.com

ಮನೆ ಬಾಡಿಗೆಗೆ ಇದೆ
ಮಾನಸಿ ನಗರ, ಮೈಸೂರು
30x40 (Double Bed Room)
(ಬನ್ನೂರು ರಿಂಗ್ ರೋಡ್)
9480168137
8453308930

ಕಳೆದಿದೆ
ಪ್ರಸನ್ನಕುಮಾರ್ ಶರ್ಮ ಸಿ.ಜಿ ನಂ.833, 17ನೇ ಕ್ರಾಸ್, 2ನೇ ಮೇನ್, ಬಿ.ಎಂ ಶ್ರೀನಗರ, ಚರ್ಚ್‌ರಸ್ತೆ, ಮೇಟಗಳ್ಳಿ, ಮೈಸೂರು–570016 ಇಲ್ಲಿ ವಾಸವಾಗಿದ್ದು, ನಾನು ಸಹಿ ಮಾಡಿರುವ ಕೆನರಾ ಬ್ಯಾಂಕ್ ಚೆಕ್ ನಂ.066383 & 066388 ಮತ್ತು ಐಸಿಐಸಿಐ ಬ್ಲಾಕ್ ಚೆಕ್ ನಂ.034722, 034725, 034727, 034729, 034733,034734 &034735 ಚೆಕ್‌ಗಳು ದಿ: 26–2–25 ರಂದು ಕಳೆದು ಹೋಗಿದ್ದು, ಸಿಕ್ಕವರು ದಯವಿಟ್ಟು ಸಂಪರ್ಕಿಸಿ
ಮೊ: 7676677384

HOUSE FOR SALE
20x30
Duplex Corner House
Near Kautilya School Dattagalli
JOB VACANCY
Panchakarma Therapist and office staff Required for Ayurvedic Clinic
9632020620

ಬೇಕಾಗಿದ್ದಾರೆ
1) ಆಫೀಸ್ ಬಾಯ್: ಪಾರ್ಟ್ ಟೈಮ್ ಮತ್ತು ಫುಲ್ ಟೈಮ್ ಕೆಲಸ ಮಾಡಲು ನಂಬಿಕಸ್ತ ಯುವಕರು ಅಥವಾ ಈಗ ತಾನೆ ರಿಟೈರ್ಡ್ ಆಗಿರುವ ವಯಸ್ಕರು
2) ಫಿಸಿಕಲ್ ಟ್ರೈನರ್: BPEd ಮತ್ತು MPEd ಮಾಡಿರುವವರು ಸಂಪರ್ಕಿಸಬಹುದು.
3) ಹೌಸ್ ಕೀಪಿಂಗ್: ಹೌಸ್ ಕೀಪಿಂಗ್ ಕೆಲಸ ಮಾಡಲು ಯುವಕರು ಬೇಕಾಗಿದ್ದಾರೆ. ಖುದ್ದಾಗಿ ಸಂಪರ್ಕಿಸಿ
ಹೆಲ್ತ್ ಸಿಟಿ ಆಚಾರ್ಯ ಸಭಾಭವನ ಚೌಲ್ಟ್ರಿ ದಟ್ಟಗಳ್ಳಿ, ರಿಂಗ್ ರೋಡ್ ಪಕ್ಕ
9108039302,7483167609

ತಕ್ಷಣ ಬೇಕಾಗಿದ್ದಾರೆ
1) ಸೆಕ್ಯೂರಿಟಿ ಗಾರ್ಡ್ –10th/PUC (ದಟ್ಟಗಳ್ಳಿ, ಶಾರದಾದೇವಿನಗರ, ಹೂಟಗಳ್ಳಿ, ಕುವೆಂಪುನಗರ)
2) ಹೌಸ್ ಕೀಪಿಂಗ್ – ಹುಡುಗರು (ಹಿನಕಲ್, ವಿಜಯನಗರ, ಒಂಟಿಕೊಪ್ಪಲ್)
ESI, PF ಸೌಲಭ್ಯವಿರುತ್ತದೆ.
9731663856
9739166772

ಸಿಪಾಯಿ ಪ್ರಾಪರ್ಟೀಸ್
ಇಲವಾಲದಿಂದ ಕೆ.ಆರ್.ಎಸ್.ಕಡೆಗೆ ಹೋಗುವ ರಸ್ತೆಯಲ್ಲಿರುವಂತಹ ಬಸವಸಾಗರ, ಫೇಸ್–2 ನಲ್ಲಿ 60 ಅಡಿ ರಸ್ತೆಯಲ್ಲಿ 40x60 ಅಳತೆಯ ಸೈಟು ಬೆಲೆ 52 ಲಕ್ಷ.
ನೆಗೋಷಿಯೆಬಲ್ ಕುಬೇರಾ ಶೆಲ್ಟರ್‌ನಲ್ಲಿ 40 ಅಡಿ ರಸ್ತೆಯಲ್ಲಿ 30x40 ಅಳತೆಯ ಸೈಟು ಮಾರಾಟಕ್ಕಿದೆ. ಬೆಲೆ 28 ಲಕ್ಷ ನೆಗೋಷಿಯೆಬಲ್
ನಂಜುಂಡಸ್ವಾಮಿ ಮಾಜಿ ಸೈನಿಕರು 9483862050
ಶರತ್‌ಕುಮಾರ್–7829779070

ಹೊಸ ಮನೆಗಳು ಮಾರಾಟಕ್ಕಿದೆ
30x40 G+1 ಉತ್ತರ ದಿಕ್ಕು Near Ring Road ಬೆಲೆ 1 ಕೋಟಿ 45 ಲಕ್ಷ ಮತ್ತು ಹೊಸ ಮನೆ ಭೋಗ್ಯಕ್ಕಿದೆ.
30x40,
2BHK Ground Floor –16 ಲಕ್ಷ
ಜೆಪಿ ನಗರ, ಮೈಸೂರು
9742663339
8884292074

DOCUMENT LOST
I, Rajanna M, Residing at No.381/1, 1st Main road, Byraveshwara Nagar, Moodalapalya, Bangalore North, have Lost Sale Deed Document No.4837/99-2000 on 20/1/2023 Pertains to house No.1505, 1st Stage, Devanur Laayout, Rajivanagar, Mysore-570007
8197918853

GHANASHREE ENTERPRISES
Shell, Nanjangud-Ooti Road
REQUIRED MEN / WOMEN STAFF
For SHELL PETROL BUNK
Attractive Salary ESI/PF, FOOD FACILITIES AND ROOM SERVICES
FOR MORE DETAILS PLEASE CONTACT
8088446601
8951715624

ಬೇಕಾಗಿದ್ದಾರೆ
ಮೆನ್ಸ್ ಶೋರೂಂನಲ್ಲಿ ಬಟ್ಟೆ ಅಂಗಡಿ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ. ಅನುಭವ ವಿರುವವರಿಗೆ
9742076736
8310093516

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕಿನಲ್ಲಿ ನೈಟ್ ಶಿಫ್ಟ್ ಕೆಲಸಕ್ಕಾಗಿ ಪುರುಷರು / ಹುಡುಗರು ಬೇಕಾಗಿದ್ದಾರೆ. ಸಂಬಳ: 15,000.
7899754149

SEMI COMMERCIAL BUILDING FOR SALE
ಟಿವಿಎಸ್ ಕಂಪನಿಯ ಬಳಿ 2 ಅಂತಸ್ತಿನ ಕಟ್ಟಡವಿದ್ದು, ಅದರಲ್ಲಿ 24 ಕೊಠಡಿಗಳಿವೆ, ಅದು ಮಾರಾಟಕ್ಕಿದೆ. ಮಾಲೀಕರನ್ನು ಸಂಪರ್ಕಿಸಿ
9141564725
6361332885

MEGA OFFER UPS & BATTERRY
Eastman
1) 1,KVA, SW, UPS, 150AH BATTERY: 15,999/-
2) 1.2, KVA SW, UPS, 200AH BATTER: 21,499/-
S.R.Enterprises
Ramavilas Road, Mysuru-04
7676899663

ವಿವಾಹ ಭಾಗ್ಯ
ವಧು–ವರರಿಗೆ ಕೂಡಲೇ ಸಂಪರ್ಕಿಸಿ ಒಕ್ಕಲಿಗ, ಕುರುಬ, ಲಿಂಗಾಯತ್, ನಾಯಕ, SC ಎಲ್ಲಾ ಜನಾಂಗದ ವಧು–ವರರು, ವಿಚ್ಛೇದಿತರು, ವಿಧುರ–ವಿಧವೆಯರು ಸಂಪರ್ಕಿಸಿ:
9035075571

ಸೈಟು ಮಾರಾಟಕ್ಕಿದೆ
30x40, E/F
ಮೈಸೂರು–ಹುಣಸೂರು ರಾಷ್ಟ್ರೀಯ ಹೆದ್ದಾರಿ ಯಶ್ ಮೆಗಾಸಿಟಿ ಇಲವಾಲದ ನಂತರ
7338445413

WANTED
Kannada & English Typist Required for documents
9741370680
9448246291

12 ಲಕ್ಷ ಪಾವತಿ (ಉಳಿಕೆ ಲೋನ್) ಖರೀದಿಸಿ 30x40, 30x50 ಸೈಟ್
ತಕ್ಷಣ ಮನೆ ಕಟ್ಟಲು ನಮ್ಮ ಬಡಾವಣೆಯಲ್ಲಿ
* ವಿಜಯನಗರ 4ನೇ ಸ್ಟೇಜ್ – 48 ಲಕ್ಷ
* ವಸಂತನಗರ ಪಕ್ಕ–43.6 ಲಕ್ಷ
* ಜೆ.ಪಿ. ನಗರ – ಶ್ರೀರಾಂಪುರ–ಆಟ್.ಟಿ.ನಗರ ರಿಂಗ್‌ರಸ್ತೆ ಸಮೀಪ–49 ಲಕ್ಷ
* ಬನ್ನೂರು ರಸ್ತೆ ವಿದ್ಯಾವಿಕಾಸ –45 ಲಕ್ಷ
Brokers Excuse
8123075038

SITE FOR SALE
30X80
Sharadadevi Nagar, North Face
9448324232

ಬೇಕಾಗಿದ್ದಾರೆ
ಮೆನ್ಸ್ ಪಾರ್ಲರ್/ಕಟಿಂಗ್ ಶಾಪ್‌ನಲ್ಲಿ ಕೆಲಸ ಮಾಡಲು ಯುವಕರು ಬೇಕಾಗಿದ್ದಾರೆ. ಸಂಬಳ: 20000 ರಿಂದ 30000 ಸ್ಥಳ: ಸಾತಗಳ್ಳಿ
9844341652

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತು ಗಳು ವಿಶ್ವಾಸಪೂರ್ಣವೇ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸ ಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಜನರ ಮನಃ ಪರಿವರ್ತನೆಯಾಗದೆ ಅಸ್ಪೃಶ್ಯತೆ ಅಳಿಸಲಾಗದು

ಅರಿವು ಕಾರ್ಯಾಗಾರದಲ್ಲಿ ತಹಸೀಲ್ದಾರ್ ಟಿ.ಜಿ.ಸುರೇಶ್ ಆಚಾರ್



ಅಸ್ಪೃಶ್ಯತೆ ನಿವಾರಣಾ ಅರಿವು ಕಾರ್ಯಾಗಾರದಲ್ಲಿ ತಹಸೀಲ್ದಾರ್ ಸುರೇಶಾಚಾರ್ ಅವರನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಮಾ.7– ಅಸ್ಪೃಶ್ಯತೆ ಒಂದು ಮಾನಸಿಕ ರೋಗವಾಗಿದ್ದು, ಜನರ ಮನಃ ಪರಿವರ್ತನೆಯಾಗದೆ ಸಮಾಜದಲ್ಲಿ ಮೇಲು–ಕೀಳು, ಅಸ್ಪೃಶ್ಯತೆ ಪಿಡುಗನ್ನು ಅಳಿಸಲಾಗದು ಎಂದು ತಹಸೀಲ್ದಾರ್ ಟಿ.ಜಿ.ಸುರೇಶ್ ಆಚಾರ್ ತಿಳಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆದ ಅಸ್ಪೃಶ್ಯತೆ ನಿವಾರಣಾ ಅರಿವು ಕಾರ್ಯಾಗಾರದಲ್ಲಿ ಅಂಬೇಡ್ಕರ್ ಮತ್ತು ಬಾಬು ಜಗಜೀವನ್ ರಾಂ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಅನಾದಿ ಕಾಲದಿಂದಲೂ ಜಾತಿ ಪಿಡುಗು ಸಮಾಜದಲ್ಲಿ ಪೆಡಂಭೂತವಾಗಿ ಕಾಡುತ್ತಿದ್ದು, ಕೆಳಸ್ತರದಲ್ಲಿರುವ ನಾಗರಿಕರಿಗೆ ಕಂಟಕಪ್ರಾಯವಾಗಿ ಪರಿಣಮಿಸಿದೆ. ಅಸ್ಪೃಶ್ಯತೆ ನಿವಾರಣೆಗೆ ಸರ್ಕಾರ ಕಠಿಣ ಕಾನೂನುಗಳನ್ನು ಜಾರಿಗೆ ತಂದಿದ್ದರೂ ಅಘೋಷಿತವಾಗಿ ಅಸ್ಪೃಶ್ಯತೆ ಆಚರಣೆ ನಿರಂತರವಾಗಿ ನಡೆಯುತ್ತಲೇ ಇದೆ. ಎಲ್ಲಾ ಸಮುದಾಯದ ಜನರ ಮನಃ ಪರಿವರ್ತನೆ ಆಗದ ಹೊರತು ಜಾತಿ ಸಮಸ್ಯೆ ಅಳಿಸಲು ಅಸಾಧ್ಯ ಎಂದು ವಿಷಾದ ವ್ಯಕ್ತಪಡಿಸಿದರು.

ಸಬ್ ಇನ್ಸ್‌ಪೆಕ್ಟರ್ ಜಗದೀಶ್ ಧೂಳ್ ಶೆಟ್ಟಿ ಮಾತನಾಡಿ, ಕನಕದಾಸ, ಪಂಪ, ಬಸವಣ್ಣ, ಕುವೆಂಪು ಅವರು ಜಾತ್ಯಾತೀತ ಮನಸ್ಥಿತಿಯನ್ನು ಕಟುಟೀಕೆ ಮಾಡಿದ್ದರು. ಸಮಾಜದ ಪರಿವರ್ತನೆಗೆ ಅವಿರತವಾಗಿ ಶ್ರಮಿಸಿದರು. ಇಂದಿನ ಕಾಲಘಟ್ಟದಲ್ಲೂ ಅಸ್ಪೃಶ್ಯತೆ ಆಚರಣೆ ಚಾಲ್ತಿಯಲಿದ್ದು, ಇದು ವಿದ್ಯಾವಂತ ಸಮಾಜಕ್ಕೆ ನಾಚಿಕೆಗೇಡಿನ ಸಂಗತಿ. ಸರ್ಕಾರ ಅಸ್ಪೃಶ್ಯತೆ ಆಚರಣೆಯನ್ನು ತಹಬದಿಗೆ ತರಲು ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಪಂಗಡಗಳ ಕಾಯ್ದೆ (1989ರ ಕಾಯ್ದೆ)ಯನ್ನು ಜಾರಿಗೆ ತಂದಿದ್ದು, ಕಾಯ್ದೆ ಪ್ರಕಾರ ಪ್ರಕರಣಗಳ ತೀವ್ರತೆ ಆಧಾರದಲ್ಲಿ ಶಿಕ್ಷೆ ಪ್ರಮಾಣ ನಿರ್ಧರಿಸಲಾಗುತ್ತದೆ. ಅಸ್ಪೃಶ್ಯತೆ ಆಚರಣೆ ಮತ್ತು ಸಮುದಾಯ ವ್ಯಕ್ತಿಯ ಮೇಲಿನ ಹಲ್ಲೆಗೆ 3 ತಿಂಗಳ ಕಾರಾಗೃಹ ವಾಸದಿಂದ ಅಜೀವ ಕಾರಾಗೃಹ ಶಿಕ್ಷೆ ವಿಧಿಸುವ ಅವಕಾಶವಿದೆ. ಅಸ್ಪೃಶ್ಯತೆ ಆಚರಣೆಗೆ ಅಧಿಕ ದಂಡವನ್ನು ತೆರಬೇಕಾಗುತ್ತದೆ. ಹಾಗಾಗಿ ಎಲ್ಲರೂ ಸಮಾನ ಮನಸ್ಥಿತಿಯಿಂದ ನಾವೆಲ್ಲರೂ ಒಂದೇ ಎಂದು ಭಾವಿಸಿ ಸಹಬಾಳ್ವೆ ನಡೆಸಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಸಂವಿಧಾನ ಪೀಠಿಕೆ ಓದಲಾಯಿತು. ಕಾರ್ಯಕ್ರಮದಲ್ಲಿ ಹಾಜರಿದ್ದ ಗಣ್ಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರೇಡ್ – 2 ತಹಸೀಲ್ದಾರ್ ರಾಜಾಕಾಂತ್, ರೇಷ್ಮೆ ಇಲಾಖೆ ಕೆಂಪರಾಜು, ನರೇಗಾ ಸಹಾಯಕ ನಿರ್ದೇಶಕ ಶಶಿಕುಮಾರ್, ಬನ್ನೂರು ಪುರಸಭೆ ಮುಖ್ಯಾಧಿಕಾರಿ ಹೇಮಂತ್ ರಾಜ್, ಸಮನ್ವಯಾಧಿಕಾರಿ ಮಹದೇವ ನಾಯಕ, ಸಮಾಜ ಕಲ್ಯಾಣಾಧಿಕಾರಿ ರಾಮೇಗೌಡ, ತಾಲೂಕು ವೈದ್ಯಾಧಿಕಾರಿ ಡಾ. ರವಿಕುಮಾರ್, ಪಶು ಸಂಗೋಪನಾ ಸಹಾಯಕ ನಿರ್ದೇಶಕ ಲಿಂಗರಾಜು, ಬಿಇಓ ಶಿವಮೂರ್ತಿ, ಸರ್ವೇ ಇಲಾಖೆ ಸಹಾಯಕ ನಿರ್ದೇಶಕ ಪಂಚಲಿಂಗಪ್ಪ, ತೋಟಗಾರಿಕೆ ಸಹಾಯಕ ನಿರ್ದೇಶಕಿ ಶಾಂತ, ಸಿಡಿಪಿಓ ಗೋವಿಂದರಾಜು, ಹಿಂದುಳಿದ ವರ್ಗಗಳ ರಾಜಣ್ಣ, ಪಿಡಿಓಗಳಾದ ನಿರ್ಮಲಾ, ಗೌಹಾರ್ ಜಾನ್, ಪವಿತ್ರ, ಗಾಯತ್ರಿ, ಚಿದಾನಂದ, ಮಾದೇಶ್, ಆರಾಧ್ಯ, ಧರಣೇಶ್, ಮಾದೇಶ್, ಸೌಮ್ಯಲತಾ ಸೇರಿದಂತೆ ಮತ್ತಿತರಿದ್ದರು.

ಬಜೆಟ್‌ನಲ್ಲಿ ಕ್ರೀಡಾಂಗಣ ಅಭಿವೃದ್ಧಿಗೆ 6 ಕೋಟಿ

ತಿ.ನರಸೀಪುರ, ಮಾ.7– ತಾಲೂಕು ಕ್ರೀಡಾಂಗಣ ಅಭಿವೃದ್ಧಿಗೆ ಬಜೆಟ್‌ನಲ್ಲಿ 6 ಕೋಟಿ ರೂ. ಅನುದಾನ ಕಾಯ್ದಿರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹೋರಾಟ ಸಮಿತಿಯ ಯದು ಸ್ಕೈಎಂ.ಪ್ರವೀಣ್ ಅಭಿನಂದನೆ ಸಲ್ಲಿಸಿದ್ದಾರೆ.



ತಾಲೂಕು ಕೇಂದ್ರದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕಾಗಿ ಪಟ್ಟು ಹಿಡಿದು ಹೋರಾಟ ಸಮಿತಿ ವತಿಯಿಂದ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು ಸೇರಿದಂತೆ ಇನ್ನಿತರರು ಮ್ಯಾರಥಾನ್ ನಡಿಗೆ ಹಮ್ಮಿಕೊಳ್ಳಲಾಗಿತ್ತು. ಸ್ಕೇಟಿಂಗ್ ಶೂ, ಕರಾಟೆ ತರಬೇತಿ ವಸ್ತ್ರ ಧರಿಸಿ ಹಾಗೂ ಕ್ರಿಕೆಟ್ ಬ್ಯಾಟ್, ಬಾಲ್‌ಗಳನ್ನು ಹಿಡಿದು ಭಾಗವಹಿಸಿದ್ದ ಪುಟಾಣಿ ಮಕ್ಕಳು ಎಲ್ಲರ ಗಮನ ಸೆಳೆದಿದ್ದರು. ಅಲ್ಲದೇ ತಾಲೂಕು ಕಚೇರಿ ಮುಂಭಾಗ ಧರಣಿ ಕುಳಿತು ಕ್ರೀಡಾಂಗಣಕ್ಕೆ ಒತ್ತಾಯಿಸಿದರು. ಈ ವೇಳೆ ಎಂಎಲ್‌ಸಿ ಡಾ. ಯತೀಂದ್ರ ಈ ಬಾರಿಯ ಬಜೆಟ್‌ನಲ್ಲಿ ಹಣ ಕೊಡಸುವುದಾಗಿ ಭರವಸೆ ನೀಡಿದ್ದರು. ಅದರಂತೆ ಹಣ ಬಿಡುಗಡೆ ಮಾಡಿದ ಸಿದ್ದರಾಮಯ್ಯನವರಿಗೆ ನಮ್ಮ ಸಮಿತಿ ವತಿಯಿಂದ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಶಿಸ್ತುಬದ್ಧ, ಸಮತೋಲಿತ ಬಜೆಟ್

ನಂಜನಗೂಡು, ಮಾ.7– 16ನೇ ಬಾರಿಗೆ ಬಜೆಟ್ ಮಂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು 2025–26ನೇ ಸಾಲಿಗೆ ಶಿಸ್ತುಬದ್ಧ ಮತ್ತು ಸಮತೋಲನಯುಕ್ತ ಬಜೆಟ್ ಮಂಡಿಸಿದ್ದಾರೆ ಎಂದು ಶಾಸಕ ದರ್ಶನ್ ತಿಳಿಸಿದ್ದಾರೆ.



ರಾಜ್ಯ ಬಜೆಟ್ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ರೈತ ಕಲ್ಯಾಣ, ಸಾಮಾಜಿಕ ನ್ಯಾಯ, ಹವಾಮಾನ ಪರಿವರ್ತನೆ ನಿರ್ವಹಣೆ, ಮೂಲಸೌಕರ್ಯ ಮತ್ತು ಆರ್ಥಿಕ ಬೆಳವಣಿಗೆಗೆ ಆದ್ಯತೆ ನೀಡುವ ಮೂಲಕ ಬಜೆಟ್‌ನಲ್ಲಿ ಸರ್ವಾಂಗೀಣ ಪ್ರಗತಿ ಗುರಿಯಾಗಿಸಿಕೊಳ್ಳಲಾಗಿದೆ.

ರೈತ ಕಲ್ಯಾಣಕ್ಕೆ ಒತ್ತು, ಮೈಸೂರಿನಲ್ಲಿ ರೈತ ಹೋರಾಟಗಾರ ಪ್ರೊ.ನಂಜುಂಡಸ್ವಾಮಿ ಹೆಸರಿನಲ್ಲಿ ಕೃಷಿ ಹಕ್ಕುಗಳ ಸಂಶೋಧನಾ ಪೀಠವನ್ನು ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪನೆ ಮಾಡಲು ಮುಂದಾಗಿದ್ದಾರೆ ರೈತ ಕಲ್ಯಾಣ ಯೋಜನೆಗಳ ಅನುದಾನವನ್ನು 44 ಸಾವಿರ ಕೋಟಿಯಿಂದ 52,339 ಕೋಟಿ ರೂ.ಗಳಿಗೆ ಹೆಚ್ಚಳ ಮಾಡಿದ್ದು, 2.5ರಷ್ಟು ಕೃಷಿ ಕ್ಷೇತ್ರಕ್ಕೆ ಅನುದಾನ ಹೆಚ್ಚಳ ಮಾಡಲಾಗಿದೆ.

ವಿಶೇಷವಾಗಿ ನಂಜನಗೂಡು ತಾಲೂಕಿನ ಹಿಮ್ಮಾವಿನಲ್ಲಿ 150 ಎಕರೆ ವಿಸ್ತೀರ್ಣದಲ್ಲಿ ನಿರ್ಮಾಣವಾಗಲಿರುವ ಚಿತ್ರನಗರಿಗೆ 500 ಕೋಟಿ ಮೀಸಲು, ಕೆಶಿಫ್ ಯೋಜನೆಯಡಿ ಹುಲ್ಲಹಳ್ಳಿ–ತಗಡೂರು ಹಾಗೂ ಸಂತೇಮರಹಳ್ಳಿವರೆಗಿನ 55 ಕಿಮೀ ರಸ್ತೆ ಅಭಿವೃದ್ಧಿ ಮತ್ತು ನವೀಕರಣ, ನಂಜನಗೂಡು ತಾಲೂಕಿನ ಅರಣ್ಯದಂಚಿನಲ್ಲಿ 8 ಕಿಮೀ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ 11 ಕೋಟಿ ಹಾಗೂ ತಾಲೂಕಿನ ತಗಡೂರು ಸಮುದಾಯ ಆರೋಗ್ಯ ಕೇಂದ್ರವನ್ನು 100 ಹಾಸಿಗೆ ಆಸ್ಪತ್ರೆಯಾಗಿ ವಿಸ್ತರಣೆ ಮಾಡಿರುವುದರಿಂದ ಸಾರ್ವಜನಿಕರಿಗೆ ಅನುಕೂಲಕರವಾಗಿದೆ. ಒಟ್ಟಾರೆ ಪ್ರಗತಿ, ಸಮಾನತೆ ಮತ್ತು ಹಸಿರು ಕರ್ನಾಟಕ ಎಂಬ ದೃಷ್ಟಿಕೋನದಿಂದ ರೂಪಿಸಲಾಗಿರುವ ಬಜೆಟ್ ರಾಜ್ಯದ ಭವಿಷ್ಯವನ್ನು ಆಧುನಿಕ ಮತ್ತು ಶ್ರೇಣಿಮಟ್ಟದ ಅಭಿವೃದ್ಧಿಯತ್ತ ಕೊಂಡೊಯ್ಯಲಿದೆ. ರಾಜ್ಯದ ಶ್ರೇಯೋಭಿವೃದ್ಧಿಗೆ ನೆರವಾಗುವ ಅತ್ಯಮೂಲ್ಯ ಬಜೆಟ್ ಮಂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ನಂಜನಗೂಡು ತಾಲೂಕಿನ ಜನತೆ ಪರವಾಗಿ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಅಭಿವೃದ್ಧಿ ಕೆಲಸಗಳಿಂದ ದಿ.ಚಿಕ್ಕಮಾದು ಜನಮಾನಸದಲ್ಲಿ

ಎಸ್.ಚಿಕ್ಕಮಾದು ಅಭಿಮಾನಿ ಬಳಗದ ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ



ಹೆಚ್.ಡಿ.ಕೋಟೆಯಲ್ಲಿ ಮಾಜಿ ಶಾಸಕ ದಿ.ಚಿಕ್ಕಮಾದು ಹುಟ್ಟುಹಬ್ಬ ಆಚರಿಸಲಾಯಿತು.

ಹೆಚ್.ಡಿ.ಕೋಟೆ, ಮಾ.7– ಮಾಜಿ ಶಾಸಕ ದಿ.ಚಿಕ್ಕಮಾದು ಅವರು ತಾಲೂಕಿನಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿ ಜನಮಾನಸದಲ್ಲಿ ಉಳಿದಿದ್ದಾರೆ ಎಂದು ಹೆಚ್.ಡಿ.ಕೋಟೆ–ಸರಗೂರು ತಾಲೂಕು ಎಸ್.ಚಿಕ್ಕಮಾದು ಅಭಿಮಾನಿ ಬಳಗದ ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ ತಿಳಿಸಿದರು.


ಪಟ್ಟಣದಲ್ಲಿರುವ ಶಾಸಕ ಅನಿಲ್ ಅವರ ನಿವಾಸದಲ್ಲಿ ಹೆಚ್.ಡಿ.ಕೋಟೆ–ಸರಗೂರು ತಾಲೂಕು ಎಸ್.ಚಿಕ್ಕಮಾದು ಅಭಿಮಾನಿ ಬಳಗದಿಂದ ಶುಕ್ರವಾರ ಆಯೋಜಿಸಿದ್ದ ಮಾಜಿ ಶಾಸಕ ದಿ.ಚಿಕ್ಕಮಾದು ಅವರ 76ನೇ ಹುಟ್ಟುಹಬ್ಬವನ್ನು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಸರಳವಾಗಿ ಆಚರಿಸಿ ನಂತರ ಮಾತನಾಡಿದ ಅವರು, ದಿ.ಚಿಕ್ಕಮಾದು ಅವರು ತಾಲೂಕಿನ ಅಭಿವೃದ್ಧಿಗಾಗಿ ಅವಿರತವಾಗಿ ಶ್ರಮಿಸಿ ಹಿಂದುಳಿದ ತಾಲೂಕು ಎಂಬ ಹಣೆಪಟ್ಟಿ ಹೋಗಲಾಡಿಸಲು ಶ್ರಮಿಸಿದ್ದರು. ಚಿಕ್ಕಮಾದು ಅವರ ಹುಟ್ಟುಹಬ್ಬವನ್ನು ಈ ಬಾರಿ ಉದ್ಯೋಗ ಮೇಳ ನಡೆಸುವ ಮೂಲಕ ಆಚರಿಸಬೇಕು ಎಂದು ಅವರ ಪುತ್ರ ಶಾಸಕ ಅನಿಲ್ ತಿಳಿಸಿದ್ದರು. ಆದರೆ ಅಧಿವೇಶನದ ಹಿನ್ನಲೆಯಲ್ಲಿ ಸಾಧ್ಯವಾಗಲಿಲ್ಲ. ಮುಂದಿನ ದಿನಗಳಲ್ಲಿ ಉದ್ಯೋಗ ಮೇಳ ನಡೆಸಿ ತಾಲೂಕಿನ ನಿರುದ್ಯೋಗಿಗಳಿಗೆ ನೆರವಾಗಲಿದ್ದಾರೆ ಎಂದರು. ಪುರಸಭಾ ಸದಸ್ಯ ಹೆಚ್.ಸಿ.ನರಸಿಂಹಮೂರ್ತಿ ಮಾತನಾಡಿ, ಮಾಜಿ ಶಾಸಕ ದಿ.ಚಿಕ್ಕಮಾದು ಅವರು ಪಕ್ಷಾತೀತವಾಗಿ ಎಲ್ಲರನ್ನು ಪ್ರೀತಿ, ವಿಶ್ವಾಸದಿಂದ ಕಾಣುತ್ತಿದ್ದರು. ದಿ.ಚಿಕ್ಕಮಾದು, ದಿ.ಆರ್.ಧ್ರುವನಾರಾಯಣ್ ತಾಲೂಕಿನ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದರು.

ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜ್ ಮಾತನಾಡಿ, ದಿ.ಚಿಕ್ಕಮಾದು ಅವರು ಹುಣಸೂರಲ್ಲಿ ಪ್ರಥಮ ಬಾರಿಗೆ ಶಾಸಕರಾದ ವೇಳೆ 4 ಸಾವಿರಕ್ಕೂ ಹೆಚ್ಚು ಬಡ ರೈತರಿಗೆ ಸಾಗುವಳಿ ಪತ್ರ ಕೊಡಿಸಿದ್ದರು. ಅಂದಿನಿಂದಲೇ ರೈತಪರ, ಸಮುದಾಯ ಪರ ಅಧಿಕಾರ ಇದ್ದಾಗ ವಿಧಾನಸೌಧದೊಳಗೆ, ಇಲ್ಲದಿದ್ದಾಗ ಹೊರಗಡೆ ರಾಜ್ಯಾದ್ಯಂತ ಜನರ ಪರ ಹೋರಾಟಗಳನ್ನು ನಡೆಸಿ ಧ್ವನಿಯಾಗಿದ್ದರು ಎಂದರು.

ಈ ವೇಳೆ ಪ್ರಧಾನ ಕಾರ್ಯದರ್ಶಿ ಸಿದ್ದನಾಯಕ, ಖಜಾಂಚಿ ದಾಸನಾಯಕ, ನಿರ್ದೇಶಕರಾದ ಜವರನಾಯಕ, ಗೋವಿಂದರಾಜು, ನಾಗರಾಜು, ಕೃಷ್ಣ, ಜವರನಾಯಕ, ಗೋವಿಂದ, ಸಿದ್ದನಾಯಕ, ಬಿ.ಪಿ.ಸಿದ್ದನಾಯಕ, ಮಣಿ, ಗ್ರಾಪಂ ಅಧ್ಯಕ್ಷ ಮಹೇಶ್ ನಾಯಕ, ಗಣೇಶ್ ಆಚಾರ್, ಕೃಷ್ಣಸ್ವಾಮಿ ಬೆಟ್ಟ ನಾಯಕ, ಈರನಾಯಕ, ಮರಿ ತಿಮ್ಮನಾಯಕ, ನಾಗರಾಜು, ಗೋಪಲ, ರಮೇಶ, ಮಂಜು, ಜವರನಾಯಕ, ಉಮೇಶ್, ಚಿಕ್ಕಣ್ಣ, ಶಿವಕುಮಾರ್, ಶಿವರಾಮು, ಮಲ್ಲೇಶ್, ಚಲುವರಾಜು, ರವಿ, ಚಿಕ್ಕಣ್ಣ, ರವಿಶಂಕರ್ ಇನ್ನಿತರರಿದ್ದರು.

ದಾಖಲೆಯ ಬಜೆಟ್ ಮಂಡನೆ

ತಿ.ನರಸೀಪುರ ಮಾ.7– ಮುಖ್ಯಮಂತ್ರಿ ಸಿದ್ದರಾಮಯ್ಯರವರು ರಾಜ್ಯದ ಜನತೆಯ ನಿರೀಕ್ಷೆ ಹುಸಿಗೊಳಿಸದೆ ದಾಖಲೆಯ ಬಜೆಟ್ ಮಂಡಿಸಿದ್ದಾರೆ ಎಂದು ಕಾಂಗ್ರೆಸ್ ಯುವ ಮುಖಂಡ ಅಕ್ಷಯ್ ಕುಮಾರ್ ತಿಳಿಸಿದ್ದಾರೆ.



ಆರೋಗ್ಯ, ಶಿಕ್ಷಣ, ಸಾಮಾಜಿಕ ನ್ಯಾಯ, ರೈತ ಕೇಂದ್ರೀಕೃತ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿಗೆ ವಿಶೇಷ ಒತ್ತು ನೀಡಿರುವುದು ಮುಖ್ಯಮಂತ್ರಿಗಳ ಸಾಮಾಜಿಕ ಬದ್ಧತೆಗೆ ಸಾಕ್ಷಿಯಾಗಿದ್ದು, ಅಶಕ್ತ ಹಾಗೂ ಶೋಷಿತ ವ್ಯಕ್ತಿಯನ್ನು ಸಶಕ್ತಗೊಳಿಸುವ ದೂರದೃಷ್ಟಿ ಹೊಂದಿರುವ ಈ ಬಜೆಟ್ ರಾಜ್ಯ ಸರ್ಕಾರದ ಮಹತ್ವಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳ ಅಭೂತಪೂರ್ವ ಯಶಸ್ಸಿಗೆ ಹಿಡಿದ ಕೈಗನ್ನಡಿಯಂತಿದೆ.

ಮೈಸೂರು ಜಿಲ್ಲೆಗೆ ಮುಖ್ಯಮಂತ್ರಿಗಳು ಬರಪೂರ ಕೊಡುಗೆ ನೀಡಿದ್ದಾರೆ. ಮೈಸೂರಿನ ವಿಮಾನ ನಿಲ್ದಾಣ ರನ್ ವೇ ವಿಸ್ತರಣೆ, ನೂತನ ಹೈಟೆಕ್ ಬಸ್ ನಿಲ್ದಾಣ ಮತ್ತು ಬೆಂಗಳೂರು ಅಭಿವೃದ್ಧಿ ಸೇರಿದಂತೆ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಸಾವಿರಾರು ಕೋಟಿ ರೂ. ನೀಡಿದ್ದಾರೆ. ಇದು ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ಸದಾ ಟೀಕೆ ಮಾಡುವ ವಿಪಕ್ಷಗಳಿಗೆ ನೀಡಿದ ಉತ್ತರವಾಗಿದೆ.

ಮೈಸೂರಲ್ಲಿ 500 ಕೋಟಿ ರೂ. ವೆಚ್ಚದಲ್ಲಿ ಫಿಲ್ಮ್ ಸಿಟಿ ಮಾಡಲು ಹೊರಟಿರುವುದು ಸಹ ಮೈಸೂರಿಗರ ಬಹು ದಿನದ ಕನಸು ನನಸಾಗುವ ಸಾಧ್ಯತೆಗಳಿರುವುದರಿಂದ ಇದು ಕೂಡ ಮುಖ್ಯಮಂತ್ರಿಗಳ ಮಹತ್ತರ ಕೊಡುಗೆಯಾಗಿದೆ ಎಂದರು.

ಬಡವರ ಪರ ಕಾಳಜಿಯುಳ್ಳ ಉತ್ತಮ ಬಜೆಟ್

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್ ಬಡವರ ಪರವಾಗಿದೆ. ಈ ಮೂಲಕ ಅವರು ಬಡವರ ಪರ ತಮ್ಮ ಕಾಳಜಿ ಮುಂದುವರಿಸಿದ್ದಾರೆ. ಮೈಸೂರಿನ ಪ್ರವಾಸೋದ್ಯಮಕ್ಕೆ ಪೂರಕವಾದ ಕೊಡುಗೆ ನೀಡಿದ್ದಾರೆ. ಚಿತ್ರನಗರಿ ನಿರ್ಮಾಣ, ರನ್ ವೇ ವಿಸ್ತರಣೆ, ಹೈಟೆಕ್ ಬಸ್ ನಿಲ್ದಾಣ ಸೇರಿದಂತೆ ಸಾವಿರಾರು ಕೋಟಿ ರೂ. ಅನುದಾನ ಒದಗಿಸಿದ್ದಾರೆ. ಒಟ್ಟಾರೆ ಇದು ರಾಜ್ಯದ, ಬಡವರ ಅಭಿವೃದ್ಧಿಗೆ ಪೂರಕವಾದ ಬಜೆಟ್ ಆಗಿದೆ.



- ಜಿ.ಎಂ.ರಾಮು,
ಜಿಪಂ ಮಾಜಿ ಅಧ್ಯಕ್ಷ.

ಸೇತುವೆ ನಿರ್ಮಾಣಕ್ಕೆ 25 ಕೋಟಿ ಬಿಡುಗಡೆ

ಕೆ.ಆರ್.ನಗರ, ಮಾ.7– ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮಂಡಿಸಿದ ಬಜೆಟ್‌ನಲ್ಲಿ ತಾಲೂಕಿನ ಕಪ್ಪಡಿ ಕ್ಷೇತ್ರದ ಬಳಿಯ ಕಾವೇರಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಿಸಲು 25 ಕೋಟಿ ರೂ. ಹಾಗೂ ಸಾಲಿಗ್ರಾಮ ತಾಲೂಕು ಕೇಂದ್ರದಲ್ಲಿ ನೂತನ ಪ್ರಜಾಸೌಧ ನಿರ್ಮಾಣ ಮಾಡಲು ಬಜೆಟ್‌ನಲ್ಲಿ ಹಣ ಮೀಸಲಿಟ್ಟಿದ್ದಾರೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.



2 ಪ್ರಮುಖ ಕಾಮಗಾರಿಗಳಿಗೆ ಬಜೆಟ್‌ನಲ್ಲಿ ಮುಖ್ಯಮಂತ್ರಿಗಳು ಹಣ ಮಂಜೂರು ಮಾಡಿರುವುದಕ್ಕೆ ಸಂತಸ ವ್ಯಕ್ತಪಡಿಸಿದ ಶಾಸಕ ಡಿ.ರವಿಶಂಕರ್ ಇದಕ್ಕಾಗಿ ಕ್ಷೇತ್ರದ ಜನತೆ ಪರವಾಗಿ ಮುಖ್ಯಮಂತ್ರಿಗಳನ್ನು ಅಭಿನಂದಿಸುವುದಾಗಿ ತಿಳಿಸಿದ್ದಾರೆ.

ಅಲ್ಲದೇ ಮೈಸೂರು ನಗರದಲ್ಲಿ ಚಿತ್ರನಗರಿ ನಿರ್ಮಾಣ ಮಾಡಲು 500 ಕೋಟಿ ನೀಡಿದ್ದು, ಜೊತೆಗೆ ನಿಮ್ಹಾನ್ಸ್ ಮಾದರಿ ಆಸ್ಪತ್ರೆ, ನೂತನ ಬಸ್ ನಿಲ್ದಾಣದೊಂದಿಗೆ ಕ್ರೀಡಾ ಕ್ಷೇತ್ರಕ್ಕೂ ಹೆಚ್ಚಿನ ಆದ್ಯತೆ ನೀಡುವ ಮೂಲಕ ಮೈಸೂರು ಜಿಲ್ಲೆಗೆ ಬಂಪರ್ ಕೊಡುಗೆ ನೀಡಿದ್ದು ಇದು ಎಲ್ಲರೂ ಹೆಮ್ಮೆ ಪಡುವ ವಿಚಾರ ಎಂದಿದ್ದಾರೆ.

ಪಂಚ ಗ್ಯಾರಂಟಿ ಯೋಜನೆಗಳಿಗೆ 51 ಸಾವಿರ ಕೋಟಿ ಮೀಸಲಿಡುವುದರೊಂದಿಗೆ ದಾಖಲೆಯ 4.6ಲಕ್ಷ ಕೋಟಿ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯನವರು ಸರ್ವರಿಗೂ ಸಮಪಾಲು ಮತ್ತು ಸಮಬಾಳು ಎಂಬಂತೆ ಅವಕಾಶ ಕಲ್ಪಿಸಿದ್ದು ಆ ಮೂಲಕ ವಿರೋಧ ಪಕ್ಷದವರ ಬಾಯಿ ಮುಚ್ಚಿಸಿದ್ದಾರೆ. ಬಜೆಟ್‌ನಲ್ಲಿ ರಾಜ್ಯದ ರಸ್ತೆಗಳ ಅಭಿವೃದ್ಧಿಗೆ 5 ಸಾವಿರ ಕೋಟಿ ನೀಡಿರುವುದು ಮುಂದಿನ ದಿನಗಳಲ್ಲಿ ನಮ್ಮ ಕ್ಷೇತ್ರಕ್ಕೂ ಹಣ ರಸ್ತೆಗಾಗಿ ಬರಲಿದ್ದು, ಇದರೊಟ್ಟಿಗೆ ನಾನು ಕ್ಷೇತ್ರದ ಅಭಿವೃದ್ಧಿಯ ಅಗತ್ಯಕ್ಕೆ ತಕ್ಕಂತೆ ಮತ್ತಷ್ಟು ಅನುದಾನ ತರುವುದಾಗಿ ಭರವಸೆ ವ್ಯಕ್ತಪಡಿಸಿದರು.

ನಿಲುವಾಗಿಲು ಗ್ರಾಮದ ದಲಿತರ ಮೇಲೆ ದೌರ್ಜನ್ಯ ಹಿನ್ನೆಲೆ

ರಾಮೇನಹಳ್ಳಿಯಲ್ಲಿ ತಾಲೂಕು ಆಡಳಿತದಿಂದ ಶಾಂತಿ ಸಭೆ



ರಾಮೇನಹಳ್ಳಿ ಗ್ರಾಮದ ಜಾತ್ರೆ ಮಾಳದ ಆವರಣದಲ್ಲಿ ಶಾಂತಿ ಸಭೆ ನಡೆಯಿತು.

ಹುಣಸೂರು, ಮಾ.7– ತಾಲೂಕಿನ ನಿಲುವಾಗಿಲು ಗ್ರಾಮದಲ್ಲಿ ದಲಿತರ ಮೇಲಿನ ದೌರ್ಜನ್ಯ ಹಿನ್ನೆಲೆಯಲ್ಲಿ ತಾಲೂಕು ಆಡಳಿತದಿಂದ ಶುಕ್ರವಾರ ರಾಮೇನಹಳ್ಳಿ ಗ್ರಾಮದ ಜಾತ್ರೆ ಮಾಳದ ಆವರಣದಲ್ಲಿ ಶಾಂತಿ ಸಭೆ ನಡೆಯಿತು.

ತಹಸೀಲ್ದಾರ್ ಮಂಜುನಾಥ್ ಘಟನೆ ಬಗ್ಗೆ ಮಾಹಿತಿ ಪಡೆದು ಮಾತನಾಡಿ, ಕಳೆದ 8 ದಿನಗಳ ಹಿಂದೆ ರಾಮೇನಹಳ್ಳಿ ಜಾತ್ರೆ ವೇಳೆ ನಿಲುವಾಗಿಲು ಗ್ರಾಮದ ದಲಿತರಿಗೂ ಅದೇ ಗ್ರಾಮದ ಮತ್ತೊಂದು ಸಮುದಾಯದ ಜನರ ನಡುವೆ ಸಣ್ಣ ವಿಚಾರವಾಗಿ ಗಲಾಟೆ ನಡೆದು ಹುಣಸೂರು ಗ್ರಾಮಾಂತರ ಠಾಣೆಯಲ್ಲಿ ಎರಡೂ ಕಡೆಯ ವರಿಂದ ಪ್ರಕರಣ ದಾಖಲಾಗಿತ್ತು ಗ್ರಾಮದಲ್ಲಿ ಬಿಗುವಿನ ವಾತಾವರಣ ಉಂಟಾಗಿರುವುದನ್ನು ಮನಗಂಡು ಶಾಂತಿ ಸಭೆ ಆಯೋಜಿಸಲಾಗಿದೆ. ಹೀಗಾಗಿ ಯಾವುದೇ ಕೋಮಿನವರು ಮತ್ತೊಂದು ಕೋಮಿನ ಜನರ ಭಾವನೆಗೆ ಧಕ್ಕೆಯಾಗದಂತೆ ನಡೆದುಕೊಳ್ಳಬೇಕು. ಯಾರೇ ತಪ್ಪು ಮಾಡಿದರೂ ಎಲ್ಲರೂ ಅದನ್ನು ಖಂಡಿಸಿದಾಗ ಮಾತ್ರ ಇಂತಹ ಘಟನೆ ನಡೆಯುವುದಿಲ್ಲ. ಜಾತಿ ಆಧಾರದ ಮೇಲೆ ಪ್ರೋತ್ಸಾಹ ನೀಡಿದರೆ ಗ್ರಾಮದ ನೆಮ್ಮದಿ ಹಾಳಾಗಿ ನಿಮ್ಮ ಬದುಕು ದುಸ್ತರವಾಗಲಿದೆ. ಇದನ್ನು ಮನಗಂಡು ಪ್ರತಿಯೊಬ್ಬರೂ ಸಮಾನತೆಯಿಂದ ಬದುಕಬೇಕು. ತಪ್ಪಿದರೆ ನಿಮ್ಮ ಮಧ್ಯೆ ಕಾನೂನು ಪ್ರವೇಶವಾಗುತ್ತದೆ ಎಂದರು.

ಡಿವೈಎಸ್ಪಿ ಗೋಪಾಲಕೃಷ್ಣ ಮಾತನಾಡಿ, ಈ ಘಟನೆಗೆ ಕಾರಣರಾದವರನ್ನು ಪತ್ತೆ ಹಚ್ಚುತ್ತೇವೆ. ಅಲ್ಲದೇ ಈ ಘಟನೆಯ ಲಾಭ ಪಡೆದು ಕೆಲ ದಲಿತ ಮುಖಂಡರು ನಿಜ ಸತ್ಯ ತಿಳಿಸದಿರುವುದನ್ನು ಪೊಲೀಸ್ ಇಲಾಖೆ ಖಂಡಿಸುತ್ತದೆ. ಘಟನೆ ಶಮನ ಮಾಡಬೇಕಾದ ಮುಖಂಡರೇ ಹೆಚ್ಚು ಮಾಡುವ ಮನಸ್ಥಿತಿ ಹೊಂದಿರುವುದು ಸರಿಯಲ್ಲ. ಘಟನೆ ಸಂಬಂಧ ಮೂವರನ್ನು ಬಂಧಿಸಲಾಗಿದೆ. ಉಳಿದವರನ್ನು ಪತ್ತೆ ಹಚ್ಚಲಾಗುವುದು. ಎರಡೂ ಸಮುದಾಯದವರು ಶಾಂತಿ ಕಾಪಾಡಬೇಕು. ಇಲ್ಲದಿದ್ದರೇ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ದಲಿತ ಮುಖಂಡರ ನಿಂಗರಾಜ ಮಲ್ಲಾಡಿ ಮಾತನಾಡಿ, ಜಾತ್ರೆ ವೇಳೆ ನಿಲುವಾಗಿಲು ಗ್ರಾಮದ ದಲಿತರ ಮೇಲೆ ದೌರ್ಜನ್ಯ ನಡೆದಿರುವುದು ಸರಿಯಲ್ಲ. ಇತರೆ ಸಮುದಾಯದವರು ದಲಿತರನ್ನು ನೋಡುವ ಮನಸ್ಥಿತಿ ಬದಲಾಗಬೇಕು. ಜಾತಿ ಮತ್ತು ಅಸ್ಪೃಶ್ಯತೆ ನೋವಿನಲ್ಲಿ ಬಳಲುತ್ತಿರುವ ದಲಿತರ ಮೇಲೆ ಒಂದು ಸಣ್ಣ ಘಟನೆಯಿಂದ ಹಲ್ಲೆ ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದ ಅವರು, ದಲಿತರು ತಪ್ಪು ಮಾಡಿದ್ದರೆ ಅದನ್ನು ಕೇಳಿ ಸರಿಪಡಿಸಬಹುದಾಗಿತ್ತು. ಅದನ್ನು ಬಿಟ್ಟು ಅವರ ಮೇಲೆ ದೌರ್ಜನ್ಯ ನಡೆಸಿರುವುದು ಸರಿಯಲ್ಲ ಎಂದರು.

ತಾಲೂಕು ಆದಿಜಾಂಬವ ಸಂಘದ ಅಧ್ಯಕ್ಷ ಬಿ.ಶಿವಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ಕುಮಾರ್, ಗ್ರಾಪಂ ಸದಸ್ಯ ನಟರಾಜು ಮಾತನಾಡಿದರು. ಗ್ರಾಮಾಂತರ ಠಾಣೆಯ ಮುನಿಯಪ್ಪ, ತಾಪಂ ಇಓ ಹೊಂಗಯ್ಯ, ಸಮಾಜ ಕಲ್ಯಾಣಾಧಿಕಾರಿ ಅಶೋಕ್ ಕುಮಾರ್, ಪಿಡಿಒ ರಾಜ್ ಕುಮಾರ್, ಆರ್‌ಐ ನಂದೀಶ್, ವಿ.ಎ. ಶಿವಕುಮಾರ್ ಮತ್ತು ಸಿಪಿಐಎಂನ ಬಸವರಾಜು, ವೆಂಕಟೇಶ್, ದಸಂಸ ರಾಮಕೃಷ್ಣ, ಸ್ವಾಮಿ, ರಾಜು, ಗಜೇಂದ್ರ, ವಕೀಲ ಪುಟ್ಟರಾಜು, ಚಿಕ್ಕಸ್ವಾಮಿ, ಗೋವಿಂದರಾಜು, ರಾಚಯ್ಯ ನಿಲುವಾಗಿಲು ಗ್ರಾಮದ ಮಾದೇಗೌಡ, ಯಜಮಾನ್ ಮಹದೇವ, ರಾಜೇಶ್, ದೇವರಾಜೇಗೌಡ, ಎಂ.ಎಸ್. ವಾಸು, ಗಣೇಶ, ಪಾಂಡು, ಪ್ರಕಾಶ, ಮಹದೇವ, ಗ್ರಾಪಂ ಸದಸ್ಯ ತಿಮ್ಮೇಗೌಡ ಇನ್ನಿತರರಿದ್ದರು.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ



ಸರಗೂರಿನ ಲಯನ್ಸ್ ಅಕಾಡೆಮಿ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ, ಸರಸ್ವತಿ ಪೂಜಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇಳೆ ಲಯನ್ಸ್ ಬ್ರಹ್ಮದೇವಯ್ಯ, ಎಸ್‌ಡಿಎಂಸಿ ಅಧ್ಯಕ್ಷ ಶ್ರೀನಿವಾಸ್, ಖಜಾಂಚಿ ಯೋಗೀಶ್, ವರ್ತಕರ ಮಂಡಳಿ ಅಧ್ಯಕ್ಷ ಲಯನ್ ಪ್ರಸಾದ್, ಲಯನ್ಸ್‌ಕ್ಲಬ್ ಖಜಾಂಚಿ ನಾಗರಾಜು, ಮಾಜಿ ಅಧ್ಯಕ್ಷ ಸುರೇಶ ಜೈನ್, ಪ್ರಾಂಶುಪಾಲ ಬಿ.ಡಿ. ದಾಸಾಚಾರಿ, ಮುಖ್ಯ ಶಿಕ್ಷಕಿ ಪದ್ಮಶ್ರೀ, ವಿದ್ಯಾರ್ಥಿಗಳು ಇನ್ನಿತರರಿದ್ದರು.

ಕನ್ನಡ ಭಾಷೆ, ಸಂಸ್ಕೃತಿ ಸಂರಕ್ಷಣೆಯಲ್ಲಿ ಮೈಸೂರು ಆಕಾಶವಾಣಿ ಪಾತ್ರ ಹಿರಿದು

● ಆಲ್ ಇಂಡಿಯಾ ರೇಡಿಯೋ ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ.ಪ್ರಜ್ಞಾ ಪಾಲೀವಾಲ್ ಗೌರ್ ಹೆಮ್ಮೆಯ ನುಡಿ ● ಮೈಸೂರು ಆಕಾಶವಾಣಿ–90 ನುಡಿ ನಾದ ಸಂಗಮ ವಿಶೇಷ ಕಾರ್ಯಕ್ರಮ



ಮೈಸೂರು ಆಕಾಶವಾಣಿ–90 ನುಡಿ ನಾದ ಸಂಗಮ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಹಿರಿಯ ವಿದ್ವಾಂಸ ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿ, ಆಕಾಶವಾಣಿ ಮಹಾನಿರ್ದೇಶಕರಾದ ಡಾ.ಪ್ರಜ್ಞಾ ಪಾಲೀವಾಲ್ ಗೌರ್ ಮತ್ತಿತರರಿದ್ದರು.

ಮೈಸೂರು, ಮಾ.7(ಎಂಕೆ)– ಮೈಸೂರು ಆಕಾಶವಾಣಿಯು ಕನ್ನಡ ಭಾಷೆ, ಕನ್ನಡ ನೆಲದ ಸಂಸ್ಕೃತಿ ಉಳಿಸುವಲ್ಲಿ ಮಹತ್ವದ ಕೊಡುಗೆ ನೀಡುತ್ತಿದೆ. ಇದು ಕರ್ನಾಟಕದ ಶ್ರೀಮಂತ ಪರಂಪರೆಯ ರಕ್ಷಕವಾಗಿದೆ ಎಂದು ಆಲ್ ಇಂಡಿಯಾ ರೇಡಿಯೋ (ಆಕಾಶವಾಣಿ) ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ.ಪ್ರಜ್ಞಾ ಪಾಲೀವಾಲ್ ಗೌರ್ ಹೇಳಿದರು.

ಮೈಸೂರಿನ ಯಾದವಗಿರಿಯಲ್ಲಿರುವ ಮೈಸೂರು ಆಕಾಶವಾಣಿ 90ರ ಸಂಭ್ರಮದ 'ನುಡಿ ನಾದ ಸಂಗಮ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಆಕಾಶವಾಣಿ ಎಂದರೆ ಆಕಾಶದಿಂದ ಬರುವ ಧ್ವನಿ. ಧ್ವನಿಯ ಮೂಲಕ ಜನರನ್ನು ಒಂದುಗೂಡಿಸುತ್ತಾ ತನ್ನ ವ್ಯಾಪ್ತಿಯ ಮೂಲೆ ಮೂಲೆಗೂ ಮಾಹಿತಿಯನ್ನು ತಲುಪಿಸುತ್ತಿದೆ.

ಸಾಂಸ್ಕೃತಿಕ ಸಂರಕ್ಷಣೆ ಮತ್ತು ಪ್ರಗತಿಯ ಆಧಾರಸ್ತಂಭವಾಗಿ ವಿಕಸನಗೊಂಡ ಮೈಸೂರು ಆಕಾಶವಾಣಿಯು ಸುದ್ದಿ, ಸಂಗೀತ, ಶಿಕ್ಷಣ, ಕೃಷಿ ಹಾಗೂ ಮನರಂಜನೆಯ ಮಾಧ್ಯಮವಾಗಿ ಲಕ್ಷಾಂತರ ಜನರ ಮೇಲೆ ಪ್ರಭಾವ ಬೀರಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಭಾರತದ ಪ್ರಸಾರಂಗದ ಇತಿಹಾಸದಲ್ಲಿ ಮೈಲಿಗಲ್ಲಾದ ಮೈಸೂರು ಆಕಾಶವಾಣಿ ತನ್ನ 90ನೇ ವಾರ್ಷಿಕೋತ್ಸವವನ್ನು ಆಚರಿಸಿಕೊಳ್ಳುತ್ತಿದ್ದು, ಮೈಸೂರು ಆಕಾಶವಾಣಿಯ ಈ ಸಾಧನೆಯು ಇದರ ಸ್ಥಾಪನೆಗೆ ಕಾರಣಕರ್ತರಾದ ಮೈಸೂರು ವಿವಿ ಪ್ರಾಧ್ಯಾಪಕರಾಗಿದ್ದ ಡಾ.ಎಂ.ವಿ.ಗೋಪಾಲ ಸ್ವಾಮಿಯವರ ದೂರದೃಷ್ಟಿ, ಸಮರ್ಪಣಾ ಮನೋಭಾವ ಮತ್ತು ಅವರ ಅವಿರತ ಶ್ರಮಕ್ಕೆ ಸಂದ ಗೌರವವಾಗಿದೆ.

ಒಂಬತ್ತು ದಶಕಗಳ ಗಮನಾರ್ಹ ಪಯಣದಲ್ಲಿ ಮೈಸೂರು ಆಕಾಶವಾಣಿ, ಕರ್ನಾಟಕ ಮತ್ತು ಅದರಾಚೆಗೂ ಸಾಂಸ್ಕೃತಿಕ, ಸಾಮಾಜಿಕ ಮತ್ತು ಬೌದ್ಧಿಕ ಜ್ಞಾನಕ್ಕೆ ಸಂಬಂಧಿಸಿ ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಾ ಬದಲಾಗುತ್ತಿರುವ ಕಾಲಕ್ಕೆ ತಕ್ಕಂತೆ ನಮ್ಮ ಪರಂಪರೆಯನ್ನು ಉಳಿಸಿಕೊಂಡು ಲಕ್ಷಾಂತರ ಕೇಳುಗರನ್ನು ತಲುಪಿದೆ ಎಂದು ಶ್ಲಾಘಿಸಿದರು.

ಗೋಪಾಲಸ್ವಾಮಿಯವರು ಒಂಟಿಕೊಪ್ಪಲಿನಲ್ಲಿರುವ ತಮ್ಮ ಮನೆಯಲ್ಲಿ ಸಣ್ಣ ರೇಡಿಯೋ ಕೇಂದ್ರವನ್ನು ಸ್ಥಾಪಿಸುವ ಮೂಲಕ 1935ರ ಸೆ.10 ಮೈಸೂರು ಆಖಾಶವಾಣಿ ಉಗಮಕ್ಕೆ ಕಾರಣರಾದರು. ಇದು ಭಾರತೀಯ ಪ್ರಸಾರ ಇತಿಹಾಸದಲ್ಲಿ ಇದೊಂದು ಮಹತ್ವದ ಮೈಲುಗಲ್ಲಾಗಿದೆ. ಅಖಿಲ ಭಾರತ ಬಾನುಲಿ ಕೇಂದ್ರ(ಆಲ್ ಇಂಡಿಯಾ ರೇಡಿಯೋ) ಸ್ಥಾಪನೆಗೂ ಮುನ್ನವೇ ಮೈಸೂರು ಖಾಸಗಿ ರೇಡಿಯೋ ಕೇಂದ್ರವನ್ನು ಹೊಂದಿದ್ದ ದೇಶದ ಮೊಟ್ಟ ಮೊದಲ ನಗರವಾಗಿತ್ತು ಎಂದು ನೆನೆದರು.

ಮೈಸೂರಿನ ವಾಸುದೇವಾಚಾರ್ಯ, ಟಿ.ಚೌಡಯ್ಯ ಮತ್ತು ದೊರೆಸ್ವಾಮಿ ಅಯ್ಯಂಗಾರ್ ಅವರಂತಹ ಮಹಾನ್ ಕಲಾವಿದರಿಗೆ ವೇದಿಕೆ ನೀಡಿ ಶಾಸ್ತ್ರೀಯ ಸಂಗೀತ ಹಾಗೂ ಸಾಂಪ್ರದಾಯಿಕ ಕಲಾ ಪ್ರಕಾರಗಳು ಬೆಳವಣಿಗೆಗೂ ಕೊಡುಗೆ ನೀಡಿದೆ. ಅಲ್ಲದೆ ಉದಯೋನ್ಮುಖ ಪ್ರತಿಭೆಗಳಿಗೆ ಅವಕಾಶ ನೀಡಿ, ಸ್ಥಳೀಯ ಕಲೆ, ಸಾಹಿತ್ಯಕ್ಕೆ ಉತ್ತೇಜನ ನೀಡುವ ಮೂಲಕ ಅಪಾರ ಕೇಳುಗರನ್ನು ತಲುಪುತ್ತಿದೆ ಎಂದರು.

ಮೈಸೂರು ಆಕಾಶವಾಣಿ ಶಿಕ್ಷಣ, ಸಾಮಾಜಿಕ ಹಾಗೂ ರೈತರ ಜಾಗೃತಿ, ಸಾರ್ವಜನಿಕ ಆರೋಗ್ಯ ಸಮಸ್ಯೆಗಳ ಕುರಿತು ಕೇಳುಗರಲ್ಲಿ ಅರಿವು ಮೂಡಿಸುವ ಜೊತೆಗೆ ನೈಸರ್ಗಿಕ ವಿಕೋಪಗಳು ಮತ್ತು ಕೋವಿಡ್–19ನಂತಹ ಸಾಂಕ್ರಾಮಿಕ ಕಾಯಿಲೆಯ ಬಿಕ್ಕಟ್ಟಿನ ಸಮಯದಲ್ಲಿ ವಿಶ್ವಾಸಾರ್ಹ ಮಾಹಿತಿ ನೀಡುತ್ತಾ ನಂಬಿಕೆ ಗಳಿಸಿದೆ. ಮಾಧ್ಯಮ ಹಾಗೂ ಸಂವಹನ ಪ್ರಪಂಚವು ಕೆಲ ವರ್ಷಗಳಲ್ಲಿ ಪರಿಣಾಮಕಾರಿಯಾಗಿ ಬದಲಾಗಿದೆ. ದೂರದರ್ಶನ, ಇಂಟರ್ನೆಟ್ ಮತ್ತು ಡಿಜಿಟಲ್ ಸ್ಟ್ರೀಮಿಂಗ್ ಸೇವೆಗಳ ಏರಿಕೆಯ ನಡುವೆಯೂ ಮೈಸೂರು ಆಕಾಶವಾಣಿ ಪ್ರಸ್ತುತವಾಗಿ ಉಳಿದಿದೆ. ತನ್ನ ಮೌಲ್ಯತೆಯೊಂದಿಗೆ ಹೊಸ ಹೊಸ ತಂತ್ರಜ್ಞಾನಗಳಿಗೆ ಹೊಂದಿಕೊಳ್ಳುತ್ತಿದೆ ಎಂದು ತಿಳಿಸಿದರು.

ನೂರು ವರ್ಷಗಳು ಪೂರೈಸಲಿ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ, ಆಕಾಶವಾಣಿ ಎಂದರೆ ಸ್ವರ್ಗದಿಂದ ಬಂದಂತಹ ಧ್ವನಿ ಎಂಬ ಅರ್ಥ ಕೂಡ ಇದೆ. ಹತ್ತು–ಹಲವು ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಿರುವ ಆಕಾಶವಾಣಿ, ಮೈಸೂರಿನಲ್ಲಿ ಪ್ರಾರಂಭವಾಗಿ 90 ವರ್ಷಗಳಾಗಿದೆ. ಇಡೀ ಭಾರತಕ್ಕೆ ಕೊಟ್ಟಂತಹ ಕೊಡುಗೆ ಎಂದರೆ, ಆಕಾಶವಾಣಿ ಎಂಬ ಹೆಸರೇ ಆಗಿದೆ. ಮೈಸೂರು ಆಕಾಶವಾಣಿಯಲ್ಲಿ ಸಂಘಟಿತವಾದ ತಂಡವಿದ್ದು, ನೂರು ವರ್ಷಗಳನ್ನು ಪೂರೈಸಲು ಎಂದು ಶುಭಕೋರಿದರು.

ಹಿರಿಯ ವಿದ್ವಾಂಸ ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿ ಮಾತನಾಡಿ, ಮೈಸೂರು ಕರ್ನಾಟಕದ ಸಾಂಸ್ಕೃತಿಕ ನಗರಿ. ಅದರ ಹೆಮ್ಮೆಗೆ ಕಾರಣವಾದ ಸಂಗತಿಗಳಲ್ಲಿ ಮೈಸೂರು ಆಕಾಶವಾಣಿಯೂ ಒಂದಾಗಿದೆ. ಮೈಸೂರಿನ ಸುಧರ್ಮ ಸಂಸ್ಕೃತ ಪತ್ರಿಕೆಯ ಸಂಸ್ಥಾಪಕ ಸಂಪಾದಕರಾದ ವರದರಾಜ್ ಅಯ್ಯಂಗಾರ್ ಅವರು, ಆಕಾಶವಾಣಿ ದೆಹಲಿ ಕೇಂದ್ರಕ್ಕೆ ಭೇಟಿ ನೀಡಿ, ಕೊಟ್ಟ ಸಲಹೆ ಮೇರೆಗೆ ಸಂಸ್ಕೃತದಲ್ಲಿ ವಾರ್ತೆಗಳು ಪ್ರಸಾರವಾಗುತ್ತಿರುವುದರಲ್ಲಿಯೂ ಮೈಸೂರು ವಿದ್ವಾಂಸರ ಕೊಡುಗೆ ಇದೆ. ಇದು ಆಕಾಶ ವಾಣಿಯ ಚರಿತ್ರೆಯಲ್ಲಿ ದಾಖಲಾಗಿದೆ ಎಂದು ಗುಣಗಾನ ಮಾಡಿದರು.

ನಂತರ ಲಕ್ಷ್ಮಿ ನಾಗರಾಜ್ ಅವರಿಂದ ಶಾಸ್ತ್ರೀಯ ಮತ್ತು ಸುಗಮ ಸಂಗೀತ ಹಾಗೂ ಹೆಚ್.ಎಲ್.ಶಿವಶಂಕರ ಸ್ವಾಮಿ ಮತ್ತು ತಂಡದವರಿಂದ ಫ್ಯೂಷನ್ ಸಂಗೀತ ಕಾರ್ಯಕ್ರಮ ನಡೆಯಿತು. ಮೈಸೂರು ಆಕಾಶವಾಣಿ ಮುಖ್ಯಸ್ಥ ಎಸ್.ಎಸ್. ಉಮೇಶ್, ಸಹಾಯಕ ನಿರ್ದೇಶಕ ಟಿ.ವಿ.ವಿದ್ಯಾಶಂಕರ್, ಸಹಾಯಕ ಇಂಜಿನಿಯರ್ ಪಿ. ಆನಂದನ್ ಮತ್ತಿತರರು ಉಪಸ್ಥಿತರಿದ್ದರು.

ಸಾಧಕರಿಗೆ ಸನ್ಮಾನ...

ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದವರನ್ನು ಸನ್ಮಾನಿಸಲಾಯಿತು. ಮೈಸೂರು ಆಕಾಶವಾಣಿ ಸಂಸ್ಥಾಪಕರಾದ ಡಾ.ಎಂ.ವಿ.ಗೋಪಾಲಸ್ವಾಮಿ ಹಾಗೂ ನಾ.ಕಸ್ತೂರಿ ಅವರ ಕುಟುಂಬಸ್ಥರ ಜೊತೆಗೆ ಡಾ.ಆರ್.ವಿಶ್ವೇಶ್ವರನ್(ಸಂಗೀತ), ಡಾ.ಪಿ.ಕೆ.ರಾಜಶೇಖರ್(ಜಾನಪದ), ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್(ವಿಜ್ಞಾನ), ಡಾ.ಗಾಂಧಿದಾಸ್(ಸಂಶೋಧನೆ), ಮಹೇಶ್‌ಚಂದ್ರ ಗುರು(ಗ್ರಾಮೀಣ ಅಭಿವೃದ್ಧಿ), ಪಿ.ರಮೇಶ್ (ಸಹಕಾರ), ಡಾ.ಮಣಿಕರ್ಣಿಕ(ವೈದ್ಯಕೀಯ), ಪ್ರೊ.ಸಿ.ನಾಗಣ್ಣ(ಸಾಹಿತ್ಯ), ಡಾ.ಎಂ.ಪುಷ್ಪಾವತಿ (ಶಿಕ್ಷಣ), ಫಾದರ್ ಅಲೆಕ್ಸ್ ಪ್ರಶಾಂತ್ ಸಿಕ್ವೇರ(ಸಮಾಜ ಸೇವೆ) ಸೈಯದ್ ನಾಸಿರ್ ಅಹಮದ್(ಕೃಷಿ) ಹಾಗೂ ಎನ್.ನಾಗಚಂದ್ರ(ನಾಟಕ) ಅವರನ್ನು ಸನ್ಮಾನಿಸಲಾಯಿತು.

ಸಮೂಹ ಮಾಧ್ಯಮದಲ್ಲಿ ಆಕಾಶವಾಣಿಗೆ ಪ್ರಥಮ ಸ್ಥಾನ....

ಮೈಸೂರು ಆಕಾಶವಾಣಿ ಕೇಂದ್ರ ಜನಸಾಮಾನ್ಯರಿಗೆ ಹತ್ತಿರವಾಗಿದ್ದು, ಮಾಹಿತಿ, ಮನರಂಜನೆಗೆ ಹೊಸ ಹೊಸ ಪ್ರಯತ್ನಗಳನ್ನು ಮಾಡುತ್ತಲೇ ಇದೆ. ಜನಶಿಕ್ಷಣಕ್ಕೆ ಉತ್ಸುಕತೆಯನ್ನು ತೋರಿಸುತ್ತಾ ಬಂದಿರುವ ಆಕಾಶವಾಣಿ, ಮಾದರಿ ವ್ಯಕ್ತಿಗಳನ್ನು, ಅವರ ಸಾಧನೆಗಳನ್ನು ತಿಳಿಸುತ್ತಾ ಬಹುಜನರ ಹಿತವನ್ನು ಕಾಯುತ್ತಿದೆ. ಇತ್ತೀಚೆಗೆ ಆಕಾಶವಾಣಿ ಪ್ರಸಾರ ಮಾಡಿದ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾಗವನ್ನು ಕೇಳಿದಾಗ ರೋಮಾಂಚನವಾಯಿತು. ಒಟ್ಟಾರೆ ಸಮೂಹ ಮಾಧ್ಯಮಗಳಲ್ಲಿ ಆಕಾಶವಾಣಿಗೆ ಪ್ರಥಮ ಸ್ಥಾನ ಇದೆ.

- ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿ
ಹಿರಿಯ ವಿದ್ವಾಂಸ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ರಾಕ್ಷಸ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ರಾಕ್ಷಸ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ರಾಕ್ಷಸ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಛಾವಾ (ಹಿಂ)	4 ಪ್ರದರ್ಶನಗಳು
ರಾಜಕಮಲ್	
ಶಬ್ದಂ(ತ)	4 ಪ್ರದರ್ಶನಗಳು
ಸಂಗಂ	
ಕಪಾತಿ (ಕ)+ ಸೂರಿ ಲವ್ಸ್ ಸಂಧ್ಯಾ(ಕ)	2+2 ಪ್ರದರ್ಶನಗಳು
ಲಿಡೋ	
ಡಾಕೂ ಮಹಾರಾಜ್(ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ರಾಕ್ಷಸ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂನನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೆಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಆಕಾಶವಾಣಿಗೆ 90ರ ಸಂಭ್ರಮ

ಆಕಾಶವಾಣಿ ಸಿಬ್ಬಂದಿಯಿಂದ ಸೈಕಲ್ ಜಾಥಾ



ಮೈಸೂರು ಆಕಾಶವಾಣಿಗೆ 90 ವರ್ಷ ಸಂದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಸೈಕಲ್ ಜಾಥಗೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಚಾಲನೆ ನೀಡಿದರು.

ಮೈಸೂರು,ಮಾ.7(ಎಂಟಿವೈ)– ಮೈಸೂರು ಆಕಾಶವಾಣಿಗೆ 90 ವರ್ಷ ಸಂದ ಹಿನ್ನೆಲೆಯಲ್ಲಿ ಮೈಸೂರಲ್ಲಿ ಶ್ರೋತೃಗಳೊಂದಿಗೆ ಆಕಾಶವಾಣಿ ಸಿಬ್ಬಂದಿ ಸೈಕಲ್ ಜಾಥ ನಡೆಸಿದರು.

ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ಶುಕ್ರವಾರ ಬೆಳಗ್ಗೆ ಆಕಾಶವಾಣಿ ವತಿಯಿಂದ ಆಯೋಜಿಸಿದ್ದ ಸೈಕಲ್ ಜಾಥಗೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಚಾಲನೆ ನೀಡಿ, 90ರ ಸಂಭ್ರಮದಲ್ಲಿರುವ ಮೈಸೂರು ಆಕಾಶವಾಣಿ ಅಪಾರ ಸಂಖ್ಯೆ ಶ್ರೋತೃಗಳ ಮನಗೆದ್ದಿದೆ. ಉತ್ತಮ ಕಾರ್ಯಕ್ರಮಗಳ ಮೂಲಕ ಮನೆ ಮಾತಾಗಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಉತ್ತಮ ಕಾರ್ಯಕ್ರಮಗಳ ಮೂಲಕ ಇನ್ನಷ್ಟು ಸಂಖ್ಯೆಯ ಶ್ರೋತೃ ಬಳಗವನ್ನು ಹೆಚ್ಚಿಸಿಕೊಳ್ಳಲೆಂದು ಶುಭಕೋರಿದರು.

ಸೈಕಲ್ ಜಾಥ ಕೆ.ಆರ್.ವೃತ್ತ, ಡಿ.ದೇವರಾಜ ಅರಸ್ ರಸ್ತೆ, ಜೆಎಲ್‌ಬಿ ರಸ್ತೆ, ಕೆ.ಆರ್.ಎಸ್ ರಸ್ತೆ ಮೂಲಕ ಆಕಾಶವಾಣಿ ಕಚೇರಿ ಆವರಣ ತಲುಪಿತು.

ಬೆಳಗ್ಗೆ 10ಕ್ಕೆ ಆಕಾಶವಾಣಿ ಆವರಣದಲ್ಲಿ ಆಯೋಜಿಸಿದ್ದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ಎಂ.ಕೆ.ಸವಿತಾ ಚಾಲನೆ ನೀಡಿದರು. ಮಧ್ಯಾಹ್ನ 1 ಗಂಟೆವರೆಗೂ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ವಿವಿಧ ಮಳಿಗೆಗಳನ್ನು ಎಂಎಎಚ್‌ಎಎನ್ ಉಪಾಧ್ಯಕ್ಷ ಕೆ.ಎಸ್. ಗುರುರಾಜ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಆಕಾಶವಾಣಿ ನವದೆಹಲಿ ಸುದ್ದಿ ವಿಭಾಗದ ಮಹಾನಿರ್ದೇಶಕ ಡಾ. ಪ್ರಜ್ಞಾಪಾಲಿವಾಲ್ ಗೌರ್, ಮೈಸೂರು ಆಕಾಶವಾಣಿಯ ಉಪನಿರ್ದೇಶಕ ಎಸ್.ಎಸ್.ಉಮೇಶ್, ಸಹಾಯಕ ನಿರ್ದೇಶಕ ಟಿ.ವಿ.ವಿದ್ಯಾಶಂಕರ್, ಉದ್ಘೋಷಕ ಡಾ. ಮೈಸೂರು ಉಮೇಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಾಡಿನ ಉಳಿವು ಯುವ ಸಮೂಹದ ಕೈಯಲ್ಲಿದೆ

ರೋವರ್ಸ್, ರೇಂಜರ್ಸ್ ಸಮಾವೇಶದಲ್ಲಿ ಪರಿಸರವಾದಿ ಸುರೇಶ್ ಹೆಬ್ಳೀಕರ್ ಅಭಿಪ್ರಾಯ



ಮೈಸೂರು ವಿಭಾಗ ಮಟ್ಟದ ರೋವರ್ಸ್ ಮತ್ತು ರೇಂಜರ್ಸ್ ಸಮಾವೇಶವನ್ನು ಪರಿಸರವಾದಿ ಸುರೇಶ್ ಹೆಬ್ಳೀಕರ್ ಉದ್ಘಾಟಿಸಿದರು.

ಮೈಸೂರು, ಮಾ.7(ಜಿಎ)–ಕಾಡಿನ ಉಳಿವು ಯುವ ಸಮೂಹದ ಕೈಯಲ್ಲಿದೆ ಎಂದು ಚಲನಚಿತ್ರ ನಟ ಹಾಗೂ ಪರಿಸರವಾದಿ ಸುರೇಶ್ ಹೆಬ್ಳೀಕರ್ ಅಭಿಪ್ರಾಯಪಟ್ಟರು.

ಮೈಸೂರು ಜಿಲ್ಲಾ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯು ಕೆ.ಪುಟ್ಟಸ್ವಾಮಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ಮೈಸೂರು ವಿಭಾಗ ಮಟ್ಟದ ರೋವರ್ಸ್ ಮತ್ತು ರೇಂಜರ್ಸ್ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಭೂಮಿಯು ಆಧುನಿಕತೆಯ ದಾಸ್ಯಕ್ಕೆ ಒಳಗಾಗಿದೆ. ಎಲ್ಲರೂ ಕೃತಕ ಬುದ್ಧಿಮತ್ತೆಯನ್ನೇ ಅನುಸರಿಸಿದರೆ, ಆಹಾರ ಒದಗಿಸುವವರು ಯಾರು? ಪಶ್ಚಿಮ ಘಟ್ಟ ನಮ್ಮ ಸಂಸ್ಕೃತಿಯನ್ನು ಶ್ರೀಮಂತಗೊಳಿಸಲು ಕಾರಣವಾಗಿದೆ ಆದರೆ ಜನ ಕಾಡು ಕಡಿದು, ವಾಣಿಜ್ಯ ಬೆಳೆಗಳಾದ ಅಡಿಕೆ, ರಬ್ಬರ್ ಬೆಳೆಯುತ್ತಿದ್ದಾರೆ. ಆ ಕಾಡಿನ ಸುರಕ್ಷತೆಯ ಜವಾಬ್ದಾರಿ ಯುವ ಸಮೂಹದ ಕೈಯಲ್ಲಿದೆ ಎಂದರು.

ತಂತ್ರಜ್ಞಾನದ ವೇಗದೊಂದಿಗೆ ಪರಿಸರ ಕೊಚ್ಚಿ ಹೋಗಬಾರದು, ಜೀವನದ ಅವಿಭಾಜ್ಯ ಅಂಗವಾಗಿರುವ ಹಸಿರಿನ ಸಿರಿ ಉಳಿಸುವ ಕುರಿತು ಜಾಗೃತಿ ಮೂಡಿಸಬೇಕಿದೆ. ಆದರೆ, ಬೆಂಗಳೂರು ನಗರದಲ್ಲಿ ಸಾವಿರಕ್ಕಿಂತಲೂ ಹೆಚ್ಚು ಅಡಿ ಕೊಳವೆ ಬಾವಿ ಕೊರೆಸಲಾಗುತ್ತಿದ್ದು, 11 ಲಕ್ಷಕ್ಕಿಂತಲೂ ಅಧಿಕ ಕೊಳವೆ ಬಾವಿಗಳಿವೆ. ಕೆರೆಗಳನ್ನು ಮುಚ್ಚಲಾಗಿದೆ. ಹುಲ್ಲುಗಾವಲುಗಳಿಲ್ಲ, ಮುಂದಿನ ಪೀಳಿಗೆ ಇದರ ದುಷ್ಪರಿಣಾಮಗಳನ್ನು ಅನುಭವಿಸಲಿದೆ ಎಂದು ಕಳವಳ ವ್ಯಕ್ತಪಡಿಸಿದರು.


ಭೂಮಿಯ 80 ಭಾಗ ನೀರಿನಿಂದ ತುಂಬಿದೆ ಉಳಿದೆಡೆ 800 ಕೋಟಿ ಜನರೊಂದಿಗೆ ಉಳಿದ ಪ್ರಾಣಿ, ಪಕ್ಷಿಗಳೂ ಬದುಕಬೇಕು. ಮನುಷ್ಯನ ಸ್ವ ಹಿತಾಸಕ್ತಿಯ ಅಭಿವೃದ್ಧಿಯಲ್ಲೂ ಪರಿಸರದ ಕೊಡುಗೆಯಿದೆ. ನಮಗೆ ಜೀವನವನ್ನು ನೀಡಿದ ಪರಿಸರವನ್ನು ಉಳಿಸುವ ಬಗ್ಗೆ ನಾವು ಚಿಂತಿಸುತ್ತಿಲ್ಲ. ಇದರಿಂದಾಗಿ ಜಾಗತಿಕ ಜಾಪಮಾನದಲ್ಲಿ ವ್ಯತ್ಯಾಸವಾಗುತ್ತಿದೆ' ಎಂದರು.

ಕಾರ್ಯಕ್ರಮದಲ್ಲಿ ಸಾಹಿತಿ ನಾಗಣ್ಣ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಸಹಾಯಕ ರಾಜ್ಯ ಆಯುಕ್ತ ಬಿ.ಕೆ.ಬಸವರಾಜ, ರಾಜ್ಯ ಉಪಾಧ್ಯಕ್ಷೆ ಪುಷ್ಪವಲ್ಲಿ, ಜಿಲ್ಲಾ ಮುಖ್ಯ ಆಯುಕ್ತ ಪಿ.ವಿಶ್ವನಾಥ್, ಕಾರ್ಯದರ್ಶಿ ಅಬ್ದುಲ್ ಜಮೀಲ್, ಕಾಲೇಜಿನ ಪ್ರಾಂಶುಪಾಲ ಎಂ.ಶಿವಲಿಂಗೇಗೌಡ ಉಪಸ್ಥಿತರಿದ್ದರು.

ನಾಳೆ ಆರಾಧನಾ ಮಹೋತ್ಸವ

ಮೈಸೂರು, ಮಾ.7(ಎಂಕೆ)– ತಾಲೂಕಿನ ರಾಯನಹುಂಡಿಯ ಉದ್ಭವ ಲಿಂಗ ಶ್ರೀ ಸೋಮಲಿಂಗೇಶ್ವರ ಸ್ವಾಮಿ ಹಾಗೂ ಶ್ರೀ ಶನೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಮಾ.9 ರಂದು 45ನೇ ವರ್ಷದ ಆರಾಧನ ಮಹೋತ್ಸವ ನಡೆಯಲಿದೆ. ಅಂದು ಬೆಳಗ್ಗೆಯಿಂದಲೇ ಶ್ರೀ ಸೋಮಲಿಂಗೇಶ್ವರ ಸ್ವಾಮಿಗೆ ರುದ್ರಾಭಿಷೇಕ, ಗಣಪತಿ ಪೂಜೆ ಸೇರಿದಂತೆ ಹಲವು ಪೂಜಾ ಕೈಂಕರ್ಯಗಳು ಜರುಗಲಿದ್ದು, ಬೆಳಗ್ಗೆ 11 ರಿಂದ ಮಧ್ಯಾಹ್ನ 1.30ರವರೆಗೆ ಕಡಕೊಳದ ಬೀರೇಶ್ವರ ಸ್ವಾಮಿ ಮಜ್ಜನ ಉತ್ಸವ, ಮಧ್ಯಾಹ್ನ 2 ಗಂಟೆ ಅನ್ನದಾನ, ಸಂಜೆ 6.30 ರಿಂದ ರಾತ್ರಿ 8.30ರವರೆಗೆ ಶ್ರೀ ಶನೇಶ್ವರ ಸ್ವಾಮಿ ಉತ್ಸವ ಮೂರ್ತಿ ಮೆರವಣಿಗೆ, ರಾತ್ರಿ 9 ಗಂಟೆಯ ನಂತರ ದೀಪಾರಾಧನೆ ಹಾಗೂ 9.30ಕ್ಕೆ ಶನಿ ಪ್ರಭಾವ ಅಥವಾ ರಾಜಾ ವಿಕ್ರಮ ನಾಟಕ ಪ್ರದರ್ಶನ ಇರಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ವಿಶ್ವ ಮಹಿಳಾ ದಿನಾಚರಣೆಯ ಅಂಗವಾಗಿ ವಿಶ್ವಕಪ್ ವಿಜೇತ ಖೋ ಖೋ ತಂಡದ ಆಟಗಾರ್ತಿ ಚೈತ್ರಗೆ ಸನ್ಮಾನ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ನಡೆದು ವಿಶ್ವ ಮಹಿಳಾ ದಿನದ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಖೋ ಖೋ ಆಟಗಾರ್ತಿ ಚೈತ್ರ ಅವರನ್ನು ಸನ್ಮಾನಿಸಲಾಯಿತು.

ಮೈಸೂರು,ಮಾ.7(ಎಂಟಿವೈ)– ವಿಶ್ವ ಮಹಿಳಾ ದಿನದ ಅಂಗವಾಗಿ ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಭಾರತ ಖೋಖೋ ತಂಡದ ಆಟಗಾರ್ತಿ ಚೈತ್ರ ಅವರನ್ನು ಸನ್ಮಾನಿಸಲಾಯಿತು.

ಮೈಸೂರಿನ ಚಾಮರಾಜ ಮೊಹಲ್ಲಾದಲ್ಲಿರುವ ಬಿಜೆಪಿ ಕಚೇರಿಯಲ್ಲಿ ರಾಜ್ಯ ಬಿಜೆಪಿ ಮಹಿಳಾ ಮೋರ್ಚಾ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಖೋ ಖೋ ವಿಶ್ವಕಪ್ ಗೆದ್ದ ಭಾರತ ತಂಡದ ಖೋ ಖೋ ಆಟಗಾರ್ತಿ ಚೈತ್ರ ಅವರನ್ನು ಬಿಜೆಪಿ ಮಹಿಳಾ ಮೋರ್ಚಾ ಮುಖಂಡರು, ಕಾರ್ಯಕರ್ತರು ಸನ್ಮಾನಿಸಿದರು.

ಮಹಿಳಾ ಮೋರ್ಚಾ ರಾಜ್ಯ ಘಟಕದ ಅಧ್ಯಕ್ಷೆ ಸಿ.ಮಂಜುಳಾ, ರಾಜ್ಯ ಉಪಾಧ್ಯಕ್ಷೆ ಪ್ರಫುಲ್ಲಾ ಮಲ್ಲಾಡಿ ಹಾಗೂ ಇನ್ನಿತರರು ಮಹಿಳಾ ದಿನದ ಶುಭ ಕೋರಿದರು. ಈ ವೇಳೆ ಮಹಿಳಾ ಮೋರ್ಚಾ ಅಧ್ಯಕ್ಷೆ ಸಿ. ಮಂಜುಳಾ ಮಾತನಾಡಿ, ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಸಾಧನೆ ಮಾಡುತ್ತಿರುವುದು ಶ್ಲಾಘನೀಯ. ಪ್ರಸ್ತುತ ಸಂದರ್ಭದಲ್ಲಿ ಮಹಿಳೆಯರಿಗೆ ಯಾವ ಕ್ಷೇತ್ರವೂ ಕಷ್ಟ ಎನಿಸುತ್ತಿಲ್ಲ. ಮುಂದಿನ ದಿನಗಳಲ್ಲಿ ಸಾಧಕ ಮಹಿಳೆಯರನ್ನು ಮಾಧರಿಯಾಗಿಸಿಕೊಂಡು ಇನ್ನಷ್ಟು ಮಂದಿ ಸಾಧನೆ ಮಾಡಲು ಮುಂದಾಗಬೇಕು. ಖೋಖೋ ಆಟಗಾರ್ತಿ ಚೈತ್ರ ಅವರ ಸಾಧನೆ ಯುವ ಕ್ರೀಡಾಪಟುಗಳಿಗೆ ಪ್ರೇರಣೆಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಇದೇ ವೇಳೆ ಮಹಿಳೆಯರ ಆರ್ಥಿಕ ಸಬಲೀಕರಣ ಮತ್ತು ಅಂಗಾಂಗ ದಾನಿಗಳ ನೋಂದಣಿ ಅಭಿಯಾನ ನಡೆಯಿತು. ಕಾರ್ಯಕ್ರಮದಲ್ಲಿ ಗ್ರಾಮಾಂತರ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಳಿನಿಗೌಡ, ಮಾಜಿ ಜಿಲ್ಲಾಧ್ಯಕ್ಷೆ ಮಂಗಳ ಸೋಮಶೇಖರ್, ನಂದಿನಿ, ರಾಧಿಕಾ ಶ್ರೀನಾಥ್ ಸೇರಿದಂತೆ ವಿವಿಧ ಮಂಡಲ ಅಧ್ಯಕ್ಷರು, ಕಾರ್ಯದರ್ಶಿಗಳು ಸೇರಿದಂತೆ ಹಲವು ಮಹಿಳೆಯರು ಪಾಲ್ಗೊಂಡಿದ್ದರು.

ನಂದಿ ರಥಯಾತ್ರೆಗೆ ಸಂಸದ ಯದುವೀರ್ ಅದ್ಧೂರಿ ಸ್ವಾಗತ



ಗೋಮಾತೆ ಮಹತ್ವ ಕುರಿತು ಜಾಗೃತ ಯಾತ್ರೆ ಇದು



ಮೈಸೂರಿನ ಒಂಟಿಕೊಪ್ಪಲ್ ಶ್ರೀ ಲಕ್ಷ್ಮಿ ವೆಂಕಟರಮಣ ದೇವಸ್ಥಾನದಿಂದ ಪಡವಾರಹಳ್ಳಿ ಮಹದೇಶ್ವರ ದೇವಸ್ಥಾನದವರೆಗೆ ಹಮ್ಮಿಕೊಂಡಿದ್ದ ಶೋಭಾಯಾತ್ರೆಯಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಹಾಗೂ ಇತರರು ಭಾಗವಹಿಸಿದ್ದರು.

ಮೈಸೂರು, ಮಾ.7(ಎಸ್‌ಪಿಎನ್)– ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಚರಿಸಿ ಶುಕ್ರವಾರ ಮೈಸೂರಿಗೆ ಆಗಮಿಸಿದ್ದ ನಂದಿರಥ ಯಾತ್ರೆಗೆ ಮೈಸೂರು ನಗರದ ಪ್ರಿನ್ಸೆಸ್ ರಸ್ತೆಯ (ಕೆಆರ್‌ಎಸ್ ರಸ್ತೆ) ಒಂಟಿಕೊಪ್ಪಲ್ ಶ್ರೀ ಲಕ್ಷ್ಮಿ ವೆಂಕಟರಮಣ ದೇವಸ್ಥಾನದ ಬಳಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸ್ವಾಗತಿಸಿದರು.

ಈ ನಂದಿರಥ ಯಾತ್ರೆಯನ್ನು ಗೋಸೇವಾ ಗತಿವಿಧಿ ಕರ್ನಾಟಕ ಘಟಕ, ರಾಧಾ ಸುರಭಿ ಗೋಮಂದಿರ, ರಾಷ್ಟ್ರೀಯ ಗೋ ಸೇವಾ ಸಂಸ್ಥಾನ ಟ್ರಸ್ಟ್ ಸಹಯೋಗದೊಂದಿಗೆ ಒಂಟಿಕೊಪ್ಪಲ್ ಶ್ರೀ ಲಕ್ಷ್ಮಿ ವೆಂಕಟರಮಣ ದೇವಸ್ಥಾನದಿಂದ ಪಡವಾರಹಳ್ಳಿ ಮಹದೇಶ್ವರ ದೇವಸ್ಥಾನದವರೆಗೆ ಹಮ್ಮಿಕೊಂಡಿದ್ದ ಶೋಭಾಯಾತ್ರೆಯಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಇತರೆ ಮುಖಂಡರು ಪಾಲ್ಗೊಂಡಿದ್ದರು.

ನಂದಿಯಾತ್ರೆಯು ಶ್ರೀ ಲಕ್ಷ್ಮೀ ವೆಂಕಟರಮಣ ದೇವಸ್ಥಾನದ ಮುಂಭಾಗದಿಂದ ಸಂಜೆ 5.40ಕ್ಕೆ ಆರಂಭಗೊಂಡಿತು. ಈ ವೇಳೆ ಅಭಿನವ ವೀರಭದ್ರ ವೀರಗಾಸೆ ಕಲಾತಂಡ, ಶಶಿಕಲಾ ಸುಧಾಮ ಭಜನಾ ಮಂಡಳಿ, ಜಿ.ಸಿ.ಪುಟ್ಟಸ್ವಾಮಿ ನೇತೃತ್ವದ ಭಜನಾ ಮಂಡಳಿ ರಥಯಾತ್ರೆಯಲ್ಲಿ ಭಾಗವಹಿಸಿ ಮೆರಗುತಂದರು. ಕೆ.ಜಿ.ಕೊಪ್ಪಲಿನ ಮರವೇಗೌಡರ ಕುಟುಂಬದ ಪ್ರತಾಪ್ ಆರ್.ಗೌಡರ ಮಾಲೀಕತ್ವದ ಐದು ಜೋಡೆತ್ತುಗಳು ಸರ್ವಾಲಂಕಾರಗೊಂಡು ಹಾದಿ ಉದ್ದಕ್ಕೂ ಗಂಭೀರ ಹೆಜ್ಜೆಹಾಕಿದವು. ನಂತರ ಯಾತ್ರೆಯು ಟೆಂಪಲ್ ರಸ್ತೆ, ಮಾತೃಮಂಡಳಿ ವೃತ್ತದ ಮೂಲಕ ಸಾಗಿ, ಪಡುವಾರಹಳ್ಳಿಯ ಜೋಡಿ ಮಾರಮ್ಮ ದೇವಸ್ಥಾನ ಬಳಿಯಲ್ಲಿ ಕೊನೆಗೊಂಡಿತು.

ಈ ವೇಳೆ ಸಂಸದ ಯದುವೀರ್ ಮಾಧ್ಯಮಗಳೊಂದಿಗೆ ಮಾತನಾಡಿ, ನಮ್ಮ ಸಂಸ್ಕೃತಿ, ಪರಂಪರೆ ಬಿಂಬಿಸುವ ನಂದಿರಥ ಯಾತ್ರೆಗೆ ರಾಜ್ಯಾದ್ಯಂತ ಚಾಲನೆ ನೀಡಲಾಗಿದೆ ಇಂದು ನಂದಿರಥ ಯಾತ್ರೆ ಮೈಸೂರು ನಗರಕ್ಕೆ ಆಗಮಿಸಿ, ಇಲ್ಲಿನ ಜನರಲ್ಲಿ ಗೋಮಾತೆ ಕುರಿತು ಜಾಗೃತಿ ಮೂಡಿಸುತ್ತಿರುವುದು ಸಂತೋಷದ ಸಂಗತಿ. ಅದರಲ್ಲೂ ಈ ರಥಯಾತ್ರೆಯಲ್ಲಿ 'ಹಳ್ಳಿಕಾರ್' ತಳಿಗಳ ಪ್ರದರ್ಶಿಸಿರುವುದು ಮೆಚ್ಚುಗೆಯ ಸಂಗತಿ ಎಂದರು.

ಬಜೆಟ್ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಂಸದರು, ಈ ಬಾರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮಂಡಿಸಿರುವ ಬಜೆಟ್ ಒಂದು ಸಮುದಾಯದ ಓಲೈಕೆಗೆ ಸೀಮಿತವಾಗಿದೆ. ಬಜೆಟ್ ಸರ್ವಸ್ಪರ್ಶಿಯಾಗಿಲ್ಲ ಹಾಗೂ ರೈತ ವಿರೋಧಿ ಬಜೆಟ್ ಎಂದು ಆರೋಪಿಸಿದರು.

ಜೋಡಿ ಮಾರಮ್ಮ ದೇವಸ್ಥಾನದ ಮುಂಭಾಗದ ವೇದಿಕೆ ಕಾರ್ಯಕ್ರಮದಲ್ಲಿ ಗೋಸೇವಾ ಗತಿವಿಧಿ ಕರ್ನಾಟಕ ಪ್ರಾಂತ್ಯದ ಸಂಯೋಜಕ ಪ್ರವೀಣ್ ಸರಳಾಯ ಮಾತನಾಡಿ, ಪ್ರಕೃತಿಯ ಜೊತೆಗೆ ಭಗವಂತನ ಆರಾಧನೆ ಮಾಡುತ್ತ, ಎಲ್ಲರಿಗೂ ಒಳಿತನ್ನು ಬಯಸುವ ಕಾರಣಕ್ಕೆ ಭಾರತ ಈ ಹಿಂದೆ ವಿಶ್ವಗುರುವಾಗಿತ್ತು. ಇಡೀ ವಿಶ್ವಕ್ಕೆ ಮಂಗಳವಾಗಬೇಕಾದರೆ, ಗ್ರಾಮಗಳಲ್ಲಿ ಮನೆಗೊಂದರಂತೆ ಗೋವುಗಳಿರಬೇಕು. ಹಾಗಾಗಿ ಗೋಸೇವಾ ಗತಿವಿಧಿ ಸಂಸ್ಥೆಯಿಂದ ಗೋ ಸಂರಕ್ಷಣೆ ಕುರಿತು ನಂದಿರಥಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದರು.

ಬ್ರಿಟಿಷರು ಭಾರತಕ್ಕೆ ಆಗಮಿಸಿದ ಮೇಲೆ ಗುರುಕುಲ ಶಿಕ್ಷಣ ಪದ್ಧತಿ ವಿರುದ್ಧ ಅಪಪ್ರಚಾರ ಮಾಡಿದರು. ಹಾಗಾಗಿ ನಮ್ಮ ಪ್ರಕೃತಿ, ಜಾನುವಾರು, ಗೋವು ಸಂರಕ್ಷಣೆ, ದೈವಾರಾಧನೆಗಳ ವಿರುದ್ಧ ಅಪಪ್ರಚಾರದಲ್ಲಿ ತೊಡಗಿದ ಹಿನ್ನಲ್ಲೆಯಲ್ಲಿ ನಮ್ಮ ಸಂಸ್ಕೃತಿ ಬಗ್ಗೆ ಇಂದಿನ ಯುವ ಪೀಳಿಗೆ ತಪ್ಪು ಕಲ್ಪನೆ ಹೊಂದಿದೆ. ಇದನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಇಂತಹ ರಥಯಾತ್ರೆ ಅವಶ್ಯ ಎಂದರು.

ಪ್ರಸ್ತುತ ಪ್ರಕೃತಿ ವಿಷಮುಕ್ತವಾಗಬೇಕು. ಆಯುರ್ವೇದ ಆಸ್ಪತ್ರೆಗಳಲ್ಲಿಯೂ ಗೋಮೂತ್ರದ ಔಷಧಿ ನೀಡುವ ಕಾರ್ಯ ಆರಂಭವಾಗಿದ್ದು, ಮುಂದಿನ ದಿನಗಳಲ್ಲಿ ಒಂದು ಕೋಟಿ ಗೋಮಯ ಹಣತೆಯನ್ನು ಬೆಳಗಿಸಬೇಕು ಎಂಬುದು ನಮ್ಮ ಸಂಸ್ಥೆಯ ನಿರ್ಧಾರ. ಇದಕ್ಕೆ ಎಲ್ಲರ ಸಹಕಾರ ಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಮೈಸೂರು ರಾಮಕೃಷ್ಣಾಶ್ರಮದ ಸರ್ವಜಯನಂದಾ ಜೀ, ರಥೆಯಾತ್ರೆಯಲ್ಲಿ ಗೋಕುಲಂ ಬಡಾವಣೆ ಆರ್‌ಎಸ್‌ಎಸ್ ಮುಖಂಡರಾದ ಜಯಪ್ರಕಾಶ್, ರಾಮಾನುಜಂ, ಹಿರಿಯ ವೈದ್ಯರಾದ ಡಾ.ವಾಮನ ಬಾಪಟ್, ಡಾ.ಚಂದ್ರಶೇಖರ್, ಬಿಜೆಪಿ ಮುಖಂಡರಾದ ವಿ.ಪಿ.ಮಹೇಶ್, ಎಸ್.ಕೆ. ದಿನೇಶ್, ಸೋಮಶೇಖರ್, ರಾಜು, ಚಿಕ್ಕವೆಂಕಟು, ಬನ್ನಿಮಂಟಪ ಮಹದೇವ್, ಈರಪ್ಪ, ಈರೇಗೌಡ, ಮಹಿಳಾ ಮುಖಂಡರಾದ ಚಂದ್ರಕಲಾ, ಸುಧಾಮಣಿ, ಮಂಜುಳಾ ಸೇರಿದಂತೆ ಮುಂತಾದವರಿದ್ದರು.

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರು ಷೆಡ್ಯೂಲ್‌ನಲ್ಲಿ ನಮೂದು ಮಾಡಿರುವ ಸ್ವತ್ತನ್ನು ಸದರಿ ಸ್ವತ್ತಿನ ಮಾಲೀಕರಿಂದ ಶುದ್ಧ ಕ್ರಯಕ್ಕೆ ಪಡೆದುಕೊಳ್ಳುವ ಇಚ್ಛೆಯನ್ನು ಹೊಂದಿದ್ದು, ಈ ಸಂಬಂಧ ನಮ್ಮ ಕಕ್ಷಿದಾರರು ಈ ಕೆಳಕಂಡಂತೆ ಸಾರ್ವಜನಿಕ ಪ್ರಕಟಣೆಯನ್ನು ನೀಡುತ್ತಿದ್ದಾರೆ.

ಸದರಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿ/ವ್ಯಕ್ತಿಗಳು/ಸಂಘ ಸಂಸ್ಥೆಗಳು ಅಥವಾ ಷೆಡ್ಯೂಲ್ ಸ್ವತ್ತಿನ ಯಾವುದೇ ಭಾಗಕ್ಕೆ ಸಂಬಂಧಿಸಿದಂತೆ ಯಾವುದೇ ರೀತಿಯ ಹಕ್ಕು, ವಾರಸು, ಮಾಲೀಕತ್ವ ಹಾಗೂ ಇನ್ನಿತರೆ ಯಾವುದೇ ರೀತಿಯ ಮಾಲೀಕತ್ವವನ್ನು ಹೊಂದಿದ್ದಂತಹ ಪಕ್ಷದಲ್ಲಿ ಅಂತಹ ವ್ಯಕ್ತಿಗಳು ಈ ಕೆಳಗೆ ಸಹಿ ಮಾಡಿರುವ ವಕೀಲರ ವಿಳಾಸಕ್ಕೆ ಸೂಕ್ತ ದಾಖಲಾತಿಗಳ ಸಮೇತ ಹಾಜರಾಗಿ ತಮ್ಮ ಆಕ್ಷೇಪಣೆಯನ್ನು ಈ ಸಾರ್ವಜನಿಕ ಪ್ರಕಟಣೆ ಪ್ರಕಟವಾದಂತಹ ಹತ್ತು (10) ದಿನಗಳೊಳಗಾಗಿ ಲಿಖಿತವಾಗಿ ಸಲ್ಲಿಸುವಂತೆ ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಮೇಲೆ ತಿಳಿಸಿದಂತಹ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಬಾರದೇ ಇದ್ದಂತಹ ಪಕ್ಷದಲ್ಲಿ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಕ್ರಯದ ವ್ಯವಹಾರವನ್ನು ಪೂರ್ಣಗೊಳಿಸುತ್ತಾರೆಂತಲೂ ಮತ್ತು ಆನಂತರ ಬರುವಂತಹ ಯಾವುದೇ ಆಕ್ಷೇಪಣೆಗಳಿಗೆ ನಮ್ಮ ಕಕ್ಷಿದಾರರು ಜವಾಬ್ದಾರರಲ್ಲವೆಂತಲೂ ಈ ಮೂಲಕ ತಿಳಿಯಪಡಿಸಲಾಗುತ್ತಿದೆ.

ಷೆಡ್ಯೂಲ್ ಸ್ವತ್ತಿನ ವಿವರ : ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಕೇರ್ಗಳ್ಳಿ ಗ್ರಾಮದ ಸರ್ವೆ ನಂ: 5/1 ಮತ್ತು ಇತರೆ ಸರ್ವೆ ನಂಬರ್ ಅನ್ಯಾಕ್ರಾಂತ ಜಮೀನುಗಳಲ್ಲಿ "ಖಜಾನೆ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘ (ರಿ) ಮೈಸೂರು" ರವರು ಅಭಿವೃದ್ಧಿಪಡಿಸಿ ನಿರ್ಮಿಸಿರುವ "ಖಜಾನೆ ಬಡಾವಣೆ" ಯಲ್ಲಿರುವ ನಿವೇಶನ ಸಂಖ್ಯೆ 130 ರ ವಿಸ್ತೀರ್ಣ ಪೂರ್ವಪಶ್ಚಿಮ: 40.00 ಅಡಿಗಳು ಮತ್ತು ದಕ್ಷಿಣೋತ್ತರ: 60.00 ಅಡಿಗಳುಳ್ಳ ಸ್ವತ್ತಿಗೆ ಚಕ್ಕುಬಂದಿ: ಪೂರ್ವಕ್ಕೆ : ನಿವೇಶನ ಸಂಖ್ಯೆ: 129 ಪಶ್ಚಿಮಕ್ಕೆ : ನಿವೇಶನ ಸಂಖ್ಯೆ: 131, ಉತ್ತರಕ್ಕೆ : ರಸ್ತೆ ದಕ್ಷಿಣಕ್ಕೆ : ನಿವೇಶನ ಸಂಖ್ಯೆ: 127

Sd/- JAYAKUMAR, BA.LLB
Advocate Office: No. 565/A, 20th Cross, 4th Main, 1st Stage, Vidyaranyapuram, Mysore -570008
Mob. No. 9844539729

ದಿನಾಂಕ: 07-03-2025 , ಸ್ಥಳ: ಮೈಸೂರು

ಮೈಸೂರು ಮಿತ್ರ 45 ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

7ನೇ ವರ್ಷದ ಸವಿನೆನಪು



ಶ್ರೀಮಾನ್ ನಿಂಗಪ್ಪ (ಚೆಡ್ಡಿ ನಿಂಗಪ್ಪ)

ನೀವು ನಮ್ಮನ್ನಗಲಿ ಇಂದಿಗೆ 7 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು : ಶ್ರೀಮತಿ ಜಯಮ್ಮ, ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು, ಕುಟುಂಬ ವರ್ಗದವರು ಹಾಗೂ ಬಂಧುಮಿತ್ರರು